ಸುದ್ದಿಗಳ ಹೊನಲು
# ಸಂಜೆ ಮುಗಿಲು
ಕನ್ನಡ ಪ್ರಾದೇಶಿಕ ಸಂಜೆ ದಿನಪತ್ರಿಕೆ
ಸಂಪುಟ: 21, ಸಂಚಿಕೆ: 296, ಪುಟಗಳು: 8, ಶನಿವಾರ, 3 ಆಗಸ್ಟ್ 2024 RNI NO. KARKAN/2002/08054
epaper: www.sanjemugilu.com
ಬೆಂಗಳೂರು। ಬೆಂಗಳೂರು ಗ್ರಾಮಾಂತರ। ಕೋಲಾರ। ಚಿಕ್ಕಬಳ್ಳಾಪುರ। ರಾಮನಗರ। ಮಂಡ್ಯ। ಮೈಸೂರು। ಚಾಮರಾಜನಗರ ₹3



ವೇಣು ಸಾರಥ್ಯದಲ್ಲಿ...

### ಸುಭಾಷಿತ

ನಮ್ಮ ಹಣೆಬರಹ ನಿರ್ಧರಿಸುವವರು ನಾವೇ. ಅದಕ್ಕಾಗಿ ಯಾರನ್ನೂ ದೂರಬಾರದು ಅಥವಾ ಯಾರನ್ನೂ ಶ್ಲಾಘಿಸಬಾರದು.

। ಸ್ವಾಮಿ ವಿವೇಕಾನಂದ

### ಪಂಚಾಂಗ

(ಶನಿವಾರ 3, ಆಗಸ್ಟ್-2024)

- ಶ್ರೀ ಕ್ರೋಧಿನಾಮ ಸಂವತ್ಸರ
- ದಕ್ಷಿಣಾಯಣ, ಗ್ರೀಷ್ಮ ಋತು,
- ಆಷಾಡ ಮಾಸ, ಕೃಷ್ಣ ಪಕ್ಷ, ಚತುರ್ದಶಿ,
- ಶನಿವಾರ, ಪುನರ್ವಸು ನಕ್ಷತ್ರ / ಪುಷ್ಯ ನಕ್ಷತ್ರ.
- ರಾಹುಕಾಲ: 09:19 ರಿಂದ 10:54
- ಗುಳಿಕಕಾಲ: 06:10 ರಿಂದ 07:44
- ಯಮಗಂಡಕಾಲ: 02:04 ರಿಂದ 03:39

### ಸಂಕ್ಷಿಪ್ತ ಸುದ್ದಿ

## ಆಡಿ ಕಾರು ಮರಕ್ಕೆ ಡಿಕ್ಕಿ: ಮೂವರು ವಿದ್ಯಾರ್ಥಿಗಳು ಸಾವು



**ಕೋಲಾರ:** ಆಡಿ ಕಾರೊಂದು ಮರಕ್ಕೆ ಡಿಕ್ಕಿಯಾಗಿ ಭೀಕರ ಅಪಘಾತ ಉಂಟಾದ ಪರಿಣಾಮ ಮೂವರು ವಿದ್ಯಾರ್ಥಿಗಳು ಸ್ಥಳದಲ್ಲೇ ಸಾವನ್ನಪ್ಪಿದ್ದು, ಓರ್ವ ಬಚಾವಾದ ಘಟನೆ ಕೋಲಾರ ಹೊರವಲಯದಲ್ಲಿ ನಡೆದಿದೆ. ಬಂಗಾರಪೇಟೆ ಮುಖ್ಯರಸ್ತೆ ಸಹಕಾರ ನಗರದಲ್ಲಿ ಘಟನೆ ನಡೆದಿದೆ. ಮೃತರನ್ನು ಹಾಸನ ಮೂಲದ ಹರ್ಷವರ್ಧನ್, ಬಳ್ಳಾರಿ ಮೂಲದ ಬಸವರಾಜ್ ಹಾಗೂ ಬಂಗಾರಪೇಟೆಯ ನಿಶ್ಚಲ್ ಎಂದು ಗುರುತಿಸಲಾಗಿದೆ. ಮೃತರು ಪ್ರಸಿದ್ಧ ಯೂನಿವರ್ಸಿಟಿವೊಂದರ ವಿದ್ಯಾರ್ಥಿಗಳು. ಬಂಗಾರಪೇಟೆಯ ಸಾಯಿ ಗಗನ್ ಘಟನೆಯಲ್ಲಿ ಪಾರಾಗಿದ್ದಾನೆ. ಪುಟ 2

## ಒಂಟಿ ಕೈ ರೌಡಿಯಿಂದ ಇನ್ನೊಬ್ಬ ರೌಡಿಯ ಕೊಚ್ಚಿ ಕೊಲೆ



**ಬೆಂಗಳೂರು:** ಬೆಂಗಳೂರಿನಲ್ಲಿ ರೌಡಿ ಗ್ಯಾಂಗ್ ಗಳ ಬೀದಿಜಗಳ, ಹಲ್ಲೆಗಳು ತಾರಕಕ್ಕೇರಿದ್ದು, ಹೆಣಗಳು ಬೀಳುತ್ತಿವೆ. ಒಂಟಿ ಕೈಯ ರೌಡಿಶೀಟರ್ ಒಬ್ಬನ ಗ್ಯಾಂಗ್ ಇನ್ನೊಬ್ಬ ರೌಡಿಶೀಟರ್‌ನನ್ನು ಬರ್ಬರವಾಗಿ ಕೊಚ್ಚಿ ಕೊಲೆ ಮಾಡಿದೆ. ಸಿದ್ಧಾಪುರ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಘಟನೆ ನಡೆದಿದ್ದು, ಐಸಾಕ್ (30) ಮೃತಪಟ್ಟ ರೌಡಿಶೀಟರ್. ವೆಂಕಟೇಶ ಅಲಿಯಾಸ್ ಒಂಟಿ ಕೈ ವೆಂಕಟೇಶ ಎಂಬಾತನ ಗ್ಯಾಂಗ್, ಐಸಾಕ್‌ನನ್ನು ಸುತ್ತುಗಟ್ಟಿ ಮಾರಕಾಸ್ತ್ರಗಳಿಂದ ಕೊಚ್ಚಿ ಭೀಕರವಾಗಿ ಕೊಂದುಹಾಕಿದೆ. ಪುಟ 2




ದಶಪ್ರಮತಿ ಮುದ್ರಣಾಲಯ
dashapramathi mudranalaya
PRE-PRESS PRINTERS
Contact: +91 9483589085 | e-mail: dashapramathimudranalaya@gmail.com
We Undertake Printing of Newspapers | Tabloids | Magazines




# ವಯನಾಡು ದುರಂತ ಪಾಠ ಕಲಿತ ಕೇಂದ್ರ ಸರ್ಕಾರ!

**ನವದೆಹಲಿ:** ವಯನಾಡು ದುರಂತದ ಬಳಿಕ ಕೇಂದ್ರ ಸರ್ಕಾರ ಎಚ್ಚೆತ್ತುಕೊಂಡಂತೆ ಕಾಣ್ತಿದೆ. ಕೇರಳ, ಕರ್ನಾಟಕ ಸೇರಿ ಒಟ್ಟು 6 ರಾಜ್ಯಗಳ ಪಶ್ಚಿಮಘಟ್ಟಗಳನ್ನ ಸೂಕ್ಷ್ಮ ಪ್ರದೇಶ ಅಂತ ಘೋಷಿಸಿದ್ದು ಕರಡು ಅಧಿಸೂಚನೆಯನ್ನೂ ಹೊರಡಿಸಿದೆ. ಕರ್ನಾಟಕದ ಘಟ್ಟಪ್ರದೇಶಗಳಲ್ಲಿರೋ ಅಕ್ರಮ ಹೋಂ ಸ್ಟೇ, ರೆಸಾರ್ಟ್‌ಗಳ ತೆರವಿಗೂ ಸರ್ಕಾರ ಮುಂದಾಗಿದೆ. ಈ ಮಧ್ಯೆ ಉತ್ತರಭಾರತದಲ್ಲೂ ಪರ್ವತಶ್ರೇಣಿಗಳು ಬಾಯ್ಬಿಡೋಕೆ ಶುರು ಮಾಡಿವೆ.

ಕೇರಳದ 9,993 ಚದರ ಕಿ.ಮೀ ಪಶ್ಚಿಮಘಟ್ಟ ಪ್ರದೇಶ, ಕರ್ನಾಟಕ, ಗೋವಾ ಪಶ್ಚಿಮ ಘಟ್ಟ ಪ್ರದೇಶಗಳು, ತಮಿಳುನಾಡು, ಮಹಾರಾಷ್ಟ್ರ, ಗುಜರಾತ್ ಪಶ್ಚಿಮಘಟ್ಟಗಳು ಒಟ್ಟು 6 ರಾಜ್ಯಗಳ ಪಶ್ಚಿಮಘಟ್ಟಗಳು ಪರಿಸರ ಸೂಕ್ಷ್ಮ ಪ್ರದೇಶ ಅಂತ ಕೇಂದ್ರ ಸರ್ಕಾರ ಗುರುತಿಸಿದೆ. ಒಟ್ಟು 56 ಸಾವಿರದ 825 ಚದರ ಕಿ.ಮೀ ಪರಿಸರ ಸೂಕ್ಷ್ಮ ಪ್ರದೇಶ ಅಂತ ಕರಡು ಅಧಿಸೂಚನೆ ಹೊರಡಿಸಿದೆ ಕೇಂದ್ರ ಸರ್ಕಾರ, ಮುಂದಿನ 60 ದಿನದಲ್ಲಿ ತಕರಾರು-ಸಲಹೆಗಳಿದ್ರೆ ನೀಡಲು ಸೂಚನೆ ಕೊಡಲು ಸಮಯ ಕೊಟ್ಟಿದೆ.

**» 6 ರಾಜ್ಯಗಳ ಪಶ್ಚಿಮಘಟ್ಟ ಸೂಕ್ಷ್ಮ ಪ್ರದೇಶವೆಂದು ಘೋಷಣೆ**




ಪಶ್ಚಿಮಘಟ್ಟಗಳನ್ನ ಪರಿಸರ ಸೂಕ್ಷ್ಮ ಪ್ರದೇಶ ಅಂತ ಕೇಂದ್ರ ಸರ್ಕಾರ ಘೋಷಿಸಿದೆ. ಇದರಿಂದ ಆಗೋ ಲಾಭಗಳೇನು ಅಂತ ನೋಡೋದಾದ್ರೆ. ಮರಳುಗಾರಿಕೆ, ಕಲ್ಲು ಗಣಿಗಾರಿಕೆ ಸಂಪೂರ್ಣ ನಿಷೇಧವಾಗಲಿದೆ. ಅದಕ್ಕೂ ಮೊದಲು ಈಗ ಗಣಿಗಾರಿಕೆ ನಡೆಸ್ತಿರೋರ ಗುತ್ತಿಗೆ ಅವಧಿ ಮುಗಿದರೂ ಆ ಕ್ಷಣವೇ ಗಣಿಗಾರಿಕೆ ಸ್ಥಗಿತಗೊಳಿಸಬೇಕು. ಉಷ್ಣ ವಿದ್ಯುತ್ ಸ್ಥಾವರ, ಕೈಗಾರಿಕೆ ಸ್ಥಾಪಿಸುವಂತಿಲ್ಲ. ಅಕ್ರಮ ರೆಸಾರ್ಟ್, ಹೋಂ ಸ್ಟೇಗಳಿದ್ರೂ ತೆರವಾಗಬೇಕು. ಅಧಿಸೂಚನೆ ಹೊರಡಿಸಿದ 5 ವರ್ಷಗಳಲ್ಲಿ ಈ ಆದೇಶ ಸಂಪೂರ್ಣವಾಗಿ ಜಾರಿ ಆಗಲೇಬೇಕು ಅನ್ನುತ್ತೆ ಕಾನೂನು.

**ಅಕ್ರಮ ಕಟ್ಟಡಗಳ ತೆರವಿಗೆ ಅರಣ್ಯ ಸಚಿವರ ಸೂಚನೆ:** ಹಾಸನ, ದಕ್ಷಿಣ ಕನ್ನಡ ಜಿಲ್ಲೆಗಳಲ್ಲಿ ಬೆಟ್ಟಗುಡ್ಡಗಳೇ ಕುಸಿದು ಬೀಳ್ತಿವೆ. ಉತ್ತರ ಕನ್ನಡದ ಶಿರೂರಲ್ಲಿ ಗುಡ್ಡ ಕುಸಿದ 10 ಜನ ಶವವಾದರೂ, ಹಾಸನ ಧರ್ಮಸ್ಥಳ ಮಾರ್ಗದ ಶಿರಾಡಿಘಾಟ್‌ನಲ್ಲಿ ಗುಡ್ಡ ಕುಸಿದು 4 ದಿನ ರಸ್ತೆಯೇ ಬಂದ್ ಆಯಿತು. ಚಾರ್ಮಾಡಿಘಾಟ್ ನಲ್ಲಿ ಬೆಟ್ಟಗುಡ್ಡಗಳೇ ಕುಸಿದು 2 ದಿನ ವಾಹನಗಳ ಸಂಚಾರವೇ ನಿಂತೋಗಿತ್ತು. ಪಶ್ಚಿಮ ಘಟ್ಟಗಳಲ್ಲಿ ರಣಮಳೆ ಹೊಡೆತಕ್ಕೆ 2 ವಾರದಲ್ಲಿ ಆದ ಸಾಲು ಸಾಲು ದುರಂತಗಳು ಅಷ್ಟಿಷ್ಟಲ್ಲ. ಈಗ ವಯನಾಡು ದುರಂತ ರಾಜ್ಯ ಸರ್ಕಾರವನ್ನ ಎಚ್ಚರಿಸಿದೆ. ಅದಕ್ಕೆ ಅರಣ್ಯ ಸಚಿವ ಈಶ್ವರ್ ಖಂಡ್ರೆ ಪಶ್ಚಿಮಘಟ್ಟಗಳಲ್ಲಿರುವ ಅಕ್ರಮ ಪುಟ 2

## ಮುಡಾ ಹಗರಣದ ವಿರುದ್ಧ ದೋಸ್ತಿ ಕಹಳೆ
# ಮೈಸೂರು ಚಲೋ ಶುರು

**ಬೆಂಗಳೂರು:** ಮುಡಾ ಅಕ್ರಮ, ವಾಲ್ಮೀಕಿ ಹಗರಣದಲ್ಲಿ ಇಂದಿನಿಂದ ಬಿಜೆಪಿ, ಜೆಡಿಎಸ್ ಪಾದಯಾತ್ರೆ ಶುರುಮಾಡ್ತಿದೆ. ಮೈತ್ರಿ ಯಾತ್ರೆ ಸಾಗೋ ದಾರಿಯುದ್ದಕ್ಕೂ ಕಾಂಗ್ರೆಸ್ ಜನಾಂದೋಲನ ಸಭೆ ಶುರುಮಾಡಿದೆ. ಅಷ್ಟೇ ಅಲ್ಲ ಭ್ರಷ್ಟ ಬಿಜೆಪಿ ಕಳ್ಳರ ಪಾದಯಾತ್ರೆ ಅನ್ನೋ ಪೋಸ್ಟರ್‌ಗಳನ್ನೂ ಕಾಂಗ್ರೆಸ್ ಅಂಟಿಸಿದೆ.

ಮುಡಾ ಹಗರಣ, ವಾಲ್ಮೀಕಿ ಹಗರಣ, ಎಸ್‌ಸಿ ಎಸ್‌ಟಿ ಹಣ ದುರ್ಬಳಕೆ ವಿರುದ್ಧ ಬಿಜೆಪಿ-ಜೆಡಿಎಸ್‌ನವರು ಬೆಂಗಳೂರಿಂದ ಮೈಸೂರಿಗೆ ಪಾದಯಾತ್ರೆ ಶುರುಮಾಡ್ತಿದ್ದಾರೆ. ಆದರೆ ಮೈತ್ರಿ ಪಾದಾಯತ್ರೆಗೂ ಮೊದಲೇ ಕಾಂಗ್ರೆಸ್‌ನವರು ನಿನ್ನೆ ಜನಾಂದೋಲನ ಜಾತ್ರೆ ಮಾಡಿದ್ದರು.

**ಏಕವಚನದಲ್ಲೇ ಡಿಕೆಶಿ ವಾಗ್ದಾಳಿ:** ಕಾಂಗ್ರೆಸ್ ಜನಾಂದೋಲನ ಸಭೆಗೂ ಮುನ್ನ ಬೈಕ್ ರ‍್ಯಾಲಿ ನಡೆಯಿತು. ಮಾಗಡಿ ಶಾಸಕ ಬಾಲಕೃಷ್ಣ ಜೊತೆ ಬುಲೆಟ್ ಏರಿದ ಡಿಕೆಶಿವಕುಮಾರ್ ಬೈಕ್ ಆಲಿ ಮಾಡಿದ್ದರು. ಕೇಂದ್ರ ಓಆಂ ಸರ್ಕಾರ ಕರ್ನಾಟಕಕ್ಕೆ ಅನ್ಯಾಯ ಮಾಡ್ತಿದೆ ಅನ್ನೋದು ಅಜೆಂಡಾ. ಆದರೆ ಟಾರ್ಗೆಟ್ ಆಗಿದ್ದು ಕಾಂಗ್ರೆಸ್ ನಾಯಕರಿಗೆ ಟಾರ್ಗೆಟ್ ಆಗಿದ್ದು ಬಿಜೆಪಿ ಮತ್ತು ಜೆಡಿಎಸ್ ನಾಯಕರು, ವಿಜಯೇಂದ್ರ ಮೇಲೆ ಡಿಕೆ ಶಿವಕುಮಾರ್ ಏಕವಚನದಲ್ಲೇ ವಾಗ್ದಾಳಿ ಮಾಡಿದ್ದರು. ಜೆಡಿಎಸ್ ಜೊತೆ ಬಿಜೆಪಿ ಡೈವೋರ್ಸ್ ಆಗುತ್ತೆ ಅಂತ ಪರಮೇಶ್ವರ್. ಬಿಜೆಪಿಯಲ್ಲೇ ಅತೀ ಹೆಚ್ಚು ಭ್ರಷ್ಟರು ಅಂತ ಜಮೀರ್ ಅಹ್ಮದ್ ವಾಗ್ದಾಳಿ ನಡೆಸಿದರು. ಪುಟ 2






## ಪಿಎಸ್‌ಐ ಸಾವು
# ಇದು ಲೂಟಿ ಸರ್ಕಾರ

**ಬೆಂಗಳೂರು:** ಶಾಸಕರು ಹಣ ಕೇಳಿದ್ದಕ್ಕೆ ಒತ್ತಡದಿಂದಾಗಿ ಯಾದಗಿರಿ ಪಿಎಸ್‌ಐ ಪರಶುರಾಮ್ ಸಾವನ್ನಪ್ಪಿದ್ದಾರೆ ಎಂದು ಪ್ರತಿಪಕ್ಷ ನಾಯಕ ಆರ್ ಅಶೋಕ್ ಕಿಡಿಕಾರಿದ್ದಾರೆ



ಯಾದಗಿರಿ ಪಿಎಸ್‌ಐ ಪರಶುರಾಮ್ ಸಾವು ಪ್ರಕರಣಕ್ಕೆ ಸಂಬಂಧಿಸಿದಂತೆ ಪ್ರತಿಕ್ರಿಯಿಸಿದ ಅವರು, ಒತ್ತಡದ ಮೇಲೆಯೇ ವಾಲ್ಮೀಕಿ ನಿಗಮದ ಅಧಿಕಾರಿ ಆತ್ಮಹತ್ಯೆ ಮಾಡಿಕೊಂಡಿದ್ದರು. ಈಗ ವರ್ಗಾವಣೆಗೆ ಶಾಸಕರು ಹಣ ಕೇಳಿದ್ದಕ್ಕೆ ಪರಶುರಾಮ್ ಅವರ ಸಾವಾಗಿದೆ ಎಂದು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಈ ಸರ್ಕಾರದಲ್ಲಿ ಎಲ್ಲರೂ ಲೂಟಿಗೆ ಇಳಿದಿದ್ದಾರೆ. ಮುಖ್ಯಮಂತ್ರಿ ಸಿದ್ದರಾಮಯ್ಯನವರಿಗೆ ಅಧಿಕಾರದಲ್ಲಿ ಮುಂದುವರೆಯುವ ನೈತಿಕತೆ ಇಲ್ಲ, ರಾಜೀನಾಮೆ ಕೊಟ್ಟು ಹೋಗಲಿ ಎಂದು ಆಗ್ರಹಿಸಿದರು.

ಶಾಸಕ ಸುನಿಲ್ ಕುಮಾರ್ ಪ್ರತಿಕ್ರಿಯಿಸಿ, ಕಾಂಗ್ರೆಸ್ ಶಾಸಕರು ವರ್ಗಾವಣೆ ದಂಧೆಯಲ್ಲಿ ನೇರ ಪಾಲ್ಗೊಂಡಿದ್ದಾರೆ. ಅಲ್ಲಿನ ಶಾಸಕರು ವರ್ಗಾವಣೆಗೆ ದೊಡ್ಡ ಹಣ ಕೇಳುತ್ತಿದ್ದಾರೆ. ಪುಟ 2

# ಉತ್ತರಖಾಂಡ್‌ನಲ್ಲಿ ಮೇಘಸ್ಫೋಟ
## ಕೇದಾರನಾಥ್‌ನಲ್ಲಿ ಸಿಲುಕಿದ ಬೆಂಗಳೂರಿನ ಯಾತ್ರಿಕರು

**ಬೆಂಗಳೂರು:** ಒಂದೆಡೆ ಎಡೆಬಿಡದೇ ಸುರಿವ ಮಳೆ, ಮತ್ತೊಂದೆಡೆ ಮೇಘಸ್ಫೋಟದ ಎಫೆಕ್ಟ್ ನಿಂದ ಕುಸಿಯುತ್ತಿರೋ ಗುಡ್ಡಗಳು, ಪ್ರಕೃತಿಯ ರೌದ್ರ ನರ್ತನದ ಸುಳಿಯಲ್ಲಿ ಸಿಲುಕಿರೋ ಉತ್ತರಾಖಂಡ್ ನ ಕೇದಾರನಾಥ್ ನಲ್ಲಿ ಯಾತ್ರಾರ್ಥಿಗಳು ನಲುಗಿಹೋಗಿದ್ದಾರೆ. ಮೇಘಸ್ಫೋಟದಿಂದ ಕೇದಾರ್ ನಾಥ್ ನ ಹಲವೆಡೆ ಗುಡ್ಡ ಕುಸಿತ ಉಂಟಾಗಿದ್ದು, ಬೆಂಗಳೂರಿನಿಂದ ಕೇದಾರನಾಥನ ದರ್ಶನಕ್ಕೆ ತೆರಳಿದ್ದ ಕನ್ನಡಿಗರು ಪರದಾಡ್ತಿದ್ದಾರೆ.

ಪ್ರಕೃತಿ ಸೌಂದರ್ಯದ ಜೊತೆ ಪುಣ್ಯಕ್ಷೇತ್ರದ ದರ್ಶನಕ್ಕೆ ಅಂತಾ ಬೆಂಗಳೂರಿನಿಂದ ಕೇದಾರನಾಥ್ ಗೆ ತೆರಳಿದ್ದ 15 ಜನ ಸ್ನೇಹಿತರ ತಂಡ ಕೇದಾರನಾಥ್ ನಲ್ಲಿ ದಿಕ್ಕು ತೋಚದೇ ಕಂಗಾಲಾಗಿದ್ದಾರೆ. ಪುಟ 2



## ಕೇರಳ ಗುಡ್ಡ ಕುಸಿತ
# ಜೀವ ಉಳಿಸಿದ ದನಕರುಗಳು

**ಚಾಮರಾಜನಗರ:** ಕೇರಳದ ವಯನಾಡಿನಲ್ಲಿ ಭಾರಿ ಗುಡ್ಡ ಕುಸಿತದಿಂದ ಸಾವನ್ನಪ್ಪಿದವರ ಸಂಖ್ಯೆ 330 ದಾಟಿದೆ. ಇನ್ನೂ 300 ಜನರು ನಾಪತ್ತೆಯಾಗಿದ್ದಾರೆ. ಅವರಿಗಾಗಿ ಮಣ್ಣಿನ ಅವಶೇಷಗಳಲ್ಲಿ ತೀವ್ರ ಶೋಧ ಕಾರ್ಯಾಚರಣೆ ನಡೆದಿದೆ. ಕರ್ನಾಟಕದ ಆರು ಜನ ಮೃತಪಟ್ಟಿದ್ದಾರೆ. ಇದೇ ಭೀಕರ ಗುಡ್ಡ ಕುಸಿತದಿಂದ ತಪ್ಪಿಸಿಕೊಂಡು ಸಾವನ್ನು ಗೆದ್ದು ಬಂದ ಗಟ್ಟಿಗಿತ್ತಿ ಕನ್ನಡತಿಯ ರೋಚಕ ಕಥೆ ಇಲ್ಲಿದೆ.



ಜಯಮ್ಮ ದಂಪತಿ ವಯನಾಡು ಬಳಿಯ ಚೂರಲ್ಮಲದಲ್ಲಿ 35 ವರ್ಷಗಳಿಂದ ವಾಸವಾಗಿದ್ದರು. ಟೀ ಎಸ್ಟೇಟ್ ನಲ್ಲಿ ಕೆಲಸ ಮಾಡುತ್ತ ಹೈನುಗಾರಿಕೆ ಮಾಡಿಕೊಂಡಿದ್ದರು. ಜುಲೈ 23ರ ರಾತ್ರಿ ದನಕರಗಳು ಇದ್ದಕ್ಕಿದ್ದಂತೆ ಅರಚಲು ಶುರು ಮಾಡಿದ್ದವು. ದನಕರುಗಳು ಅರಚುವುದನ್ನು ಕಂಡು ಜಯಮ್ಮ ಕೊಟ್ಟಿಗೆ ಬಳಿ ಹೋಗಿ ನೋಡಿದಾಗ ಒಂದು ಕ್ಷಣ ದಿಗ್ಭ್ರಾಂತರಾಗಿದ್ದಾರೆ.

ಸುಮುದ್ರದ ಅಲೆಯಂತೆ ಇರುವಝಿಂಜಿ ನದಿಯ ಹರಿವು ಜೋರಾಗಿತ್ತು. ನದಿ ನೀರು ಗ್ರಾಮದೊಳಗೆ ನುಗ್ಗಲು ಆರಂಭಿಸಿದೆ. ಹಾಗೆ ಅತ್ತ ಆಗುತಾನೆ ಗುಡ್ಡ ಕುಸಿಯಲು ಆರಂಭಿಸಿತ್ತು. ತಕ್ಷಣವೇ ಜಯಮ್ಮ ಪತಿ ಹಾಗೂ ಮಗನನ್ನು ಹೊರಗೆ ಕರೆದಿದ್ದಾರೆ. ಬಳಿಕ, ಅದಾಗಲೆ ಗುಡ್ಡ ಹತ್ತಿ ಕೂತಿದ್ದ ವಿನೋದ್ ಎಂಬುವರು ಜಯಮ್ಮರ ಕೈ ಹಿಡಿದು ಮೇಲೆ ಎಳೆದುಕೊಂಡಿದ್ದಾರೆ. ಪುಟ 2

## ಗೃಹ ಸಚಿವರ ಮನೆ ಮುಂದೆ ರಾರಾಜಿಸುತ್ತಿವೆ ಫ್ಲೆಕ್ಸ್, ಬ್ಯಾನರ್ಸ್
# ರೂಲ್ಸ್ ಮಾಡುವವರಿಂದಲೇ ರೂಲ್ಸ್ ಬ್ರೇಕ್

**ಬೆಂಗಳೂರು:** ನಗರದಲ್ಲಿ ಹೆಚ್ಚಾಗಿರೋ ಅನಧಿಕೃತ ಬ್ಯಾನರ್ ಗಳ ಮಟ್ಟ ಹಾಕಲು ಬಿಬಿಎಂಪಿ ಮುಂದಾಗಿತ್ತು. 1533ಕ್ಕೆ ಕರೆ ಮಾಡಿ ದೂರು ನೀಡಲು ಸೂಚನೆ ನೀಡಿತ್ತು. ಆದರೆ ಇದೀಗ ರೂಲ್ಸ್ ಮಾಡಿದವರಿಂದಲೇ ಫ್ಲೆಕ್ಸ್,ಬ್ಯಾನರ್ ರೂಲ್ಸ್ ಬ್ರೇಕ್ ಹಾಕಿದೆ. ಗೃಹ ಸಚಿವ ಡಾ.ಜಿ. ಪರಮೇಶ್ವರ್ ಅವರ ಮನೆ ಮುಂದೆಯೇ ಹುಟ್ಟಹಬ್ಬದ ಫ್ಲೆಕ್ಸ್, ಬ್ಯಾನರ್ ರಾರಾಜಿಸುತ್ತಿದೆ.

ಗೃಹ ಸಚಿವ ಪರಮೇಶ್ವರ್ ಅವರ ಬರ್ತ್ ಡೇ ಹಿನ್ನೆಲೆ ಸದಾಶಿವನಗರದ ನಿವಾಸದ ಸುತ್ತಮುತ್ತ ಫ್ಲೆಕ್ಸ್, ಬ್ಯಾನರ್ ಹಾಕಲಾಗಿದೆ. ಅತ್ತ ಫ್ಲೆಕ್ಸ್ ಕಂಟ್ರೋಲ್ ಗೆ ರಾತ್ರಿ ವೇಳೆ ಗಸ್ತು ತಿರುಗಲು ಪಾಲಿಕೆ ಜೊತೆ ಖಾಕಿ ಪಡೆ ಕೈ ಜೋಡಿಸಿತ್ತು. ಆದರೆ ಇದೀಗ ಅದೇ ಪೊಲೀಸ್ ಇಲಾಖೆ ನಿರ್ವಹಿಸುವ ಗೃಹ ಸಚಿವರಿಂದಲೇ ರೂಲ್ಸ್ ಬ್ರೇಕ್ ಆಗಿದೆ. ರಾಜಕಾರಣಿಗಳಿಗೆ ಒಂದು ನ್ಯಾಯ, ಜನರಿಗೆ ಮತ್ತೊಂದು ನ್ಯಾಯನಾ ಎಂದು ಜನಪ್ರತಿನಿಧಿಗಳ ನಡೆಗೆ ಸಾರ್ವಜನಿಕರು ಆಕ್ರೋಶ ಹೊರ ಹಾಕಿದ್ದಾರೆ.



**ಗೃಹ ಸಚಿವರ ಮನೆ ಮುಂದೆ ರಾರಾಜಿಸುತ್ತಿವೆ ಫ್ಲೆಕ್ಸ್ ಬ್ಯಾನರ್ಸ್:** ಹಲವು ಕ್ರಮಗಳನ್ನು ಕೈಗೊಂಡ ಬಿಬಿಎಂಪಿಗೆ ರಾತ್ರಿ ವೇಳೆ ರಸ್ತೆಗಳಲ್ಲಿ ಉದ್ಭವವಾಗೊ ಅನಧಿಕೃತ ಫ್ಲೆಕ್ಸ್ ತಲೆ ಬಿಸಿ ತಂದಿತ್ತು.

ಮೊದಲಿನಿಂದಲೂ ಈ ರೀತಿ ಬ್ಯಾನರ್ ಹಾಕುವವರ ವಿರುದ್ಧ ಕ್ರಮಕೈಗೊಂಡರು, ಮತ್ತೆ ಮತ್ತೆ ಈ ರೀತಿ ಚಟುವಟಿಕೆ ಹೆಚ್ಚಾಗಿದ್ದು, ಹೈ ಕೋರ್ಟ್ ನ ನಿರ್ದೇಶನದ ಮೇರೆಗೆ ಬಿಬಿಎಂಪಿ, ಪೊಲೀಸರ ಜೊತೆ ಜಂಟಿ ಕಾರ್ಯಾಚರಣೆಗೆ ಮುಂದಾಗಿತ್ತು. ಇತ್ತೀಚೆಗೆ ಬೆಂಗಳೂರು ಪೊಲೀಸರ ಜೊತೆ ಮಹತ್ವದ ಸಭೆ ನಡೆಸಿ, ಈಗಾಗಲೇ ಹಾಕಿರುವ ಅನಧಿಕೃತ ಬ್ಯಾನರ್ ಹಾಗೂ ಅನಧಿಕೃತ ಫ್ಲೆಕ್ಸ್ ಗಳ ವಿರುದ್ಧ ಹಾಗೂ ಅನಧಿಕೃತ ಫ್ಲೆಕ್ಸ್ ಗಳ ಹಾಕುವ ಸಂದರ್ಭದಲ್ಲಿ ಕೈಗೊಳ್ಳಬೇಕಾದ ನಿರ್ಧಾರ ಹಾಗೂ ಕ್ರಮಗಳ ಬಗ್ಗೆ ಚರ್ಚೆ ಮಾಡಲಾಗಿತ್ತು.

ಸಭೆಯಲ್ಲಿ ಮೊದಲ ಹಂತದ ಕ್ರಮವಾಗಿ ಪೊಲೀಸರಿಗೆ ಬಿಬಿಎಂಪಿಯಿಂದ ನಿರ್ಧರಿತವಾದ ನಂಬರ್ ನೀಡಿದ್ದು, ರಾತ್ರಿ ವೇಳೆ ಪೊಲೀಸ್ ಗಸ್ತು ಸಂದರ್ಭದಲ್ಲಿ ಬ್ಯಾನರ್, ಫ್ಲೆಕ್ಸ್ ಗಳು ಹಾಕುವುದು ಕಂಡು ಬಂದಲ್ಲಿ ಕೂಡಲೇ ನಿರ್ಧರಿತ ನಂಬರ್ ಗೆ ಮಾಹಿತಿ ನೀಡುವುದು. ಬಳಿಕ ಅದು ಅಧಿಕೃತವೋ ಅಥವ ಅನಧಿಕೃತವೋ ಎಂಬ ಸಂಗತಿ ಪುಟ 2

## ಯಾದಗಿರಿ ಪಿಎಸ್‌ಐ ಅನುಮಾನಸ್ಪದವಾಗಿ ಸಾವು
# ಕೈ ಶಾಸಕನ ವಿರುದ್ಧ ದೂರು

**ಯಾದಗಿರಿ:** ಯಾದಗಿರಿ ಸೈಬರ್ ಕ್ರೈಮ್ ಠಾಣೆಯ ಪಿಎಸ್‌ಐ ಪರಶುರಾಮ (34) ಅನುಮಾನಸ್ಪದವಾಗಿ ಮೃತಪಟ್ಟಿದ್ದಾರೆ. ಪಿಎಸ್ ಐ ಪರಶುರಾಮ ಕಳೆದ ಮೂರು ವರ್ಷಗಳಿಂದ ಯಾದಗಿರಿಯಲ್ಲಿ ಕಾರ್ಯ ನಿರ್ವಹಿಸುತ್ತಿದ್ದರು. ಇಂದು (ಆ.03) ಮನೆಯಲ್ಲಿ ಅನುಮಾನಾಸ್ಪದ ರೀತಿಯಲ್ಲಿ ಮೃತಪಟ್ಟಿದ್ದಾರೆ. ಪಿಎಸ್ ಐ ಪರಶುರಾಮ ಅವರ ಸಾವಿಗೆ ಕಾಂಗ್ರೆಸ್ ಶಾಸಕ ಚೆನ್ನಾರೆಡ್ಡಿ ಪಾಟೀಲ್ ಮತ್ತು ಪುತ್ರ ಪಂಪಣ್ಣಗೌಡ ಕಾರಣ ಎಂದು ಕುಟುಂಬಸ್ಥರು ಗಂಭೀರ ಆರೋಪ ಮಾಡಿದ್ದಾರೆ.

ಯಾದಗಿರಿ ನಗರ ಠಾಣೆಗೆ ಪೋಸ್ಟಿಂಗ್ ಗಾಗಿ ಕಾಂಗ್ರೆಸ್ ಶಾಸಕ ಚೆನ್ನಾರೆಡ್ಡಿ ಪಾಟೀಲ್ 30 ಲಕ್ಷ ರೂ. ಹಣಕ್ಕೆ ಬೇಡಿಕೆ ಇಟ್ಟಿದ್ದರು. ಹೀಗಾಗಿ ಪರಶುರಾಮ 30 ಲಕ್ಷ ರೂ. ನೀಡಿ, ಯಾದಗಿರಿ ನಗರಕ್ಕೆ ವರ್ಗಾವಣೆಯಾಗಿದ್ದರು. ಆದರೆ, ಒಂದು ವರ್ಷದ ಪೂರೈಸುವ ಮುನ್ನವೇ ಪರಶುರಾಮ್ ಅವರನ್ನು ಮತ್ತೆ ಯಾದಗಿರಿ ಸೈಬರ್ ಕ್ರೈಮ್ ಠಾಣೆಗೆ ವರ್ಗಾವಣೆ ಮಾಡಲಾಗಿದೆ. ಇದರಿಂದ ಪಿಎಸ್ ಐ



ಪರಶುರಾಮ್ ಒತ್ತಡಕ್ಕೆ ಒಳಗಾಗಿದ್ದರು. ಪಿಎಸ್ ಐ ಪರಶುರಾಮ ಸಾಲದ ಸುಳಿಗೆ ಸಿಲುಕಿದ್ದರು. ಪಿಎಸ್ ಐ ಪರಶುರಾಮ್ ಶುಕ್ರವಾರ ಸಚಿವ ಪ್ರಿಯಾಂಕ್ ಖರ್ಗೆ ಜೊತೆಗೆ ಫೋನ್ ನಲ್ಲಿ ಮಾತನಾಡಿದ್ದರು ಎಂದು ಕುಟುಂಬಸ್ಥರು ಹೇಳಿದ್ದಾರೆ.

ಪಿಎಸ್ ಐ ಪರಶುರಾಮ ಸಾವಿಗೆ ಕಾಂಗ್ರೆಸ್ ಶಾಸಕ ಚನ್ನಾರೆಡ್ಡಿ ಪಾಟೀಲ್ ತುನ್ನೂರು ಹಾಗೂ ಪುತ್ರ ಪಂಪಣ್ಣಗೌಡ ಕಾರಣವೆಂದು ಪಿಎಸ್ ಐ ಪರಶುರಾಮ ಪತ್ನಿ ಶ್ವೇತಾ ದೂರು ದಾಖಲಿಸಿದ್ದಾರೆ. ಕಾಂಗ್ರೆಸ್ ಶಾಸಕ ಚನ್ನಾರೆಡ್ಡಿ ಪಾಟೀಲ್ ಪದೇ ಪದೇ ಹಣಕ್ಕೆ ಕಿರುಕುಳ ನೀಡುತ್ತಿದ್ದರು. ಪುಟ 2

## ಅಮ್ಮನ ಸಾವಿನ ಅಗಲಿಕೆಯಿಂದ ಮನನೊಂದು ಅಣ್ಣ, ತಂಗಿ ಆತ್ಮಹತ್ಯೆ



**ಚಿಕ್ಕಬಳ್ಳಾಪುರ:** ಅಮ್ಮನ ಸಾವಿನ ನೋವು ತಾಳಲಾರದೇ ಅಣ್ಣ ಮತ್ತು ತಂಗಿ ರೈಲಿಗೆ ತಲೆಕೊಟ್ಟು ಆತ್ಮಹತ್ಯೆ ಮಾಡಿಕೊಂಡಿರುವ ದಾರುಣ ಘಟನೆ ಚಿಕ್ಕಬಳ್ಳಾಪುರ ಜಿಲ್ಲೆಯ ಶಿಡ್ಲಘಟ್ಟ ಪಟ್ಟಣದಲ್ಲಿ ನಡೆದಿದೆ. ಶಿಡ್ಲಘಟ್ಟ ನಗರದ ಶೆಟ್ಟಪ್ಪನ ತೋಪಿನ ಬಳಿಯ ರೈಲ್ವೇ ಹಳಿಗಳ ಬಳಿ ಘಟನೆ ನಡೆದಿದ್ದು, ಮೃತರು ಅಣ್ಣ ಪ್ರಭು ಮತ್ತು ತಂಗಿ ನವ್ಯ ಎಂದು ತಿಳಿದು ಬಂದಿದೆ. ಶಿಡ್ಲಘಟ್ಟದ ಪ್ರೇಮ ನಗರದ ನಿವಾಸಿಗಳಾಗಿರುವ ಪ್ರಭು ಮತ್ತು ನವ್ಯ ಆತ್ಮಹತ್ಯೆ ಶರಣಾಗುವ ಮುನ್ನ ಒಬ್ಬರ ಕೈಯನ್ನು ಒಬ್ಬರು ದಾರದಿಂದ ಕಟ್ಟಿಕೊಂಡು ರೈಲಿಗೆ ತಲೆಕೊಟ್ಟು ಸಾವಿಗೆ ಶರಣಾಗಿದ್ದಾರೆ. ಇತ್ತೀಚೆಗೆ ತಾಯಿಯ ಮರಣದಿಂದ ಮಾನಸಿಕವಾಗಿ ಜರ್ಜರಿತರಾಗಿದ್ದ ಇಬ್ಬರು ತಾಯಿಯ ಸಾವಿನ ಅಗಲಿಕೆಯ ನೋವು ತಾಳಲಾರದೇ ಆತ್ಮಹತ್ಯೆಗೆ ಶರಣಾಗಿರಬಹುದು ಎಂದು ಶಂಕಿಸಲಾಗಿದೆ. ಸ್ಥಳೀಯ ರೈಲ್ವೆ ಪೊಲೀಸರು ಘಟನಾ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

## ರಾಜ್ಯಪಾಲರು ಕೇಂದ್ರ ಸರ್ಕಾರದ ಕೈಗೊಂಬೆ, ಅವರ ನೋಟಿಸ್‌ಗೆ ಹೆದರಲ್ಲ

**ಮೈಸೂರು:** ಮುಡಾ ಹಗರಣ ಸಂಬಂಧ ರಾಜ್ಯಪಾಲರು ಶೋಕಾಸ್ ನೀಡಿರುವ ವಿಚಾರವಾಗಿ ಆಕ್ರೋಶ ವ್ಯಕ್ತಪಡಿಸಿರುವ ಸಿಎಂ ಸಿದ್ದರಾಮಯ್ಯ, ಇದಕ್ಕೆಲ್ಲ ನಾನು ಹೆದರಲ್ಲ. ಇದನ್ನೆಲ್ಲ ಎದುರಿಸಲು ಸಿದ್ಧರಾಗಿದ್ದೇವೆ. ತಪ್ಪು ಮಾಡಿದ್ದರೆ ತಾನೇ ಹೆದರುವುದು. ರಾಜ್ಯಪಾಲರು ಕೇಂದ್ರ ಸರ್ಕಾರದ ಕೈಗೊಂಬೆ ಎಂದು ವಾಗ್ದಾಳಿ ನಡೆಸಿದರು. ಮೈಸೂರಿನಲ್ಲಿ ಮಾತನಾಡಿದ ಅವರು, ರಾಜ್ಯಪಾಲರು ಜೆಡಿಎಸ್, ಬಿಜೆಪಿ ಕೈಗೊಂಬೆಯಾಗಿ ವರ್ತಿಸಿದ್ದಾರೆ. 136 ಶಾಸಕರ ಬೆಂಬಲದಿಂದ ಮುಖ್ಯಮಂತ್ರಿ ಆಗಿರುವವನು ನಾನು ಎಂದರು. ನನ್ನ ಪಾತ್ರ ಇಲ್ಲದಿದ್ದರೂ ಸರ್ಕಾರ ಅಸ್ಥಿರಗೊಳಿಸಲು ಯತ್ನಿಸಿದ್ದಾರೆ. ರಾಜ್ಯಪಾಲರಿಗೆ ಸಲಹೆ ನೀಡುವವರು ಯಾರು? ರಾಜಭವನ ಹಾಗೂ ರಾಜ್ಯಪಾಲರ ಅಧಿಕಾರ ದುರ್ಬಳಕೆ ಮಾಡಿಕೊಂಡಿದ್ದಾರೆ. ರಾಜ್ಯಪಾಲರ ನೋಟಿಸ್‌ಗೆ ನಾನೇಕೆ ಹೆದರಲಿ. ಅಶೋಕ್ ಹೆದರಿರಬೇಕು ಅವರಿಗೆ ಭಯ ನನಗಲ್ಲ ಎಂದು ಸಿಎಂ ಹೇಳಿದರು.

**ಟಿಜೆ ಅಬ್ರಾಂ ಬ್ಲ್ಯಾಕ್‌ಮೇಲರ್:** ಟಿಜೆ ಅಬ್ರಾಂ ಒಬ್ಬ ಬ್ಲ್ಯಾಕ್‌ಮೇಲರ್. ಜುಲೈ 26 ಕ್ಕೆ ಬೆಳಿಗ್ಗೆ 11:30 ಕ್ಕೆ ಆತ ದೂರು ಕೊಡುತ್ತಾನೆ. ಆ ದೂರಿನ ಪರಾಮರ್ಶೆ ಮಾಡದೇ ಆ ದಿನ ಸಂಜೆಯೇ ಶೋಕಾಸ್ ನೋಟಿಸ್ ರೆಡಿ ಇದೆ ಬಂದು ಪಡೆದುಕೊಳ್ಳಿ ಎಂದು ನಮ್ಮ ಅಧಿಕಾರಿ ಎಲ್‌ಕೆ ಅತೀಕ್‌ಗೆ ಹೇಳುತ್ತಾರೆ. ಜೊಲ್ಲೆ, ಮುರುಗೇಶ್ ನಿರಾಣಿ, ಜನಾರ್ಧನ ರೆಡ್ಡಿ ವಿರುದ್ಧದ ದೂರು ಇನ್ನೂ ಹಾಗೆಯೇ ಇವೆ. ಅವರಿಗೆ ಶೋಕಾಸ್ ನೋಟಿಸ್ ಕೊಟ್ಟಿಲ್ಲ. ನನಗೆ ಯಾಕೆ ತರಾತುರಿಯಲ್ಲಿ ನೋಟಿಸ್ ಕೊಟ್ಟಿದ್ದಾರೆ ಎಂದು ಸಿದ್ದರಾಮಯ್ಯ ಪ್ರಶ್ನಿಸಿದರು. ಬಿಜೆಪಿ ಪಾದಯಾತ್ರೆಗೆ ಕೇಂದ್ರ ಸಚಿವ ಹೆಚ್‌ಡಿಕೆ ಬೆಂಬಲ ವಿಚಾರವಾಗಿ ಪ್ರತಿಕ್ರಿಯಿಸಿದ ಸಿದ್ದರಾಮಯ್ಯ, ಮುಡಾ ಕೇಸ್‌ನಲ್ಲಿ ಏನೂ ಇಲ್ಲ, ಪಾದಯಾತ್ರೆ ಬೇಡ ಅಂದಿದ್ದರು. ರಾಜ್ಯದಲ್ಲಿ ಭಾರಿ ಮಳೆಯಿಂದ ಪ್ರವಾಹ ಉಂಟಾಗಿದೆ. ನೆರೆ ಪರಿಸ್ಥಿತಿ ಅವಲೋಕಿಸಿ, ಜನರ ಸಮಸ್ಯೆ ಸ್ಪಂದಿಸಿ ಅಂದಿದ್ದರು. ಬಿಜೆಪಿಯವರ ಒತ್ತಡಕ್ಕೆ ಮಣಿದು ಪಾದಯಾತ್ರೆ ಬೆಂಬಲಿಸಿದ್ದಾರೆ. ಹಾಗಾದರೆ ಈಗ ಮಳೆ ಹಾನಿ, ಪ್ರವಾಹ ಹೋಗಿದೆಯಾ? ಹೆಚ್.ಡಿ.ಕುಮಾರಸ್ವಾಮಿ ಸ್ವಇಚ್ಛೆಯಿಂದ ಇದನ್ನು ಮಾಡುತ್ತಿಲ್ಲ. ಇದನ್ನೆಲ್ಲ ನಾವು ಎದುರಿಸಲು ಸಿದ್ಧರಿದ್ದೇವೆ ಎಂದರು.

# ಪಿಸ್ತೂಲು ತೋರಿಸಿ ಚಿನ್ನದ ಅಂಗಡಿಯಲ್ಲಿ ದರೋಡೆ




**ನೆಲಮಂಗಲ:** ಸಿನಿಮಾ ಶೈಲಿಯಲ್ಲಿ ಪಿಸ್ತೂಲು ತೋರಿಸಿ ಚಿನ್ನದ ಅಂಗಡಿ ದರೋಡೆ ಮಾಡಿದ್ದ ಅಂತರರಾಜ್ಯ ಖದೀಮರನ್ನು ಮಾದನಾಯಕನಹಳ್ಳಿ ಠಾಣೆ ಪೊಲೀಸರು ಬಂಧಿಸಿದ್ದಾರೆ. ರಾಜಸ್ಥಾನ ಮೂಲದ ನಾರಾಯಣ ಲಾಲ್ (43) ರಾಮ್ ಲಾಲ್ (54) ಕಿಶೋರ್ ಪವರ್ (25)ಮಹೇಂದ್ರ ಗೆಲೋಟ್ (25) ಕೀರ್ತಾರಾಮ್ (42) ಅಶೋಕ್ ಕುಮಾರ್ (39) ಸೋಹನ್ ರಾಮ್ (32) ಬಂಧಿತ ಆರೋಪಿಗಳು. ಆರೋಪಿಗಳಿಂದ 35 ಲಕ್ಷ ರೂ. ಮೌಲ್ಯದ 417 ಗ್ರಾಂ ತೂಕದ ಚಿನ್ನಾಭರಣಗಳು ಮತ್ತು ಕೃತ್ಯಕ್ಕೆ ಬಳಸಿದ ಒಂದು ಪಿಸ್ತೂಲ್, ಒಂದು ಡ್ಯಾಗರ್, ಆಟೋ ರಿಕ್ಷಾ ಮತ್ತು ಒಂದು ಕೆಟಿಎಂ ಡ್ಯೂಕ್ ಬೈಕ್ ಜಪ್ತಿ ಮಾಡಲಾಗಿದೆ.

ಆರೋಪಿಗಳು ಇದೇ ವರ್ಷ ಜೂನ್ 26 ರಂದು ಬೆಂಗಳೂರು ಉತ್ತರ ತಾಲೂಕಿನ ಮಾದನಾಯಕನಹಳ್ಳಿಯ ದೊಂಬರಹಳ್ಳಿಯಲ್ಲಿನ ರಾಜು ಪದಮ್ ಎಂಬುವರಿಗೆ ಸೇರಿದ ಪದಮ್ ಚಿನ್ನದ ಅಂಗಡಿಗೆ ನುಗ್ಗಿದ್ದರು. ಅಲ್ಲಿನ ಸಿಬ್ಬಂದಿಗೆ ಪಿಸ್ತೂಲು ತೋರಿಸಿ ಪರಾರಿಯಾಗಿದ್ದರು. ಮಾದನಾಯಕನಹಳ್ಳಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿತ್ತು.

ನೆಲಮಂಗಲ ಡಿವೈಎಸ್ಪಿ ಜಗದೀಶ್ ಮಾರ್ಗದರ್ಶನದಲ್ಲಿ ಇನ್ಸ್‌ಪೆಕ್ಟರ್ ಮುರಳೀಧರ್ ಅವರ ನೇತೃತ್ವದಲ್ಲಿ ತಂಡ ತನಿಖೆಗೆ ಇಳಿಯುತ್ತದೆ. ಪೊಲೀಸ್ ತಂಡವು ಸಿಸಿಟಿವಿ ದೃಷ್ಯಾವಳಿಗಳು ಮತ್ತು ತಾಂತ್ರಿಕ ಆಯಾಮದಲ್ಲಿ ಆರೋಪಿಗಳ ಬಗ್ಗೆ ಮಾಹಿತಿ ಪಡೆದಿದರು.

ಪ್ರಕರಣದಲ್ಲಿ ಭಾಗಿಯಾಗಿರುವ ಆರೋಪಿಗಳು ಬೆಂಗಳೂರಿನಲ್ಲಿ ಚಿನ್ನದ ಅಂಗಡಿ ಮತ್ತು ಬಟ್ಟೆ ಹಾಗೂ ಕೆಮಿಕಲ್ ಅಂಗಡಿಗಳಲ್ಲಿ ಕೆಲಸ ಮಾಡುತ್ತಿದ್ದರು. ಆರೋಪಿಗಳ ವಿರುದ್ಧ ಬೆಂಗಳೂರು ಹಲಸೂರು ಗೇಟ್ ಮತ್ತು ಬೊರುಂಡಾ, ಜೋದ್‌ಪುರ್ ಪೊಲೀಸ್ ಠಾಣೆಗಳಲ್ಲಿ ಸುಲಿಗೆ, ಕಳ್ಳತನ ಪ್ರಕರಣಗಳು ದಾಖಲಾಗಿದ್ದವು. ಆರೋಪಿಗಳು ದರೋಡೆ ಮಾಡಿದ್ದ ಚಿನ್ನಾಭರಣಗಳನ್ನು ಬೆಂಗಳೂರು ಮತ್ತು ರಾಜಸ್ಥಾನದಲ್ಲಿ ಮಾರಾಟ ಮಾಡುತ್ತಿದ್ದರು. ಬೆಂಗಳೂರು ನಗರದ ಹೊರವಲಯಗಳಲ್ಲಿ ದರೋಡೆ ಮಾಡಿದರೆ ಸಿಕ್ಕಿ ಹಾಕಿಕೊಳ್ಳುವುದಿಲ್ಲವೆಂದು ಯೋಜಿಸಿ ಆರೋಪಿಗಳು ಕೃತ್ಯವೆಸಗಿದ್ದಾರೆ. ದರೋಡೆಗೆಂದು ಕಂಟ್ರಿ ಮೇಡ್ ಪಿಸ್ತೂಲ್ ಅನ್ನು ಬಿಹಾರ ಮೂಲದ ಅಶೋಕನಿಂದ ರಾಜಸ್ಥಾನಕ್ಕೆ ತರಿಸಿಕೊಂಡಿದ್ದಾರೆ.

## ಅಂತರ್ಜಾತಿ ಮದುವೆಗೆ ಪೋಷಕರ ವಿರೋಧ: ಪ್ರೇಮಿಗಳಿಬ್ಬರು ವಿಷ ಸೇವಿಸಿ ಆತ್ಮಹತ್ಯೆ



**ಬಳ್ಳಾರಿ:** ಅಂತರ್ಜಾತಿ ಮದುವೆಗೆ ಪೋಷಕರ ವಿರೋಧ ವ್ಯಕ್ತಪಡಿಸಿದ್ದರಿಂದ ಪ್ರೇಮಿಗಳಿಬ್ಬರು ವಿಷ ಸೇವಿಸಿ ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ಬಳ್ಳಾರಿ ಜಿಲ್ಲೆಯ ಸಿರಗುಪ್ಪ ಪಟ್ಟಣದಲ್ಲಿ ನಡೆದಿದೆ.

ರಾಜ (23) ಹಾಗೂ ಪವಿತ್ರ (20) ಮೃತ ದುರ್ದೈವಿಗಳು. ಮೃತರಿಬ್ಬರೂ ಸಿರಗುಪ್ಪ ಪಟ್ಟಣದ ನಿವಾಸಿಗಳು. ಸಿರಗುಪ್ಪದ ಆದೋನಿ ರಸ್ತೆಯ ಜಮೀನೊಂದರಲ್ಲಿ ರಾಜ ಹಾಗೂ ಪವಿತ್ರ ವಿಷ ಸೇವಿಸಿ ಆತ್ಮಹತ್ಯೆ ಮಾಡಿಕೊಂಡಿದ್ದಾರೆ.

ಇವರಿಬ್ಬರೂ ಅನ್ಯ ಜಾತಿಯವರಾಗಿದ್ದಕ್ಕೆ ಎರಡೂ ಮನೆಯಲ್ಲಿ ಮದುವೆಗೆ ವಿರೋಧ ಇತ್ತು ಎನ್ನಲಾಗಿದೆ. ಇದೇ ಕಾರಣಕ್ಕೆ ತಡರಾತ್ರಿ ಮನೆ ಬಿಟ್ಟು ಬಂದಿದ್ದರು. ಪೋಷಕರ ವಿರೋಧಕ್ಕೆ ಮನನೊಂದು ವಿಷ ಸೇವಿಸಿ ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಘಟನಾ ಸ್ಥಳಕ್ಕೆ ಸಿರಗುಪ್ಪ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದು, ಸಿರಗುಪ್ಪ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಕಾಪಿರೈಟ್ ಉಲ್ಲಂಘನೆ ಕೇಸ್: ಕೋರ್ಟ್‌ನಲ್ಲಿ ಹೋರಾಟ ಮಾಡ್ತೀನಿ ಎಂದ ರಕ್ಷಿತ್ ಶೆಟ್ಟಿ



**ಬೆಂಗಳೂರು:** 'ಬ್ಯಾಚುಲರ್ ಪಾರ್ಟಿ' ಕಾಪಿರೈಟ್ ಉಲ್ಲಂಘನೆ ಆರೋಪದಲ್ಲಿ ಸಿಲುಕಿರುವ ನಟ ರಕ್ಷಿತ್ ಶೆಟ್ಟಿ ಯಶವಂತಪುರ ಪೊಲೀಸ್ ಠಾಣೆಯಲ್ಲಿ ವಿಚಾರಣೆಗೆ ಹಾಜರಾದ ಬಳಿಕ ಮಾಧ್ಯಮಕ್ಕೆ ಪ್ರತಿಕ್ರಿಸಿ, ಕೋರ್ಟ್‌ನಲ್ಲಿ ಫೈಟ್ ಮಾಡ್ತೀನಿ, ನ್ಯಾಯಾಲಯದಲ್ಲಿ ನೋಡಿಕೊಳ್ಳೋಣ ಎಂದು ಮಾತನಾಡಿದ್ದಾರೆ.

ರಕ್ಷಿತ್ ಶೆಟ್ಟಿ ಮಾತನಾಡಿ, ಕಾಪಿರೈಟ್ ಬಗ್ಗೆ ಇಂಡಸ್ಟ್ರಿಯಲ್ಲಿ ನಾಲೆಡ್ಜೇ ಇಲ್ಲ. ನನ್ನ ಪ್ರಕಾರ, ಕಾಪಿರೈಟ್ ಉಲ್ಲಂಘನೆ ಅಲ್ಲ. ಈ ಸಿನಿಮಾಗೂ ಮುನ್ನ ಆ ಹಾಡುಗಳನ್ನು ಬಳಸಲು ಅನುಮತಿಗಾಗಿ ಎಂಆರ್‌ಟಿ ಮ್ಯೂಸಿಕ್ ಸಂಸ್ಥೆ ಅವರ ಬಳಿ ಮಾತನಾಡಿದಾಗ, ಹೆಚ್ಚಿನ ಮೊತ್ತ ಕೇಳಿದ್ದರು. ಅಷ್ಟು ದೊಡ್ಡ ಅಮೌಂಟ್ ಕೊಡೋಕೆ ನಮಗೆ ಸರಿ ಎನಿಸಲಿಲ್ಲ. ಆಮೇಲೆ ಅವರು ಹೇಳ್ತೀವಿ ಅಂತ ಆ ಮಾತುಕತೆ ಅಲ್ಲೇ ನಿಂತು ಹೋಯಿತು. ಈ ಸಿನಿಮಾದ ರಿಲೀಸ್ ನಂತರ ಅವರು ಕೇಸ್ ಹಾಕಿದ್ದಾರೆ ಎಂದಿದ್ದಾರೆ.

ಮೊದಲಿಗೆ ಇದು ಕಾಪಿರೈಟ್ ಉಲ್ಲಂಘನೆ ಅಲ್ಲ. ಕನ್ನಡದ ಹಾಡನ್ನು ಕನ್ನಡ ಚಿತ್ರದಲ್ಲಿ ಬಳಕೆ ಮಾಡುವಂತೆಯೇ ಇಲ್ವಾ ಎಂದು ನಟ ಪ್ರಶ್ನಿಸಿದ್ದಾರೆ. ಕೊಟ್ಟಿರುವ ಕಂಪ್ಲೆಂಟ್‌ಗೆ ನಾನು ಕೂಡ ಕೋರ್ಟ್‌ನಲ್ಲಿ ಫೈಟ್ ಮಾಡ್ತೀನಿ ಎಂದಿದ್ದಾರೆ. ಸಾಂಧರ್ಬಿಕವಾಗಿ ಹಾಡು ಬಳಕೆಯಾಗಿದೆ ಅಷ್ಟೆ. ಕಾಪಿರೈಟ್ ಆಕ್ಟ್ ಏನು ಹೇಳುತ್ತೆ ಎಂಬುದನ್ನು ಕೋರ್ಟ್‌ನಲ್ಲಿ ನೋಡೋಣ. ನ್ಯಾಯಾಲಯ ತೀರ್ಮಾನ ಮಾಡಲಿ. ಈ ಬಗ್ಗೆ ನಮಗೂ ಅರ್ಥವಾಗಲಿ ಯಾವುದೂ ಬಳಸಬೇಕು ಯಾವುದು ಬಳಸಬಾರದು ಅಂತ. ನಮ್ಮ ಪ್ರಕಾರ, ಇದು ಸರಿ ಅಂತಾ ವಾದ ಮಾಡ್ತೀನಿ ಎಂದು ರಕ್ಷಿತ್ ಶೆಟ್ಟಿ ಮಾತನಾಡಿದ್ದಾರೆ.

ಇನ್ನೂ ಈ ಹಿಂದೆ 'ಕಿರಿಕ್ ಪಾರ್ಟಿ' ಸಿನಿಮಾ ವಿಚಾರದಲ್ಲೂ ಕಾಪಿರೈಟ್ ಆರೋಪ ಬಂದಾಗ, ನಮ್ಮ ಕಡೆ ಸರಿಯಿದೆ ಅಂತ ಕೋರ್ಟ್‌ನಿಂದ ತೀರ್ಪು ಬಂದಿತ್ತು. ಆ ಬಳಿಕ ಹೊರಗೆ ಸಂಧಾನ ಮಾತುಕತೆಯಾಗಿತ್ತು ಎಂದು ರಕ್ಷಿತ್ ಹೇಳಿದ್ದಾರೆ. ಅಂದಹಾಗೆ, ಜುಲೈ 15ರಂದು ರಕ್ಷಿತ್ ಶೆಟ್ಟಿ ವಿರುದ್ಧ ಎಂಆರ್‌ಟಿ ಮ್ಯೂಸಿಕ್ ಪಾಲುದಾರರಾಗಿರುವ ನವೀನ್ ಕುಮಾರ್ ದೂರು ನೀಡಿದ್ದರು. ನ್ಯಾಯ ಎಲ್ಲಿದೆ ಚಿತ್ರದ 'ನ್ಯಾಯ ಎಲ್ಲಿದೆ' ಹಾಡು ಮತ್ತು ಗಾಳಿ ಮಾತು ಚಿತ್ರದ 'ಒಮ್ಮೆ ನಿನ್ನನ್ನು' ಅನಧಿಕೃತವಾಗಿ ಹಾಡು ಬಳಕೆ ಮಾಡಿದ ಆರೋಪದಲ್ಲಿ ಪರಮ್ವಾ ಸ್ಟುಡಿಯೋಸ್ ಮತ್ತು ರಕ್ಷಿತ್ ಶೆಟ್ಟಿ ವಿರುದ್ಧ ದೂರು ದಾಖಲಾಗಿತ್ತು.

## ಆಸ್ತಿ ತೆರಿಗೆ ಒನ್ ಟೈಮ್ ಸೆಟ್ಲ್‌ಮೆಂಟ್‌ಗೆ ಮತ್ತೆ 1 ತಿಂಗಳು ಕಾಲಾವಕಾಶ ವಿಸ್ತರಣೆ




**ಬೆಂಗಳೂರು:** ಆಸ್ತಿ ತೆರಿಗೆ ಬಾಕಿ ಉಳಿಸಿಕೊಂಡವರಿಗೆ ಬಿಬಿಎಂಪಿ ಗುಡ್ ನ್ಯೂಸ್ ನೀಡಿದೆ. 'ಒಂದು ಬಾರಿ ಪರಿಹಾರ ಯೋಜನೆ?ಯಡಿ (ಒಟಿಎಸ್) ಆಸ್ತಿ ತೆರಿಗೆಗೆ ಶೇ.5 ರಿಯಾಯಿತಿ ಪಡೆಯಲು ಜುಲೈ 31 ಅಂತಿಮ ದಿನವಾಗಿತ್ತು. ಆದರೆ, ಇದೀಗ ?ಒನ್ ಟೈಮ್ ಸೆಟ್ಲ್‌ಮೆಂಟ್ ಯೋಜನೆ? ಕಾಲಾವಕಾಶವನ್ನು ಮತ್ತೆ ಒಂದು ತಿಂಗಳ ಕಾಲ ವಿಸ್ತರಣೆ ಮಾಡಲಾಗಿದೆ.

ಬಿಬಿಎಂಪಿ ವ್ಯಾಪ್ತಿಯಲ್ಲಿನ ಆಸ್ತಿ ತೆರಿಗೆ ಪಾವತಿಸಲು ಒಂದು ಬಾರಿ ಪರಿಹಾರ ಯೋಜನೆಯನ್ನು(ಒಟಿಎಸ್) ಸರ್ಕಾರ ಜಾರಿಗೆ ತಂದಿತ್ತು. ಈ ಯೋಜನೆಯಿಂದ ಆಸ್ತಿ ತೆರಿಗೆಯ ಬಾಕಿಯ ಮೇಲೆ ಪಾವತಿಸಬೇಕಾದ ಬಡ್ಡಿಯನ್ನು ಸಂಪೂರ್ಣ ಮನ್ನಾ ಮತ್ತು ದಂಡವನ್ನು ಅರ್ಧಕ್ಕೆ ಇಳಿಸಲಾಗಿದೆ. ಒಟಿಎಸ್ ಯೋಜನೆಯಡಿ ದಂಡಗಳ ಮೇಲೆ ಶೇ. 50 ರಿಯಾಯಿತಿ ಮತ್ತು ಆಸ್ತಿ ತೆರಿಗೆ ಡೀಫಾಲ್ಟರ್‌ಗಳಿಗೆ ಬಡ್ಡಿ ಪಾವತಿಗಳ ಮೇಲೆ ಶೇ. 100ರಷ್ಟು ರಿಯಾಯಿತಿ ನೀಡಲಾಗುತ್ತದೆ.

**ಒಟಿಎಸ್ ಕಾಲಾವಧಿ ಆ. 31ರವರೆಗೆ ವಿಸ್ತರಣೆ: ಡಿಕೆಶಿ:** ಈ ಬಗ್ಗೆ ಡಿಸಿಎಂ ಹಾಗೂ ಬೆಂಗಳೂರು ನಗರಾಭಿವೃದ್ಧಿ ಸಚಿವ ಡಿ.ಕೆ.ಶಿವಕುಮಾರ್ ಮಾಹಿತಿ ನೀಡಿದ್ದಾರೆ. ''ಆಸ್ತಿ ತೆರಿಗೆ ಸುಸ್ತಿದಾರರಿಗಾಗಿ ಜಾರಿಗೆ ತರಲಾಗಿದ್ದ 'ಒಂದು ಬಾರಿ ಪರಿಹಾರ ಯೋಜನೆ' (ಒಟಿಎಸ್)ಯ ಕಾಲಾವಧಿ (ಜುಲೈ 31) ಮುಕ್ತಾಯಗೊಂಡಿರುವ ಹಿನ್ನೆಲೆಯಲ್ಲಿ, ಸಾರ್ವಜನಿಕರ ಒತ್ತಡದ ಮೇರೆಗೆ ಇದನ್ನು ಒಂದು ತಿಂಗಳ ಕಾಲ ಅಂದರೆ ಆಗಸ್ಟ್ 31ರವರೆಗೆ ವಿಸ್ತರಣೆ ಮಾಡಲಾಗಿದೆ'' ಎಂದು ತಿಳಿಸಿದ್ದಾರೆ.

11ನೇ ನ್ಯಾನೋ ತಂತ್ರಜ್ಞಾನ ಅಂತಾರಾಷ್ಟ್ರೀಯ ಸಮ್ಮೇಳನ ಕಾರ್ಯಕ್ರಮದ ಬಳಿಕ ಮಾಧ್ಯಮಗಳ ಜತೆ ಶುಕ್ರವಾರ ಮಾತನಾಡಿದ ಶಿವಕುಮಾರ್ ಅವರು, ''ಈವರೆಗೂ 3 ಸಾವಿರ ಕೋಟಿಯಷ್ಟು ಆಸ್ತಿ ತೆರಿಗೆ ಸಂಗ್ರಹವಾಗಿದ್ದು, ಹೆಚ್ಚುವರಿಯಾಗಿ 400 ಕೋಟಿ ತೆರಿಗೆ ಸಂಗ್ರಹವಾಗಿದೆ. ಕೆಲ ಬದಲಾವಣೆ ಮಾಡಿಕೊಳ್ಳಬೇಕು ಮತ್ತು ಒಟಿಎಸ್ ಕಾಲಾವಧಿ ಒಂದು ತಿಂಗಳು ವಿಸ್ತರಣೆ ಮಾಡಬೇಕು ಎಂದು ಅಧಿಕಾರಿಗಳು ಹಾಗೂ ಸಾರ್ವಜನಿಕರಿಂದ ಒತ್ತಡ ಬರುತ್ತಿದೆ. ಸರ್ವರ್ ಸಮಸ್ಯೆ ಹಾಗೂ ಮತ್ತೆ ಕೆಲವರು ಚೆಕ್ ನೀಡಿದ್ದು, ಜುಲೈ 31ರವರೆಗೆ ನೀಡಲಾಗಿದ್ದ ಕಾಲಾವಧಿಯನ್ನು ಒಂದು ತಿಂಗಳ ಕಾಲ ಅಂದರೆ ಆಗಸ್ಟ್ 31ರವರೆಗೆ ವಿಸ್ತರಣೆ ಮಾಡಲಾಗಿದೆ'' ಎಂದು ತಿಳಿಸಿದರು.

'ಪ್ರಾಮಾಣಿಕವಾಗಿ ತೆರಿಗೆ ಪಾವತಿ ಮಾಡುತ್ತಿರುವವರಿಗೆ ತೊಂದರೆಯಾಗದ ರೀತಿಯಲ್ಲಿ ಕೆಲವು ಬದಲಾವಣೆ ಮಾಡಿಕೊಳ್ಳಲಾಗುವುದು. ಒಂದು ವೇಳೆ ಯಾರಾದರೂ ಹೆಚ್ಚಿಗೆ ಹಣ ಪಾವತಿ ಮಾಡಿದ್ದರೆ, ಮುಂದಿನ ಬಾರಿ ಆಸ್ತಿ ತೆರಿಗೆ ಪಾವತಿ ವೇಳೆ ಅದನ್ನು ವಜಾಗೊಳಿಸಲಾಗುವುದು. ಈ ವಿಚಾರದಲ್ಲಿ ಅನಗತ್ಯವಾಗಿ ಗಾಬರಿಯಾಗುವುದು ಬೇಡ' ಎಂದು ಹೇಳಿದರು.

ಬೆಂಗಳೂರುನಗರಅಭಿವೃದ್ಧಿಯಮೇಲುಸ್ತುವಾರಿನೋಡಿಕೊಳ್ಳುತ್ತಿರುವ ಕರ್ನಾಟಕದ ಉಪಮುಖ್ಯಮಂತ್ರಿ, ಡಿ.ಕೆ. ಶಿವಕುಮಾರ್ ಅವರು ಮಾರ್ಚ್‌ನಲ್ಲಿ ತೆರಿಗೆ ಸಂಗ್ರಹವನ್ನು ಸುಗಮಗೊಳಿಸಲು ಮತ್ತು ಆದಾಯವನ್ನು ಹೆಚ್ಚಿಸಲು ಹೊಸ ಆಸ್ತಿ ತೆರಿಗೆ ವ್ಯವಸ್ಥೆಯನ್ನು ಪರಿಚಯಿಸಿದ್ದರು. ಎಂದಿಗೂ ತೆರಿಗೆ ಪಾವತಿಸದ ಆಸ್ತಿ ಮಾಲೀಕರಿಗೆ ಒಂದು ಬಾರಿ ಪರಿಹಾರದ ಆಯ್ಕೆಯನ್ನು ಅವರು ಈ ಯೋಜನೆಯ ಅಡಿಯಲ್ಲಿ ಘೋಷಿಸಿದ್ದರು.

ಆಸ್ತಿ ಮಾಲೀಕರಿಗೆ ಪರಿಹಾರ ನೀಡಲು ಬೆಂಗಳೂರಿನಲ್ಲಿ ಬಾಕಿ ಉಳಿದಿರುವ ಆಸ್ತಿ ತೆರಿಗೆ ಪಾವತಿ ವಿಂಡೋವನ್ನು ಈ ವರ್ಷ ಏಪ್ರಿಲ್ 30ರಿಂದ ಜುಲೈ 31ರವರೆಗೆ ವಿಸ್ತರಿಸಲಾಗಿತ್ತು. ಜುಲೈ 31 ರೊಳಗೆ ಬಾಕಿ ಪಾವತಿಸಲು ವಿಫಲರಾದವರನ್ನು ಆಗಸ್ಟ್ 1ರಿಂದ ಸುಸ್ತಿದಾರರೆಂದು ಪರಿಗಣಿಸಲಾಗುವುದು ಎಂದು ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹೇಳಿದ್ದರು. ಆದರೆ, ಇದೀಗ ಮತ್ತೊಂದು ತಿಂಗಳು ?ಒನ್ ಟೈಮ್ ಸೆಟ್ಲ್‌ಮೆಂಟ್ ಯೋಜನೆ? ವಿಸ್ತರಿಸಲಾಗಿದೆ.

### ಮೊದಲನೇ ಪುಟದಿಂದ...

## ಕೇಂದ್ರ ಸರ್ಕಾರ!

ರೆಸಾರ್ಟ್‌ಗಳು, ಅರಣ್ಯ ಒತ್ತುವರಿ ತೆರವಿಗೆ ಮೌಖಿಕ ಆದೇಶ ಕೊಟ್ಟಿದ್ದಾರೆ.

**ಕೊಡಗಿನ ಗುಡ್ಡ ಕುಸಿತ ಪ್ರದೇಶಗಳಲ್ಲಿ ಸಿಎಂ ಪ್ರವಾಸ!:** ಕೊಡಗಿನಲ್ಲಿ ಕುಶಾಲನಗರದ ಹಾತೂರು ಗ್ರಾಮದಲ್ಲಿ ಮನೆಯೊಂದು ಕುಸಿದಿದ್ದು, ಮನೆಯಲ್ಲಿದ್ದವರು ಪ್ರಾಯಾಣಾಯದಿಂದ ಪಾರಾಗಿದ್ದಾರೆ. ಇತ್ತ ಕೇರಳ ರಾಜ್ಯಕ್ಕೆ ಸಂಪರ್ಕ ಕಲ್ಪಿಸುವ ಮುಖ್ಯ ರಸ್ತೆ ಗುಡ್ಡುಕುಸಿತದಿಂದ ಬಂದ್ ಆಗಿದೆ. ಪೊನ್ನಂಪೇಟೆ ತಾಲ್ಲೂಕಿನ ಶ್ರೀಮಂಗಲ ಮತ್ತು ಕುಟ್ಟಗ್ರಾಮದ ರಸ್ತೆ ಕುಸಿದಿದೆ. ಕರ್ನಾಟಕದ ಪಶ್ಚಿಮಘಟ್ಟಗಳಷ್ಟೇ ಅಲ್ಲ. ದೇಶದ 4 ದಿಕ್ಕುಗಳ ಘಟ್ಟಪ್ರದೇಶಗಳಲ್ಲಿ ಭೂ ಕುಸಿತಗಳು ಆಗ್ತಾನೇ ಇದೆ.

ಹಿಮಾಚಲಪ್ರದೇಶದಲ್ಲಿ ಮೇಘಸ್ಫೋಟದ ಜೊತೆ ಭೀಕರ ಮಳೆಗೆ ಪರ್ವತಶ್ರೇಣಿಗಳೇ ಕುಸಿದು 40ಕ್ಕೂ ಹೆಚ್ಚು ಜನ ಕಣ್ಮರೆಯಾಗಿದ್ದಾರೆ. ಮಣ್ಣು, ಬಂಡೆ, ನೀರಿನ ರಭಸಕ್ಕೆ ಕೊಚ್ಚಿಹೋದವ್ರನ್ನ ಹುಡುಕೋದು ಅಸಾಧ್ಯವಾಗಿ ಹೋಗಿದೆ. ಇನ್ನು ಭೂಕುಸಿತದ ಜಾಗದಲ್ಲಿ ಬದುಕುಳಿದವರ ರಕ್ಷಣಾಕಾರ್ಯ ಕೆಲಸನೂ ಜೋರಾಗಿ ನಡೆಯುತ್ತಿದೆ.

ಉತ್ತರಾಖಂಡದ ಕರ್ಣಪ್ರಯಾಗ್‌ನಲ್ಲಿ ಮತ್ತೆ ಭೀಕರ ಭೂಕುಸಿತವಾಗ್ತಿದೆ. ಕೇದರನಾಥ ಭಾಗದ ಸುತ್ತಮುತ್ತಲೂ ಬೆಟ್ಟಗುಡ್ಡಗಳೇ ಕುಸಿಯುತ್ತಿವೆ. ಮುನ್ನೆಚ್ಚರಿಕೆಯಾಗಿ ಭಾರತೀಯ ಸೇನಾಪಡೆ ರಕ್ಷಣೆಗೆ ಧಾವಿಸಿದೆ. ವಿಶೇಷ ಹೆಲಿಕಾಪ್ಟರ್‌ಗಳನ್ನ ಬಳಸಿ ಇಲ್ಲಿವರೆಗೂ ಐದು ಸಾವಿರ ಜನರನ್ನ ರಕ್ಷಣೆ ಮಾಡಲಾಗಿದೆ.

ಮನುಷ್ಯದ ದುರಾಸೆಗೆ ಮಿತಿಯಿಲ್ಲ. ಹಾಗಂತ ದುರಾಸೆಗಳಿಗೆ ಮಿತಿ ಹೇರದಿದ್ರೆ ಮನುಷ್ಯ ಕುಲಕ್ಕೆ ಉಳಿಗಾಲನೂ ಇಲ್ಲ. ವಯನಾಡು ಭೂಕುಸಿತದ ದುರಂತ. ಹಿಮಾಚಲದಲ್ಲಿ ಸಂಭವಿಸ್ತಿರೋ ಪರ್ವತಶ್ರೇಣಿಗಳೇ ನಾಶವಾಗ್ತಿರೋದು ಇದಕ್ಕೆ ಸ್ಪಷ್ಟ ಉದಾಹರಣೆ.

## ಮೈಸೂರು ಚಲೋ ಶುರು

**ಮೈತ್ರಿಪಕ್ಷಗಳ ಪಾದಯಾತ್ರೆಗೆ ಕಾಂಗ್ರೆಸ್ ತಿರುಗೇಟು:** ಬಿಜೆಪಿ ಪಾದಯಾತ್ರೆ ಸಾಗುವ ಮೈಸೂರು ರಸ್ತೆಯಲ್ಲಿ ಬಿಜೆಪಿ ನಾಯಕರ ವಿರುದ್ಧ ಭ್ರಷ್ಟ ಬಿಜೆಪಿ ಕಳ್ಳರ ಪಾದಯಾತ್ರೆಗೆ ಸ್ವಾಗತ ಅಂತ ಕಾಂಗ್ರೆಸ್ ಪೋಸ್ಟರ್ ಅಂಟಿಸಿದೆ. ಈ ಮೂಲಕ ಮೈತ್ರಿಪಕ್ಷಗಳ ಪಾದಯಾತ್ರೆಗೆ ಕಾಂಗ್ರೆಸ್ ತಿರುಗೇಟು ಕೊಟ್ಟಿದೆ.

## ಇದು ಲೂಟಿ ಸರ್ಕಾರ

ಪಿಎಸ್‌ಐ ಪರಶುರಾಮ್ ಸಾವಿನ ಬಗ್ಗೆ ಸಮಗ್ರ ತನಿಖೆ ನಡೆಯೇಕು ಎಂದು ಆಗ್ರಹಿಸಿದರು.

ಹಿಂದೆ ಯತೀಂದ್ರ, ಅವರ ಹಲೋ ಅಪ್ಪ ಪ್ರಕರಣದಲ್ಲಿ ವರ್ಗಾವಣೆ ದಂಧೆ ಕೇಳಿ ಬಂದಿತ್ತು. ಈಗ ಮತ್ತೊಂದು ಪ್ರಕರಣ ಯಾದಗಿರಿಯಲ್ಲಿ ನಡೆಯುತ್ತಿದೆ. ಬಿಜೆಪಿ ಈಗ ಈ ಪ್ರಕರಣದ ಮಾಹಿತಿಯನ್ನು ಸಂಗ್ರಹ ಮಾಡುತ್ತಿದೆ ಎಂದು ತಿಳಿಸಿದರು.

## ಜೀವ ಉಳಿಸಿದ ದನಕರುಗಳು

ನಂತರ ಗುಡ್ಡದ ಮೇಲೆ ಇದ್ದ ಇನ್ನಿತರರು ಜಯಮ್ಮನ ಪತಿ ಹಾಗೂ ಮಗನನ್ನೂ ಮೇಲೆ ಏಳುದುಕೊಂಡಿದ್ದಾರೆ.

ಆದರೆ, ಕಣ್ಣ ಮುಂದೆಯೇ ಆರು ಹಸುಗಳು ಕೊಚ್ಚಿ ಹೋದವು. ಹಸುಗಳು ಕೊಚ್ಚಿ ಹೋಗುತ್ತಿದ್ದರೂ ಏನು ಮಾಡಲಾಗದ ಪರಿಸ್ಥಿತಿ ಅವರಿಗಿತ್ತು. ಜಯಮ್ಮನ ಮನೆ ಸಂಪೂರ್ಣ ನಾಶವಾಗಿದೆ. ಜಯಮ್ಮ ಉಟ್ಟು ಬಟ್ಟೆಯಲ್ಲೇ ಕೇರಳ ತೊರೆದು, ತವರು ಮನೆ ಚಾಮರಾಜನಗರಕ್ಕೆ ಬಂದಿದ್ದಾರೆ. ಸದ್ಯ ಜಯಮ್ಮ ಮಗಳ ಮನೆಯಲ್ಲಿ ಆಶ್ರಯ ಪಡೆದುಕೊಂಡಿದ್ದಾರೆ.

''ನಮ್ಮ ಜೀವನಕ್ಕೆ ಆಧಾರವಾಗಿದ್ದ ದನಕರುಗಳು ಕೊಚ್ಚಿಕೊಂಡು ಹೋಗಿವೆ. ನಾವು ಬೀದಿಗೆ ಬಂದಿದ್ದೇವೆ. ಮುಂದೆ ನಾವು ಜೀವನ ನಡೆಸಲು ಕಷ್ಟವಾಗುತ್ತದೆ. ನಮಗೆ ಮತ್ತೆ ಕೇರಳಕ್ಕೆ ಹೋಗಿ ಜೀವನ ಮಾಡಲು ಆಗಲ್ಲ. ನಾವು ಇಲ್ಲೇ ಜೀವನ ಸಾಗಿಸುತ್ತೇವೆ. ಹೀಗಾಗಿ ಸರ್ಕಾರ ನಮಗೆ ಇಲ್ಲೇ ಒಂದು ಕೆಲಸ ನೀಡಲಿ. ಜೀವನ ಸಾಗಿಸಿಕೊಂಡು ಹೋಗುತ್ತೇವೆ'' ಎಂದು ಜಯಮ್ಮ ಹೇಳಿದರು.

## ಉತ್ತರಖಾಂಡ್‌ನಲ್ಲಿ ಮೇಘಸ್ಫೋಟ

ಬೆಂಗಳೂರಿನ ಬೇರೆ ಬೇರೆ ಏರಿಯಾಗಳಿಂದ ಹೊರಟಿದ್ದ 15 ಜನರ ಪೈಕಿ, 6 ಜನರು ಸಂಪರ್ಕಕ್ಕೆ ಸಿಗದೇ ಇರೋದು ಇತರರನ್ನ ಕಂಗಾಲಾಗಿಸಿದೆ. ತಿನ್ನೋಕೆ ಊಟವು ಇಲ್ಲದೇ ಬಿಸ್ಕೆಟ್ ತಿಂದು ಎರಡ್ಮೂರು ದಿನ ಕಾಲ ನೂಕಿದ್ದ ಕನ್ನಡಿಗರ ಪೈಕಿ 5 ಜನರನ್ನ ರಕ್ಷಣಾತಂಡ ಸುರಕ್ಷಿತ ಸ್ಥಳಕ್ಕೆ ರವಾನಿಸಿದೆ. ಉಳಿದ ಕನ್ನಡಿಗರು ರೆಸ್ಕ್ಯೂ ಪಾಯಿಂಟ್ ನಲ್ಲಿ ರಕ್ಷಣೆಗೆ ಕಾದು ನಿಂತ ಜನರ ಗುಂಪಿನ ಜೊತೆ ಕಾದುಕುಳಿತಿದ್ದಾರೆ.

ಇತ್ತ ಬೆಂಗಳೂರಿನಿಂದ ಕೇದಾರನಾಥ್ ಗೆ ಹೊರಟಿದ್ದ 20 ಸದಸ್ಯರಿದ್ದ ಮತ್ತೊಂದು ತಂಡ ರಕ್ಷಣಾ ಪಡೆಯ ನೆರವಿನಿಂದ ಸುರಕ್ಷಿತ ಸ್ಥಳಕ್ಕೆ ತಲುಪಿದ್ದು, 20ಜನರ ಪೈಕಿ ಓರ್ವ ವ್ಯಕ್ತಿ ಸಂಪರ್ಕಕ್ಕೆ ಸಿಗ್ತಿಲ್ಲ ಅಂತಾ ತಂಡದ ಸದಸ್ಯರು ಆತಂಕ ವ್ಯಕ್ತಪಡಿಸಿದ್ದಾರೆ. ಪ್ಯಾಕೇಜ್ ಟೂರ್ ನಲ್ಲಿ ಯಾತ್ರೆಗೆ ಹೊರಟಿದ್ದ ಈ ತಂಡ ಸದ್ಯ ಸುರಕ್ಷಿತ ಸ್ಥಳ ತಲುಪಿದ್ದು, ಯಾತ್ರೆ ವೇಳೆ ಆದ ಅನುಭವವನ್ನ ಯಾತ್ರಾರ್ಥಿಗಳು ಬಿಚ್ಚಿಟ್ಟಿದ್ದಾರೆ.

ಸದ್ಯ ದೇವರನಾಡಿನ ದುರಂತ ಮಾಸೋ ಮೊದಲೇ ಮಳೆರಾಯ ಉತ್ತರವನ್ನು ತತ್ತರ ಪಡುವಂತೆ ಮಾಡಿದ್ದು, ಕೇದಾರನಾಥ್ ನಲ್ಲಿ ಸಿಲುಕಿರೋ ಯಾತ್ರಾರ್ಥಿಗಳ ರಕ್ಷಣೆಗೆ ಸ್ಥಳೀಯ ಪೊಲೀಸರು, SDRF ತಂಡ ಕಾರ್ಯಾಚರಣೆ ಮುಂದುವರಿಸಿದೆ. ಸದ್ಯ ಬೆಂಗಳೂರಿನಿಂದ ಹೊರಟಿದ್ದ ಕನ್ನಡಿಗರು ರಕ್ಷಣಾ ಸ್ಥಳದಲ್ಲಿ ಸೇಫ್ ಆಗಿದ್ದು, ಆದಷ್ಟು ಬೇಗ ತವರು ಸೇರೋಕೆ ಕಾದುಕುಳಿತಿದ್ದಾರೆ.

## ಕೈ ಶಾಸಕನ ವಿರುದ್ಧ ದೂರು

ನಾವು ದಲಿತರು, ದುಡ್ಡು ಕೊಡಲಿಲ್ಲ ಎಂಬ ಕಾರಣಕ್ಕೆ ಶಾಸಕರು ಪೋಸ್ಟಿಂಗ್ ಕೊಟ್ಟಿಲ್ಲ. ಶಾಸಕರು ತಪ್ಪು ಮಾಡಿದ್ದಾರೆ ಅವರು ಸ್ಥಳಕ್ಕೆ ಬರಬೇಕು ಎಂದು ಪಿಎಸ್ ಐ ಪರಶುರಾಮ ಪತ್ನಿ ಶ್ವೇತಾ ಒತ್ತಾಯಿಸಿದ್ದಾರೆ. ಶ್ವೇತಾ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಸಂಗೀತಾ ಅವರ ಬಳಿ ದೂರು ನೀಡಿದ್ದಾರೆ.

ಯಾದಗಿರಿ ಕಾಂಗ್ರೆಸ್ ಶಾಸಕ ಚೆನ್ನಾರೆಡ್ಡಿಗೆ ದುಡ್ಡಿನ ಆಸೆ ಹೆಚ್ಚಾಗಿದೆ. ಯಾದಗಿರಿ ಠಾಣೆಯಿಂದ ಅವಧಿ ಪೂರ್ವ ವರ್ಗಾವಣೆ ಮಾಡಿದ್ದಾರೆ. ಅವಧಿ ಪೂರ್ವ ವರ್ಗಾವಣೆಯಿಂದ ಪಿಎಸ್ ಐ ಪರಶುರಾಮ ನೊಂದಿದ್ದರು. ಏಳು ತಿಂಗಳ ಅವಧಿಯಲ್ಲಿ ಶಾಸಕರು ಬೇರೆಯವರಿಗೆ ಪೋಸ್ಟಿಂಗ್ ನೀಡಿದ್ದಾರೆ. ವರ್ಗಾವಣೆ ಮಾಡುತ್ತಿರುವುದು ಸಿಎಂ, ಗೃಹಸಚಿವರ ಗಮನಕ್ಕೆ ಬರಲಿಲ್ವಾ ಎಂದು ಮೃತ ಪಿಎಸ್ ಐ ಪರಶುರಾಮ ಮಾವ ವೆಂಕಟಸ್ವಾಮಿ ಗಂಭೀರ ಆರೋಪ ಮಾಡಿದರು.

ಪೋಸ್ಟಿಂಗ್ ಗಾಗಿ ನನ್ನ ಅಳಿಯನಿಗೆ ಕಾಂಗ್ರೆಸ್ ಶಾಸಕರು ಹಣ ಕೇಳಿದರು. ಹೆಚ್ಚು ಹಣ ಕೊಟ್ಟವರಿಗೆ ಪೋಸ್ಟಿಂಗ್ ಕೊಡಿಸುವ ಕೆಲಸ ಮಾಡಿದ್ದಾರೆ. ಅವರಿಗಿಂತ ಪರಶುರಾಮ ಹಣ ಜಾಸ್ತಿ ಕೊಟ್ಟಿದ್ದರೆ ಪೋಸ್ಟಿಂಗ್ ಆಗುತ್ತಿತ್ತು. ಯಾದಗಿರಿ ಜಿಲ್ಲೆಯಲ್ಲಿ ಪೊಲೀಸ್ ಠಾಣೆಗಳನ್ನು ಹರಾಜಿಗೆ ಇಟ್ಟಿದ್ದಾರೆ ಎಂದು ಕಿಡಿ ಕಾರಿದರು.

ತಪ್ಪಿತಸ್ಥ ಎಂಎಲ್ ಎ ಚನ್ನಾರೆಡ್ಡಿ ಪಾಟೀಲ್ ರನ್ನು ಬಂಧಿಸುವಂತೆ ವಿವಿಧ ದಲಿತ ಪರ ಸಂಘಟನೆಗಳು ಮತ್ತು ಮೃತ ಪಿಎಸ್ ಐ ಪರಶುರಾಮ ಕುಟುಂಬಸ್ಥರು ರಾಷ್ಟ್ರೀಯ ಹೆದ್ದಾರಿ 150 ರಲ್ಲಿ ಪ್ರತಿಭಟನೆ ನಡೆಸಿದರು. ಯಾದಗಿರಿ ಶಾಸಕ ಹಾಗೂ ಶಾಸಕರ ಪುತ್ರ ದುಡ್ಡಿಗಾಗಿ ಕಿರುಕುಳ ನೀಡುತ್ತಿದ್ದರು. 30 ರಿಂದ 40 ಲಕ್ಷ ದುಡ್ಡು ಕೇಳಿದ್ದಾರೆ. ಪೊಲೀಸರು ಸಹ ಶಾಸಕರ ಬೆಂಬಲವಾಗಿದ್ದಾರೆ.

## ರೂಲ್ಸ್ ಬ್ರೇಕ್

ಪತ್ತೆ ಮಾಡುವುದು. ನಂತರ ಅನಧಿಕೃತವಾಗಿದ್ದಲ್ಲಿ ಬಿಬಿಎಂಪಿಯಿಂದ ದೂರು ಪಡೆದು ಕ್ರಮ ಕೈಗೊಳ್ಳುವ ನಿರ್ಧಾರ ಮಾಡಲಾಯ್ತು. ಎರಡನೇ ಹಂತದ ಕ್ರಮವಾಗಿ ಈಗಾಗಲೇ ಅಳವಡಿಸಿರುವ ಅನಧಿಕೃತ ಫ್ಲೆಕ್ಸ್ ಹಾಗೂ ಬ್ಯಾನರ್ ಗಳ ಕೂಡಲೇ ತೆರವು ಮಾಡುವುದು ಹಾಗೂ ಸಂಬಂಧ ಪಟ್ಟವರ ವಿರುದ್ಧ ಕೈಗೊಳ್ಳಬಹುದಾದ ಕಠಿಣಾತಿ ಕಠಿಣ ಕಾನೂನಿನ ಕ್ರಮಗಳ ಬಗ್ಗೆ ಯಾವ ರೀತಿ ಹೆಜ್ಜೆ ಇಡುವುದು ಎಂಬ ವಿಚಾರವಾಗಿ ಚರ್ಚೆ ನಡೆಸಲಾಯ್ತು. ಇನ್ನು ಈ ಸಭೆಯಲ್ಲೇ ಎಲ್ಲಾ ಪೊಲೀಸ್ ಅಧಿಕಾರಿಗಳಿಗೆ ಅನಧಿಕೃತ ಫ್ಲೆಕ್ಸ್ ಗಳ ತೆರುವಿನ ಬಗ್ಗೆ ಸೂಚನೆ ನೀಡಿದ್ದು, ಬೇಜವಾಬ್ದಾರಿ ತೋರಿದಲ್ಲಿ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳೋದಾಗಿ ಎಚ್ಚರಿಕೆ ನೀಡಲಾಗಿತ್ತು. ಆದರೆ ಈಗ ರೂಲ್ಸ್ ಮಾಡಿದವರಿಂದಲೇ ರೂಲ್ಸ್ ಬ್ರೇಕ್ ಆಗಿದ್ದು ಆಕ್ರೋಶ ವ್ಯಕ್ತವಾಗಿದೆ.

## ಸಾವು

ವಿದ್ಯಾರ್ಥಿಗಳು ಸಾಯಿ ಗಗನ್ ಮನೆಗೆ ಬಂದಿದ್ದರು. ಅಲ್ಲಿಂದ ವಾಪಸ್ ಕೋಲಾರಕ್ಕೆ ತೆರಳುವ ವೇಳೆ ದುರ್ಘಟನೆ ಸಂಭವಿಸಿದೆ.

ಅಪಘಾತದ ರಭಸಕ್ಕೆ ಕಾರು ಸಂಪೂರ್ಣ ನಜ್ಜುಗುಜ್ಜಾಗಿದೆ. ಘಟನಾ ಸ್ಥಳಕ್ಕೆ ಕೋಲಾರ ಗ್ರಾಮಾಂತರ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

## ಕೊಲೆ

ಡ್ರಗ್ಸ್ ಹಾವಳಿ ಹಾಗೂ ವಹಿವಾಟಿನ ಹಿನ್ನೆಲೆಯಲ್ಲಿ ಕೊಲೆ ನಡೆದಿರುವ ಶಂಕೆ ಮೂಡಿದೆ. ಮೃತ ಐಸಾಕ್ ಹಲವು ಕಡೆ ಡ್ರಗ್ಸ್, ಗಾಂಜಾ ಮಾರಾಟ ಮಾಡುತ್ತಿದ್ದ. ಇದನ್ನು ಒಂಟಿ ಕೈ ವೆಂಕಟೇಶ ವಿರೋಧಿಸಿದ್ದ. ವೆಂಕಟೇಶನ ಸ್ನೇಹಿತರಿಗೂ ಕೂಡ ಐಸಾಕ್ ಗಾಂಜಾ ನೀಡಿ ಅಡಿಕ್ಟ್ ಆಗುವಂತೆ ಮಾಡಿದ್ದ. ಒಂದೇ ಏರಿಯಾ ಆದ ಕಾರಣ ಹುಡುಗರು ಗಾಂಜಾ ಚಟಕ್ಕೆ ಬಿದ್ದಿದ್ದರು.

ಈ ಹಿನ್ನೆಲೆಯಲ್ಲಿ ಐಸಾಕ್‌ಗೆ ಒಂಟಿ ಕೈ ವೆಂಕಟೇಶ್ ವಾರ್ನ್ ಮಾಡಿದ್ದ. ಆದರೂ ಐಸಾಕ್ ಗಾಂಜಾ ಮಾರಾಟ ನಿಲ್ಲಿಸಿರಲಿಲ್ಲ. ಈ ಹಿನ್ನೆಲೆಯಲ್ಲಿ ಇಂದು ಬೆಳಗಿನ ಜಾವ 3-30ರ ಸಂದರ್ಭದಲ್ಲಿ ಐಸಾಕ್‌ನನ್ನು ಕೊಲೆ ಮಾಡಲಾಗಿದೆ. ಸದ್ಯ ನಿಖರ ಕಾರಣ ಹಾಗು ಆರೋಪಿಗಳಿಗಾಗಿ ಸಿದ್ದಾಪುರ ಪೊಲೀಸರು ಹುಡುಕಾಟ ನಡೆಸಿದ್ದಾರೆ. ಒಂಟಿ ಕೈ ವೆಂಕಟೇಶ್ ಈ ಹಿಂದೆ ನಾಲ್ಕು ಕೊಲೆ ಕೇಸುಗಳಲ್ಲಿ ಭಾಗಿಯಾಗಿದ್ದಾನೆ.

## 32ನೇ ಅಂತಾರಾಷ್ಟ್ರೀಯ ಕೃಷಿ ಅರ್ಥಶಾಸ್ತ್ರಜ್ಞರ ಸಮ್ಮೇಳನ ಉದ್ಘಾಟಿಸಿದ ಪ್ರಧಾನಿ ಮೋದಿ



**ದೆಹಲಿ:** ಪ್ರಧಾನಿ ಮೋದಿ ಅವರು ಇಂದು (ಆ.3) ದೆಹಲಿಯಲ್ಲಿ 32ನೇ ಅಂತರರಾಷ್ಟ್ರೀಯ ಕೃಷಿ ಅರ್ಥಶಾಸ್ತ್ರಜ್ಞರ ಸಮ್ಮೇಳನವನ್ನು (ಐಸಿಎಇ) ಉದ್ಘಾಟಿಸಿದರು. ಆಗಸ್ಟ್ 2 ರಿಂದ 7ವರೆಗೆ ಇಂಟರ್ನ್ಯಾಷನಲ್ ಅಸೋಸಿಯೇಷನ್ ಆಫ್ ಅಗ್ರಿಕಲ್ಚರಲ್ ಎಕನಾಮಿಸ್ಟ್ಸ್ ತ್ರೈವಾರ್ಷಿಕ ಕಾರ್ಯಕ್ರಮವನ್ನು ಆಯೋಜಿಸಿದೆ. ಈ ಕಾರ್ಯಕ್ರಮದ ಮುಖ್ಯ ಅತಿಥಿಯಾಗಿ ಪ್ರಧಾನಿ ನರೇಂದ್ರ ಮೋದಿ ಅವರು ಭಾಗವಹಿಸಿದ್ದಾರೆ.

ಉದ್ಘಾಟನಾ ಸಮಾರಂಭದಲ್ಲಿ ಮಾತನಾಡಿದ ಪ್ರಧಾನಿ ನರೇಂದ್ರ ಮೋದಿ, 65 ವರ್ಷಗಳ ನಂತರ ಭಾರತದಲ್ಲಿ ಇಂತಹ ಸಮಾವೇಶವನ್ನು ಆಯೋಜಿಸುತ್ತಿರುವುದಕ್ಕೆ ನನಗೆ ಸಂತೋಷವಾಗಿದೆ. ನೀವೆಲ್ಲರೂ ವಿಶ್ವದ ವಿವಿಧ ದೇಶಗಳಿಂದ ಬಂದಿದ್ದೀರಿ. 120 ಮಿಲಿಯನ್ ರೈತರ ಪರವಾಗಿ ನಾನು ನಿಮ್ಮನ್ನು ಸ್ವಾಗತಿಸುತ್ತೇನೆ. ಭಾರತದ 30 ದಶಲಕ್ಷಕ್ಕೂ ಹೆಚ್ಚು ಮಹಿಳಾ ರೈತರು ಹಾಗೂ ದೇಶದ 30 ದಶಲಕ್ಷ ಮೀನುಗಾರರ ಪರವಾಗಿ 550 ದಶಲಕ್ಷ ಪ್ರಾಣಿಗಳು ವಾಸಿಸುವ ಹಾಗೂ ಈ ಕೃಷಿ ಪ್ರಧಾನ ಮತ್ತು ಪ್ರಾಣಿಗಳನ್ನು ಪ್ರೀತಿಸುವ ಈ ದೇಶಕ್ಕೆ ಸ್ವಾಗತ ಎಂದು ಹೇಳಿದರು.

ಇಂಟರ್ನ್ಯಾಷನಲ್ ಅಸೋಸಿಯೇಷನ್ ಆಫ್ ಅಗ್ರಿಕಲ್ಚರಲ್ ಎಕನಾಮಿಸ್ಟ್ಸ್ ಆಯೋಜಿಸಿರುವ ಈ ಆರು ದಿನಗಳ ಸಮ್ಮೇಳನದಲ್ಲಿ ಸುಸ್ಥಿರ ಕೃಷಿ-ಆಹಾರ ವ್ಯವಸ್ಥೆಗಳ ಬಗ್ಗೆ ಚರ್ಚೆ ನಡೆಯಲಿದೆ. ಒಟ್ಟು 75 ದೇಶಗಳ ಸುಮಾರು 1,000 ಪ್ರತಿನಿಧಿಗಳು ಈ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದಾರೆ. ನಮ್ಮ ಹವಮಾನದ ಬಗ್ಗೆಯೂ ಈ ಕಾರ್ಯಕ್ರಮದಲ್ಲಿ ಚರ್ಚೆಯಾಗಬೇಕಿದೆ. ಹಾಗೂ ನೈಸರ್ಗಿಕ ಸಂಪನ್ಮೂಲಗಳ ಅವನತಿ, ಹೆಚ್ಚುತ್ತಿರುವ ಉತ್ಪಾದನಾ ವೆಚ್ಚಗಳು ಮತ್ತು ಸಂಘರ್ಷಗಳಂತಹ ಜಾಗತಿಕ ಸವಾಲುಗಳನ್ನು ಎದುರಿಸುವ ಮತ್ತು ಸುಸ್ಥಿರ ಕೃಷಿಯ ಅಗತ್ಯಗಳನ್ನು ನಿಭಾಯಿಸುವ ಬಗ್ಗೆ ಈ ಸಮ್ಮೇಳದಲ್ಲಿ ಚರ್ಚಿಸಬೇಕಾಗಿದೆ.

ಸಮ್ಮೇಳನವು ಜಾಗತಿಕ ಕೃಷಿಕರು ಅನುಭವಿಸುತ್ತಿರುವ ಸವಾಲುಗಳ ಬಗ್ಗೆ ಭಾರತದ ಕೃಷಿಗಳು ಹೇಗೆ ಸಹಾಯವಾಗಿದೆ ಹಾಗೂ ಪೂರಕವಾಗುವ ವಿಧಾನಗಳ ಬಗ್ಗೆ ತಿಳಿಸಲಿದ್ದಾರೆ. ICAE 2024 ಯುವ ಸಂಶೋಧಕರು ಮತ್ತು ಪ್ರಮುಖ ವೃತ್ತಿಪರಿಗೆ ಈ ವೇದಿಕೆ ತುಂಬಾ ಸಹಾಯವಾಗಲಿದೆ. ಸಂಶೋಧನಾ ಸಂಸ್ಥೆಗಳು ಮತ್ತು ವಿಶ್ವವಿದ್ಯಾನಿಲಯಗಳು ಕೂಡ ಕಾರ್ಯಕ್ರಮದಲ್ಲಿ ಭಾಗವಹಿಸಲಿದೆ. ರಾಷ್ಟ್ರೀಯ ಮತ್ತು ಜಾಗತಿಕ ಮಟ್ಟದಲ್ಲಿ ನೀತಿ ರಚನೆ ಪರಿಣಾಮ ಏನು ಎಂಬ ಬಗ್ಗೆ ಇಲ್ಲಿ ತಿಳಿಸಲಾಗುತ್ತದೆ.

## ಆಂಬ್ಯುಲೆನ್ಸ್ ಚಾಲಕರು, ತುರ್ತು ವೈದ್ಯಕೀಯ ತಂತ್ರಜ್ಞರಿಗೆ 7 ತಿಂಗಳಿಂದ ಸಿಗ್ತಿಲ್ಲ ವೇತನ



**ಬೆಂಗಳೂರು:** ಆಂಬ್ಯುಲೆನ್ಸ್ ಚಾಲಕರು, '108 ಆರೋಗ್ಯ ಕವಚ ಆಂಬ್ಯುಲೆನ್ಸ್'ಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಚಾಲಕರು ಮತ್ತು ತುರ್ತು ವೈದ್ಯಕೀಯ ತಂತ್ರಜ್ಞರಿಗೆ ಡಿಸೆಂಬರ್‌ನಿಂದ ಪೂರ್ಣ ವೇತನ ದೊರೆತಿಲ್ಲ. ಮೂರು ಯೂನಿಯನ್‌ಗಳ ಸುಮಾರು 3,500 ಉದ್ಯೋಗಿಗಳ ಪರವಾಗಿ ಕರ್ನಾಟಕ ಹೈಕೋರ್ಟ್‌ಗೆ ರಿಟ್ ಅರ್ಜಿಯನ್ನು ಸಲ್ಲಿಸಲಾಗಿದೆ. ಇವರೆಲ್ಲ ಇಎಂಆರ್ ಐ ಗ್ರೀನ್ ಹೆಲ್ತ್ ಸರ್ವಿಸಸ್ (ಹಿಂದೆ ಜಿವಿಕೆ ಇಎಂಆರ್ ಐ) ಜತೆ ಗುತ್ತಿಗೆ ಆಧಾರದಲ್ಲಿ ಕಾರ್ಯನಿರ್ವಹಿಸುತ್ತಿದ್ದಾರೆ.

ಮೂರು ಯೂನಿಯನ್‌ಗಳ ಸದಸ್ಯರು ಮೇ 6 ರಿಂದ ಮುಷ್ಕರ ನಡೆಸಲು ಯೋಜಿಸಿದ್ದರು. ಆದರೆ ರಾಜ್ಯ ಆರೋಗ್ಯ ಇಲಾಖೆಯೊಂದಿಗೆ ಚರ್ಚಿಸಿದ ನಂತರ ಮುಷ್ಕರ ಮುಂದೂಡಿದ್ದರು. ಆಗಿ ಮೂರು ತಿಂಗಳ ನಂತರವೂ ವೇತನ ಪಾವತಿ ಸಮಸ್ಯೆ ಹಾಗೆಯೇ ಉಳಿದಿದೆ.

ಆಂಬ್ಯುಲೆನ್ಸ್ ಚಾಲಕರು ಮತ್ತು ತುರ್ತು ವೈದ್ಯಕೀಯ ತಂತ್ರಜ್ಞರು ತಮ್ಮ ಡಿಸೆಂಬರ್ ಮತ್ತು ಜನವರಿ ತಿಂಗಳ ಸಂಬಳದ ಶೇ 50 ರಷ್ಟನ್ನು ಮೇ ತಿಂಗಳಲ್ಲಿ ಸ್ವೀಕರಿಸಿದ್ದಾರೆ. ಫೆಬ್ರವರಿಯಿಂದ ವೇತನ ದೊರೆತಿಲ್ಲ ಎಂದು ಅವರು ಸಲ್ಲಿಸಿರುವ ಅರ್ಜಿಯಲ್ಲಿ ಉಲ್ಲೇಖಿಸಲಾಗಿದೆ ಎಂದು 'ಡೆಕ್ಕನ್ ಹೆರಾಲ್ಡ್' ವರದಿ ಮಾಡಿದೆ. ಕೆಲವೇ ಕೆಲವು ಸಿಬ್ಬಂದಿಗೆ 5,000 ಮತ್ತು 10,000 ರೂ.ನಂತೆ ಪಾವತಿಯಾಗಿದೆ ಎಂದೂ ಹೇಳಲಾಗಿದೆ.

12 ಗಂಟೆಗಳ ಪಾಳಿಯಲ್ಲಿ ಕೆಲಸ ಮಾಡುವ ಕಾರ್ಮಿಕರು ನಾವು. ಕಾನೂನಿನ ಪ್ರಕಾರ ಕನಿಷ್ಠ 30,000 ರೂ. ವೇತನ ದೊರೆಯಬೇಕಿತ್ತು. ಆದರೆ, ಡಿಸೆಂಬರ್‌ನಿಂದ ನಾವು ಸರಿಯಾಗಿ ವೇತನ ಪಡೆದಿಲ್ಲ. ಬಾಕಿ ಮೊತ್ತವನ್ನೂ ಸ್ವೀಕರಿಸಿಲ್ಲ. ನಾವು ನಮ್ಮ ಕುಟುಂಬಗಳನ್ನು ಸಾಕುವುದು ಹೇಗೆ ಎಂದು ಸುವರ್ಣ ಕರ್ನಾಟಕ ಆರೋಗ್ಯ ಕವಚ ನೌಕರರ ಸಂಘದ ಅಧ್ಯಕ್ಷ ಆರ್ ಶ್ರೀಧರ್ ಅಲವತ್ತುಕೊಂಡಿದ್ದಾರೆ.

**ಆರೋಗ್ಯ ಸಚಿವರು ಹೇಳಿದ್ದೇನು ?:** ಸರ್ಕಾರ ವೇತನ ಬಾಕಿ ಉಳಿಸಿಕೊಂಡಿಲ್ಲ ಎಂದು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಸ್ಪಷ್ಟನೆ ನೀಡಿದ್ದಾರೆ. ಏಜೆನ್ಸಿ ಲೆಕ್ಕಾಚಾರದ ತಪ್ಪುಗಳನ್ನು ಮಾಡಿದೆ. ಕೆಲವು ಉದ್ಯೋಗಿಗಳಿಗೆ ಅಗತ್ಯಕ್ಕಿಂತ ಹೆಚ್ಚು ಪಾವತಿಸಿದೆ. ಅವರು ಈಗ ಸಂಬಳವನ್ನು ಸರಿಹೊಂದಿಸುತ್ತಿದ್ದಾರೆ ಎಂದು ಅವರು ತಿಳಿಸಿದ್ದಾರೆ.

ಸಮರ್ಪಕವಾಗಿ ನಿಭಾಯಿಸುವಂಥ ಸೂಕ್ತ ಏಜೆನ್ಸಿಗಳನ್ನು ಹುಡುಕಲು ಮುಂದಿನ ಎರಡು ತಿಂಗಳೊಳಗೆ ಹೊಸ ಟೆಂಡರ್ ಕರೆಯುತ್ತೇವೆ ಎಂದೂ ಅವರು ಹೇಳಿದ್ದಾರೆ.

# ನೀರಿನ ಟ್ಯಾಂಕ್ ಸ್ವಚ್ಛವಾಗಿಟ್ಟುಕೊಳ್ಳಲು ಆಗದಷ್ಟು ಬಡತನವಿಲ್ಲ

**ಚಿಕ್ಕಬಳ್ಳಾಪುರ:** ಸರ್ಕಾರದ ಅಧೀನದಲ್ಲಿರುವ ನೀರು ಸಂಗ್ರಹಣಾ ಟ್ಯಾಂಕುಗಳು, ತೊಟ್ಟಿಗಳು ಹಾಗೂ ಸುತ್ತಮುತ್ತಲ ಪ್ರದೇಶಗಳನ್ನು ಸ್ವಚ್ಛವಾಗಿಟ್ಟುಕೊಳ್ಳಲು ಆಗದಷ್ಟು ಬಡತನದ ಪರಿಸ್ಥಿತಿ ಆಡಳಿತ ವ್ಯವಸ್ಥೆಗೆ ಇಲ್ಲ. ಸಂಬಂಧಪಟ್ಟ ಸಿಬ್ಬಂದಿ, ಅಧಿಕಾರಿಗಳು ನಿಯಮಿತವಾಗಿ ಸ್ವಚ್ಛತೆ ಕಾಪಾಡಿ ಕೊಳ್ಳಲು ಕ್ರಮ ಕೈಗೊಳ್ಳಬೇಕು ಎಂದು ಜಿಲ್ಲಾಧಿಕಾರಿ ಪಿ.ಎನ್.ರವೀಂದ್ರ ತಿಳಿಸಿದರು.

ಶುಕ್ರವಾರ ಮುಂಜಾನೆ ನಗರದ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ (ಂಕಒಅ) ಯ ಆವರಣಕ್ಕೆ ಭೇಟಿ ನೀಡಿ ಅಲ್ಲಿನ ಅಸ್ವಚ್ಛತೆಯನ್ನು ಗಮನಿಸಿ ಸಂಬಂಧ ಪಟ್ಟ ಅಧಿಕಾರಿಗಳ ಮತ್ತು ಸಿಬ್ಬಂದಿಗೆ ಸೂಚನೆಗಳನ್ನು ನೀಡಿದರು.

APMC ಆವರಣದಲ್ಲಿರುವ ನೀರು ಸಂಗ್ರಹಣಾ ಟ್ಯಾಂಕ್ ನ ಸುತ್ತಮುತ್ತ ನೀರು ನಿಂತುಕೊಂಡು ಸೊಳ್ಳೆಗಳು ಹಾಗೂ ಲಾರ್ವ ಉತ್ಪತ್ತಿಯಾಗಿವೆ. ಇದನ್ನು ಸ್ವಚ್ಛಗೊಳಿಸಲಾಗದಷ್ಟು



ಸಮಸ್ಯೆ ಏನಿದೆ. ಸಾವಿರಾರು ರೈತರು ಮಾರುಕಟ್ಟೆಗೆ ದಿನನಿತ್ಯ ಬಂದು ಹೋಗುತ್ತಾರೆ. ನೂರಾರು ವ್ಯಾಪಾರಿಗಳು, ಕಾರ್ಮಿಕರು ಇಲ್ಲಿ ದಿನನಿತ್ಯ ಕೆಲಸ ಮಾಡುತ್ತಾರೆ. ಇಂತಹ ಜನಸಂದಣಿ ಪ್ರದೇಶಗಳನ್ನೇ ಸ್ವಚ್ಛವಾಗಿಟ್ಟುಕೊಳ್ಳದಿದ್ದರೆ ಡೆಂಗ್ಯು ಜ್ವರವನ್ನು ನಿಯಂತ್ರಿಸುವುದಾದರೂ ಹೇಗೆ? ಟ್ಯಾಂಕ್ ನ ನಳದಲ್ಲಿ ನೀರು ನಿರಂತರವಾಗಿ ಸೋರುತ್ತಿದೆ, ಟ್ಯಾಂಕ್ ನ ಸುತ್ತ ಅನುಪಯುಕ್ತ ವಸ್ತುಗಳು, ಪ್ಲಾಸ್ಟಿಕ್ ಚೀಲಗಳು, ಕೊಳೆತ ತರಕಾರಿಗಳು ಬಿದ್ದಿವೆ ಇಷ್ಟು ಗಲೀಜು ನಿರ್ಮಾಣ ಆಗುವವರೆಗೆ ಸ್ವಚ್ಛತೆಯ ಕ್ರಮ ಏಕೆ ಕೈಗೊಂಡಿಲ್ಲ ಎಂದು ಗುತ್ತಿಗೆದಾರ ರಮೇಶ ಅವರನ್ನು ತರಾಟೆಗೆ ತೆಗೆದುಕೊಂಡರಲ್ಲದೆ ಸ್ಥಳದಲ್ಲೇ ಜಿಲ್ಲಾಧಿಕಾರಿಗಳು ನಿಂತು ಸ್ವಚ್ಛಗೊಳಿಸಿ ತ್ಯಾಜ್ಯ ಮಾಡಿಸುವ ಕಾರ್ಯ ಮಾಡಿದರು ನಂತರ ಪ್ರತಿ ಮಳಿಗೆಗಳಿಗೆ ತೆರಳಿ ಅಲ್ಲಿದ್ದ ಸಾರ್ವಜನಿಕರಿಗೆ, ವ್ಯಾಪಾರಿಗಳಿಗೆ, ಕಾರ್ಮಿಕರಿಗೆ ಡೆಂಗ್ಯೂ ಜ್ವರ ನಿಯಂತ್ರಣದ ಜಾಗೃತಿ ಮೂಡಿಸಿ,ಎಲ್ಲಿಯೂ ನೀರು ನಿಲ್ಲದಂತೆ ನೋಡಿಕೊಳ್ಳಬೇಕು. ಸೊಳ್ಳೆ ಉತ್ಪತ್ತಿ ತಾಣಗಳನ್ನು ನಾಶಮಾಡಬೇಕು. ಅನುಪಯುಕ್ತ ವಸ್ತುಗಳು, ತರಕಾರಿಗಳ ತ್ಯಾಜ್ಯಗಳು, ಕೊಳೆತ ಪದಾರ್ಥಗಳನ್ನು ಸೂಕ್ತ ವಿಲೆ ಮಾಡಿ ಸ್ವಚ್ಛತೆ ಕಾಪಾಡಿದರೆ ಡೆಂಗ್ಯು ಜ್ವರ ಹರಡುವುದಿಲ್ಲ ಎಂದು ಮನವರಿಕೆ ಮಾಡಿದರು. ನಂತರ ನಗರದ ತಾಯಿ ಮತ್ತು ಮಕ್ಕಳ ಆಸ್ಪತ್ರೆಗೆ ಭೇಟಿ ಅಲ್ಲಿನ ಸ್ವಚ್ಛತೆಯ ಬಗ್ಗೆ ಪರಿಶೀಲಿಸಿದರು. ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಎಸ್. ಮಹೇಶ್ ಕುಮಾರ್, ತಾಲೂಕು ಆರೋಗ್ಯಧಿಕಾರಿ ಮಂಜುಳ ಅವರ ನೇತೃತ್ವದಲ್ಲಿ ಆರೂಗ್ಯ ಇಲಾಖೆಯ ಮತ್ತು ನಗರಸಭೆ ಸಿಬ್ಬಂದಿ ತಂಡ ಂಕಒಅ ಆವರಣದಲ್ಲಿ ಕರಪತ್ರಗಳನ್ನು ವಿತರಿಸಿ ಡೆಂಗ್ಯು ಜ್ವರ ನಿಯಂತ್ರಣ ಕುರಿತು ಜಾಗೃತಿ ಮೂಡಿಸಿದರು.

ಈ ಸಂದರ್ಭದಲ್ಲಿ ತಹಸೀಲ್ದಾರ್ ಅನಿಲ್, ಜಿಲ್ಲಾ ಆಶ್ರಿತ ರೋಗಗಳ ನಿಯಂತ್ರಣಾಧಿಕಾರಿ ಡಾ. ಪ್ರಕಾಶ್, ನಗರಸಭೆ ಪೌರಾಯುಕ್ತ ಉಮಾಶಂಕರ್, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಹರೀಶ್ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಸಿಬ್ಬಂದಿ ಹಾಜರಿದ್ದರು.

# ರೈತರಿಗೆ ಬಿತ್ತನೆ ಬೀಜ ವಿತರಣೆ

**ಮಂಡ್ಯ:** ಜಿ ಎಸ್ ಎಫ್ ಫೌಂಡೇಶನ್. ಭೂ ಸಿರಿ ರೈತ ಉತ್ಪಾದಕರ ಕಂಪನಿ. ಕಂದಾಯ ಇಲಾಖೆ. ಕೃಷಿ ಇಲಾಖೆ. ಅರಣ್ಯ ಇಲಾಖೆ ಹಾಗೂ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ವತಿಯಿಂದ ಬಿತ್ತನೆ ರಾಗಿ ವಿತರಣೆ ಹಾಗೂ ರೈತರ ರತ್ನ ಪ್ರಶಸ್ತಿ ವಿತರಣಾ ಸಮಾರಂಭ ಮಂಡ್ಯ ಜಿಲ್ಲೆಯ ನಾಗಮಂಗಲ ಪಟ್ಟಣದ ಎ. ಪಿ. ಎಂ. ಸಿ ಆವರಣದಲ್ಲಿ ನಡೆಯಿತು. ಕಾರ್ಯಕ್ರಮವನ್ನು ಕೃಷಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಎನ್. ಚೆಲುವರಾಯಸ್ವಾಮಿ ಧಾನ್ಯ ಕ್ಕೆ ಪೂಜೆ ಸಲ್ಲಿಸಿ. ಜ್ಯೋತಿ ಬೆಳಗಿಸುವ ಮೂಲಕ ಉದ್ಘಾಟಿಸಿದರು.

ನಂತರ ಮಾತನಾಡಿದ ಅವರು.ಪ್ರತಿ ವರ್ಷದಂತೆ ಈ ವರ್ಷವೂ ಸಹ ರೈತರಿಗೆ ಬಿತ್ತನೆ ಬೀಜವನ್ನು ವಿತರಿಸುವ ಕೆಲಸವನ್ನು ಮಾಡಲಾಗುತ್ತಿದೆ.ಕಡಿಮೆ ಇಳುವರಿ ಹೊಂದಿರುವ ಪ್ರದೇಶದಲ್ಲಿ ಸುಮಾರು 4 ಸಾವಿರ ರೈತರನ್ನು ಆಯ್ಕೆ ಮಾಡಿದ್ದು, ಅವರನ್ನು ಪ್ರೋತ್ಸಾಹಿಸಲು ಪ್ರತಿ ಹೆಕ್ಟೇರ್ ಜಮೀನಿಗೆ 6 ಸಾವಿರ ರೂಪಾಯಿ ಪ್ರೋತ್ಸಾಹ ಹಣವನ್ನು ನೀಡಲಾಗುತ್ತಿದೆ. ಅದರಲ್ಲಿ 4.5ಸಾವಿರ ಪರಿಕರ ಹಾಗೂ 1.5 ಸಾವಿರ ಹಣ ನೇರವಾಗಿ ರೈತರ ಖಾತೆಗೆ ಹಣ ಜಮೆಯಾಗುತ್ತಿದೆ. ಸರ್ಕಾರದ ಯೋಜನೆಗಳನ್ನು ರೈತರು ಸದುಪಯೋಗ ಪಡಿಸಿಕೊಂಡು ಆರ್ಥಿಕವಾಗಿ ಸದೃಢವಾಗುವಂತೆ ತಿಳಿಸಿದರು.

ಬಿತ್ತನೆ ಬೀಜ, ರಾಸಾಯನಿಕ ಗೊಬ್ಬರ ಮಾರಾಟಗಾರರು ಖರೀದಿಗೆ ರೈತರು ಅಧಿಕೃತ ರಶೀದಿ ಪಡೆದುಕೊಳ್ಳಬೇಕು. ಯಾವುದಾದರೂ ತೊಂದರೆ ಇದ್ದಲ್ಲಿ ತಕ್ಷಣ ಅಧಿಕಾರಿಗಳ ಗಮನಕ್ಕೆ ತನ್ನಿ ಎಂದರು. ಇದೇ ಸಂದರ್ಭದಲ್ಲಿ ರೈತರಿಗೆ ರಾಗಿ ಬಿತ್ತನೆ ಬೀಜಗಳನ್ನು ವಿತರಿಸಿ ಪ್ರಗತಿಪರ ರೈತರಿಗೆ ಆತ್ಮೀಯವಾಗಿ ಸನ್ಮಾನಿಸಲಾಯಿತು.

ನಂತರ ಮೃತ ರೈತರ ಕುಟುಂಬಕ್ಕೆ ಸರ್ಕಾರದ ವತಿಯಿಂದ 5 ಲಕ್ಷ ಪರಿಹಾರದ ಚೆಕ್ ವಿತರಣೆ ಮಾಡಿದರು. ವೇದಿಕೆಯಲ್ಲಿ ಕೃಷಿ ಇಲಾಖೆಯ ಜಂಟಿ ನಿರ್ದೇಶಕರಾದ ಅಶೋಕ್. ಸೇರಿದಂತೆ ಪ್ರಗತಿಪರ ರೈತರು ಹಾಗೂ ಕೃಷಿ. ಅರಣ್ಯ. ತೋಟಗಾರಿಕೆ ಇಲಾಖೆಯ ವಿವಿಧ ಅಧಿಕಾರಿಗಳು ಉಪಸ್ಥಿತರಿದ್ದರು.



## 5 ಲಕ್ಷ ರೂ ಪರಿಹಾರ

**ವಯನಾಡಿನ ಗುಡ್ಡ ಕುಸಿತ ಪ್ರಕರಣದಲ್ಲಿ ಮೃತ ಪಟ್ಟಿದ್ದ ಕೆಆರ್‌ಪೇಟೆಯ ಕತ್ತರಘಟ್ಟ ಮೂಲದ ಅಜ್ಜಿ-ಮೊಮ್ಮಗ ನಿಹಾಲ್ ಹಾಗೂ ಲೀಲಾವತಿ ಅವರ ಮನೆಗೆ ಕೃಷಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎನ್ ಚಲುವರಾಯಸ್ವಾಮಿ ಅವರು ಭೇಟಿ ನೀಡಿ ಸಾಂತ್ವನ ಹೇಳಿದರು. ಇದೇ ಕುಟುಂಬದ ಮೂರು ಜನರು ವಯನಾಡಿನಲ್ಲಿ ಚಿಕಿತ್ಸೆ ಪಡೆಯುತ್ತಿದ್ದು, ಅವರಿಗೆ ಉತ್ತಮ ಚಿಕಿತ್ಸೆ ನೀಡಲು ಹಾಗೂ ಅಗತ್ಯ ಸಹಕಾರ ನೀಡಿ ಸಮನ್ವಯ ವಹಿಸಲು ಕರ್ನಾಟಕ ಸರ್ಕಾರದಿಂದ ಅಧಿಕಾರಿಗಳ ತಂಡ ವಯನಾಡಿಗೆ ತೆರಳಿದ್ದು, ಅವರಿಗೆ ಅಗತ್ಯವಿರುವ ಪ್ರಾಥಮಿಕ ಚಿಕಿತ್ಸೆಯನ್ನು ವಯನಾಡಿನಲ್ಲಿ ಒದಗಿಸಿ ಮುಂದಿನ ದಿನಗಳಲ್ಲಿ ಹೆಚ್ಚಿನ ಚಿಕಿತ್ಸೆಯ ಅವಶ್ಯಕತೆ ಇದ್ದಲ್ಲಿ ಕರ್ನಾಟಕ ಸರ್ಕಾರದಿಂದ ಒದಗಿಸಲಾಗುವುದು.**
**5 ಲಕ್ಷ ಪರಿಹಾರ ಮೃತರಾದ ಲೀಲಾವತಿ ಅವರ ಕುಟುಂಬಕ್ಕೆ ಸರ್ಕಾರದಿಂದ 5 ಲಕ್ಷ ಪರಿಹಾರ ವಿತರಣೆಯನ್ನು ಶೀಘ್ರದಲ್ಲೇ ಮಾಡಲಾಗುವುದು.**
**ನಿಹಾಲ್ ಅವರು ಚಿಕ್ಕ ವಯಸ್ಸಿನ ಹುಡುಗನಾಗಿದ್ದು, ಅವರಿಗೂ ಸಹ ಸಣ್ಣ ಪ್ರಮಾಣದ ಪರಿಹಾರ ಒದಗಿಸಲು ಪ್ರಯತ್ನಿಸಲಾಗುವುದು ಎಂದರು.**
**ಸಚಿವರು ಇದೇ ಸಂದರ್ಭದಲ್ಲಿ ಅಂತ್ಯಕ್ರಿಯೆ ಹಾಗೂ ಮುಂತಾದ ಕಾರ್ಯಗಳಿಗೆ ಸಹಾಯವಾಗಲಿ ಎಂದು ವೈಯಕ್ತಿಕವಾಗಿ ಪರಿಹಾರ ನೀಡಿದರು.**
**ಇದೇ ಸಂದರ್ಭದಲ್ಲಿ ಜಿಲ್ಲಾಧಿಕಾರಿ ಡಾ: ಕುಮಾರ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮಲ್ಲಿಕಾರ್ಜುನ ಬಾಲದಂಡಿ ಅವರು ಉಪಸ್ಥಿತರಿದ್ದರು.**

# ಮಗುವಿಗೆ ತಾಯಿ ಹಾಲು ಅಮೃತ

## ಜಿಲ್ಲಾಸ್ಪತ್ರೆಯ ಮಕ್ಕಳ ತಜ್ಞ ಡಾ.ಎಂ.ರವಿಕುಮಾರ್ ಅಭಿಮತ

**ಚಿಕ್ಕಬಳ್ಳಾಪುರ:** ಮಗು ಜನಿಸಿದ ಅರ್ಧಗಂಟೆಯಿಂದ ಒಂದು ಗಂಟೆಯೊಳಗಾಗಿ ಮಗುವಿಗೆ ಕಡ್ಡಾಯವಾಗಿ ತಾಯಿ ಎದೆ ಹಾಲನ್ನು ನೀಡಬೇಕಾಗುತ್ತದೆ. ಇದು ಮಗು ಭೂಮಿಗೆ ಬಂದ ನಂತರ ಪ್ರಕೃತಿಯ ಮೊದಲ ಲಸಿಕೆ ಎಂದು ಜಿಲ್ಲಾಸ್ಪತ್ರೆಯ ಮಕ್ಕಳ ತಜ್ಞ ಡಾ.ಎಂ.ರವಿಕುಮಾರ್ ತಿಳಿಸಿದರು.

ಅವರು ಇಂದು ನಗರದ ಜಿಲ್ಲಾಸ್ಪತ್ರೆಯಲ್ಲಿ ಜಿಲ್ಲಾಡಳಿತ,ಜಿಲ್ಲಾ ಪಂಚಾಯತ್, ನಂದಿ ವೈದ್ಯಕೀಯ ವಿಜ್ಞಾನಗಳ ಕಾಲೇಜು ಹಾಗೂ ಸಂಶೋಧನಾ ಸಂಸ್ಥೆಯ ಸಹಯೋಗದಲ್ಲಿ ಹಮ್ಮಿಕೊಂಡಿದ್ದ ವಿಶ್ವ ಸ್ತನ್ಯಪಾನ ಸಪ್ತಾಹ ಕಾರ್ಯಕ್ರಮದಲ್ಲಿ ಗರ್ಭಿಣಿ ಮತ್ತು ಬಾಣಂತಿಯರಿಗೆ ಸ್ತನ್ಯಪಾನದ ಮಹತ್ವ ಮತ್ತು ಪ್ರಯೋಜನಗಳ ಕುರಿತು ಮಾತನಾಡಿದರು.

ತಾಯಿಯ ಎದೆಹಾಲು ಮಗುವಿಗೆ ಅಮೃತಕ್ಕೆ ಸಮಾನ. ಮಗು ಜನಿಸಿದ ಅರ್ಧಗಂಟೆಯಿಂದ ಒಂದು ಗಂಟೆಯೊಳಗೆ ತಾಯಿ ತನ್ನ ಮಗುವಿಗೆ ಎದೆ ಹಾಲುಣಿಸಬೇಕು. ಆರು ತಿಂಗಳ ವರೆಗೆ ಕಡ್ಡಾಯವಾಗಿ ಮಗುವಿಗೆ ಎದೆ ಹಾಲು ಕುಡಿಸುವುದು ಮೊದಲ ಆದ್ಯತೆಯಾಗಬೇಕು. ಮಗುವಿನ ಮೆದುಳು ಸೇರಿದಂತೆ ಮಗುವಿನ ಒಟ್ಟಾರೆ ಬೆಳವಣಿಗೆಯಲ್ಲಿ ತಾಯಿ ಹಾಲಿನ ಪಾತ್ರ ಹೆಚ್ಚು ಮಹತ್ವದ್ದಾಗಿರುತ್ತದೆ. ತಾಯಿ ಹಾಲಿನಲ್ಲಿ ಮಗುವಿನ ಬೆಳವಣಿಗೆಗೆ ಅಗತ್ಯವಿರುವ ಪೌಷ್ಟಿಕತೆಯ ಜೊತೆಗೆ ರೋಗ ನಿರೋಧಕ ಶಕ್ತಿಯೂ ದೊರೆಯುತ್ತದೆ. ಆರು ತಿಂಗಳ ನಂತರ ತಾಯಿ ಹಾಲು ಮುಂದುವರೆಯುವ ಜೊತೆ ಜೊತೆಗೇ ಪೂರಕ ಪೌಷ್ಟಿಕ ಮತ್ತು ಮೆದು ಆಹಾರವನ್ನು ನೀಡಬೇಕಾಗುತ್ತದೆ. ಮಗುವಿಗೆ ತಾಯಿ ಎದೆ ಹಾಲು ನೀಡುವುದರಿಂದ ತಾಯಿ ಮತ್ತು ಮಗುವಿನ ಭಾವನಾತ್ಮಕ ಸಂಬಂಧ ಗಟ್ಟಿಯಾಗುತ್ತದೆ ಮತ್ತು ವೃದ್ಧಿಯಾಗುತ್ತದೆ. ಮಗುವಿಗೆ ಹಾಲುಣಿಸುವ ತಾಯಂದಿರಿಗೂ ಹಲವು ಪ್ರಯೋಜನಗಳಿದ್ದು, ಎರಡು



ವರ್ಷಗಳವರೆಗೆ ಮಗುವಿಗೆ ಹಾಲುಣಿಸುವ ತಾಯಂದಿರಿಗೆ ಸ್ತನ ಕ್ಯಾನ್ಸರ್, ಗರ್ಭಕೋಶದ ಕ್ಯಾನ್ಸರ್ ನಂತರ ಗಂಭೀರ ಕಾಯಿಲೆಗಳು ಬರುವುದು ಅಪರೂಪ. ಮಗುವಿಗೆ ತಾಯಿ ಹಾಲುಣಿಸುವುದರಲ್ಲಿ ಹೊಸತೇನಿಲ್ಲ. ಶತಮಾನಗಳಿಂದಲೂ ಈ ಪ್ರಕ್ರಿಯೆ ಅನೇಕ ಪ್ರಾಣಿಗಳಲ್ಲೂ ಇದ್ದೇ ಇದೆ. ಆದರೆ, ಆಧುನಿಕತೆಯ ಪ್ರಭಾವ ಹೆಚ್ಚಾಗುತ್ತಿದ್ದಂತೆ ಮಹಿಳೆಯ ಕಾರ್ಯಕ್ಷೇತ್ರವೂ ಬದಲಾಗುತ್ತಿದ್ದು, ಇದು ತಾಯಿ ಮತ್ತು ಮಗುವಿನ ಸುಮಧುರ ಬಾಂಧವ್ಯದ ಮೇಲೆಯೂ ಪರಿಣಾಮ ಬೀರುತ್ತಿದೆ. ಕಾರ್ಯಕ್ಷೇತ್ರ ಏನೇ ಆದರೂ ಮತ್ತು ಎಷ್ಟೇ ಕಾರ್ಯದೊತ್ತಡಗಳಿದ್ದರೂ ಮಗುವಿನ ತಾಯಿ ಎಂಬುದನ್ನು ಮರೆಯದೇ ಎದೆ ಹಾಲು ಕುಡಿಸಬೇಕು. ಸ್ತನ್ಯಪಾನದ ಕುರಿತು ಎಲ್ಲಾ ಮೂಢ ನಂಬಿಕೆ ಮತ್ತು ಪೂರ್ವಾಗ್ರಹಗಳು ದೂರವಾಗವಾಗಬೇಕು. ಇಂದು ತಾಯಿ ಹಾಲಿನ ಮಹತ್ವ ಮತ್ತು ಪ್ರಯೋಜನಗಳ ಕುರಿತು ಜಗತ್ತಿನಾದ್ಯಂತ ವ್ಯಾಪಕ ಅರಿವು ಕಾರ್ಯಕ್ರಮಗಳು ಆಂದೋಲನದ ಮಾದರಿಯಲ್ಲಿ ನಡೆಯುತ್ತಿರುವುದು ತಾಯಿ ಎದೆ ಹಾಲಿಗೆ ಇರುವ ಪ್ರಾಮುಖ್ಯತೆಯನ್ನು ಸಾರುತ್ತಿದೆ ಎಂದು ತಿಳಿಸಿದರು. ಇದೇ ಸಂದರ್ಭದಲ್ಲಿ ಮಗುವಿಗೆ ಹಾಲು ಕುಡಿಸುವ ವೈಜ್ಞಾನಿಕ ವಿಧಾನಗಳು ಹಾಗೂ ಕ್ರಮಗಳ ಬಗ್ಗೆ ತಿಳಿಸಿಕೊಡಲಾಯಿತು.

ಜಿಲ್ಲಾ ಆರೋಗ್ಯಾಧಿಕಾರಿ ಡಾ.ಎಸ್.ಎಸ್. ಮಹೇಶ್ ಕುಮಾರ್ ಮಾತನಾಡಿ, ಆಗಸ್ಟ್ 7 ರವರೆಗೆ ಜಿಲ್ಲೆಯಾದ್ಯಂತ ವಿಶ್ವ ಸ್ತನ್ಯಪಾನ ಸಪ್ತಾಹ ನಡೆಯಲಿದ್ದು, ಗರ್ಭಿಣಿಯರು ಮತ್ತು ಬಾಣಂತಿಯರಿಗೆ ಸ್ತನ್ಯಪಾನದ ಮಹತ್ವದ ಕುರಿತು ವೈದ್ಯರು,ಆರೋಗ್ಯ ಮತ್ತು ಆಶಾ ಕಾರ್ಯಕರ್ತರು ಜಾಗೃತಿ ಮೂಡಿಸಲಿದ್ದಾರೆ ಎಂದು ತಿಳಿಸಿದರು.

ಜಿಲ್ಲಾಸ್ಪತ್ರೆಯ ಜಿಲ್ಲಾ ಶಸ್ತ್ರಚಿಕಿತ್ಸಕಿ ಡಾ.ಮಂಜುಳಾ ಮಾತನಾಡಿ, ಬಾಣಂತಿಯರು ಮಗುವಿಗೆ ಎದೆಹಾಲು ನೀಡುವಾಗ ವಹಿಸಬೇಕಾದ ಮುನ್ನೆಚ್ಚರಿಕೆ ಹಾಗೂ ಸ್ವಚ್ಛತಾ ಕ್ರಮಗಳ ಬಗ್ಗೆ ತಿಳಿಸಿಕೊಟ್ಟರು.

ಇದೇ ಸಂದರ್ಭದಲ್ಲಿ ಸರ್ಕಾರಿ ನರ್ಸಿಂಗ್ ಕಾಲೇಜು ವಿದ್ಯಾರ್ಥಿಗಳು ತಾಯಿ ಎದೆಹಾಲಿನ ಪ್ರಾಮುಖ್ಯತೆ ಕುರಿತು ಪ್ರಾತ್ಯಕ್ಷಿಕೆ ನೀಡಿದರು.

ಕಾರ್ಯಕ್ರಮದಲ್ಲಿ ನಿವಾಸಿ ವೈದ್ಯಾಧಿಕಾರಿ ಡಾ.ರಮೇಶ್, ನೋಡೆಲ್ ಅಧಿಕಾರಿ ಡಾ.ವಿಜಯಾ, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಜಿ.ಹರೀಶ್ ಮತ್ತಿತರರು ಹಾಜರಿದ್ದರು.

# ರೈತರಿಗೆ ಒಂದು ದಿನದ ತರಬೇತಿ

**ಚಿಂತಾಮಣಿ:** ತೋಟಗಾರಿಕೆ ಇಲಾಖೆ ವತಿಯಿಂದ ಶುಕ್ರವಾರ ಹರಿಸ್ಥಳ ಗ್ರಾಮ ಪಂಚಾಯತಿ ಸಭಾಂಗಣದಲ್ಲಿ ಇಂದು ರೈತರಿಗೆ ಒಂದು ದಿನದ ತರಬೇತಿ ಕಾರ್ಯಕ್ರಮ ಹಮ್ಮಿಕೊಂಳ್ಳಲಾಗಿತ್ತು.

ಚಿಂತಾಮಣಿ ತಾಲ್ಲೂಕಿನ ಕೃಷಿ ವಿಜ್ಞಾನ ಕೇಂದ್ರ (ಕುರಬೂರು)ದ ವಿಜ್ಞಾನಿಗಳಾದ ಡಾ. ಪ್ರವೀಣ್ ಮತ್ತು ಡಾ. ಸ್ವಾತಿ ರವರು ರೈತರಿಗೆ ಸೇವಂತಿಗೆ, ಟಮೋಟೋ ಮತ್ತು ದಾಳಿಂಬೆ ಬೆಳೆಗಳಲ್ಲಿ ಸಮಗ್ರ ಬೇಸಾಯ ಪದ್ದತಿ ಅಳವಡಿಕೆ, ಪ್ರಮುಖ ಕೀಟ ಮತ್ತು ರೋಗ ನಿಯಂತ್ರಣದ ಬಗ್ಗೆ ತಿಳಿಸಿಕೊಟ್ಟರು.

ವಿಜ್ಞಾನಿಗಳು ಸೇವಂತಿಗೆ, ಟಮೋಟೋ ತಾಕುಗಳಿಗೆ ಭೇಟಿ ನೀಡಿ ಸುಧಾರಿತ ಬೇಸಾಯ ಪದ್ದತಿ ಅನುಸರಣೆ ಬಗ್ಗೆ ರೈತರಿಗೆ ತಮ್ಮದೆ ತಾಕಿನಲ್ಲಿ ಸಲಹೆಗಳನ್ನು ನೀಡಿದರು.

ಸದರಿ ತರಬೇತಿ ಕಾರ್ಯಕ್ರಮದಲ್ಲಿ 60-70 ಜನ ರೈತರು ಭಾಗವಹಿಸಿ ತರಬೇತಿಯ ಪ್ರಯೋಜನ ಪಡೆದುಕೊಂಡರು. ನಂತರ ಸೇವಂತಿಗೆ ಬೆಳೆಯಲ್ಲಿ ಸೊರಗು ರೋಗದ ನಿರ್ವಹಣಾ ಕ್ರಮಗಳು,ನಾಟಿ ಮಾಡುವ ಮೊದಲು ಭೂಮಿಗೆ ಕೊಟ್ಟಿಗೆ ಗೊಬ್ಬರ ಮತ್ತು ಟ್ರೈಕೋಡರ್ಮಾದಿಂದ ಸಸಿಗಳು ಬೇರುಗಳನ್ನು ಟ್ರೈಕೋಡರ್ಮಾ ದ್ರಾವಣದಲ್ಲಿ (10 ಗ್ರಾಂ ಪ್ರತಿ ಲೀಟರ್ ನೀರಿನಲ್ಲಿ ಬೆರಸಿ) ಅದ್ದಿ ನಾಟಿಮಾಡುವುದು. ರೋಗದ ಲಕ್ಷಣಗಳು ಕಂಡ ತಕ್ಷಣ ಒಂದು ಲೀಟರ್ ನೀರಿನಲ್ಲಿ 2 ಗ್ರಾಂ ಕಾರ್ಬನ್ಡೆಜಿಮ್ 12+ಮ್ಯಾಂಕೋಜೆಬ್ 63 ಡಬ್ಲ್ಯೂಪಿ ಅಥವಾ 0.5 ಮಿ.ಲೀ ಡೈಪೆನ್ ಕೋನೋರ್ಝೊಲ್ 25 ಇ.ಸಿ ಮಿಶ್ರಣ ಮಾಡಿ ಗಿಡಗಳ ಬುಡದ ಸುತ್ತ ಮಣ್ಣಿಗೆ ಸುರಿಯಬೇಕು. ರೋಗದ ತೀವ್ರತೆ ಹೆಚ್ಚಾದಲ್ಲಿ 1 ಗ್ರಾಂ ಟೆಬೂಕೋನೋರ್ಝೊಲ್ 50+ಟ್ರೈಪ್ಲೋಕ್ಸಿಸ್ಟ್ರೋಬಿನ್ 25 ಡಬ್ಲೂಜಿ ಮಿಶ್ರಣ ಮಾಡಿ ಗಿಡಗಳ ಬುಡದ ಸುತ್ತ ಮಣ್ಣಿಗೆ ಸುರಿಯಬೇಕು ಎಂದು ತೆಲಿಸಿಕೊಟ್ಟರು.

ಈ ವೇಳೆ ಚಿಕ್ಕಬಳ್ಳಾಪುರ ತಾಲೂಕು ತೋಟಗಾರಿಕೆ ಇಲಾಖೆಯ ಅಧಿಕಾರಿ ಹೇಮಾವತಿ ಹಾಗೂ ರೈತರು ಇದ್ದರು.

# 78ನೇ ಸ್ವಾತಂತ್ರ್ಯ ದಿನಾಚರಣೆಗೆ ಅಗತ್ಯ ಸಿದ್ಧತೆ ಕೈಗೊಳ್ಳಿ

**ಬೆಂಗಳೂರು ಗ್ರಾಮಾಂತರ:** ಆಗಸ್ಟ್ 15 ರಂದು ನಡೆಯಲಿರುವ 78 ನೇ ಸ್ವಾತಂತ್ರ್ಯ ದಿನಾಚರಣೆಯನ್ನು ಅರ್ಥಪೂರ್ಣವಾಗಿ ಆಚರಿಸಲು ಅಗತ್ಯ ಸಿದ್ಧತೆಯನ್ನು ಕೈಗೊಳ್ಳಿ ಎಂದು ಸಂಬಂಧಪಟ್ಟ ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಡಾ. ಎನ್ ಶಿವಶಂಕರ ಅವರು ಸೂಚಿಸಿದರು. ದೇವನಹಳ್ಳಿ ತಾಲೂಕಿನ ಬೀರಸಂದ್ರ, ಗ್ರಾಮದ ಜಿಲ್ಲಾಡಳಿತ ಭವನದಲ್ಲಿರುವ ಜಿಲ್ಲಾಧಿಕಾರಿಯವರ ಕಚೇರಿ ಸಭಾಂಗಣದಲ್ಲಿ ನಡೆದ 78 ನೇ ಸ್ವಾತಂತ್ರ್ಯ ದಿನಾಚರಣೆ ಕಾರ್ಯಕ್ರಮದ ಪೂರ್ವಭಾವಿ ಸಭೆಯನ್ನುದ್ದೇಶಿಸಿ ಅವರು ಮಾತನಾಡಿದರು. ಸ್ವಾತಂತ್ರ್ಯ ದಿನಾಚರಣೆ ಅಂಗವಾಗಿ ಬೆಂಗಳೂರು ಗ್ರಾಮಾಂತರ ಜಿಲ್ಲಾಡಳಿತ ಭವನದಲ್ಲಿ ಬೆಳಿಗ್ಗೆ 07:15 ಗಂಟೆಗೆ ಧ್ವಜಾರೋಹಣ ಹಾಗೂ ಸಂಗೊಳ್ಳಿ ರಾಯಣ್ಣ ಜಯಂತಿ ಆಚರಿಸಲಾಗುವುದು. ನಂತರ ದೇವನಹಳ್ಳಿ ಟೌನ್ ನಲ್ಲಿರುವ ಕ್ರೀಡಾಂಗಣದಲ್ಲಿ ಬೆಳಿಗ್ಗೆ 09:00 ಗಂಟೆಯಿಂದ ಜಿಲ್ಲಾ ಮಟ್ಟದ ಸ್ವಾತಂತ್ರ್ಯ ದಿನಾಚರಣೆ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗುವುದು. ಜಿಲ್ಲಾಡಳಿತ ಮುಂಭಾಗ ಧ್ವಜ ಕಟ್ಟೆ ಸಿದ್ಧಪಡಿಸುವಿಕೆ, ಶಿಷ್ಟಾಚಾರದಂತೆ ಆಹ್ವಾನ ಪತ್ರಿಕೆಗಳ ಮುದ್ರಣ, ಕಾರ್ಯಕ್ರಮದ ವೇದಿಕೆ ನಿರ್ಮಾಣ ವ್ಯವಸ್ಥೆ, ಸಾಂಸ್ಕೃತಿಕ ಕಾರ್ಯಕ್ರಮ, ಪಥಸಂಚಲನ, ಉಪಹಾರ ಹಾಗೂ ಕುಡಿಯುವ ನೀರಿನ ವ್ಯವಸ್ಥೆ ಸೇರಿದಂತೆ ಅಗತ್ಯ ಸಿದ್ಧತೆಗಳನ್ನು ಕೈಗೊಳ್ಳುವಂತೆ ಸಂಬಂಧಪಟ್ಟ ಜಿಲ್ಲಾಮಟ್ಟದ ಹಾಗೂ ತಾಲೂಕು ಮಟ್ಟದ ಅಧಿಕಾರಿಗಳಿಗೆ ಜಿಲ್ಲಾಧಿಕಾರಿಯವರು ಸೂಚನೆ ನೀಡಿದರು.



ಅಂಗಾಂಗ ದಾನ ಮಾಡಿದ ವ್ಯಕ್ತಿಗಳನ್ನು ಗುರುತಿಸಿ, ಸ್ವಾತಂತ್ರ್ಯ ಹೋರಾಟಗಾರರು ಇದ್ದಲ್ಲಿ ಗುರುತಿಸಿ ಸನ್ಮಾನಿಸಲು ಕ್ರಮ ಕೈಗೊಳ್ಳಿ. ಕಾರ್ಯಕ್ರಮದಲ್ಲಿ ಪ್ಲಾಸ್ಟಿಕ್ ವಸ್ತುಗಳು ಬಳಸದಂತೆ ಕ್ರಮವಹಿಸಿ ಕಾರ್ಯಕ್ರಮವನ್ನು ಯಾವುದೇ ಸಮಸ್ಯೆ ಇಲ್ಲದಂತೆ ಯಶಸ್ವಿಯಾಗಿ ನಡೆಯಲು ಅಗತ್ಯ ಸಿದ್ಧತೆ ಕೈಗೊಳ್ಳಿ ಎಂದರು. ಅಪರ ಜಿಲ್ಲಾಧಿಕಾರಿ ಅಮರೇಶ್. ಹೆಚ್, ದೊಡ್ಡಬಳ್ಳಾಪುರ ಉಪವಿಭಾಗಾಧಿಕಾರಿ ದುರ್ಗಾಶ್ರೀ.ಎನ್, ದೇವನಹಳ್ಳಿ ತಹಶೀಲ್ದಾರ್ ಬಾಲಕೃಷ್ಣ ಸೇರಿದಂತೆ ಜಿಲ್ಲಾ ಮಟ್ಟದ ಹಾಗೂ ತಾಲೂಕು ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

# ಆರೋಗ್ಯ ತಪಾಸಣಾ ಶಿಬಿರ

**ಚಿಕ್ಕಬಳ್ಳಾಪುರ:** ಜಿಲ್ಲಾಡಳಿತ ಭವನದ ಅಧಿಕಾರಿಗಳು ಮತ್ತು ಸಿಬ್ಬಂದಿಗೆ ಉಚಿತ ಆರೋಗ್ಯ ತಪಾಸಣಾ ಶಿಬಿರವನ್ನು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ವತಿಯಿಂದ ಆಗಸ್ಟ್ 3 ರಂದು ಜಿಲ್ಲಾಡಳಿತ ಭವನದ ಆಡಿಟೋರಿಯಂ ನಲ್ಲಿ ಬೆಳಿಗ್ಗೆ 8 ಗಂಟೆಯಿಂದ ಮಧ್ಯಾಹ್ನ 3 ಗಂಟೆಯ ವರೆಗೆ ಹಮ್ಮಿಕೊಳ್ಳಲಾಗಿದೆ. ಈ ಹಿನ್ನೆಲೆಯಲ್ಲಿ ಜಿಲ್ಲಾಧಿಕಾರಿ ಪಿ. ಎನ್ ರವೀಂದ್ರ ಅವರ ನಿರ್ದೇಶನದ ಮೇರೆಗೆ ಅಪರ ಜಿಲ್ಲಾಧಿಕಾರಿ ಎನ್. ಭಾಸ್ಕರ್ ಅವರು ಜಿಲ್ಲಾಡಳಿತ ಭವನದ ಎಲ್ಲಾ ಇಲಾಖೆಯ ಕಚೇರಿಗಳಿಗೆ ಭೇಟಿ ನೀಡಿ ಶಿಬಿರಕ್ಕೆ ಆಗಮಿಸಿ ಆರೋಗ್ಯ ತಪಾಸಣೆ ಮಾಡಿಸಿಕೊಳ್ಳಬೇಕು ಮತ್ತು ದ್ವಿಚಕ್ರ ಮತ್ತು ಲಘು ವಾಹನಗಳಲ್ಲಿ ಚಲಿಸಬೇಕಾದ ಸಂದರ್ಭದಲ್ಲಿ ಕಡ್ಡಾಯವಾಗಿ ಸಂಚಾರಿ ನಿಯಮಗಳನ್ನು ಪಾಲಿಸಬೇಕು ಎಂದು ತಿಳಿಸಿ ವಿನೂತನವಾಗಿ ಎಲ್ಲರಿಗೂ ಅಹ್ವಾನ ನೀಡಿದರು. ಜಿಲ್ಲಾ ಆಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಚಿಕ್ಕಬಳ್ಳಾಪುರ ನಗರ ಸಂಚಾರಿ ಪೊಲೀಸ್ ಠಾಣೆ, ಜಿಲ್ಲಾ ಸರ್ಕಾರಿ ನೌಕರರ ಸಂಘದ ವತಿಯಿಂದ ಆಗಸ್ಟ್ 3 ರಿಂದ ಜಿಲ್ಲಾಡಳಿತ ಭವನದ ಅಧಿಕಾರಿಗಳು ಮತ್ತು ಸಾರ್ವಜನಿಕರು ಕಡ್ಡಾಯವಾಗಿ ಹೆಲ್ಮೆಟ್ ನ್ನು ಧರಿಸಬೇಕು ಎಂದರು. ದ್ವಿಚಕ್ರ ವಾಹನ ಸವಾರರು ಸಂಚಾರಿ ಕಾನೂನು ಬಾಹಿರ ಚಾಲನೆ ಮಾಡಬಾರದು. ಜಿಲ್ಲಾಡಳಿತ ಭವನದ ಇಲಾಖೆಯ ಅಧಿಕಾರಿಗಳು ಧರಿಸದಿದ್ದಲ್ಲಿ 1000 ದಂಡವನ್ನು ವಿಧಿಸಲಾಗುವುದು ಎಂದು ಇಲಾಖೆಯ ಸಿಬ್ಬಂದಿ ಹಾಗೂ ಅಧಿಕಾರಿಗಳಿಗೆ ಸಂಚಾರಿ ನಿಯಮದ ಹಲವು ಸೂಚನೆಗಳನ್ನು ನೀಡಿದರು. ಈ ವೇಳೆ ಜಿಲ್ಲಾ ಆರೋಗ್ಯಾಧಿಕಾರಿ ಡಾ. ಎಸ್. ಎಸ್. ಮಹೇಶ್ ಕುಮಾರ್, ಆರೋಗ್ಯ ಇಲಾಖೆಯ ಸಿಬ್ಬಂದಿ ಹಾಜರಿದ್ದರು.

# ಕೆ-ಸೆಟ್ ಮತ್ತು ಯುಜಿಸಿ-ನೆಟ್ ಪರೀಕ್ಷೆಗಳಿಗೆ ತರಬೇತಿ

**ಚಿಕ್ಕಬಳ್ಳಾಪುರ:** ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ 'ಕರಾಮುವಿ ಸ್ಪರ್ಧಾತ್ಮಕ ಪರೀಕ್ಷಾ ತರಬೇತಿ ಕೇಂದ್ರ'ದ ವತಿಯಿಂದ ಕರ್ನಾಟಕ ಸರ್ಕಾರವು ಕೆಇಎ (ಕರ್ನಾಟಕ ಪರೀಕ್ಷಾ ಪ್ರಾಧಿಕಾರ) ಮೂಲಕ ನಡೆಸಲಿರುವ ರಾಜ್ಯ ಮಟ್ಟದ ಪದವಿ ಕಾಲೇಜು ಸಹಾಯಕ ಪ್ರಾಧ್ಯಾಪಕರ ಅರ್ಹತಾ ಪರೀಕ್ಷೆ (ಕೆ-ಸೆಟ್) ಹಾಗೂ ನವದೆಹಲಿಯ ವಿಶ್ವವಿದ್ಯಾನಿಲಯದ ಧನಸಹಾಯ ಆಯೋಗದವರು ನಡೆಸಲಿರುವ ರಾಷ್ಟ್ರ ಮಟ್ಟದ ಕಾಲೇಜು ಸಹಾಯಕ ಪ್ರಾಧ್ಯಾಪಕರ (ಯುಜಿಸಿ-ನೆಟ್) ಮತ್ತು ಕಿರಿಯ ಶಿಷ್ಯವೇತನ ಸಂಶೋಧನ ಸಹಾಯಕರ (ಜೆಆರ್‌ಎಫ್) ಪರೀಕ್ಷೆಗಳಿಗೆ 45 ದಿನಗಳ ತರಬೇತಿ ಶಿಬಿರವನ್ನು ಏರ್ಪಡಿಸಲಾಗಿದೆ. ಆಸಕ್ತರು ಆಗಸ್ಟ್ 9 ರೊಳಗಾಗಿ ಮೈಸೂರಿನ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ಆವರಣದಲ್ಲಿರುವ ಕರಾಮುವಿ ಸ್ಪರ್ಧಾತ್ಮಕ ಪರೀಕ್ಷಾ ತರಬೇತಿ ಕೇಂದ್ರದ ಕಚೇರಿಯಲ್ಲಿ ಬೆಳಿಗ್ಗೆ 10 ಗಂಟೆಯಿಂದ ಸಂಜೆ 5 ಗಂಟೆಯೊಳಗಾಗಿ ತಮ್ಮ ಹೆಸರನ್ನು ನೊಂದಾಯಿಸಿಕೊಳ್ಳಬಹುದೆಂದು ಕರಾಮುವಿ ಕುಲಸಚಿವರಾದ ಪ್ರೊ. ಕೆ.ಬಿ. ಪ್ರವೀಣ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಹೆಚ್ಚಿನ ವಿವರಗಳಿಗೆ 0821-2515944 ದೂರವಾಣಿ ಸಂಖ್ಯೆಯಲ್ಲಿ ಸಂಪರ್ಕಿಸಬಹುದು.

# ಹೂ ಮುಡಿದ ಜಡೆ ಕೃತಿ ಬಿಡುಗಡೆ

**ಮೈಸೂರು:** ರಾಜ್ಯ ಬರಹಗಾರರ ಸಂಘ, ಹೂವಿನಹಡಗಲಿ ಇವರಿಂದ ಪ್ರತಿ ವರ್ಷದಂತೆ ನಡೆಯುವ 4ನೇ ಕನ್ನಡ ನುಡಿ ವೈಭವ ಕಾರ್ಯಕ್ರಮದಲ್ಲಿ ಮಧುನಾಯ್ಕ ಲಂಬಾಣಿ ಸಂಪಾದಕತ್ವದ ಕೃತಿ ಹೂ ಮುಡಿದ ಜಡೆಯ ಬಿಡುಗಡೆ ಕಾರ್ಯಕ್ರಮವನ್ನು ದಿನಾಂಕ 25-8-2024ರ ಭಾನುವಾರ ದಾವಣಗೆರೆಯಲ್ಲಿ ಕರ್ನಾಟಕ ಬಂಜಾರ ಭಾಷಾ ಅಕಾಡೆಮಿಯ ಅಧ್ಯಕ್ಷರಾದ ಡಾ. ಎ.ಆರ್.ಗೋವಿಂದಸ್ವಾಮಿಯವರು ಆಗಮಿಸಿ ಬಿಡುಗಡೆ ಮಾಡುವರು. ಡಾ.ಎ.ಆರ್. ಗೋವಿಂದಸ್ವಾಮಿಯವರು ಚಲನಚಿತ್ರ ನಟರು, ನಿರ್ದೇಶಕರು, ಸಾಹಿತಿಗಳು, ಖ್ಯಾತ ರಂಗಭೂಮಿ ಕಲಾವಿದರು ಆಗಿದ್ದು ಅನೇಕ ಪ್ರಮುಖ ಕೃತಿಗಳನ್ನು ರಚಿಸಿ ನಾಡು ನುಡಿಯ ಸೇವೆ ಮಾಡಿದ್ದಾರೆ ಎಂದು ಕರ್ನಾಟಕ ರಾಜ್ಯ ಬರಹಗಾರರ ಸಂಘದ ಗೌ. ಅಧ್ಯಕ್ಷರು, ಸಾಹಿತಿ ಗೊರೂರು ಅನಂತರಾಜು ತಿಳಿಸಿದ್ದಾರೆ.

# 5ರಂದು ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದ ಅಧ್ಯಕ್ಷರ ಪ್ರವಾಸ

**ಚಿಕ್ಕಬಳ್ಳಾಪುರ:** ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಜಿ.ಪದ್ಮಾವತಿ ಅವರು ಆಗಸ್ಟ್ 05 ರಂದು ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ ಪ್ರವಾಸ ಕೈಗೊಳ್ಳುವ ವಿವರ ಇಂತಿದೆ. ಆಗಸ್ಟ್ 05 ರಂದು ಬೆಳಿಗ್ಗೆ 11 ಗಂಟೆಗೆ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಿಗಮದ ಅಧಿಕಾರಿಗಳೊಂದಿಗೆ ವಿವಿಧ ಯೋಜನೆಗಳ ಪ್ರಗತಿ ಕುರಿತು ಸಭೆಯಲ್ಲಿ ಭಾಗವಹಿಸಲಿದ್ದಾರೆ. ನಂತರ 12 ಗಂಟೆಗೆ ನಿಗಮದಿಂದ ಸೌಲಭ್ಯ ಪಡೆದ ವಿವಿಧ ಯೋಜನೆಗಳ ಫಲಾನುಭವಿಗಳ ಭೇಟಿ ಹಾಗೂ ಗುರುತಿನ ಚೀಟಿ ವಿತರಣಾ ಕಾರ್ಯಕ್ರಮದಲ್ಲಿ ಭಾಗವಹಿಸುವರು. ತದನಂತರ ಸಂಜೆ 4:30 ಗಂಟೆಗೆ ಚಿಕ್ಕಬಳ್ಳಾಪುರ ಜಿಲ್ಲೆಯಿಂದ ಬೆಂಗಳೂರಿಗೆ ಪ್ರಯಾಣ ಮಾಡುವರು.

# ಜೀವವೇ ಜೀವ ಜಲವೇ ಜೀವನ



**ಹುಳಿಯಾರು:** ಜೀವವೇ ಜೀವ ಜಲವೇ ಜೀವನ ಪರಿಕಲ್ಪನೆ ಆಧಾರಿತ ವಿಶಿಷ್ಟ ಮತ್ತು ವಿಭಿನ್ನ ಶೈಕ್ಷಣಿಕ ಕಾರ್ಯಕ್ರಮದಲ್ಲಿ ಪ್ರೌಢಶಾಲಾ ವಿದ್ಯಾರ್ಥಿಗಳಿಗೆ ಭಾಗಿಗಳಾಗಿದ್ದರು. ಮೋಡ ಕವಿದ, ಆಗಾಗ ತುಂತುರು ಮಳೆ ಹನಿಯುತ್ತಿದ್ದ ವಾತಾವರಣದಲ್ಲಿ ಹುಳಿಯಾರು ಸಮೀಪದ ಬೋರನಕಣಿವೆ ಪದವಿ ಪೂರ್ವ ಕಾಲೇಜು ಆವರಣದಲ್ಲಿ ನಡೆದ ಕಾರ್ಯಕ್ರಮದಲ್ಲಿ ಪ್ರೌಢಶಾಲಾ ವಿದ್ಯಾರ್ಥಿಗಳಿಗೆ ಆಹ್ಲಾದಕರ ಅನುಭವ ನೀಡಿ ಕಲಿಕೆಗೆ ಜೀವ ತುಂಬಿತು. ತಮ್ಮ ದೇಹವನ್ನು ತಾವೇ ವೈಜ್ಞಾನಿಕ ಪರೀಕ್ಷೆಗಳಿಗೆ ಒಳಪಡಿಸಿ, ಮನುಷ್ಯ ಮತ್ತು ಪ್ರಾಣಿಗಳು ಬದುಕಲು ನೀರು ಅತ್ಯಗತ್ಯ ಎಂದು ಕಂಡುಕೊಂಡರು. ಪ್ರಯೋಗಗಳನ್ನು ತಾವೇ ಮಾಡುತ್ತಾ ಭಾಷ್ಪ ವಿಸರ್ಜನೆ, ದ್ಯುತಿಸಂಶ್ಲೇಷಣೆ, ಮೊಳಿಯುವಿಕೆ ಮುಂತಾದ ಕ್ರಿಯೆಗಳಲ್ಲಿ ನೀರಿನ ಮಹತ್ವ ಮತ್ತು ಸಸ್ಯಗಳಿಗೆ ನೀರಿನ ಅಗತ್ಯದ ಬಗ್ಗೆ ಮಾಹಿತಿ ಪಡೆದರು. ಹಾಡುತ್ತಾ, ಅಭಿನಯಿಸುತ್ತಾ, ಚರ್ಚೆ ಮಾಡುತ್ತಾ ನಿತ್ಯ ಜೀವನದಲ್ಲಿ ನೀರಿನ ಅಗತ್ಯದ ಬಗ್ಗೆ ಮತ್ತು ನೀರಿನಿಂದ ಜನರ ಜೀವನೋಪಾಯಗಳನ್ನು ಪಟ್ಟಿ ಸಿದ್ದಪಡಿಹಿದರು.

ವಿಜ್ಞಾನ ಸಂಘಟನೆಯ ಎನ್.ಇಂದಿರಮ್ಮ, ಯು.ಪಿ.ಉಮಾದೇವಿ ಮತ್ತು ರಾಮಕೃಷ್ಣಪ್ಪ ವಿದ್ಯಾರ್ಥಿಗಳಿಗೆ ಅಗತ್ಯ ಮಾರ್ಗದರ್ಶನ ನೀಡಿದರು. ಶಿಕ್ಷಕರು ಬಸವರಾಜ, ಮನುಕುಮಾರ್, ರಮೇಶ್, ಓಂಕಾರ್, ರತ್ನಮ್ಮ, ನಿರ್ಮಲ, ರೇಖಾ, ಸಿಬ್ಬಂದಿ ವಿಷ್ಣು ಹರ್ಷ, ವಿಜಯಲಕ್ಷ್ಮೀ ಹಾಜರಿದ್ದರು.



## ನೂತನ ಅಧ್ಯಕ್ಷರಾಗಿ ಎಚ್.ಎಚ್.ರಾಜೇಶ್ವರಿ ಆಯ್ಕೆ

**ಮೈಸೂರುಜಿಲ್ಲಾ ಪದವಿ ಪೂರ್ವಕಾಲೇಜಿನ ಪ್ರಾಂಶುಪಾಲ ಸಂಘದ ಅಧ್ಯಕ್ಷರಾಗಿ ವರುಣ ಸರ್ಕಾರಿ ಪದವಿಪೂರ್ವ ಕಾಲೇಜಿನ ಹಿರಿಯ ಪ್ರಾಂಶುಪಾಲರಾದ ಶ್ರೀಮತಿ ಹೆಚ್.ಹೆಚ್.ರಾಜೇಶ್ವರಿ ಆಯ್ಕೆಯಾದರು. ಇಲಾಖೆಯಲ್ಲಿ ನಡೆದ ಮೈಸೂರುಜಿಲ್ಲಾ ಪ್ರಾಂಶುಪಾಲರ ಸಭೆಯಲ್ಲಿಎಲ್ಲಾ ಪ್ರಾಂಶುಪಾಲರುಗಳು ಸರ್ವಾನುಮತದಿಂದ ಆಯ್ಕೆ ಮಾಡಿದರು. ಪದವಿಪೂರ್ವ ಶಿಕ್ಷಣ ಇಲಾಖೆಯಉಪನಿರ್ದೇಶಕರಾದ ಮರಿಸ್ವಾಮಿರವರಅಧ್ಯಕ್ಷತೆಯಲ್ಲಿಸಭೆ ನಡೆಯಿತು.ಸಭೆಯಲ್ಲಿಉಪಾಧ್ಯಕ್ಷರಾಗಿ ಹನುಮಂತರಾವ್, ಕಾರ್ಯದರ್ಶಿಯಾಗಿ ಸೋಮಶೇಖರ್ ಹಾಗೂ ಪ್ರಾಂಶುಪಾಲರಾದ ರಮಾನಂದ, ಚಿದಾನಂದ, ಸುದೀಪ್, ಶ್ರೀಮತಿ ಕೋಮಲ ಉಪಸ್ಥಿತರಿದ್ದರು. ಜಿಲ್ಲಾ ಬೋಧಕೇತರ ಸಂಘದಅಧ್ಯಕ್ಷರಾದರಾಜ್‌ಕುಮಾರ್ ಎಂ ರವರು ನೂತನ ಅಧ್ಯಕ್ಷರನ್ನು ಅಭಿನಂದಿಸಿದರು.**

# ಡಿ.ಎ.ಪಿ ರಸಗೊಬ್ಬರಕ್ಕೆ ಪರ್ಯಾಯವಾಗಿ ಕಾಂಪ್ಲೆಕ್ಸ್ ರಸಗೊಬ್ಬರಗಳ ಬಳಕೆಗೆ ಮನವಿ

**ಚಿಕ್ಕಬಳ್ಳಾಪುರ:** ಸಸ್ಯಗಳ ಬೆಳವಣಿಗೆ ಮತ್ತು ಅಭಿವೃದ್ಧಿಗೆ 17 ಪೋಷಕಾಂಶಗಳ ಅಗತ್ಯವಿರುತ್ತದೆ. ಇವುಗಳಲ್ಲಿ ಇಂಗಾಲ, ಜಲಜನಕ ಮತ್ತು ಆಮ್ಲಜನಕವು ಸ್ವಾಭಾವಿಕವಾಗಿ ದೊರೆಯಲಿದ್ದು ಗಾಳಿ ಮತ್ತು ನೀರಿನ ಮೂಲಕ ಸಸ್ಯಗಳಿಗೆ ಲಭ್ಯವಾಗುತ್ತದೆ. ಉಳಿದ 14 ಪೋಷಕಾಂಶಗಳಲ್ಲಿ ಸಾರಜನಕ, ರಂಜಕ, ಪೊಟ್ಯಾಷ್ ಹೆಚ್ಚಿನ ಪ್ರಮಾಣದಲ್ಲಿ ಬೇಕಿದ್ದು, ಇವುಗಳನ್ನು ಪ್ರಧಾನ ಪೋಷಕಾಂಶಗಳೆಂದು, ಕ್ಯಾಲ್ಸಿಯಂ, ಮೆಗ್ನೀಷಿಯಂ, ಗಂಧಕ, ಕಬ್ಬಿಣ, ಜಿಂಕ್, ಬೋರಾನ್, ತಾಮ್ರ, ಮ್ಯಾಂಗನೀಸ್, ಮಾಲಿಬ್ಡಿನಂ, ಕ್ಲೋರಿನ್ ಮತ್ತು ನಿಕ್ಕಲ್ ಕಡಿಮೆ ಪ್ರಮಾಣದಲ್ಲಿ ಬೇಕಿದ್ದು ಇವುಗಳನ್ನು ಲಘು ಪೋಷಕಾಂಶಗಳೆಂದು ವಿಂಗಡಿಸಲಾಗಿದೆ. ಇವುಗಳಲ್ಲಿ ಯಾವುದೇ ಒಂದು ಪೋಷಕಾಂಶದ ಕೊರತೆ ಯಾದರೂ ಸಸ್ಯಗಳ ಬೆಳವಣಿಗೆ ಮತ್ತು ಅಭಿವೃದ್ಧಿಯ ಮೇಲೆ ಅನಾನುಕೂಲ ಪರಿಣಾಮ ಬೀರಿ ಇಳುವರಿ ಕುಂಠಿತವಾಗುತ್ತದೆ.

ಪ್ರಧಾನ ಪೋಷಕಾಂಶಗಳು ಮತ್ತು ಲಘು ಪೋಷಕಾಂಶಗಳಿಗೆ ಭೂಮಿಯೆ ಮುಖ್ಯ ಆಧಾರ, ಮಣ್ಣಿನಿಂದ ಈ ಎಲ್ಲಾ ಪೋಷಕಾಂಶಗಳು ಬೆಳೆಗಳಿಗೆ ಬೇಕಾದ ಪ್ರಮಾಣದಲ್ಲಿ ದೊರೆಯುವುದಿಲ್ಲವಾದ್ದರಿಂದ ಬಾಹ್ಯವಾಗಿ ನೀಡುವುದು ಅನಿವಾರ್ಯ.ಬೆಳೆಗಳಿಗೆ ಬೇಕಾಗುವ ಈ ಬಾಹ್ಯ ಪೋಷಕಾಂಶಗಳನ್ನು ಸಾವಯವ (ಕೊಟ್ಟಿಗೆಗೊಬ್ಬರ, ಹಸಿರೆಲೆ ಗೊಬ್ಬರ, ಹಿಂಡಿ ಇತ್ಯಾದಿ) ಮತ್ತು ರಸಗೊಬ್ಬರಗಳಿಂದ ಒದಗಿಸಬೇಕಾಗಿದ್ದು, ರಸಗೊಬ್ಬರಗಳಲ್ಲಿ ಪೋಷಕಾಂಶಗಳು ಹೆಚ್ಚಿನ ಪ್ರಮಾಣದಲ್ಲಿ ಮತ್ತು ನೇರವಾಗಿ ದೊರೆಯುವ ರೂಪದಲ್ಲಿದ್ದು, ಅವುಗಳ ಬಳಕೆ ಅತ್ಯಗತ್ಯವಾಗಿರುತ್ತದೆ.

ರೈತರು ಕೇವಲ ಒಂದು ಅಥವಾ ಎರಡು ಪೋಷಕಾಂಶ ಒದಗಿಸುವ ಯೂರಿಯಾ ಹಾಗೂ ಡಿ.ಎ.ಪಿ ಯನ್ನು ರೂಢಿಗತವಾಗಿ ಬಳಸುತ್ತಿದ್ದು, ಇವುಗಳಲ್ಲಿ ಸಾರಜನಕ ಮತ್ತು ರಂಜಕದ ಅಂಶ ಮಾತ್ರವಿರುತ್ತದೆ, ಆದರೆ ಬೆಳೆಗಳಿಗೆ ಬರ ಮತ್ತುರೋಗ ನಿರೋಧಕ ಶಕ್ತಿ ನೀಡಿ ಕಾಳಿನ ತೂಕ ಹೆಚ್ಚಿಸಲು ಅತ್ಯಂತ ಅವಶ್ಯವಾಗಿರುವ ಪೊಟ್ಯಾಷ್ ಲಭ್ಯವಿರುವುದಿಲ್ಲ. ಮಾರುಕಟ್ಟೆಯಲ್ಲಿ ವಿವಿಧ ಶ್ರೇಣಿಯ (ಗ್ರೇಡ್) ಸಾರಜನಕ, ರಂಜಕ ಮತ್ತು ಪೊಟ್ಯಾಷ್ ಯುಕ್ತ ಬಹಳಷ್ಟು ರಸಗೊಬ್ಬರಗಳು ಲಭ್ಯವಿದ್ದು, ಶಿಫಾರಸ್ಸಿನಂತೆ ವಿವಿಧ ರಸಗೊಬ್ಬರಗಳನ್ನು 4:2:1 ಅನುಪಾತದಲ್ಲಿ ಬಳಸಬೇಕಾಗಿರುತ್ತದೆ. ಆದರೆ ಇತ್ತೀಚಿನ ವರ್ಷಗಳಲ್ಲಿ ರೈತರು ಬಳಸುತ್ತಿರುವ ರಸಗೊಬ್ಬರಗಳ ಅನುಪಾತವು 5:3:1 ಆಗಿರುತ್ತದೆ. ರೈತರಲ್ಲಿ ಸಮತೋಲನಾತ್ಮಕ ರಸಗೊಬ್ಬರ ಬಳಕೆಯನ್ನು ಉತ್ತೇಜಿಸಲು ಪೊಟ್ಯಾಷ್ ಯುಕ್ತ ಕಾಂಪ್ಲೆಕ್ಸ್ ರಸಗೊಬ್ಬರಗಳ ಬಳಕೆಯನ್ನು ಪ್ರೇರೇಪಿಸುವುದು ಅತೀ ಮುಖ್ಯವಾಗಿರುತ್ತದೆ. ಅಲ್ಲದೇ, ರೈತರು ರಸಗೊಬ್ಬರಗಳನ್ನು ಬಳಕೆ ಮಾಡುವಾಗ ಕೇವಲ ಒಂದೇ ಸಂಸ್ಥೆಯ ಅಥವಾ ಒಂದೇ ರಸಗೊಬ್ಬರಕ್ಕೆ ಆದ್ಯತೆ ನೀಡದೆ, ಡಿ.ಎ.ಪಿ ರಸಗೊಬ್ಬರಕ್ಕೆ ಪರ್ಯಾವಾಗಿ ಗಂಧಕ ಒದಗಿಸುವ 20:20:0:13 ಹಾಗೂ ಪೊಟ್ಯಾಷ್ ಒದಗಿಸುವ ಇತರ ಸಂಯುಕ್ತ ರಸಗೊಬ್ಬರಗಳಾದ 15:15:15, 10:26:26, 22:22:11, 14:35:14, 17:17:17, 14:28:14, 19:19:19, 20:10:10, 9:24:24, 8:21:21 ಮತ್ತು 24:24:0 ಇತ್ಯಾದಿ ಕಾಂಪ್ಲೆಕ್ಸ್ ರಸಗೊಬ್ಬರಗಳನ್ನು ಸಹ ಬಳಸಬಹುದಾಗಿದೆ.

ಆದುದರಿಂದ ಕೇವಲ ಒಂದೇ ಸಂಸ್ಥೆಯ ಹಾಗೂ ಕೇವಲ ಒಂದು ಅಥವಾ ಎರಡು ಪೋಷಕಾಂಶ ಒದಗಿಸುವ ಯೂರಿಯಾ ಮತ್ತು ಡಿ.ಎ.ಪಿ ರಸಗೊಬ್ಬರಗಳನ್ನು ಬಳಕೆ ಮಾಡುವ ಬದಲು ಮತ್ತು ರೋಗ ನಿರೋಧಕ ಶಕ್ತಿ ನೀಡಿ, ಕಾಳಿನ ತೂಕ ಹೆಚ್ಚಿಸಲು ಅತ್ಯಂತ ಅವಶ್ಯಕವಾಗಿರುವ ಪೊಟ್ಯಾಷ್‌ಯುಕ್ತ ವಿವಿಧ (ಗ್ರೇಡ್) ಶ್ರೇಣಿಯ ರಸಗೊಬ್ಬರಗಳನ್ನು ಶಿಫಾರಸ್ಸು ಪ್ರಮಾಣದಲ್ಲಿ ಸಮತೋಲನಾತ್ಮಕವಾಗಿ ಬಳಕೆ ಮಾಡುವುದರ ಮೂಲಕ ಉತ್ತಮ ಇಳುವರಿ ಪಡೆಯಲು ಹಾಗೂ ಮಣ್ಣಿನ ಫಲವತ್ತತೆ ಕಾಪಾಡಿಕೊಳ್ಳಲು ತಾಲ್ಲೂಕಿನ ಸಮಸ್ತ ರೈತ ಬಾಂಧವರಲ್ಲಿ ಚಿಕ್ಕಬಳ್ಳಾಪುರ ತಾಲ್ಲೂಕಿನ ಸಹಾಯಕ ಕೃಷಿ ನಿರ್ದೇಶಕ ಸಿ. ಮುನಿರಾಜ ಮನವಿ ಮಾಡಿದ್ದಾರೆ.

**ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ**
ಕಾರ್ಯಪಾಲಕ ಅಭಿಯಂತರರ ಕಛೇರಿ, ಕೆ.ಆರ್. ಪುರ ವಿಭಾಗ,
ಹಳೇ ಮದ್ರಾಸ್ ರಸ್ತೆ, ಕೆ.ಆಋ. ಪುರ, ಬೆಂಗಳೂರು-560 036.

ಸಂ: ಕಾಪಾಅ/ಕೆಆರ್‌ಪಿ/ಟೆಂಡ್/02/2023-24 ದಿನಾಂಕ: 02.08.2024

**ಅಲ್ಪಾವಧಿ ಟೆಂಡರ್‌ಗಾಗಿ ಆಹ್ವಾನ (ಐಎಫ್‌ಟಿ)**
(ಜಿಒಕೆ ಕೆಪಿಪಿ ಪೋರ್ಟಲ್ ಮೂಲಕ ಮಾತ್ರ) (ಏಕ-ಲಕೋಟೆ ಪದ್ಧತಿ)

ಕಾರ್ಯಪಾಲಕ ಅಭಿಯಂತರರು, ಕೆ.ಆರ್. ಪುರ ವಿಭಾಗ, ಇವರು ಅರ್ಹ ನೋಂದಾಯಿತ ಗುತ್ತಿಗೆದಾರರಿಂದ ಕೆಳಕಂಡ ವಿವಿಧ ಕಾಮಗಾರಿಗಳಿಗೆ ಐಟಂ ದರದ ಟೆಂಡರ್‌ಗಳನ್ನು ಆಹ್ವಾನಿಸಿದ್ದಾರೆ.

**ಕಾಮಗಾರಿಯ ವಿವರ :** ಕೆ.ಆರ್. ಪುರ ವಿಭಾಗದ ವಿವಿಧ ವಾರ್ಡ್‌ಗಳಲ್ಲಿ ಅನಧಿಕೃತ ಕಟ್ಟಡ ನಿರ್ಮಾಣಗಳನ್ನು ಕೆಡವುವುದು ಮತ್ತು ಕಟ್ಟಡಗಳನ್ನು ಕೆಡವಲು ಉಪಕರಣಗಳು, ಸ್ಥಾವರಗಳು, ಯಂತ್ರೋಪಕರಣಗಳು ಮತ್ತು ಮಾನವಶಕ್ತಿಯನ್ನು ಒದಗಿಸುವುದು.

| ಕ್ರ. ಸಂ. | ವಾರ್ಡ್ ಸಂಖ್ಯೆ | ಅಂದಾಜು ಮೊತ್ತ (ರೂ.ಗಳಲ್ಲಿ) | ಇ.ಎಂ.ಡಿ (ರೂ.ಗಳಲ್ಲಿ) | ಕಾಮಗಾರಿಗಳ ಸಂಖ್ಯೆ |
|---|---|---|---|---|
| **ಕರೆ-2** | | | | |
| ಸಾಮಾನ್ಯ ವರ್ಗಕ್ಕೆ ಮೀಸಲಿರಿಸಿದ ಕಾಮಗಾರಿಗಳು | | | | |
| 1 | Basavanapura Ward No. 92 (Old. No. 53) | ತಲಾ 90,000 | ತಲಾ 2,250 | 02 |
| 2 | Vignana Nagara Ward No. 95 (Old. No. 81) | 99,500 &1,00,000 | ತಲಾ 2,250 | 02 |
| ಪರಿಶಿಷ್ಟ ಜಾತಿಗೆ ಮೀಸಲಿರಿಸಿದ ಕಾಮಗಾರಿಗಳು | | | | |
| 3 | Basavanapura Ward No. 92 (Old. No. 53) | ತಲಾ 70,000 | ತಲಾ 875 | 02 |
| ಪರಿಶಿಷ್ಟ ಪಂಗಡಕ್ಕೆ ಮೀಸಲಿರಿಸಿದ ಕಾಮಗಾರಿಗಳು | | | | |
| 4 | Basavanapura Ward No. 92 (Old. No. 53) | ತಲಾ 70,000 | ತಲಾ 875 | 01 |
| **ಕರೆ-1** | | | | |
| ಸಾಮಾನ್ಯ ವರ್ಗಕ್ಕೆ ಮೀಸಲಿರಿಸಿದ ಕಾಮಗಾರಿಗಳು | | | | |
| 5 | Vijinapura Ward No. 51 (Old. No. 89) | ತಲಾ 90,000 | ತಲಾ 2,250 | 01 |
| 6 | Basavanapura Ward No. 92 (Old. No. 53) | ತಲಾ 90,000 | ತಲಾ 2,250 | 08 |
| ಪರಿಶಿಷ್ಟ ಜಾತಿಗೆ ಮೀಸಲಿರಿಸಿದ ಕಾಮಗಾರಿಗಳು | | | | |
| 7 | Basavanapura Ward No. 92 (Old. No. 53) | ತಲಾ 90,000 | ತಲಾ 1,125 | 03 |
| | | | ಒಟ್ಟು ಕಾಮಗಾರಿಗಳು | 19 |

1) ಟೆಂಡರ್ ಡಾಕ್ಯುಮೆಂಟ್‌ಗಳನ್ನು ಜಿಒಕೆ ಕೆಪಿಪಿ ಪೋರ್ಟಲ್ https://kppp.karnataka.gov.in ನಿಂದ ಡೌನ್‌ಲೋಡ್ ಮಾಡಿಕೊಳ್ಳಬಹುದು. 2) ಪ್ರಶ್ನೆಗಳನ್ನು ಸಲ್ಲಿಸಲು ಕೊನೆಯ ದಿನಾಂಕ: **12.08.2024 ರ ಸಂಜೆ 4.00 ಗಂಟೆಯವರೆಗೆ. 3)** ಟೆಂಡರ್‌ಗಳನ್ನು ಸ್ವೀಕರಿಸಲು ಕೊನೆಯ ದಿನಾಂಕ: **13.08.2024 ರ ಸಂಜೆ 4.00 ಗಂಟೆಯವರೆಗೆ. 5)** ಟೆಂಡರ್‌ಗಳನ್ನು ತೆರೆಯುವ ದಿನಾಂಕ: **14.08.2024 ರ ಸಂಜೆ 4.30 ಗಂಟೆಗೆ.** ಹೆಚ್ಚಿನ ಮಾಹಿತಿಗಾಗಿ ಮೇಲ್ಕಂಡ ಕಛೇರಿಯಲ್ಲಿ ಕಛೇರಿಯ ಸಮಯದಲ್ಲಿ ಹಾಗೂ ವೆಬ್‌ಸೈಟ್: www.kppp.karnataka.gov.in ನಲ್ಲಿ ಲಾಗಿನ್ ಮಾಡಿ ಪಡೆಯಬಹುದು.

ಸಹಿ/- ಕಾರ್ಯಪಾಲಕ ಅಭಿಯಂತರರು, ಕೆ.ಆರ್. ಪುರ ವಿಭಾಗ.

# 28 ಅಡಕೆ ಗಿಡಗಳನ್ನು ಕಡಿದ ದುಷ್ಕರ್ಮಿಗಳು

ಹುಳಿಯಾರು: ದುಷ್ಕರ್ಮಿಗಳು 4 ವರ್ಷದ 28 ಅಡಿಕೆ ಗಿಡಗಳನ್ನು ಕಡಿದಿರುವ ಘಟನೆ ಹುಳಿಯಾರು ಸಮೀಪದ ಬೆಳಗುಲಿ ಸರ್ವೆ ನಂಬರ್ 278/7 ರಲ್ಲಿ ಬುಧವಾರ ರಾತ್ರಿ ಜರುಗಿದೆ. ಹಂದನಕೆರೆ ಹೋಬಳಿಯ ಪಾಪನಕೋಣ ಗ್ರಾಮದ ರಂಗಲಕ್ಷ್ಮಮ್ಮ ಅವರಿಗೆ ಸೇರಿದ ಅಡಿಕೆ ಗಿಡಗಳಾಗಿದ್ದು ಇವರು ಬೆಳಗುಲಿ ಸರ್ವೆ ನಂಬರ್ 278/7 ರಲ್ಲಿನ 5 ಗುಂಟೆ ಜಮೀನಿನಲ್ಲಿ ತೆಂಗು ಮತ್ತು ಅಡಿಕೆ ಬೆಳೆ ಇಟ್ಟಿದ್ದರು. ಬುಧವಾರ ರಾತ್ರಿ ರಂಗಲಕ್ಷ್ಮಮ್ಮ ಊರಿನಲ್ಲಿ ಇಲ್ಲದ ಸಂದರ್ಬದಲ್ಲಿ ಈ ದುಷ್ಕೃತ್ಯ ಜರುಗಿದೆ. 4 ವರ್ಷಗಳಿಂದ ಕಷ್ಟಪಟ್ಟು ಬೆಳೆಸಿದ ಗಿಡಗಳನ್ನು ಕಡಿದಿರುವ ದುಷ್ಕರ್ಮಿಗಳನ್ನು ಪತ್ತೆಯಚ್ಚಿ ಆಗಿರುವ ನಷ್ಟ ಭರಿಸಿಕೊಡುವ ಜೊತೆಗೆ ಆರೋಪಿಗಳಿಗೆ ತಕ್ಷ ಶಿಕ್ಷೆ ನೀಡಬೇಕೆಂದು ಚಿಕ್ಕನಾಯಕನಹಳ್ಳಿ ಪೊಲೀಸರಲ್ಲಿ ರಂಗಲಕ್ಷ್ಮಮ್ಮ ದೂರು ನೀಡಿದ್ದಾರೆ.



# ಬೃಹತ್ ವಾಹನಗಳ ಸಂಚಾರ ನಿರ್ಬಂಧಿಸಿ ಜಿಲ್ಲಾಧಿಕಾರಿ ಆದೇಶ

**ಚಾಮರಾಜನಗರ:** ಮಳೆಯಿಂದ ಹಾನಿಗೊಳಗಾಗಿರುವ ಆಕಾಶಪಾಳ್ಯಂ ಮಾರ್ಗದ ರಸ್ತೆಯನ್ನು ದುರಸ್ಥಿಪಡಿಸುವ ಸಲುವಾಗಿ ಸಾರ್ವಜನಿಕರ ಸುರಕ್ಷತೆ ಹಿತದೃಷ್ಟಿಯಿಂದ ''ರಾಷ್ಟ್ರೀಯ ಹೆದ್ದಾರಿ 181 (ಊಟಿ-ಗೂಡಲೂರು) ರಸ್ತೆಯಲ್ಲಿ ಸಾರ್ವಜನಿಕರು/ಗ್ರಾಮಸ್ಥರಿಗೆ ಅನುಕೂಲವಾಗುವಂತೆ ಅಗತ್ಯ ವಸ್ತುಗಳ ಸಾಗಾಣಿಕೆ ವಾಹನಗಳು, ಅಗ್ನಿಶಾಮಕ ವಾಹನ, ಅಂಬುಲೆನ್ಸ್ ವಾಹನ, ರಾಜ್ಯ ಹಾಗೂ ಹೊರ ರಾಜ್ಯದ ಸಾರ್ವಜನಿಕ ವಾಹನಗಳಾದ ಸರ್ಕಾರಿ ಮತ್ತು ಖಾಸಗಿ ಬಸ್ ಗಳು, ಸರ್ಕಾರಿ/ಇತರೆ ಎಲ್ಲಾ ರೀತಿಯ ಲಘು ವಾಹನಗಳನ್ನು ಹೊರತುಪಡಿಸಿ, ಉಳಿದಂತೆ ಸದರಿ ರಸ್ತೆಯ ಮೂಲಕ ರಾಜ್ಯಕ್ಕೆ ಬರುವ ಹಾಗೂ ತಮಿಳುನಾಡು ರಾಜ್ಯಕ್ಕೆ ತೆರಳುವ ಎಲ್ಲಾ ರೀತಿಯ ಭಾರಿ ಸರಕು ಸಾಗಾಣಿಕೆ ವಾಹನಗಳ ಸಂಚಾರವನ್ನು ಆಗಸ್ಟ್ 4 ರವರೆಗೆ ತಾತ್ಕಾಲಿಕವಾಗಿ ನಿರ್ಬಂಧಿಸಿ ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಅವರು ಆದೇಶ ಹೊರಡಿಸಿದ್ದಾರೆ.

# ರಜೆ ಘೋಷಣೆ

**ಚಾಮರಾಜನಗರ:** ಕೃಷ್ಣರಾಜಸಾಗರ ಹಾಗೂ ಕಬಿನಿ ಜಲಾಶಯದಿಂದ ಕಾವೇರಿ ನದಿಗೆ ಅಧಿಕ ನೀರನ್ನು ಬಿಡಲಾಗಿರುವುದರಿಂದ ಕಾವೇರಿ ನದಿಯ ತಗ್ಗು ಪ್ರದೇಶಗಳ ಶಾಲಾ ಮಕ್ಕಳ ಸುರಕ್ಷತೆ ದೃಷ್ಟಿಯಿಂದ ಕೊಳ್ಳೇಗಾಲ ತಾಲೂಕಿನ ದಾಸನಪುರ, ಹರಳೆ, ಅಗ್ರಹಾರ, ಹಳೆಹಂಪಾಪುರ, ಹಳೆ ಅಣಗಳ್ಳಿ, ಮುಳ್ಳೂರು, ಯಡಕುರಿಯ ಗ್ರಾಮಗಳ ವ್ಯಾಪ್ತಿಯ ಅಂಗನವಾಡಿ, ಸರ್ಕಾರಿ, ಅನುದಾನಿತ, ಅನುದಾನ ರಹಿತ ಎಲ್ಲ ಶಾಲೆಗಳಿಗೆ ಆಗಸ್ಟ್ 2 ರಂದು ಸಹ ಜಿಲ್ಲಾಧಿಕಾರಿಗಳ ಸೂಚನೆ ಮೇರೆಗೆ ರಜೆ ಘೋಷಿಸಲಾಗಿದೆ ಎಂದು ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕರು ತಿಳಿಸಿದ್ದಾರೆ.

# ಜಲಂತ ಸಮಸ್ಯೆಗಳನ್ನು ಬಗೆಹರಿಸುವಂತೆ ಒತ್ತಾಯ

ಮಾಲೂರು: ಪಟ್ಟಣದ ವಾಸಿಗಳ ಜ್ವಲಂತ ಸಮಸ್ಯೆಗಳನ್ನು ಬಗೆಹರಿಸುವಂತೆ ಒತ್ತಾಯಿಸಿ ಕರ್ನಾಟಕದಲಿತ ಸಂಘರ್ಷ ಸಮಿತಿಯಜಿಲ್ಲಾ ಸಂಘಟನಾ ಸಂಚಾಲಕ ಚವ್ವೆನ ಹಳ್ಳಿ, ವಿಜಿ ರವರ ನೇತೃತ್ವದಲ್ಲಿ ಪುರಸಭಾಕಾರ್ಯಾಲಯದ ಮುಂದೆ ಪ್ರತಿಭಟಿಸಿ ತಸೀಲ್ದಾರ್ ಕೆ.ರಮೇಶ್‌ರವರ ಮೂಲಕ ಮುಖ್ಯಮಂತ್ರಿಗಳಿಗೆ ಮನವಿಯನ್ನು ಸಲ್ಲಿಸಲಾಯಿತು. ಪ್ರತಿಭಟನೆಯನ್ನು ಉದ್ದೇಶಿಸಿ ತಾಲೂಕು ಸಂಚಾಲಕ ಎಸ್ ಎಂ ವೆಂಕಟೇಶ್ ಮಾತನಾಡಿ. ಪಟ್ಟಣವೂ ದಿನದಿಂದ ದಿನಕ್ಕೆ ಬೆಳೆಯುತ್ತಿದ್ದು ಜನಸಂಖ್ಯೆಯುಅದಕ್ಕೆತಕ್ಕಂತೆಉ ಲ್ಬಣವಾಗುತ್ತಿದ್ದು. ಸಾಮಾನ್ಯ ವಾಸಿಗಳಿಗೆ ಮೂಲಭೂತ ಸಮಸ್ಯೆಗಳ ಕೊರತೆಯು ಹೆಚ್ಚಾಗುತ್ತಿದೆ. ರಸ್ತೆ ಮತ್ತು ಚರಂಡಿಗಳಲ್ಲಿ ಎಲ್ಲಂದರಲ್ಲಿಕಸದಉತ್ಪಾದನೆ ಹೆಚ್ಚಾಗುತ್ತಿದ್ದು. ಸ್ವಚ್ಛತೆಕಣ್ಮರೆಯಾಗಿದೆ. ಪಟ್ಟಣದಎಲ್ಲಾ ವಾರ್ಡುಗಳಲ್ಲೂ ಯು ಜಿ ಡಿ ಅಳವಡಿಕೆ ಅವೈಜ್ಞಾನಿಕವಾಗಿರಸ್ತೆಯಲ್ಲಿ ಕೊಳಚೆ ನೀರುಅರಿದುರೋಗ ರುಜುನಗಳಿಗೆ ಆಸ್ಪದವಾಗಿದೆ. ಪಟ್ಟಣದಲ್ಲಿ ವ್ಯರ್ಥವಾಗಿ ಹರಿಯುತ್ತಿರುವ ಕೊಳಚೆ ನೀರು ಮತ್ತು ತ್ಯಾಜ್ಯಗಳು ರಾಜ ಕಾಲುವೆಗಳ ಮೂಲಕಮಾಲೂರುದೊಡ್ಡಕೆರೆ ಸೇರುತ್ತಿದೆ. ಬೀದಿ ದೀಪಗಳ ಅಳವಾಡಿಕೆಯುಅಧಿಕಾರಿಗಳು ಮತ್ತುಗುತ್ತಿಗೆದಾರರ ನಿರ್ಲಕ್ಷ್ಯೆಯಾಗಿ ಕೆಲವು ಕಡೆಕತ್ತಲು ಮಯವಾಗಿದೆ, ಪಟ್ಟಣದಲ್ಲಿ ಬೀದಿ ನಾಯಿಗಳ ಹಟ್ಟಹಾಸ ಹೆಚ್ಚಾಗಿದ್ದರು ಅಧಿಕಾರಿಗಳು ಯಾವುದೇರೀತಿತಲೆ ಕೆಡಿಸಿಕೊಳ್ಳುತ್ತಿಲ್ಲ.ಸರ್ಕಾರಿ ಮತ್ತು ಖಾಸಗಿ ಲೇಔಟ್ ಗಳಲ್ಲಿ ಸಿ ಎ ಸೈಟುಗಳನ್ನು ಅಕ್ರಮವಾಗಿಖಾಸಗಿಯವರ ಪಾಲಾಗುತ್ತಿದೆ ಬದಲಾವಣೆಗಳಲ್ಲಿ ಉದ್ಯಾನವನ ಮತ್ತು ಸಿ ಎ ನಿವೇಶನಗಳನ್ನು ಉಳಿಸಬೇಕು ರಾಜ ಕಾಲುವೆ ಮತ್ತು ರಸ್ತೆಗಳನ್ನು ಉಳಿಸಿ ಖಾಸಗಿ ಯವರುಒತ್ತುವರಿಮಾಡಿಕೊಂಡಿರುವ ಪುರಸಭೆಯ ಆಸ್ತಿಗಳನ್ನು ಉಳಿಸಿ ಅಕ್ರಮವಾಗಿ ನಿರ್ಮಾಣ ಮಾಡುತ್ತಿರುವ ಕಟ್ಟಡಗಳನ್ನು ತೆರುವುಗೊಳಿಸಿ ಬೇಕು. ಪುರಸಭೆಯಅನುಮತಿಇಲ್ಲದೇಆರು- ಏಳು ಅಂತಸ್ತಿನ ಮಹಡಿಗಳನ್ನು ನಿರ್ಮಿಸುತ್ತಿರುವ ಮಾಲೀಕರ ವಿರುದ್ಧ ಕಾನೂನು ರೀತಿಯಕ್ರಮಕ್ಕೈಗೊಂಡುತಡೆಗಟ್ಟಬೇಕು. ಅಕ್ರಮವಾಗಿ ನಡೆಯುತ್ತಿರುವ ಇ -ಖಾತೆಗಳನ್ನು ತಡೆದು ಅನುಕೂಲ ಕಳುಹಿಸಬೇಕೆಂದು ಒತ್ತಾಯಿಸಿದರು. ಈ ಸಂದರ್ಭದಲ್ಲಿ ಸಂಘಟಿಕರಾದ ಡಿ ಎನ್ ನಾರಾಯಣಸ್ವಾಮಿ, ಎಚ್ ವೈ ವೆಂಕಟೇಶಪ್ಪ, ಅಂಬರೀಶ್, ಕೃಷ್ಣಪ್ಪ, ನೀಲಕಂಠಅಗ್ರಹಾರ ಶಾಮಣ್ಣ, ತಿರುಮಲೇಶ್ಇತರರು ಉಪಸ್ಥಿತರಿದ್ದರು.

# ಮಗುವಿನ ಉಜ್ವಲ ಭವಿಷ್ಯಕ್ಕೆ ತಾಯಿಯ ಹಾಲು ಅತ್ಯುತ್ತಮ

**ತುಮಕೂರು:** ಪ್ರತಿಯೊಬ್ಬ ತಾಯಿಯ ಎದೆಹಾಲಿನಲ್ಲಿ ಶಿಶುವಿನ ಸದೃಢ ಬೆಳವಣಿಗೆಗೆ ಪೂರಕವಾದ ಅಂಶಗಳು ಅಡಕವಾಗಿರುತ್ತವೆ ಹಾಗೂ ತಾಯಿಯ ಎದೆಹಾಲಿನಲ್ಲಿ ಮಗುವಿಗೆ ಬೇಕಾದ ಎಲ್ಲಾ ಅಗತ್ಯ ಪೌಷ್ಟಿಕಾಂಶಗಳು ದೊರೆಯುತ್ತವೆ. ಮಗುವಿನ ಉಜ್ವಲ ಭವಿಷ್ಯಕ್ಕೆ ತಾಯಿಯ ಎದೆಹಾಲು ಅತ್ಯುತ್ತಮವಾಗಿದೆ. ಆದ್ದರಿಂದ ಎಲ್ಲ ಮಕ್ಕಳಿಗೂ ಎದೆಹಾಲು ನೀಡುವುದು ಅಗತ್ಯ ಎಂದು ತುಮಕೂರಿನ ಶಾಸಕರಾದ ಜಿ.ಬಿ.ಜ್ಯೋತಿಗಣೇಶ್‌ರವರು ಜಾಥಾಗೆ ಚಾಲನೆ ನೀಡಿ ಮಾತನಾಡಿದರು.

ತುಮಕೂರಿನ ಅಮರಜ್ಯೋತಿ ನಗರದ ಶ್ರೀದೇವಿ ನಗರ ಆರೋಗ್ಯ ತರಬೇತಿ ಕೇಂದ್ರದ ವತಿಯಿಂದ ಆಗಸ್ಟ್ 1 ರಂದು ಗುರುವಾರ ಬೆಳಿಗ್ಗೆ 9 ಗಂಟೆಗೆ ಶ್ರೀದೇವಿ ನಗರ ಆರೋಗ್ಯ ತರಬೇತಿ ಕೇಂದ್ರದಿಂದ ಕುರಿಪಾಳ್ಯದವರಿಗೆ ಜಾಗೃತಿ ಜಾಥಾವನ್ನು ಹಮ್ಮಿಕೊಳ್ಳಲಾಗಿತ್ತು. ಸಮುದಾಯ ವೈದ್ಯಕೀಯ ವಿಭಾಗ, ಸ್ತ್ರೀರೋಗ ಮತ್ತು ಪ್ರಸ್ತೂತಿ ವಿಭಾಗ, ಮಕ್ಕಳ ಚಿಕಿತ್ಸಾ ವಿಭಾಗ, ಆಹಾರ ವಿಭಾಗದ ಇವರುಗಳ ಸಂಯುಕ್ತಾಶ್ರಯದಲ್ಲಿ ಸ್ತನ್ಯಪಾನ ಸಪ್ತಾಹದ ಅಂಗವಾಗಿ ಮೊದಲ ದಿನದ ಜಾಥಾ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು.



ಕಾರ್ಯಕ್ರಮದಲ್ಲಿ ಶ್ರೀದೇವಿ ಸಮುದಾಯ ವೈದ್ಯಕೀಯ ವಿಭಾಗದ ಸಹಾಯಕ ಪ್ರಾಧ್ಯಾಪಕರು ಹಾಗೂ ತುಮಕೂರಿನ ಐ.ಎಂ.ಎ. ಶಾಖೆಯ ಅಧ್ಯಕ್ಷರಾದ ಡಾ.ರಂಗಸ್ವಾಮಿ.ಹೆಚ್ .ವಿ.ರವರು ಮಾತನಾಡುತ್ತಾ ಈ ವರ್ಷದ 2024ರ ''ಘೋಷ ವಾಕ್ಯವಾದ ''ಕೊರತೆಗಳನ್ನು ಕೊನೆಗೊಳಿಸಿ ಸರ್ವರಿಗೂ ಸ್ತನ್ಯಪಾನದ ಬೆಂಬಲ ನೀಡಿ'' ಎಂದು ವಿವರಿಸುತ್ತಾ, ಮಗುವಿನ ಸರ್ವತೋಮುಖ ಬೆಳವಣಿಗೆಗೆ ತಾಯಿಯ ಎದೆಹಾಲು ಪೂರಕವಾಗಿರುತ್ತದೆ. ಮಗು ಜನಿಸಿದ ಗಂಟೆಯೊಳಗೆ ಎದೆ ಹಾಲನ್ನ ಉಣಿಸಬೇಕು. ಮಗುವಿಗೆ ತಾಯಿ ಎದೆ ಹಾಲು ನೀಡುವುದು ಪ್ರತಿ ತಾಯಿಯ ಜವಬ್ದಾರಿಯಾಗಿರುತ್ತದೆ. ಅವರ ಕುಟುಂಬ, ಆರೋಗ್ಯ, ಕಾರ್ಯಕರ್ತರು, ಸಹದ್ಯೋಗಿಗಳು, ಮೇಲಾಧಿಕಾರಿಗಳು ಹಾಗೂ ಸಂಪೂರ್ಣ ಸಮುದಾಯದ ಜವಬ್ದಾರಿಯಾಗಿರುತ್ತದೆ.

ಇದೇ ಸಂದರ್ಭದಲ್ಲಿ ಶ್ರೀದೇವಿ ವೈದ್ಯಕೀಯ ಮಹಾವಿದ್ಯಾಲಯದ ಉಪಪ್ರಾಂಶುಪಾಲರಾದ ಡಾ.ರೇಖಾಗುರುಮೂರ್ತಿರವರು ಮಾತನಾಡುತ್ತಾ ಮಗುವಿನ ಆರೋಗ್ಯ ಸುಧಾರಣೆಗೆ ತಾಯಿಯ ಎದೆಹಾಲು ತುಂಬಾ ಶ್ರೇಷ್ಠಕರವಾಗಿದ್ದು, ತಾಯಿಯ ಎದೆಹಾಲನ್ನು ಕಡ್ಡಾಯವಾಗಿ ಮಗುವಿಗೆ ಕೊಡುವುದರಿಂದ ಮಗುವಿನಲ್ಲಿ ರೋಗ ನಿರೋಧಕ ಶಕ್ತಿ ಹೆಚ್ಚಾಗುವುದರೊಂದಿಗೆ ಮಾನಸಿಕವಾಗಿ ಸದೃಢತೆ ಪಡೆದು ಭವಿಷ್ಯದ ಸಮಾಜವನ್ನು ನಿರ್ಮಾಣ ಮಾಡಲು ಎಲ್ಲರೂ ಸಹಕರಿಸಬೇಕು ಎಂದು ಕರೆ ನೀಡಿದರು. ಶ್ರೀದೇವಿ ಚಾರಿಟಬಲ್ ಟ್ರಸ್ಟ್‌ನ ಟ್ರಸ್ಟಿಯಾದ ಅಂಬಿಕಾ ಎಂ ಹುಲಿನಾಯ್ಕರ್‌ರವರು ಮಾತನಾಡುತ್ತಾ ಪ್ರತಿಯೊಬ್ಬ ತಾಯಿಯೂ ತನ್ನ ಮಗುವಿಗೆ ಎದೆಹಾಲನ್ನು ಉಣಿಸುವ ಮೂಲಕ ಆರೋಗ್ಯವಂತ ಪ್ರಜೆಯನ್ನಾಗಿ ರೂಪಿಸಬೇಕು ಹಾಗೂ ಎದೆಹಾಲಿನ ಮಹತ್ವ ಮತ್ತು ತಾಯಂದಿರು ಅನುಸರಿಸಬೇಕಾದ ಕ್ರಮಗಳ ಬಗ್ಗೆ ಸ್ವವಿಸ್ತಾರವಾಗಿ ತಿಳಿಸಿಕೊಟ್ಟರು.

ಶ್ರೀದೇವಿ ವಿಧಿವಿಜ್ಞಾನ ಶಾಸ್ತ್ರದ ವಿಭಾಗದ ಮುಖ್ಯಸ್ಥರಾದ ಡಾ.ಎಂ.ಎಲ್.ಹೇಮಂತ್‌ರಾಜ್, ಶ್ರೀದೇವಿ ಸಮುದಾಯ ವೈದ್ಯಕೀಯ ವಿಭಾಗದ ಮುಖ್ಯಸ್ಥರಾದ ಡಾ.ಪಿ.ಎಂ. ರವೀಶ್, ಡಾ.ಸೌಂದರ್ಯ, ಶ್ರೀದೇವಿ ಆಸ್ಪತ್ರೆಯ ಸ್ತ್ರೀರೋಗ ಮತ್ತು ಪ್ರಸ್ತೂತಿ ವಿಭಾಗ ವೈದ್ಯರಾದ ಡಾ.ಸಬಾ, ಶ್ರೀದೇವಿ ಆಸ್ಪತ್ರೆಯ ಮಕ್ಕಳ ಚಿಕಿತ್ಸಾ ವಿಭಾಗದ ಮುಖ್ಯಸ್ಥರಾದ ಡಾ.ಪಲ್ಲವಿ, ಡಾ.ಶ್ರೀಲಶ್ರೀ, ಡಾ.ಕಾರ್ತಿಕ್, ಡಾ.ಈಶ್ವರಯ್ಯ, ಡಾ.ನಾರಾಯಣಸ್ವಾಮಿ ಶ್ರೀದೇವಿ ನಗರ ಆರೋಗ್ಯ ತರಬೇತಿ ಕೇಂದ್ರದ ವೈದ್ಯರಾದ ಡಾ.ಕೃಷ್ಣಯ್ಯ ಸಿಬ್ಬಂದಿ ವರ್ಗದವರು, ಶ್ರೀದೇವಿ ನರ್ಸಿಂಗ್, ಶ್ರೀದೇವಿ ರಮಣ ಮಹರ್ಷಿ ನರ್ಸಿಂಗ್ ಕಾಲೇಜಿನ ವಿದ್ಯಾರ್ಥಿಗಳು ಹಾಗೂ ವಿವಿಧ ವಿಭಾಗದ ಮುಖ್ಯಸ್ಥರು, ಸಿಬ್ಬಂದಿ ವರ್ಗದವರು ಮತ್ತು ವಿದ್ಯಾರ್ಥಿ ವಿದ್ಯಾರ್ಥಿನಿಯರು ಭಾಗವಹಿಸಿದ್ದರು.

### ಜಿಲ್ಲಾಧಿಕಾರಿ ಪಿ.ಎನ್ ರವೀಂದ್ರ ಸಲಹೆ

# ವ್ಯಸನ ಮುಕ್ತ ಸಮಾಜ ನಿರ್ಮಿಸಿ

**ಚಿಕ್ಕಬಳ್ಳಾಪುರ:** ಮಾನವನ ಜೀವನವು ಬಹು ದೊಡ್ಡದು ಅದನ್ನು ದುಷ್ಚಟಗಳಿಗೆ ಅಥವಾ ವ್ಯಸನಗಳಿಗೆ ದಾಸರಾಗಿ ಯಾರೊಬ್ಬರೂ ಜೀವನವನ್ನು ಹಾಳುಮಾಡಿಕೊಳ್ಳಬೇಡಿ ಎಂದು ಜಿಲ್ಲಾಧಿಕಾರಿ ಪಿ.ಎನ್ ರವೀಂದ್ರ ತಿಳಿಸಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಕರ್ನಾಟಕ ರಾಜ್ಯ ಮದ್ಯಪಾನ ಸಂಯಮ ಮಂಡಳಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಕಾರ್ಮಿಕ ಇಲಾಖೆ ಮತ್ತು ಟೈಟಾನ್ ಕಂಪನಿ ಲಿಮಿಟಿಡ್ ಅವರ ಸಂಯುಕ್ತಾಶ್ರಯದಲ್ಲಿ ''ಡಾ.ಮಹಾಂತ ಶಿವಯೋಗಿಗಳ ಜನ್ಮ ದಿನದ ಅಂಗವಾಗಿ ನಗರದ ಹೊರ ವಲಯದ ಟೈಟಾನ್ ಕಂಪನಿ ಲಿಮಿಟಿಡ್ ಸಂಸ್ಥೆಯಲ್ಲಿ ಆಯೋಜಿಸಿದ್ದ ವ್ಯಸನಮುಕ್ತ ದಿನಾಚರಣೆ''ಯ ಜಿಲ್ಲಾ ಮಟ್ಟದ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಮಾದಕ ಮತ್ತು ಮದ್ಯಪಾನ ಸೇರಿದಂತೆ ಇತರ ಕೆಟ್ಟ ವ್ಯಸನಗಳಿಗೆ ದಾಸರಾಗಲು ಯಾರು ಕಾರಣರಲ್ಲನೀವೇಕಾರಣರಾಗುವಿರಿ. ಯಾವುದೊ ಕೆಟ್ಟ ಪ್ರಲೋಭನೆಗಳಿಗೆ, ಸಹವಾಸ ದೋಷದಿಂದ ಅನಾರೋಗ್ಯಕರ ಕುತೂಹಲಗಳಿಗೆ ಮನಸು ನೀಡಿ ವ್ಯಸನಗಳಿಗೆ ಬಲಿಯಾಗುತ್ತಿರುವುದು ಕಂಡುಬರುತ್ತಿದೆ.ಅದರ ಪರಿಣಾಮವು ವಯಸ್ಸಾದಂತೆ ದೈಹಿಕ ಮತ್ತು ಮಾನಸಿಕ ರೋಗಗಳಿಗೆ ತುತ್ತಾಗಬೇಕಾಗುತ್ತದೆ. ಕೆಲವೊಮ್ಮೆ ಮಾರಣಾಂತಿಕ ಕಾಯಿಲೆಗೂ ಒಳಗಾಗುವುದು ಕಾಣುತ್ತಿದ್ದೇವೆ ಇಂತಹ ಘಟನೆಯನ್ನ ಗಮನಿಸಿದ ಡಾ. ಮಹಾಂತಾ ಶಿವಯೋಗಿ ಅಜ್ಜನವರು ಜಿಲ್ಲಾ ಆರೋಗ್ಯಧಿಕಾರಿ ಡಾ. ಎಸ್. ಎಸ್. ಮಹೇಶ್ ಕುಮಾರ್ ಅವರು ಮಾತನಾಡಿ ಬಾಗಲಕೋಟೆಯ ಜಮಖಂಡಿ ತಾಲೂಕಿನ ಹಿಪ್ಪರಗಿ ಗ್ರಾಮದಲ್ಲಿ ಆಗಸ್ಟ್ 1, 1930ರಲ್ಲಿ ಜನಿಸಿದ ಡಾ.ಮಹಾಂತ ಶಿವಯೋಗಿಗಳು ತಮ್ಮ 10ನೇ ವಯಸ್ಸಿಗೆ ಸವದಿಯ ವಿರಕ್ತಮಠದ ಕಿರಿಯ ಸ್ವಾಮೀಜಿಗಳಾದರು. ವ್ಯಸನ ಮುಕ್ತ ಸಮಾಜ ನಿರ್ಮಾಣಕ್ಕೆ ಅವಿರತವಾಗಿ ಶ್ರಮಿಸಿದ ಅವರು ಜನರಲ್ಲಿನ ದುಷ್ಚಟಗಳನ್ನೇ ತಮ್ಮ ಜೋಳಿಗೆಯಲ್ಲಿ ಭಿಕ್ಷೆಯ ರೂಪದಲ್ಲಿ ಸಂಗ್ರಹಿಸಿದ ಮಹಾನ್ ಯೋಗಿಗಳ ಆಗಸ್ಟ್01ರ ಜನ್ಮದಿನವನ್ನು ವ್ಯಸನಮುಕ್ತ ದಿನಾಚರಣೆಯನ್ನಾಗಿ ರಾಜ್ಯಾದ್ಯಂತ ಆಚರಿಸಲಾಗುತ್ತಿದೆ ಎಂದರು

ಅವರ ಸಾಧನೆ ಅಪಾರವಾದುದು ಎಂದರು.

ಜಿಲ್ಲಾ ಮಾನಸಿಕ ಆರೋಗ್ಯ ಮನೋವೈದ್ಯರಾದ ಡಾ.ಜಿ. ಹೇಮಂತ್ ಕುಮಾರ್ ಮಾತನಾಡಿ, ತಂಬಾಕು,ಮಾದಕ ಹಾಗೂ ಮದ್ಯ ವ್ಯಸನದ ದುಷ್ಚಟಗಳ ಅಡ್ಡ ಪರಿಣಾಮಗಳ ಬಗ್ಗೆ ಶಕ್ತಿ ಬಿಂದು ಪ್ರದರ್ಶನ (ಶಿಶಿಣ)ನೀಡಿ ಕಾರ್ಮಿಕರು ಹಾಗೂ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಿದರು. ಯಾವುದೇ ವ್ಯಕ್ತಿಗಳು ವ್ಯಸನಗಳಿಗೆ ಒಳಗಾಗಿ ಅನಾರೋಗ್ಯ ಪೀಡಿತರಾಗಿದ್ದಲ್ಲಿ ಟೆಲಿಮಾನಸ್ ಸಹಾಯವಾಣಿ 14416 ನ್ನು ಸಂಪರ್ಕಿಸಿ ಚಿಕಿತ್ಸೆಯನ್ನು ಪಡೆದುಕೊಳ್ಳಬಹುದು ಅಥವಾ ಅಂತಹ ರೋಗಿಗಳು ತಮ್ಮ ಕುಟುಂಬಗಳಲ್ಲಿ ಅಥವಾ ಸುತ್ತ ಮುತ್ತಲ ಸಮಾಜದಲ್ಲಿ ಕಂಡು ಬಂದರೆ ಕರೆ ಮಾಡಿ ಸಾಮಾಜಿಕ ಜವಾಬ್ದಾರಿ ಮೆರೆಯಿರಿ ಎಂದು ಮನವಿ ಮಾಡಿದರು.

ಜಿಲ್ಲಾ ನೌಕರರ ಸಂಘದ ಅಧ್ಯಕ್ಷ ಹರೀಶ್ ,ಜಿಲ್ಲಾ ಕಾರ್ಮಿಕ ಅಧಿಕಾರಿ ಶಭಾನ ಅಜ್ಮಿ, ಉಪ ಪೊಲೀಸ್ ವರಿಷ್ಠಾಧಿಕಾರಿ ಮಂಜುನಾಥ್, ಟೈಟಾನ್ ಕಂಪನಿ ಲಿಮಿಟೆಡ್ ಕಾರ್ಖಾನೆಯ ಮುಖ್ಯಸ್ಥರು ಸುಬ್ರತ ಕುಮಾರ್ ಭದ್ರ, ಟೈಟಾನ್ ಕಂಪನಿ ಲಿಮಿಟೆಡ್ ನ ವ್ಯವಸ್ಥಾಪಕ ಎಂ. ಪ್ರತಾಬನ್, ಟೈಟಾನ್ ಕಂಪನಿ ಲಿಮಿಟೆಡ್ ರಾಜಶೇಖರ್ ಜಾಥಾ ಕಾರ್ಯಕ್ರಮಕ್ಕೆ ಸರ್ಕಾರಿ ಪದವಿ ಪೂರ್ವ ಕಾಲೇಜು ಪ್ರಾಂಶುಪಾಲರಾದ ಸುರೇಶ್,ಉಪನ್ಯಾಸಕರಾದ ಸತೀಶ್ ಕುಮಾರ್, ಸರ್ಕಾರಿ ಪ್ರೌಢ ಶಾಲೆಯ ಶಿಕ್ಷಕರಾದ ಶಿವಕುಮಾರ್ ಇತತರು ಹಸಿರು ನಿಶಾನೆ ತೋರಿಸಿ ಚಾಲನೆ ನೀಡಿದರು.



### ಶಿವಯೋಗಿಗಳ ಭಾವಚಿತ್ರಕ್ಕೆ ಪುಷ್ಪ ನಮನ

**''ಮದ್ಯಪಾನ, ಮಾದಕ ವಸ್ತು, ತಂಬಾಕು ವಸ್ತುಗಳ ಸೇವನೆಯು ನನಗೆ ಮತ್ತು ಮಾನವ ಸಮಾಜಕ್ಕೆ ಮಾರಕವೆಂದು ಇದರಿಂದ ಮಾನವನ ದೇಹವಲ್ಲದೇ ಮನಸ್ಸು ಮತ್ತು ಸ್ವಾಸ್ಥ್ಯ ಸಮಾಜಕ್ಕೆ ಅನಾರೋಗ್ಯ ಪೀಡಿತವಾಗುತ್ತಿರುವುದು ಮತ್ತು ಗ್ರಾಮೀಣ ಹಾಗೂ ನಗರ ಪ್ರದೇಶದ ಯುವಜನತೆ ಇದರ ದಾಸ್ಯಕ್ಕೆ ಒಳಗಾಗುತ್ತಿರುವುದು ತಿಳಿದಿದೆ. ಇದರಿಂದ ಮಾನವನ ಆರ್ಥಿಕ, ಸಾಮಾಜಿಕ ಸ್ಥಿತಿ ಅಧೋಗತಿಗೆ ಇಳಿಯುತ್ತದೆ. ಆದ್ದರಿಂದ ಪೂಜ್ಯ ಶ್ರೀ ಮ. ನಿ. ಪ್ರ ಡಾ. ಮಹಾಂತ ಶಿವಯೋಗಿ ಸ್ವಾಮೀಜಿಗಳ ಜನ್ಮ ದಿನದ ಈ ಶುಭ ದಿನದಂದು ನಾನು ಮದ್ಯಪಾನ, ಮಾದಕ ವಸ್ತು, ತಂಬಾಕು ವಸ್ತುಗಳನ್ನು ತ್ಯಜಿಸುತ್ತೇನೆ ಹಾಗೂ ಇನ್ನೆಂದಿಗೂ ಮುಟ್ಟುವುದಿಲ್ಲ ಹಾಗೂ ನನ್ನ ನೆರೆಹೊರೆಯವರಿಗೆ, ಬಂಧುಭಾಂದವರಿಗೆ, ಸ್ನೇಹಿತರಿಗೆ ಈ ಬಗ್ಗೆ ತಿಳುವಳಿಕೆ ನೀಡುತ್ತೇನೆ ಎಂದು ಪ್ರಮಾಣ ಮಾಡುತ್ತೇನೆ ಎಂದು ಬೋಧಿಸಲಾಯಿತು.ಶಿವಯೋಗಿಗಳ ಭಾವಚಿತ್ರಕ್ಕೆ ಗಣ್ಯರು ಪುಷ್ಪ ನಮನ ಮಾಡಿ ಗೌರವ ಸಮರ್ಪಣೆ ಮಾಡಿದರು. ಕಾರ್ಯಕ್ರಮದ ಅಂಗವಾಗಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ವತಿಯಿಂದ ಉಚಿತ ಅರೋಗ್ಯ ತಪಾಸಣಾ ಶಿಬಿರ ಏರ್ಪಡಿಸಿ ರಕ್ತದ ಒತ್ತಡ,ಮಧುಮೇಹ, ಕುಷ್ಠರೋಗ, ಡೆಂಗ್ಯೂ ಜ್ವರ, ಕಣ್ಣಿನ ತಪಾಸಣೆ ಸೇರಿದಂತೆ ಇತರ ರೋಗಗಳ ತಪಾಸಣೆಗಳನ್ನು ನಡೆಸಲಾಯಿತು.ತಪಾಸಣಾ ಶಿಬಿರದಲ್ಲಿ ಸಾರ್ವಜನಿಕರು,ಕಾರ್ಮಿಕರು ಹಾಗೂ ಜಿಲ್ಲಾಧಿಕಾರಿ ಪಿ.ಎನ್ ರವೀಂದ್ರ ಅವರು ಆರೋಗ್ಯ ತಪಾಸಣೆ ಮಾಡಿಸಿಕೊಂಡರು.**

# ಕೆ.ಜೆ.ಯೇಸುದಾಸ್ ಗೀತೆಗಳು ಸರ್ವಕಾಲಕ್ಕೂ ಪ್ರಸ್ತುತ

**ಮೈಸೂರು:** ನಗರದ ಡಾ.ರಾಜ್‌ಕುಮಾರ್ ಮ್ಯೂಸಿಕಲ್ ಗ್ರೂಪ್ ವತಿಯಿಂದ ಇದೇ ಪ್ರಥಮ ಬಾರಿಗೆ ಮೈಸೂರು ಜಯರಾಂ ಸಾರಥ್ಯದಲ್ಲಿ ದಕ್ಷಿಣ ಭಾರತದ ಹೆಸರಾಂತ ಹಿನ್ನೆಲೆ ಗಾಯಕರಾದ ಕೆ.ಜೆ.ಯೇಸುದಾಸ್ ಅವರು ಹಾಡಿರುವ 'ಅಗೋ ಬಂದನು' ಶೀರ್ಷಿಕೆಯಡಿಯಲ್ಲಿ ಪ್ರಸಿದ್ಧ ಕನ್ನಡ ಹಾಗೂ ಕೆಲವು ಹಿಂದಿ ಮತ್ತು ತಮಿಳು ಗೀತೆಗಳನ್ನು ತಂಡದ ಕಲಾವಿದರು ಪ್ರಸ್ತುತಪಡಿಸಿದರು.

ಕಾರ್ಯಕ್ರಮಕ್ಕೆ ಜ್ಯೋತಿ ಬೆಳಗಿಸುವ ಮೂಲಕ ಚಾಲನೆ ಕೊಟ್ಟ ಜೆಎಸ್‌ಎಸ್ ಸಮೂಹ ಸಂಸ್ಥೆಗಳ ಮುಖ್ಯಸ್ಥರಾದ ಯೋಗಾತ್ಮ ಡಿ.ಶ್ರೀಹರಿ ಅವರು ಮಾತನಾಡಿ, ಮೈಸೂರು ಜಯರಾಂ ಸ್ವತಃ ಕೆ.ಜೆ.ಯೇಸುದಾಸ್ ಅವರನ್ನು ಕರೆದುಕೊಂಡು ಬಂದಿದ್ದಾರೇನೋ ಎನ್ನುವಷ್ಟರಮಟ್ಟಿಗೆ ಕಾರ್ಯಕ್ರಮವನ್ನು ಆಯೋಜಿಸಿರುವುದು ಸ್ವಾಗತಾರ್ಹ ಸಂಗತಿ. ಇಡೀ ನಮ್ಮ ಭಾರತ ದೇಶ ಎಲ್ಲೋ ಒಂದು ಜಾತಿ, ಧರ್ಮಗಳ ಕಡೆ ಒಡೆದು ಹೋಗುತ್ತಿದ್ದರೆ ಅವೆಲ್ಲವನ್ನೂ ಒಂದು ಮಾಡಿದ ಮಹಾನ್ ಗಾಯಕ ಯೇಸುದಾಸ್. ಕಳೆದ 30 ವರ್ಷಗಳಿಂದ ಶಬರಿ ಮಲೈನಲ್ಲಿ ರಾತ್ರಿ ದೇವರನ್ನು ಮಲಗಿಸಬೇಕಾದರೆ ಇವರು ಹಾಡಿರುವ 'ಹರಿವಾಸನಂ' ಹಾಡು ಹಾಕುವುದು ವಾಡಿಕೆ. ಯಾವುದೇ ಗರ್ವ ಇಲ್ಲದೇ, ಕಪಟ ಇಲ್ಲದೇ ಮಹಾನ್ ತಪಸ್ವಿ, ಯೋಗಿ ಯೇಸುದಾಸ್ ಎಂದು ತಿಳಿಸಿದರು. ವೇದಿಕೆಯಲ್ಲಿ ಮತ್ತೊಬ್ಬ ಮುಖ್ಯ ಅತಿಥಿಯಾಗಿ ಆಗಮಿಸಿದ್ದ ಕಾಳಿದಾಸ ರಸ್ತೆಯಲ್ಲಿರುವ ಶ್ರೀ ಲಕ್ಷ್ಮೀನರಸಿಂಹಸ್ವಾಮಿ ದೇವಸ್ಥಾನದ ಮುಖ್ಯಸ್ಥ ಕೆ.ಆರ್.ಯೋಗಾನರಸಿಂಹನ್ (ಮುರುಳಿ ಅಯ್ಯಂಗಾರ್) ತಮ್ಮ ಪ್ರಾಸ್ತಾವಿಕ ನುಡಿಯಲ್ಲಿ ಯೇಸುದಾಸ್‌ಗೆ ಈಗ 84 ವರ್ಷ ಅವರನ್ನು ಮೈಸೂರಿಗೆ ಮೈಸೂರು ಜಯರಾಂ ಕರೆದಿದ್ದಾರೆ. ಯೇಸುದಾಸ್ ಅವರು ಪ್ರತಿಯೊಂದು ಹಾಡುಗಳು ಎಂದೆಂದಿಗೂ ಅಚ್ಚ ಹಸಿರಾಗಿವೆ. ಒಂದೊಂದು ಹಾಡುಗಳೂ ಮನುಷ್ಯನ ಮೇಲೆ ಎಷ್ಟೊಂದು ಪ್ರಭಾವ ಬೀರುತ್ತದೆ ಎನ್ನುವುದು ವರ್ಣಿಸಿಕ್ಕಸಾಧ್ಯ. ನಮ್ಮ ಸಂಗೀತ ಲೋಕಕ್ಕೆ ಅಪಾರ ಕೊಡುಗೆ ಕೊಟ್ಟಿರುವ ಸ್ಥಳ ಎಂದರೆ ಸಾಂಸ್ಕೃತಿಕ ನಗರಿ ಮೈಸೂರು ಎಂದು ಅವರು ಅಭಿಪ್ರಾಯಿಸಿದರು. ಕಾರ್ಯಕ್ರಮಕ್ಕೆ ಮತ್ತೊಬ್ಬ ಅತಿಥಿಯಾಗಿ ಕಲಾಪೋಷಕ ಮೋಹನ್‌ಲಾಲ್ ಜೈನ್ ಅವರು ಆಗಮಿಸಿದ್ದರು.

ವೇದಿಕೆ ಕಾರ್ಯಕ್ರಮದ ನಂತರ ನಡೆದ ಕೆ.ಜೆ.ಯೇಸುದಾಸ್ ಸಂಗೀತ ಸಂಜೆ ಕಾರ್ಯಕ್ರಮದಲ್ಲಿ ಗೋಪಿ ಕೃಷ್ಣ ಚಿತ್ರದ 'ಓಹೋ ವಸಂತ' ಗೀತೆಯನ್ನು ಮೈಸೂರು ಜಯರಾಂ ಹಾಗೂ ತೇಜಸ್ವಿನಿ ಸುಮಧುರವಾಗಿ ಹಾಡಿದರೆ, ಮಲಯ ಮಾರುತ ಚಿತ್ರದ 'ಎಲ್ಲಲ್ಲೂ ಸಂಗೀತವೇ' ಹಾಡನ್ನು ಮಹೇಂದ್ರ ಸುಶ್ರಾವ್ಯವಾಗಿ ಪ್ರಸ್ತುತಪಡಿಸಿದರು. ನಂತರ ಮನೆಯೇ ಮಂತ್ರಾಲಯ ಚಿತ್ರದ ಶೀರ್ಷಿಕೆ ಗೀತೆಯನ್ನು ಚಂದ್ರಶೇಖರ್ ಹಾಗೂ ಶಶಿಕಲಾ ಭಕ್ತಿಪೂರ್ವಕವಾಗಿ ಹಾಡಿದರು. ಇದಾದ ನಂತರ ಗುರುಬ್ರಹ್ಮ ಚಿತ್ರದ 'ದೀಪ ದೀಪ ದೀಪ' ಗೀತೆಯನ್ನು ಮೈಸೂರು ಜಯರಾಂ ಜೊತೆಗೂಡಿ ಜೆನಿಫರ್ ಧ್ವನಿಯಿಂದ ಮೂಡಿಬಂತು. ಸುಮಾರು 35ಕ್ಕೂ ಅಧಿಕ ಕೆ.ಜೆ.ಯೇಸುದಾಸ್ ಅವರು ಹಾಡಿದ ಗೀತೆಗಳನ್ನು ಮೂರು ಗಂಟೆಗೂ ಹೆಚ್ಚು ಕಾಲ ಮಳೆಯ ಸಿಂಚನದ ನಡುವೆಯೂ ಪ್ರಸ್ತುತಪಡಿಸಲಾಯಿತು.



# ಟೇಕಲ್‌ನ ಕೆ.ಜಿ.ಹಳ್ಳಿಯ ಸರ್ಕಾರಿ ಗೋಮಾಳ ಒತ್ತುವರಿ ಸಂರಕ್ಷಿಸಿ

**ಟೇಕಲ್:** ಟೇಕಲ್‌ನ ಕೆ.ಜಿ.ಹಳ್ಳಿ ಗ್ರಾಮದ ಸರ್ವೆ ನಂ.73 ಹಾಗೂ 10 ರ ಗೋಮಾಳದಲ್ಲಿನ ಜಮೀನುಗಳನ್ನು ಪ್ರಭಾವಿಗಳು ಒತ್ತುವರಿ ಮಾಡಿಕೊಂಡಿದ್ದು ಕೆಲವರು ನಿವೇಶನಗಳನ್ನು ನಿರ್ಮಿಸಿಕೊಂಡಿದ್ದಾರೆ. ಇನ್ನು ಉಳಿದಿರುವ ಜಾಗವನ್ನು ಕೆಲವರು ಆಕ್ರಮಿಸಿಕೊಳ್ಳುತ್ತಿದ್ದು ಕಂದಾಯ ಇಲಾಖೆ ಈ ಬಗ್ಗೆ ಸರ್ಕಾರಿ ಸ್ಥಳವನ್ನು ಸಂರಕ್ಷಿಸಬೇಕೆಂದು ಕೋಲಾರ ಜಿಲ್ಲಾ ಜೆಡಿಎಸ್‌ನ ಎಸ್‌ಸಿ ಘಟಕದ ಉಪಾಧ್ಯಕ್ಷರಾದ ಯಲುವಗುಳಿ ವೈ.ಎಂ.ನಾಗರಾಜ್ ಮನವಿ ಮಾಡಿದ್ದಾರೆ. ಅವರು ಗುರುವಾರ ಈ ವಿಷಯದ ಹಿನ್ನಲೆಯಲ್ಲಿ ಟೇಕಲ್ ನಾಡಕಛೇರಿ ಕಂದಾಯ ಅಧಿಕಾರಿ ನಾರಾಯಣಸ್ವಾಮಿಗೆ ಹಾಗೂ ಕೆ.ಜಿ.ಹಳ್ಳಿ ಗ್ರಾ.ಪಂ.ಅಭಿವೃದ್ಧಿ ಅಧಿಕಾರಿ ಮಂಜುಳರವರಿಗೆ ಮನವಿ ಪತ್ರ ನೀಡಿ ಮಾತನಾಡಿದರು. ಕೆ.ಜಿ.ಹಳ್ಳಿ ಗ್ರಾ.ಪಂ.ಕಛೇರಿ ಮುಂಭಾಗದಲ್ಲಿಯೇ ಸರ್ಕಾರಿ ಜಾಗ ಸರ್ವೆ ನಂ.10 ಇದ್ದು ಅದನ್ನು ಕೆಲವರು ನಕಲಿ 9,10 ಪತ್ರ ಮಾಡಿ ಜಾಗ ನಮ್ಮದೆಂದು ಸ್ಥಳವನ್ನು ಅಕ್ರಮವಾಗಿ ಆಕ್ರಮಿಸಿಕೊಳ್ಳಲು ಕಳೆದ ಮೂರು ದಿನಗಳಿಂದ ಜೆಸಿಪಿಯಲ್ಲಿ ಕಾರ್ಯನಿರ್ವಹಿಸುತ್ತಿದ್ದಾರೆ. ಈ ಬಗ್ಗೆ ಕಂದಾಯ ಅಧಿಕಾರಿಗಳ ಗಮನಕ್ಕೂ ತಂದಿದ್ದು, ತಹಶೀಲ್ದಾರ್‌ಗೆ ಮತ್ತು ಜಿಲ್ಲಾಧಿಕಾರಿಗಳಿಗೆ ಮನವಿ ಮಾಡಲಾಗುತ್ತದೆ. ಕೆ.ಜಿ.ಹಳ್ಳಿ ಸರ್ವೆ ನಂ.73 ರಲ್ಲಿಯೂ ಸಹ ಈ ಹಿಂದೆ ಕೆಲವರು ಮನೆ ಕಟ್ಟಿಕೊಂಡಿದ್ದು ಇದೀಗ ಕೆಲವರು ಪ್ರಭಾವಿಗಳು ಅಲ್ಲಿಯೂ ಮನೆ ನಿರ್ಮಿಸಲು ಮುಂದಾಗುತ್ತಿರುವುದು ಕಂಡು ಬಂದಿದೆ. ಯಾರೇ ಆಗಲಿ ಬಡವರಿಗೆ, ನಿರ್ಗತಿಕರಿಗೆ ಪಂಚಾಯ್ತಿ ಇಲ್ಲವೇ ಸರ್ಕಾರದಿಂದ ಸ್ಥಳ ನೀಡಬೇಕು ಅದರಲ್ಲೂ ಕೆ.ಜಿ.ಹಳ್ಳಿ ಗ್ರಾಮದವರಿಗೆ ಆದ್ಯತೆ ನೀಡಿ ಇಲ್ಲಿ ಮನೆ ಕಟ್ಟಿಕೊಳ್ಳಲು ಅವಕಾಶ ನೀಡಬೇಕೆಂದು ಒತ್ತಾಯಿಸಿದರು. ಈ ಬಗ್ಗೆ ಕಂದಾಯ ಇಲಾಖೆಯು ಕ್ರಮ ಜರುಗಿಸುವಲ್ಲಿ ವಿಳಂಬ ಮಾಡುತ್ತಿದ್ದು ಇದು ಹೀಗೆ ಮುಂದುವರೆದರೆ ಈ ಬಗ್ಗೆ ಜಿಲ್ಲಾಧಿಕಾರಿಗಳ ಕಛೇರಿ ಮುಂದೆ ''ಸರ್ಕಾರಿ ಸ್ಥಳ ಸಂರಕ್ಷಿಸುವಲ್ಲಿ ಕಂದಾಯ ಇಲಾಖೆ ನಿರ್ಲಕ್ಷ್ಯ'' ವೆಂದು ಪ್ರತಿಭಟನೆ ಮಾಡಲಾಗುವುದೆಂದು ಎಚ್ಚರಿಸಿದರು.

# ಇಂದಿನ ಪೀಳಿಗೆ ಗಿಡ ಮರಗಳನ್ನು ಬೆಳೆಸಬೇಕು

**ಮಾಲೂರು :** ಸಮಾಜ ಮುಖಿ ಸಮಾಜ ಸೇವೆ ಮಾಡುವಯುವಕರು ರಾಜಕೀಯವಾಗಿ ಮುಂದೆ ಬಂದರೆ ಸಮಾಜದಲ್ಲಿ ಹೆಚ್ಚಿನ ಅಭಿವೃದ್ಧಿಕಾಣ ಬಹುದು ಎಂದು ಮಾಜಿ ಶಾಸಕ ಕೆ ಎಸ್ ಮಂಜುನಾಥಗೌಡ ತಿಳಿಸಿದರು.

ಪಟ್ಟಣದರೈಲ್ವೆ ನಿಲ್ದಾಣದ ಬಿ ಜಿ ಎಸ್‌ಕಾಲೇಜು ಪಕ್ಕ ಯುವ ಮುಖಂಡ ಆಟೋ ಮೊಬೈಲ್ಸ್ ನಂದೀಶ್‌ರವರ ಹುಟ್ಟುಹಬ್ಬದ ಪ್ರಯುಕ್ತ ಹಮ್ಮಿಕೊಂಡಿದ್ದಗಿಡ ನೆಡುವಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು. ಪ್ರಸ್ತುತ ಸಮಾಜದಲ್ಲಿಆರ್ಥಿಕವಾಗಿ ಮತ್ತುರಾಜಕೀಯ ವಾಗಿ ಮೇಲೆ ಬಂದಿರುವವರು ತಮ್ಮ ಮಕ್ಕಳಿಗೆ,ಮೊಮ್ಮಕ್ಕಳಿಗೆ ಬೇಕಾದಷ್ಟು ಆಸ್ತಿ ಮಾಡಿ ರಾಜಕೀಯವಾಗಿ ಮುಂದೆ ಬರುತ್ತಿದ್ದಾರೆ ವಿನಹ ಸಮಾಜ ಮುಖಿ ಕಾರ್ಯಕ್ರಮಗಳು ಮಾಡಲು ಮುಂದೆ ಬರುವುದಿಲ್ಲ. ಪಟ್ಟಣದವಾಸಿ ನಂದೀಶ್ ಸಾಮಾನ್ಯಕುಟುಂಬದಲ್ಲಿ ಹುಟ್ಟಿ ಬಡವರ ಮತ್ತು ಸಾಮಾನ್ಯ ವರ್ಗದವರ ಹಿತ ಹಾಗೂ ಕ್ಷೇಮಾಭಿವೃದ್ಧಿಗಾಗಿತಮ್ಮಕೈಲಾದ ಸಹಾಯವನ್ನು ಮಾಡುತ್ತಾ ಬರುತ್ತಿದ್ದು. ತಮ್ಮ ಹುಟ್ಟು ಹಬ್ಬದ ಪ್ರಯುಕ್ತ ಪ್ರತಿ ವರ್ಷವೂ ಒಂದೊಂದು ರೀತಿಯಲ್ಲಿ ವಿಶೇಷ ರೀತಿಯಲ್ಲಿಆಚರಣೆ ಮಾಡುತ್ತಾಬರುತ್ತಿದ್ದಾರೆ. ಬಡಆಟೋಡ್ರೈವರ್‌ಗಳಿಗೆ ಉಚಿತವಾಗಿ ಆಟೋಕೊಡಿಸುವುದು. ಅಕಾಲಿಕ ಮರಣ ಹೊಂದಿದವರಿಗೆ ಶವವನ್ನು ಇಡಲು ಫೀಜರ್‌ಉಚಿತವಾಗಿ ನೀಡುವುದು. ಬೀದಿ ಬದಿ ವ್ಯಾಪಾರಿಗಳಿಗೆ ತಳ್ಳುವ ಬಂಡಿ, ಬೀದಿ ಬದಿ ವ್ಯಾಪಾರ ಮಾಡುವ ವ್ಯಾಪಾರಿಗಳಿಗೆ ಬಿಸಿಲು ಮತ್ತು ಮಳೆಯ ಅನುಕೂಲಕ್ಕೆ ಛತ್ರಿಗಳನ್ನು ನೀಡಿದ್ದಾರೆ. ಆಟೋಚಾಲಕರಿಗೆ ಸಮವಸ್ತಗಳು, ಬಡ ವಿದ್ಯಾರ್ಥಿಗಳಿಗೆ ಶೈಕ್ಷಣಿಕ ಪ್ರಗತಿಗೆ ಅನುಕೂಲ



ಕಲ್ಪಿಸುವುದು ಸೇರಿದಂತೆ ಹಲವಾರು ಸಮಾಜಮುಖಿ ಸೇವೆಯನ್ನು ಮಾಡುತ್ತಾ ಬರುತ್ತಿದ್ದು. ಇಂತಹವರಿಗೆರಾಜಕೀಯವಾಗಿ ಅವಕಾಶ ಕಲ್ಪಿಸಿಕೊಟ್ಟರೆ ಇನ್ನೂ ಹೆಚ್ಚಿನ ಸಮಾಜಮುಖಿಯ ಜನ ಅಭಿವೃದ್ಧಿ ಕಾರ್ಯಕ್ರಮಗಳನ್ನು ಮಾಡಲು ಅನುಕೂಲಕರವಾಗಿದೆ ಎಂದರು. ಬಿಜೆಪಿ ತಾಲೂಕುಅಧ್ಯಕ್ಷ ಟಿ ಬಿ.ಕೃಷ್ಣಪ್ಪ, ಮಾಜಿಜಿಲ್ಲಾ ಪಂಚಾಯತ್ ಸದಸ್ಯಚಿನ್ನಸ್ವಾಮಿಗೌಡ ಮುಖಂಡರುಗಳಾದ ಬೆಳ್ಳಾವಿ ಸೋಮಣ್ಣ, ಮಡಿವಾಳ ಚಂದ್ರಶೇಖರ್ , ಡಾ :ಕಿರಣ್ ಸೋಮಣ್ಣ,ಅಧಿಕಾರ ಹಟ್ಟಿ ಬಾಬು ಹಾಗೂ ನಂದೀಶ್‌ಅಭಿಮಾನಿ ಬಳಗದವರು ಇದ್ದರು.

# ಸ್ವಾತಂತ್ರ್ಯೋತ್ಸವ ಅರ್ಥಪೂರ್ಣ ಆಚರಣೆಗೆ ತೀರ್ಮಾನ

**ಚಾಮರಾಜನಗರ:** ಇದೇ ತಿಂಗಳ ಆಗಸ್ಟ್ 15ರಂದು ಜಿಲ್ಲಾಕೇಂದ್ರದಲ್ಲಿ ಆಚರಿಸಲಾಗುವ ಸ್ವಾತಂತ್ರ್ಯ ದಿನಾಚರಣೆ ಕಾರ್ಯಕ್ರಮವನ್ನು ಬಹಳ ಅರ್ಥಪೂರ್ಣವಾಗಿ ಹಾಗೂ ಅಚ್ಚುಕಟ್ಟಾಗಿ ಆಯೋಜಿಸಲು ನಿರ್ಧರಿಸಲಾಯಿತು.

ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿಂದು ರಾಷ್ಟ್ರೀಯ ಹಬ್ಬಗಳ ಆಚರಣಾ ಸಮಿತಿ ವತಿಯಿಂದ 78ನೇ ಸ್ವಾತಂತ್ರ್ಯೋತ್ಸವ ಆಚರಣೆ ಸಂಬಂಧ ಹೆಚ್ಚುವರಿ ಜಿಲ್ಲಾಧಿಕಾರಿ ಗೀತಾ ಹುಡೇದ ಅವರ ಅಧ್ಯಕ್ಷತೆಯಲ್ಲಿ ಜಿಲ್ಲಾಮಟ್ಟದ ಅಧಿಕಾರಿಗಳು, ಸಂಘಸಂಸ್ಥೆಗಳ ಮುಖಂಡರೊಂದಿಗೆ ನಡೆದ ಪೂರ್ವಭಾವಿ ಸಭೆಯಲ್ಲಿ ಈ ತೀರ್ಮಾನ ಕೈಗೊಳ್ಳಲಾಯಿತು.

ಸಭೆಯ ಆರಂಭದಲ್ಲಿ ಹೆಚ್ಚುವರಿ ಜಿಲ್ಲಾಧಿಕಾರಿಯವರು ನಗರದಲ್ಲಿ ಸ್ವಾತಂತ್ರ್ಯೋತ್ಸವ ಕಾರ್ಯಕ್ರಮ ಹಮ್ಮಿಕೊಳ್ಳುವ ಸಲುವಾಗಿ ಸಂಘಸಂಸ್ಥೆಗಳ ಮುಖಂಡರು, ಕನ್ನಡಪರ ಸಂಘಟನೆಗಳ ಅಧ್ಯಕ್ಷರು, ಪದಾಧಿಕಾರಿಗಳ ಅನಿಸಿಕೆ, ಅಭಿಪ್ರಾಯಗಳನ್ನು ಆಲಿಸಿದರು. ಈ ಬಾರಿಯ ಸ್ವಾತಂತ್ರ್ಯೋತ್ಸವವನ್ನು ವಿಶೇಷವಾಗಿ ಆಚರಿಸುವಂತಾಗಬೇಕು. ಚಾಮರಾಜನಗರ ಜಿಲ್ಲೆಯು ಉದಯವಾಗಿ ಆಗಸ್ಟ್ 15ರಂದೇ 27 ವರ್ಷಗಳನ್ನು ಪೂರೈಸುತ್ತಿರುವ ನಿಟ್ಟಿನಲ್ಲಿ ಕಾರ್ಯಕ್ರಮ ಚೆನ್ನಾಗಿ ನಡೆಯಬೇಕು. ಬಹುಮುಖ್ಯವಾಗಿ ಶಾಲಾ ಮಕ್ಕಳಿಗೆ ಸ್ವಾತಂತ್ರ್ಯೋತ್ಸವದ ಅರಿವು ಮೂಡಿಸುವಂತಹ ಹಾಗೂ ದೇಶಭಕ್ತಿ ಬಿಂಬಿಸುವ ಕಾರ್ಯಕ್ರಮಗಳನ್ನು ಏರ್ಪಡಿಸಬೇಕು. ಸಾಂಸ್ಕೃತಿಕ ಕಾರ್ಯಕ್ರಮಗಳಲ್ಲಿ ಸರ್ಕಾರಿ ಶಾಲಾ-ಕಾಲೇಜು ಮಕ್ಕಳಿಗೆ ಹೆಚ್ಚಿನ ಆದ್ಯತೆ ನೀಡಬೇಕು ಎಂದು ವಿವಿಧ ಸಂಘಸಂಸ್ಥೆಗಳ ಮುಖಂಡರು ಸಲಹೆ ಮಾಡಿದರು. ಬಳಿಕ ಸಭೆಯನ್ನು ಉದ್ದೇಶಿಸಿ ಮಾತನಾಡಿದ ಹೆಚ್ಚುವರಿ ಜಿಲ್ಲಾಧಿಕಾರಿಯವರಾದ ಗೀತಾ ಹುಡೇದ ಅವರು ಆಗಸ್ಟ್ 15ರಂದು ಬೆಳಿಗ್ಗೆ 9 ಗಂಟೆಗೆ ಡಾ. ಬಿ.ಆರ್. ಅಂಬೇಡ್ಕರ್ ಜಿಲ್ಲಾ ಕ್ರೀಡಾಂಗಣದಲ್ಲಿ ಧ್ವಜಾರೋಹಣ, ಪಥಸಂಚಲನ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಲಿದ್ದು, ಕಾರ್ಯಕ್ರಮವನ್ನು ಅರ್ಥಪೂರ್ಣವಾಗಿ ಆಚರಿಸಲು ಸಕಲ ಸಿದ್ದತೆಗಳನ್ನು ಕೈಗೊಳ್ಳುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚನೆ ನೀಡಿದರು.



ಸ್ವಾಗತ ಸಮಿತಿ, ಸಾಂಸ್ಕೃತಿಕ ಸಮಿತಿ, ಧ್ವಜಾ ಸಿದ್ದತಾ ಸಮಿತಿ, ವೇದಿಕೆ ಅಲಂಕಾರ ವ್ಯವಸ್ಥೆ ಸಮಿತಿ, ಸ್ವಚ್ಚತೆ ಮತ್ತು ಕುಡಿಯುವ ನೀರಿನ ಸಮಿತಿ ಸೇರಿದಂತೆ ಕಾರ್ಯಕ್ರಮ ಆಯೋಜನೆಗೆ ವಿವಿಧ ಉಪಸಮಿತಿಗಳನ್ನು ರಚಿಸಲಾಗಿದೆ. ರಚಿಸಲಾಗಿರುವ ಎಲ್ಲಾ ಸಮಿತಿಯಲ್ಲಿರುವ ಅಧಿಕಾರಿಗಳು ತಮಗೆ ವಹಿಸಿರುವ ಕರ್ತವ್ಯಗಳನ್ನು ಅತ್ಯಂತ ಜವಾಬ್ದಾರಿಯುತವಾಗಿ ನಿರ್ವಹಿಸಬೇಕು. ಯಾವುದೇ ಲೋಪಗಳಿಗೆ ಅವಕಾಶವಾಗದಂತೆ ನೋಡಿಕೊಳ್ಳಬೇಕು ಎಂದು ಹೆಚ್ಚುವರಿ ಜಿಲ್ಲಾಧಿಕಾರಿಯವರು ನಿರ್ದೇಶನ ನೀಡಿದರು. ವೇದಿಕೆ ಕಾರ್ಯಕ್ರಮ ನಡೆಯುವ ಜಿಲ್ಲಾ ಕ್ರೀಡಾಂಗಣದಲ್ಲಿ ಕುಡಿಯುವ ನೀರು, ಶೌಚಾಲಯ, ಸ್ವಚ್ಚತೆಗೆ ಹೆಚ್ಚಿನ ಆದ್ಯತೆ ನೀಡಬೇಕು. ಪೊಲೀಸ್ ಪಥಸಂಚಲನ ಹಾಗೂ ಶಾಲಾಮಕ್ಕಳು ನಡೆಸಿಕೊಡುವ ಸಾಂಸ್ಕೃತಿಕ ಕಾರ್ಯಕ್ರಮಗಳಿಗೆ ತಾಲೀಮು ನಡೆಸಬೇಕು. ಕ್ರೀಡಾಂಗಣದಲ್ಲಿ ಆರೋಗ್ಯ ಇಲಾಖೆಯಿಂದ ಆಂಬುಲೆನ್ಸ್ ಅನ್ನು ಸನ್ನದ್ಧವಾಗಿಡಬೇಕು. ಪ್ಲಾಸ್ಟಿಕ್ ಧ್ವಜ ಬಳಕೆ ನಿಷೇಧಿಸಲಾಗಿದ್ದು, ಪ್ಲಾಸ್ಟಿಕ್ ಧ್ವಜ ನಿಯಂತ್ರಣಕ್ಕಾಗಿ ಎಲ್ಲಾ ಅರ್.ಟಿ.ಒ ಹಾಗೂ ಅಬಕಾರಿ ಚೆಕ್‌ಪೋಸ್ಟ್‌ಗಳಲ್ಲಿ ತಪಾಸಣೆ ನಡೆಸಬೇಕೆಂದು ಸೂಚಿಸಿದರು.

ಆಹ್ವಾನ ಪತ್ರಿಕೆಗಳನ್ನು ಶಿಷ್ಟಾಚಾರ ಪ್ರಕಾರವೇ ಮುದ್ರಿಸಿ ಎಲ್ಲಾ ಗಣ್ಯರಿಗೂ ವಿತರಿಸುವ ಕೆಲಸವಾಗಬೇಕು. ಕಾರ್ಯಕ್ರಮದಲ್ಲಿ ಭಾಗವಹಿಸುವವರಿಗೆ ಸಿಹಿ ವಿತರಿಸಬೇಕು. ಎಲ್ಲಾ ಗ್ರಾಮ ಪಂಚಾಯಿತಿಗಳು ಹಾಗೂ ಬ್ಯಾಂಕ್‌ಗಳಲ್ಲಿ ಗಾಂಧೀಜಿ ಹಾಗೂ ಡಾ. ಬಿ.ಆರ್. ಅಂಬೇಡ್ಕರ್ ಅವರ ಭಾವಚಿತ್ರವನ್ನಿಡಬೇಕು. ಎಲ್ಲಾ ಅಧಿಕಾರಿ, ಸಿಬ್ಬಂದಿ ಕಡ್ಡಾಯವಾಗಿ ಭಾಗವಹಿಸಬೇಕು. ಸರ್ಕಾರಿ ಕಚೇರಿಗಳಲ್ಲಿ ದೀಪಾಲಂಕಾರ ಮಾಡಬೇಕು. ಒಟ್ಟಾರೆ ಎಲ್ಲಾ ಸಿದ್ದತಾ ವ್ಯವಸ್ಥೆಗಳನ್ನು ಮಾಡಿಕೊಳ್ಳುವಂತೆ ಹೆಚ್ಚುವರಿ ಜಿಲ್ಲಾಧಿಕಾರಿ ಗೀತಾ ಹುಡೇದ ಅವರು ಅಧಿಕಾರಿಗಳಿಗೆ ತಿಳಿಸಿದರು. ಹೆಚ್ಚುವರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಟಿ.ಜೆ. ಉದೇಶ, ಜಿಲ್ಲಾ ಪಂಚಾಯತ್ ಸಹಾಯಕ ಕಾರ್ಯದರ್ಶಿ ಶ್ರೀಕಂಠರಾಜೇ ಅರಸ್, ತಹಸೀಲ್ದಾರ್ ಗಿರಿಜ, ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕರಾದ ರಾಮಚಂದ್ರರಾಜೇ ಅರಸ್, ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕರಾದ ಸುಧಾ, ಲೀಡ್ ಬ್ಯಾಂಕ್ ವ್ಯವಸ್ಥಾಪಕರಾದ ಸುರೇಖಾ, ವಿವಿಧ ಸಂಘಸಂಸ್ಥೆ ಮುಖಂಡರಾದ ಶಾ. ಮುರಳಿ, ಚಾ.ರಂ. ಶ್ರೀನಿವಾಸಗೌಡ, ನಿಜಧ್ವನಿ ಗೋವಿಂದರಾಜು, ಸಿ.ಎಂ. ನರಸಿಂಹಮೂರ್ತಿ, ಕೆ. ವೀರಭದ್ರಸ್ವಾಮಿ, ಚಾ.ಗು. ನಾಗರಾಜು, ಚಾ.ಹ. ಶಿವರಾಜು, ಶ್ರೀನಿವಾಸಪ್ರಸಾದ್, ಬ್ಯಾಡಮೂಡ್ಲು ಬಸವಣ್ಣ, ಪಣ್ಯದಹುಂಡಿ ರಾಜು, ಪರ್ವತರಾಜು, ಇತರರು ಸಭೆಯಲ್ಲಿ ಉಪಸ್ಥಿತರಿದ್ದರು.



### ಮೃತ್ಯುಕೂಪವಾಗಿರುವ ಮರ

**ಮೈಸೂರಿನಕುವೆಂಪುನಗರದ ಇ ಎಫ್ ಬ್ಲಾಕ್‌ನಜ್ಞಾನಗಂಗಾ ಶಾಲೆಯ ಬಸ್ ನಿಲ್ದಾಣದ ಸಮೀಪ ಇರುವ ಈ ಮರ ಹಳೆಯದಾಗಿದ್ದು, ಬುಡಗೆದ್ದಲು ಹತ್ತಿಅಲುಗಾಡುತ್ತಿದೆ.ನೂರಾರು ಶಾಲಾ ಕಾಲೇಜಿನ ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರುಪ್ರತಿನಿತ್ಯವೂಓಡಾಡುವ ಈ ಜಾಗದಲ್ಲಿಯಾವಾಗ ಬೀಳುತ್ತದೆಯೋ ಎಂಬ ಆತಂಕ.ಅರಣ್ಯ ಇಲಾಖೆ ಹಾಗೂ ಮೈಸೂರು ಮಹಾನಗರ ಪಾಲಿಕೆ ಜಾಗೃತಿಯಾಗಿ ಈ ಮರವನ್ನು ತೆರವುಗೊಳಿಸಿ ಮುಂದೆ ಸಂಭವಿಸಬಹುದಾದಅನಾಹ ುತವನ್ನುತಪ್ಪಿಸಬೇಕಾಗಿ ಸಾರ್ವಜನಿಕರು ಮನವಿ ಮಾಡಿದ್ದಾರೆ.**

## ಪ್ರತಿ ಮನೆ ಮನೆಯಲ್ಲೂ ರಾಷ್ಟ್ರಧ್ವಜಕ್ಕೆ ಗೌರವಿಸುವ
# ಮನೋ ಧರ್ಮವನ್ನು ಬೆಳೆಸಿಕೊಳ್ಳಬೇಕು

**ಚಾಮರಾಜನಗರ:** ಭಾರತದ ರಾಷ್ಟ್ರಧ್ವಜದ ಪರಿಕಲ್ಪನೆ ವಿನ್ಯಾಸಕಾರ ಪಿಂಗಲಿ ವೆಂಕಯ್ಯ ಅಪ್ಪಟ ದೇಶಭಕ್ತರು, ಸ್ವಾತಂತ್ರ್ಯ ಹೋರಾಟಗಾರರು ಆಗಿದ್ದರು. ಬಹುಭಾಷಾವಾದಿ, ಉಪನ್ಯಾಸಕ, ಶಿಕ್ಷಣ ತಜ್ಞ, ಭೂ ವಿಜ್ಞಾನಿ, ಸೈನಿಕರಾಗಿ ಸೇವೆ ಸಲ್ಲಿಸಿದ ವೆಂಕಯ್ಯ ರವರನ್ನು ಗೌರವಿಸುವುದು ಭಾರತೀಯರ ಕರ್ತವ್ಯವೆಂದು ರಾಷ್ಟ್ರ ಯುವ ಪ್ರಶಸ್ತಿ ವಿಜೇತ ಸಂಸ್ಕೃತಿ ಚಿಂತಕ ಸುರೇಶ್ ಎನ್ ಋಗ್ವೇದಿ ತಿಳಿಸಿದರು.

ಸುಭಾಷ್ ಚಂದ್ರ ಬೋಸ್ ರವರ ನೆನಪಿನಲ್ಲಿ ನಿರ್ಮಿಸಿರುವ ಋಗ್ವೇದಿ ಕುಟೀರದ ಜೈಹಿಂದ್ ಕಟ್ಟೆಯಲ್ಲಿ ತಿಂಗಳಿ ವೆಂಕಯ್ಯ ಭಾವಚಿತ್ರ ಹಾಗು ರಾಷ್ಟ್ರಧ್ವಜಕ್ಕೆ ಗೌರವ ಸಲ್ಲಿಸಿ ಮಾತನಾಡುತ್ತಾ ರಾಷ್ಟ್ರಧ್ವಜ ನಿರ್ಮಾಣವು ಪ್ರತಿಯೊಬ್ಬ ನಾಗರಿಕನ ಮತ್ತು ದೇಶದ ಗೌರವ ಸಂಕೇತ. ಭಾರತದಲ್ಲಿ ಪುರಾತನ ಕಾಲದಿಂದಲೂ ತಮ್ಮದೇ ಆದ ಧ್ವಜಗಳನ್ನು ಹೊಂದಿ ರಾಜ ಮಹಾರಾಜರು ಗೌರವಿಸುವ ಮೂಲಕ ಅಖಂಡ ಭಾರತದ ಶ್ರೇಷ್ಠ ಚಿಂತನೆಗಳನ್ನು ಮೂಡಿಸಿದ್ದರು. ನಂತರದ ಕಾಲದಲ್ಲೂ ರಾಷ್ಟ್ರ ಧ್ವಜದ ಪರಿಕಲ್ಪನೆ ನಿರಂತರವಾಗಿ ಪ್ರತಿ ದೇಶದಲ್ಲೂ ಮೂಡಿದೆ. ಭಾರತದ ಸ್ವಾತಂತ್ರ್ಯ ಹೋರಾಟದ ಸಂದರ್ಭದಲ್ಲಿ ವೆಂಕಯ್ಯನವರು ರೂಪಿಸಿದ ರಾಷ್ಟ್ರ ಧ್ವಜವನ್ನು 19201 ರಲ್ಲಿ ಗಾಂಧೀಜಿಯವರು ಅನುಮೋದಿಸಿ ಅಂತಿಮ ಪರಿಷ್ಕರಣೆ ಮಾಡಿ 1947 ರಲ್ಲಿ ಅಂಗೀಕರಿಸಲಾಯಿತು. ಕೇಸರಿ ತ್ಯಾಗ ಬಲಿದಾನದ ಸಂಕೇತವಾಗಿದ್ದು ,ಬಿಳಿ ಬಣ್ಣ ಸತ್ಯ,ಶಾಂತಿ ಹಾಗೂ ಹಸಿರು ಸಮೃದ್ಧಿ ಮತ್ತು ಸೌಹಾರ್ದತೆಯ ಸಂಕೇತವಾಗಿದೆ .ಅಶೋಕ ಚಕ್ರವು ನ್ಯಾಯ ಧರ್ಮದ ಸಂಕೇತವಾಗಿ ಪ್ರತಿಯೊಬ್ಬ ಭಾರತೀಯನ ಉತ್ಸಾಹವನ್ನು ,ದೇಶಭಕ್ತಿಯನ್ನು, ರಾಷ್ಟ್ರ ಚಿಂತನೆಯನ್ನು ಮೂಡಿಸುತ್ತದೆ. ರಾಷ್ಟ್ರಧ್ವಜವು ಸ್ವತಂತ್ರ ದೇಶದ ಸಂಕೇತವಾಗಿದ್ದು, ಪ್ರತಿ ಮನೆ ಮನಯಲ್ಲೂ ರಾಷ್ಟ್ರಧ್ವಜಕ್ಕೆ ಗೌರವಿಸುವ ಮನೋ ಧರ್ಮವನ್ನು ಬೆಳೆಸಿಕೊಳ್ಳಬೇಕು .ರಾಷ್ಟ್ರ ಧ್ವಜದ ವಿಶೇಷತೆ ಮತ್ತು ಮಹತ್ವದ ಕುರಿತು ಜಾಗೃತಿಯ ಕಾರ್ಯಕ್ರಮಗಳನ್ನು ರೂಪಿಸುವುದು ಸಂಘ ಸಂಸ್ಥೆಗಳ ಕರ್ತವ್ಯವಾಗಿದೆ ಎಂದು ತಿಳಿಸಿದರು. ನಾಗ ಸುಂದರ್, ಶ್ರಾವ್ಯ ಋಗ್ವೇದಿ,.ಕುಸುಮ, ಮುರುಗೇಶ್, ರವಿ, ಶಂಕರ, ರಾಜು ಕೃಷ್ಣಮೂರ್ತಿ ಉಪಸ್ಥಿತರಿದ್ದರು.

# ನನಗೆ ಅಧಿಕಾರದ ಆಸೆ ಇಲ್ಲ, ರೈತಪರ ಕೆಲಸ ಮಾಡಿದ್ದೇನೆ



**ಪಿರಿಯಾಪಟ್ಟಣ :** ಅಧಿಕಾರ ಯಾರಿಗೂ ಶಾಶ್ವತ ಅಲ್ಲ , ಇದ್ದಂತಹ ಅಧಿಕಾರವಧಿಯಲ್ಲಿ ರೈತಪರ ಯಾವ ಕೆಲಸ ಮಾಡಿದ್ದೇವೆ ಎಂಬುದು ಮುಖ್ಯ ಎಂದು ಮೈಮುಲ್ ಅಧ್ಯಕ್ಷ ಪಿ.ಎಂ.ಪ್ರಸನ್ನ ತಿಳಿಸಿದರು

ಕಂಪಲಾಪುರ ಗ್ರಾಮದಲ್ಲಿ ಹಾಲು ಉತ್ಪಾದಕರ ಸಹಕಾರ ಸಂಘದ ವಾರ್ಷಿಕ ಮಹಾಸಭೆ ಉದ್ಘಾಟಿಸಿ ಮಾತನಾಡಿ , ನಾನು ಆಕಸ್ಮಿಕವಾಗಿ ಮೈಮುಲ್ ನ ಅಧ್ಯಕ್ಷನಾದೆ ಅದಕ್ಕೆ ಮೂಲ ಕಾರಣ ನಮ್ಮ ಹಿರಿಯ ನಾಯಕರಾದ ಶಾಸಕ ಜಿ.ಟಿ.ದೇವೇಗೌಡರು. ಅವರ ಪ್ರೇರಣೆಯಿಂದ ನನಗೆ ಅಧಿಕಾರ ಸಿಕ್ಕಿತು. ಅವರಿಗೆ ನಾನು ಎಂದೂ ಋಣಿಯಾಗಿರುತ್ತೇನೆ, ನಾನು ಹಾಲು ಒಕ್ಕೂಟದ ನಿರ್ದೇಶಕನಾದಾಗ ಪಿರಿಯಾಪಟ್ಟಣ ತಾಲೂಕಿನಲ್ಲಿ ಕೇವಲ 40 ಸಾವಿರ ಲೀ ಹಾಲು ಪ್ರತಿನಿತ್ಯ ಉತ್ಪಾದನೆಯಾಗುತ್ತಿತ್ತು. ಅಧ್ಯಕ್ಷ ನಾದ ನಂತರ ಪ್ರತಿನಿತ್ಯ 2 ಲಕ್ಷ ಲೀ ಹಾಲು ಉತ್ಪಾದನೆಯಾಗುತ್ತಿದೆ. ಅದರ ಕೀರ್ತಿ ಉತ್ಪಾದಕರಿಗೆ ಸಲ್ಲಬೇಕು ,ಪ್ರತಿ ಲೀ ಹಾಲಿಗೆ 25 ರೂ ನಿಂದ 36 ರೂ ಗೆ ಏರಿಸಿದ್ದು ನನ್ನ ಅವಧಿಯಲ್ಲೇ . ನೆರೆರಾಜ್ಯ ಗುಜರಾತ್ ಬಿಟ್ಟರೆ ಹಾಲು ಉತ್ಪಾದನೆಯಲ್ಲಿ ನಮ್ಮ ರಾಜ್ಯ ಎರಡನೇ ಸ್ಥಾನದಲ್ಲಿದೆ. ಹಾಲು ಉತ್ಪಾದಕರ ಮಕ್ಕಳ ಉನ್ನತ ವ್ಯಾಸಂಗಕ್ಕಾಗಿ ಮೈಸೂರಿನಲ್ಲಿ ಈಗಾಗಲೇ 13 ಕೋಟಿ ರೂ ವೆಚ್ಚದಲ್ಲಿ 250 ಮಕ್ಕಳಿಗೆ ಅನುಕೂಲವಾಗುವಂತೆ ಸುಸಜ್ಜಿತ ಹಾಸ್ಟಲ್ ಸೌಲಭ್ಯ ಕಲ್ಪಸಲಾಗಿದ್ದು , ರೈತರು ವಾರ್ಷಿಕ 20 ಸಾವಿರ ರೂ ಗಳನ್ನು ಎರಡು ಕಂತಿನಲ್ಲಿ ಪಾವತಿ ಮಾಡಬಹುದು ಎಂದರು. ಒಂದು ವರ್ಷಕ್ಕೆ ಸೀಮಿತವಾದ ರಾಸುವಿಮೆಯನ್ನು 3 ವರ್ಷಕ್ಕೆ ವಿಸ್ತರಿಸಿದ್ದು ರೈತರು ಒಮ್ಮೆ ಹಣ ಕಟ್ಟಿದರೆ ಸಾಕು. ಹಾಗೆಯೇ ಹಾಲು ಉತ್ಪಾದಕರಿಗಾಗಿ ಇರುವ ಸರ್ಕಾರಿ ಸೌಲಭ್ಯಗಳನ್ನು ಸದುಪಯೋಗ ಪಡಿಸಿಕೊಂಡು ಗುಣಮಟ್ಟದ ಹಾಲು ಉತ್ಪಾದನೆ ಮಾಡಿ ಹೆಚ್ಚು ಲಾಭ ಗಳಿಸಿ ಎಂದರು. ಟಿಎಪಿಸಿಎಂಎಸ್ ನಿರ್ದೇಶಕ ಕೆ.ಕುಮಾರ್ ಪ್ರಾಸ್ತಾವಿಕ ಮಾತನಾಡಿ ಪ್ರಸನ್ನ ರವರು ಡೇರಿಯನ್ನು ಬಿಎಂಸಿ ಕೇಂದ್ರ ವನ್ನಾಗಿ ಮಾಡಲು ಹಾಗೆಯೇ 3 ಸಾವಿರ ಸಾಮರ್ಥ್ಯದ ಟ್ಯಾಂಕ್ ಬದಲು 5 ಸಾವಿರ ಲೀ ಸಾಮರ್ಥ್ಯ ದ ಟ್ಯಾಂಕ್ ಕೊಡಿಸಿದರು.ಜೊತೆಗೆ ಕಟ್ಟಡದ ಮೇಲ್ಭಾಗ ಮೀಟಿಂಗ್ ಹಾಲ್ ನಿರ್ಮಾಣ ಕ್ಕೆ 3 ಲಕ್ಷ ಅನುದಾನ ಕೊಡಿಸಿದ್ದಾಗಿ ಅವರ ಕಾರ್ಯವನ್ನು ಶ್ಲಾಘಿಸಿದರು. ಈ ಹಿಂದೆ ಸಂಘ ತೀವ್ರ ನಷ್ಟದಲ್ಲಿತ್ತು , ತದನಂತರ ಇತ್ತೀಚಿನ ವರ್ಷಗಳಲ್ಲಿ ವಾರ್ಷಿಕ 8 ರಿಂದ 10 ಲಕ್ಷ ಲಾಭದಲ್ಲಿದೆ. ಆದ್ದರಿಂದ ಉತ್ಪಾದಕರು ಇದೇ ರೀತಿಯಲ್ಲಿ ಸಂಘವನ್ನು ಲಾಭ ದತ್ತ ಕೊಂಡೊಯ್ಯಬೇಕು ಎಂದರು.

ಸಿಇಒ ಕಿಶೋರ್ ಸಂಘದ ವಾರ್ಷಿಕ ವರದಿ ಮಂಡಿಸಿ ಎಲ್ಲ ಉತ್ಪಾದಕರ ಪರಿಶ್ರಮದಿಂದ 2023-24 ನೇ ಸಾಲಿಗೆ ನಮ್ಮ ಸಂಘ ರೂ 8.42 ಲಕ್ಷ ನಿವ್ವಳ ಲಾಭ ಗಳಿಸಿದೆ ಎಂದರು.

## ವಿವಿಧ ಯೋಜನೆಗಳ ಸೌಲಭ್ಯ ಪಡೆಯಲು ಅರ್ಜಿ ಆಹ್ವಾನ

**ಚಿಕ್ಕಬಳ್ಳಾಪುರ:** 2024-25ನೇ ಸಾಲಿನ ಕರ್ನಾಟಕ ಅಲೆಮಾರಿ/ಅರೆಅಲೆಮಾರಿ ಅಭಿವೃದ್ಧಿ ನಿಗಮದ ವಿವಿಧ ಯೋಜನೆಗಳ ಸೌಲಭ್ಯ ಪಡೆಯಲು ಅಲೆಮಾರಿ/ಅರೆಅಲೆಮಾರಿ ಜನಾಂಗದವರಿಂದ ಆನ್ ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಯೋಜನೆಗಳ ವಿವರ: ಸ್ವಯಂ ಉದ್ಯೋಗ ವೈಯಕ್ತಿಕ ಸಾಲ ಯೋಜನೆ, ಗಂಗಾ ಕಲ್ಯಾಣ ನೀರಾವರಿ ಯೋಜನೆ, ಅರಿವು-ಶೈಕ್ಷಣಿಕ ಸಾಲ ಯೋಜನೆ, ವಿದೇಶಿ ವಿಶ್ವವಿದ್ಯಾಲಯಗಳಲ್ಲಿ ಉನ್ನತ ವ್ಯಾಸಂಗಕ್ಕೆ ಸಾಲ ಯೋಜನೆ, ಸ್ವಾವಲಂಬಿ ಸಾರಥಿ ಯೋಜನೆ, ಸ್ವಯಂ ಉದ್ಯೋಗ ಸಾಲ ಯೋಜನೆ (ವಾಣಿಜ್ಯ ಬ್ಯಾಂಕುಗಳ ಸಹಯೋಗದೊಂದಿಗೆ) ಗಳ ಸೌಲಭ್ಯ ಪಡೆಯಲು ಆಗಸ್ಟ್ 31 ರೊಳಗೆ ಅರ್ಜಿಯನ್ನು ಸಲ್ಲಿಸಬಹುದು. ಮೇಲ್ಕಂಡ ಸೌಲಭ್ಯಗಳನ್ನು ಪಡೆಯಲು ಇಚ್ಚಿಸುವ ಹಿಂದುಳಿದ ವರ್ಗಗಳ ಅರ್ಜಿದಾರರು ಅರ್ಜಿಗಳನ್ನು ಸೇವಾಸಿಂಧು ಪೋರ್ಟಲ್ http://sevasindhu.karnataka.gov.in ಮುಖಾಂತರ ಗ್ರಾಮ ಒನ್, ಬೆಂಗಳೂರು ಒನ್ ಮತ್ತು ಕರ್ನಾಟಕ ಒನ್ ಸೇವಾಕೇಂದ್ರಗಳಲ್ಲಿ ಆನ್ಲೈನ್ ಮೂಲಕ ಅರ್ಜಿಗಳನ್ನು ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ ನಿಗಮದ ವೆಬ್ ಸೈಟ್ www.kaad.karnataka.gov.inಅಥವಾ ನಿಗಮದ ಸಹಾಯವಾಣಿ ಸಂಖ್ಯೆ:080-22374832 ಮತ್ತು 8050770004 ಅಥವಾ 8050770005 ಹಾಗೂ ಚಿಕ್ಕಬಳ್ಳಾಪುರ ಜಿಲ್ಲಾ ಕಚೇರಿ ದೂ.ಸಂ: 08156-277039 ಗೆ ಸಂಪರ್ಕಿಸಬಹುದೆಂದು ನಿಗಮದ ಜಿಲ್ಲಾ ವ್ಯವಸ್ಥಾಪಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸವಿತಾ ಸಮಾಜ ಅಭಿವೃದಿ ನಿಗಮದಿಂದ ಅರ್ಜಿ ಆಹ್ವಾನ

**ಚಿಕ್ಕಬಳ್ಳಾಪುರ:** 2024-25ನೇ ಸಾಲಿನ ಕರ್ನಾಟಕ ಸವಿತಾ ಸಮಾಜ ಅಭಿವೃದ್ಧಿ ನಿಗಮದ ವಿವಿಧ ಯೋಜನೆಗಳ ಸೌಲಭ್ಯ ಪಡೆಯಲು ಸವಿತಾ ಸಮಾಜ ಜನಾಂಗದವರಿಂದ ಆನ್ ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಯೋಜನೆಗಳ ವಿವರ: 1) ಸ್ವಯಂ ಉದ್ಯೋಗ ವೈಯಕ್ತಿಕ ಸಾಲ ಯೋಜನೆ, 2) ಗಂಗಾ ಕಲ್ಯಾಣ ನೀರಾವರಿ ಯೋಜನೆ, 3) ಅರಿವು-ಶೈಕ್ಷಣಿಕ ಸಾಲ ಯೋಜನೆ, 4)ವಿದೇಶಿ ವಿಶ್ವವಿದ್ಯಾಲಯಗಳಲ್ಲಿ ಉನ್ನತ ವ್ಯಾಸಂಗಕ್ಕೆ ಸಾಲ ಯೋಜನೆ, 5) ಸ್ವಾವಲಂಬಿ ಸಾರಥಿ ಯೋಜನೆ, 6) ಸ್ವಯಂ ಉದ್ಯೋಗ ಸಾಲ ಯೋಜನೆ (ವಾಣಿಜ್ಯ ಬ್ಯಾಂಕುಗಳ ಸಹಯೋಗದೊಂದಿಗೆ) ಗಳ ಸೌಲಭ್ಯ ಪಡೆಯಲು ಆಗಸ್ಟ್ 31 ಕೊನೆ ದಿನವಾಗಿದೆ. ಮೇಲ್ಕಂಡ ಸೌಲಭ್ಯಗಳನ್ನು ಪಡೆಯಲು ಇಚ್ಚಿಸುವ ಹಿಂದುಳಿದ ವರ್ಗಗಳ ಅರ್ಜಿದಾರರು ಅರ್ಜಿಗಳನ್ನು ಸೇವಾಸಿಂಧು ಪೋರ್ಟಲ್ http://sevasindhu.karnataka.gov.in ಮುಖಾಂತರ ಗ್ರಾಮ ಒನ್, ಬೆಂಗಳೂರು ಒನ್ ಮತ್ತು ಕರ್ನಾಟಕ ಒನ್ ಸೇವಾಕೇಂದ್ರಗಳಲ್ಲಿ ಆನ್ಲೈನ್ ಮೂಲಕ ಅರ್ಜಿಗಳನ್ನು ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ ನಿಗಮದ ವೆಬ್ ಸೈಟ್ www.kssd.karnataka.gov.in ಅಥವಾ ನಿಗಮದ ಸಹಾಯವಾಣಿ ಸಂಖ್ಯೆ:080-22374832 ಮತ್ತು 8050770004 ಅಥವಾ 8050770005 ಹಾಗೂ ಚಿಕ್ಕಬಳ್ಳಾಪುರ ಜಿಲ್ಲಾ ಕಚೇರಿ ದೂ.ಸಂ: 08156-277039 ಗೆ ಸಂಪರ್ಕಿಸಬಹುದೆಂದು.

## ಮಡಿವಾಳ ಮಾಚಿದೇವ ಅಭಿವೃದ್ಧಿ ನಿಗಮದಿಂದ ಅರ್ಜಿ

**ಚಿಕ್ಕಬಳ್ಳಾಪುರ:** 2024-25ನೇ ಸಾಲಿನ ಕರ್ನಾಟಕ ಮಡಿವಾಳ ಮಾಚಿದೇವ ಅಭಿವೃದ್ಧಿ ನಿಗಮದ ವಿವಿಧ ಯೋಜನೆಗಳ ಸೌಲಭ್ಯ ಪಡೆಯಲು ಮಡಿವಾಳ ಮಾಚಿದೇವ ಜನಾಂಗದವರಿಂದ ಆನ್ ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಯೋಜನೆಗಳ ವಿವರ: 1) ಸ್ವಯಂ ಉದ್ಯೋಗ ವೈಯಕ್ತಿಕ ಸಾಲ ಯೋಜನೆ, 2) ಗಂಗಾ ಕಲ್ಯಾಣ ನೀರಾವರಿ ಯೋಜನೆ, 3) ಅರಿವು-ಶೈಕ್ಷಣಿಕ ಸಾಲ ಯೋಜನೆ, 4)ವಿದೇಶಿ ವಿಶ್ವವಿದ್ಯಾಲಯಗಳಲ್ಲಿ ಉನ್ನತ ವ್ಯಾಸಂಗಕ್ಕೆ ಸಾಲ ಯೋಜನೆ, 5) ಸ್ವಾವಲಂಬಿ ಸಾರಥಿ ಯೋಜನೆ, 6) ಸ್ವಯಂ ಉದ್ಯೋಗ ಸಾಲ ಯೋಜನೆ (ವಾಣಿಜ್ಯ ಬ್ಯಾಂಕುಗಳ ಸಹಯೋಗದೊಂದಿಗೆ) ಗಳ ಸೌಲಭ್ಯ ಪಡೆಯಲು ಆಗಸ್ಟ್ 31 ಕೊನೆ ದಿನವಾಗಿದೆ. ಮೇಲ್ಕಂಡ ಸೌಲಭ್ಯಗಳನ್ನು ಪಡೆಯಲು ಇಚ್ಚಿಸುವ ಹಿಂದುಳಿದ ವರ್ಗಗಳ ಅರ್ಜಿದಾರರು ಅರ್ಜಿಗಳನ್ನು ಸೇವಾಸಿಂಧು ಪೋರ್ಟಲ್ http://sevasindhu.karnataka.gov.in ಮುಖಾಂತರ ಗ್ರಾಮ ಒನ್, ಬೆಂಗಳೂರು ಒನ್ ಮತ್ತು ಕರ್ನಾಟಕ ಒನ್ ಸೇವಾಕೇಂದ್ರಗಳಲ್ಲಿ ಆನ್ಲೈನ್ ಮೂಲಕ ಅರ್ಜಿಗಳನ್ನು ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ ನಿಗಮದ ವೆಬ್ ಸೈಟ್ www.kmmd.karnataka.gov.inಅಥವಾ ನಿಗಮದ ಸಹಾಯವಾಣಿ ಸಂಖ್ಯೆ:080-22374832 ಮತ್ತು 8050770004 ಅಥವಾ 8050770005 ಹಾಗೂ ಚಿಕ್ಕಬಳ್ಳಾಪುರ ಜಿಲ್ಲಾ ಕಚೇರಿ ದೂ.ಸಂ: 08156-277039 ಗೆ ಸಂಪರ್ಕಿಸಬಹುದೆಂದು ನಿಗಮದ ಜಿಲ್ಲಾ ವ್ಯವಸ್ಥಾಪಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಗೌತಮ ಆಶ್ರಮದ ಒಬ್ಬರು ಸ್ವಾಮೀಜಿ, 2 ಅನುಚರರ ರಕ್ಷಣೆ

**ಮಂಡ್ಯ:** ಮಂಡ್ಯ ಜಿಲ್ಲೆ, ಶ್ರೀರಂಗಪಟ್ಟಣ ತಾಲೂಕು ದೊಡ್ಡೇಗೌಡನಕೊಪ್ಪಲು ಗ್ರಾಮದ ಗೌತಮ ಆಶ್ರಮದಲ್ಲಿ ಕೆ ಆರ್ ಎಸ್ ಹೆಚ್ಚಿನ ನೀರು ಬಿಟ್ಟಿರುವುದರಿಂದ ಆಶ್ರಮ ದ್ವೀಪವಾಗಿ ಮಾರ್ಪಟ್ಟಿದ್ದು ಅಲ್ಲಿ ಸಿಲುಕಿರುವ ಒಬ್ಬರು ಸ್ವಾಮೀಜಿ ಮತ್ತು 02 ಅನುಚರರನ್ನು ಅಗ್ನಿಶಾಮಕ ಮತ್ತು ತುರ್ತು ಸೇವೆ ಇಲಾಖೆ ಹಾಗೂ ಎಮ್ ಇ ಜಿ ತಂಡ ಸೇರಿ ರಕ್ಷಣೆ ಮಾಡಿ ದಡಕ್ಕೆ ಕರೆತರಲಾಯಿತು. ಈ ಕಾರ್ಯಾಚರಣೆಯು ಮುಖ್ಯ ಅಗ್ನಿಶಾಮಕ ಅಧಿಕಾರಿ ಮೈಸೂರು ವಿಭಾಗದ ಪಿ ಎಸ್ ಜಯರಾಮ್ ರವರ ಮಾರ್ಗದರ್ಶನದಲ್ಲಿ ಜಿಲ್ಲಾ ಅಗ್ನಿಶಾಮಕ ಅಧಿಕಾರಿಗಳಾದ ಗುರುರಾಜ ಕೆ ಪಿ, ರಾಘವೇಂದ್ರ ಬಿಎಮ್, ರಮೇಶ್.ಸಿ ರವರ ನೇತೃತ್ವದಲ್ಲಿ ಸುಮಾರು 25 ಜನ ಅಧಿಕಾರಿಯ ಸಿಬ್ಬಂದಿಯವರೊಂದಿಗೆ ಕಾರ್ಯಾಚರಣೆ ನಡೆಸಿ ರಕ್ಷಣೆ ಮಾಡಿ ಕಂದಾಯ ಅಧಿಕಾರಿಗಳ ವಶಕ್ಕೆ ಒಪ್ಪಿಸಲಾಯಿತು.

# ಭ್ರೂಣ ಹತ್ಯೆ ಶಿಕ್ಷಾರ್ಹ

**ಬೆಂಗಳೂರು ಗ್ರಾಮಾಂತರ:** ಭ್ರೂಣ ಹತ್ಯೆಯು ಕಾನೂನು ಬಾಹಿರ ಶಿಕ್ಷಾರ್ಹ ಅಪರಾಧ ವಾಗಿದ್ದು ಸಂಬಂಧಪಟ್ಟ ಅಧಿಕಾರಿಗಳು ಸಾರ್ವಜನಿಕರಿಗೆ ಅರಿವು ಮೂಡಿಸುವ ಮೂಲಕ ಭ್ರೂಣ ಹತ್ಯೆಯನ್ನು ತಡೆಯಲು ಕ್ರಮವಹಿಸಬೇಕು ಎಂದು ಜಿಲ್ಲಾಧಿಕಾರಿ ಡಾ. ಎನ್. ಶಿವಶಂಕರ್ ಅವರು ಹೇಳಿದರು.

ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೇವನಹಳ್ಳಿ ತಾಲ್ಲೂಕಿನ ಬೀರಸಂದ್ರ ಗ್ರಾಮದ ಜಿಲ್ಲಾಡಳಿತ ಭವನದಲ್ಲಿರುವ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಜಿಲ್ಲಾಡಳಿತ ಹಾಗೂ ಜಿಲ್ಲಾ ಪಂಚಾಯತ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಹಾಗೂ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಸಹಯೋಗದೊಂದಿಗೆ ನಡೆದ 'ಪಿ.ಸಿ.ಪಿ.ಎನ್.ಡಿ.ಟಿ ಕಾಯ್ದೆ ಬಗ್ಗೆ ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದ ಅಧಿಕಾರಿಗಳ ತರಬೇತಿ ಕಾರ್ಯಾಗಾರ ಹಾಗೂ ಮಾನವ ಕಳ್ಳ ಸಾಗಾಣಿಕೆ ತಡೆ ದಿನಾಚರಣೆ' ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಮಾನವ ಕಳ್ಳ ಸಾಗಣೆ ತಡೆ, ಭ್ರೂಣ ಹತ್ಯೆ ತಡೆ, ಬಾಲ್ಯ ವಿವಾಹ ತಡೆ, ಹೆಣ್ಣು ಮಕ್ಕಳ ರಕ್ಷಣೆ ಮಾಡುವುದು ನಮ್ಮೆಲ್ಲರ ಜವಾಬ್ದಾರಿ ಆಗಿದ್ದು, ಇಂತಹ ಪ್ರಕರಣಗಳು ನಡೆಯದಂತೆ ಅಧಿಕಾರಿಗಳು ಕಾರ್ಯ ಪ್ರವೃತ್ತರಾಗಿರಬೇಕು. ಸಾರ್ವಜನಿಕರು ಕೂಡ ಯಾವುದೇ ಮೂಡನಂಬಿಕೆ ಅಥವಾ ಆಸೆ ಆಮಿಷಗಳಿಗೆ ಒಳಗಾಗದೆ ಮಕ್ಕಳ ರಕ್ಷಣೆ, ಭ್ರೂಣ ಹತ್ಯೆಗಳನ್ನು ತಡೆಯಬೇಕು. ಭ್ರೂಣ ಹತ್ಯೆ, ಬಾಲ್ಯ ವಿವಾಹ ಮುಂತಾದ ಕಾನೂನು ಬಾಹಿರ ಚಟುವಟಿಕೆಗಳು ನಡೆಸಿದಲ್ಲಿ ಅಂತವರ ವಿರುದ್ಧ ಹಾಗೂ ಅದಕ್ಕೆ ಸಹಕಾರ ನೀಡುವ ಅಧಿಕಾರಿಗಳ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗುವುದು. ಮಾನವ ಕಳ್ಳಸಾಗಣೆಗೆ ಸಂಬಂಧಿಸಿದಂತೆ ಪೊಲೀಸ್ ಇಲಾಖೆ ವತಿಯಿಂದ ತರಬೇತಿ ನೀಡಲಾಗುವುದು. ಮಾನವ ಕಳ್ಳಸಾಗಣೆ, ಭ್ರೂಣ ಹತ್ಯೆ ಇವುಗಳಿಂದ ಜಿಲ್ಲೆಯನ್ನು ಮುಕ್ತ ಗೊಳಿಸಬೇಕು. ಇದಕ್ಕಾಗಿ ಅಧಿಕಾರಿಗಳು ಶ್ರಮಿಸಬೇಕು ಎಂದು ಜಿಲ್ಲಾಧಿಕಾರಿ ಹೇಳಿದರು.

ಕಾರ್ಯಕ್ರಮದಲ್ಲಿ ನೆಲಮಂಗಲ ತಾಲೂಕು ಸಾರ್ವಜನಿಕ ಆಸ್ಪತ್ರೆಯ ಸ್ತ್ರೀರೋಗ ಮತ್ತು ಪ್ರಸೂತಿ ತಜ್ಞರಾದ ಡಾ. ಸೋನಿಯಾ ಅವರು ಮಾತನಾಡಿ, ಪ್ರಸಕ್ತ ವರ್ಷದ ಕರ್ನಾಟಕದಲ್ಲಿ 1000 ಪುರುಷರಿಗೆ 973 ಸ್ತ್ರೀಯರು ಇನ್ನೂ ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ 1000 ಪುರುಷರಿಗೆ 946 ಸ್ತ್ರೀಯರ ಸಂಖ್ಯೆವಿದೆ. ಆಸ್ಪತ್ರೆಗಳಲ್ಲಿ ಸ್ಕ್ಯಾನಿಂಗ್ ಮಾಡಿಸಿದಾಗ ಗರ್ಭಾವಸ್ಥೆಯ ಮಹಿಳೆಯರು ತಮ್ಮ ಮಗುವಿನ ಬೆಳವಣಿಗೆ ಬಗ್ಗೆ ಮಾತ್ರ ತಿಳಿದುಕೊಳ್ಳಬೇಕು ಎಂದು ಹೇಳಿದರು.

ಈ ಕಾರ್ಯಾಗಾರದಲ್ಲಿ ವಕೀಲರಾದ ಮಹೇಶ್ ದಾಸ್ ಮಾತನಾಡಿ, ಭ್ರೂಣಲಿಂಗ ಹತ್ಯೆ ತಡೆಗಟ್ಟಲು 1988 ರಲ್ಲಿ ಪಿ.ಸಿ.ಪಿ.ಎನ್ .ಡಿ.ಟಿ ಕಾಯ್ದೆಯನ್ನು ಮಹಾರಾಷ್ಟ್ರ ರಾಜ್ಯದಲ್ಲಿ ಮೊದಲ ಬಾರಿಗೆ ಜಾರಿಗೆ ತರಲಾಯಿತು. ಈ ಭ್ರೂಣಲಿಂಗ ಹತ್ಯೆ ಮಾಡುವದು ಶಿಕ್ಷಾರ್ಹ ಅಪರಾಧವಾಗಿದ್ದು, ಮೊದಲ ಪ್ರಕರಣದ ವೈದ್ಯರಿಗೆ 10 ಸಾವಿರ ದಂಡ ಹಾಗೂ ಒಂದು ವರ್ಷ ಜೈಲು ಶಿಕ್ಷೆವಿದೆ. ಹೆಣ್ಣು-ಗಂಡು ಮಗು ಎನ್ನುವ ತಾರತಮ್ಯ ಬಿಟ್ಟು, ಪ್ರತಿಯೊಬ್ಬರೂ ಹೆಣ್ಣು ಭ್ರೂಣ ಹತ್ಯೆ ತಡೆಯುವ ಮೂಲಕ ಸಮ ಸಮಾಜ ನಿರ್ಮಾಣಕ್ಕೆ ಶ್ರಮಿಸಬೇಕು ಎಂದರು.

ಈ ಸಂದರ್ಭದಲ್ಲಿ ಸಿನಿಯರ್ ಸ್ಪೆಷಲೀಸ್ಟ್ ಇನ್ ಪಾರ್ಟ್ನರ್ಸ್ ವಿಹಾನ್ ಸಂಸ್ಥೆಯ ರೋವಿನ ಬಾಸ್ಟೀನ್ ಅವರು ಮಾತನಾಡಿ ಇತ್ತೀಚಿನ ದಿನಗಳಲ್ಲಿ ಮಾನವ ಕಳ್ಳ ಸಾಗಾಣಿಕೆ ಚಟುವಟಿಕೆಗಳು ವಿಪರೀತವಾಗಿ ನಡೆಯುತ್ತಿವೆ. ಜನರ ಬಡತನ, ಆರ್ಥಿಕ ಪರಿಸ್ಥಿತಿಯನ್ನು ಗುರಿಯಾಗಿಸಿಕೊಂಡು ಹುಡುಗಿಯರು ಹಾಗೂ ಮಕ್ಕಳನ್ನು ಕಳ್ಳ ಸಾಗಾಣಿಕೆ ಮಾಡುವುದು ಕಂಡು ಬರುತ್ತಿದೆ. ಸಮಾಜದಲ್ಲಿನ ಬಡತನ ನಿರ್ಮೂಲನೆ, ಹೆಣ್ಣು ಶೋಷಣೆ, ಲಿಂಗ ಅಸಮಾನತೆಯನ್ನು ನಿರ್ಮೂಲನೆ ಮತ್ತು ಸಾರ್ವಜನಿಕರು ಜಾಗೃತಿ ವಹಿಸುವುದಿಂದ ಮಾನವ ಕಳ್ಳ ಸಾಗಾಣಿಕೆ ತಡೆಯಬಹುದೆಂದು ವಿಶೇಷ ಉಪನ್ಯಾಸವನ್ನು ನೀಡಿದರು.

## ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿಕೆ
# ತಾಂತ್ರಿಕತೆ ಅನ್ವೇಷಣೆ ಮುಂಚೂಣಿ



**ಬೆಂಗಳೂರು:** ಪ್ರತಿಷ್ಠಿತ ಪ್ರೊ.ಸಿ.ಎನ್.ಆರ್. ರಾವ್ ಬೆಂಗಳೂರು ಇಂಡಿಯಾ ನ್ಯಾನೋ ಸೈನ್ಸ್ ಪ್ರಶಸ್ತಿಗೆ ಭಾಜನರಾಗಿರುವ ಪ್ರೊ.ಅರಿಂದಮ್ ಘೋಷ್ ಅವರಿಗೆ ಅಭಿನಂದನೆ ಸಲ್ಲಿಸುತ್ತೇನೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

ಬೆಂಗಳೂರಿನ ಹೋಟೆಲ್ ಲಲಿತ್ ಅಶೋಕದಲ್ಲಿ ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆ ಹಾಗೂ ನ್ಯಾನೋ ತಂತ್ರಜ್ಞಾನವಿಷನ್ ಗ್ರೂಪ್ ವತಿಯಿಂದ ಹಮ್ಮಿಕೊಳ್ಳಲಾದ '13ನೇ ಬೆಂಗಳೂರು ನ್ಯಾನೋ ಅಂತರರಾಷ್ಟ್ರೀಯ ಸಮ್ಮೇಳನ'ವನ್ನು ಉದ್ಘಾಟಿಸಿ ಮಾತನಾಡಿದ ಮುಖ್ಯಮಂತ್ರಿಗಳು, ದೇಶ, ವಿದೇಶಗಳ ಖ್ಯಾತ ವಿಜ್ಞಾನಿಗಳು, ತಂತ್ರಜ್ಞಾನಿಗಳು, ತಾಂತ್ರಿಕ ಚಿಂತಕರು, ಉದ್ಯಮಗಳ ಖ್ಯಾತನಾಮರೊಂದಿಗೆ ಈ ಪ್ರತಿಷ್ಠಿತ ನ್ಯಾನೋ ಟೆಕ್ನಾಲಜಿ ಸಮಾವೇಶದಲ್ಲಿ ಭಾಗವಹಿಸಲು ನನಗೆ ಹೆಮ್ಮೆ ಎನಿಸುತ್ತಿದೆ ಎಂದು ಹೇಳಿದರು.

ರಾಜ್ಯದಲ್ಲಿ ನಡೆಯುವ ಇಂತಹ ವಿಜ್ಞಾನ ಮತ್ತು ತಂತ್ರಜ್ಞಾನ ಸಮಾವೇಶದಲ್ಲಿ ಭಾಗವಹಿಸುವುದು ನನಗೆ ಯಾವತ್ತೂ ಸ್ಫೂರ್ತಿದಾಯಕ ಹಾಗೂ ಸಂತಸದ ವಿಚಾರ. ಕರ್ನಾಟಕ ತನ್ನ ಶ್ರೀಮಂತ ಸಾಂಸ್ಕೃತಿಕ ಪರಂಪರೆಗಳಿಗೆ ಮಾತ್ರವಲ್ಲದೆ ಶೈಕ್ಷಣಿಕ ಮತ್ತು ಸಂಶೋಧನೆ ಚಟುವಟಿಕೆಗಳಿಗೆ ಭದ್ರ ತಳಹದಿಯನ್ನು ಕಲ್ಪಿಸುವ ಕಾರ್ಯದಲ್ಲಿ ಹೆಸರುವಾಸಿಯಾಗಿದೆ. ತಾಂತ್ರಿಕತೆ ಆಧಾರಿತ ಅನ್ವೇಷಣೆ ಕ್ಷೇತ್ರದಲ್ಲಿ ನಮ್ಮ ರಾಜ್ಯ ಎಂದಿಗೂ ಮುಂಚೂಣಿಯಲ್ಲಿದೆ ಎಂದು ತಿಳಿಸಿದರು.

ಐಐಎಸ್ಸಿ, ಜೆಎನ್ಸಿಎಎಸ್ಆರ್, ಎನ್ಸಿಬಿಎಸ್, ಸಿಇಎನ್ಎಸ್ ನಂತಹ ಪ್ರತಿಷ್ಠಿತ ಸಂಶೋಧನಾ ಸಂಸ್ಥೆಗಳ ನೆರವಿನೊಂದಿಗೆ, ಬೆಂಗಳೂರು ದೇಶದ ನ್ಯಾನೋ ಟೆಕ್ ಹಬ್ ಆಗಿ ರೂಪುಗೊಳ್ಳುವ ಪೂರ್ಣ ವಿಶ್ವಾಸ ನನಗಿದೆ. ಮುಂಬರುವ ವರ್ಷಗಳಲ್ಲಿ ಬೆಂಗಳೂರು ಈ ಆಧುನಿಕ ತಾಂತ್ರಿಕ ಕ್ಷೇತ್ರದಲ್ಲಿ ಪ್ರಮುಖ ಪಾತ್ರವನ್ನು ನಿಭಾಯಿಸಲಿದೆ.

ಆಹಾರ ಭದ್ರತೆ, ಇಂಧನ ಸುರಕ್ಷತೆ, ಶುದ್ಧ ಜಲ, ಮೂಲಸೌಕರ್ಯ, ಆರೋಗ್ಯ ಸೇವೆ, ಮೆಡಿಸಿನ್, ತ್ಯಾಜ್ಯವಸ್ತುಗಳ ನಿರ್ವಹಣೆ, ಪರಿಸರ ನಿರ್ವಹಣೆಯಂತಹ ಕ್ಷೇತ್ರಗಳಲ್ಲಿ ಎದುರಾಗುವ ಸವಾಲುಗಳಿಗೆ ವಿನೂತನ ನ್ಯಾನೋ ಟೆಕ್ನಾಲಜಿ ಆಧಾರಿತ ಪರಿಹಾರಗಳನ್ನು ಕಂಡುಕೊಳ್ಳಬೇಕಾಗಿದೆ. ಹೆಚ್ಚುತ್ತಿರುವ ನಗರೀಕರಣ, ಜನಸಂಖ್ಯೆ ಹೆಚ್ಚಳ ಹಾಗೂ ಬದಲಾಗುತ್ತಿರುವ ಜೀವನ ಶೈಲಿಯಿಂದ ಮುಂದಿನ ದಿನಗಳಲ್ಲಿ ಈ ಸಮಸ್ಯೆಗಳು ಹೆಚ್ಚಾಗುವ ಸಾಧ್ಯತೆಗಳಿದ್ದು ಇವುಗಳಿಗೆ ನ್ಯಾನೋ ಟೆಕ್ನಾಲಜಿ ಆಧಾರಿತ ಪರಿಹಾರಗಳನ್ನು ಸಂಶೋಧಿಸಲು ನಾನು ವಿಜ್ಞಾನಿಗಳಿಗೆ ಮತ್ತು ಇಂಜಿನಿಯರ್ಗಳನ್ನು ಕೇಳಿಕೊಳ್ಳುತ್ತೇನೆ ಎಂದರು.

ಈ ಹೊಸ ತಾಂತ್ರಿಕ ಕ್ಷೇತ್ರದ ಸಾಧ್ಯತೆಗಳನ್ನು ಪೂರ್ಣ ಪ್ರಮಾಣದಲ್ಲಿ ಬಳಸಿಕೊಳ್ಳಲು ಅಂತಾರಾಷ್ಟ್ರೀಯ ಸಂಶೋಧನಾ ಸಹಭಾಗಿತ್ವ ಅತ್ಯಗತ್ಯವಾಗಿದೆ ಎಂದು ನಾನು ಭಾವಿಸಿದ್ದೇನೆ. ಇದಕ್ಕಾಗಿ ಮಾಹಿತಿಗಳ ಹಾಗೂ ತಾಂತ್ರಿಕತೆಗಳ ಪರಸ್ಪರ ವಿನಿಮಯ, ಈ ಕ್ಷೇತ್ರದಲ್ಲಿ ಎದುರಾಗುವ ಸವಾಲುಗಳ ಮತ್ತು ಅವುಗಳ ಪರಿಹಾರ ಸಾಧ್ಯತೆಗಳ ವಿಚಾರ ವಿನಿಮಯ ಮತ್ತು ಅಂತಿಮವಾಗಿ ಸಮಾಜದ ಶ್ರೇಯೋಭಿವೃದ್ಧಿಗೆ ಪೂರಕವಾಗಿ ಪ್ರತಿಭೆಗಳನ್ನು ಬೆಳೆಸುವ ಅಗತ್ಯವಿದೆ.

ಇಂತಹ ಅಂತಾರಾಷ್ಟ್ರೀಯ ಸಮಾವೇಶಗಳು ಪರಸ್ಪರ ಸಂಪರ್ಕ ಸಾಧಿಸಲು, ಜ್ಞಾನವನ್ನು ಹಂಚಿಕೊಳ್ಳಲು, ತಾಂತ್ರಿಕತೆಗಳ ವಿನಿಮಯಕ್ಕೆ, ಕೌಶಲ್ಯ ಅಭಿವೃದ್ಧಿಗೆ ಹಾಗೂ ಉದ್ಯಮ ಸಹಭಾಗಿತ್ವಕ್ಕೆ ಸಾಕಷ್ಟು ಅವಕಾಶವನ್ನು ಕಲ್ಪಿಸಲಿದೆ. ಯುವ ಉದ್ಯಮಿಗಳು ಈ ಕ್ಷೇತ್ರದ ತಜ್ಞರ ಮತ್ತು ದಿಗ್ಗಜರ ಸಹಕಾರ ಮತ್ತು ಸಹಭಾಗಿತ್ವದ ಸದುಪಯೋಗಪಡೆದುಕೊಂಡು ನಮ್ಮ ರಾಜ್ಯದಲ್ಲಿ ಹೊಸ ಉದ್ಯಮಗಳನ್ನು ಆರಂಭಿಸಲು ನಾನು ಆಹ್ವಾನಿಸುತ್ತೇನೆ.

ಕರ್ನಾಟಕದಲ್ಲಿ ಈ ವಿನೂತನ ಉದ್ಯಮ ಕ್ಷೇತ್ರದ ಅಭಿವೃದ್ಧಿಗೆ ಪೂರಕವಾದ ವಾತಾವರಣವನ್ನು ಸೃಷ್ಟಿಸಲು ಸಾಧ್ಯವಿರುವ ಸಂಪೂರ್ಣ ಸಹಕಾರವನ್ನು ನಮ್ಮ ಸರ್ಕಾರ ಒದಗಿಸಲಿದೆ. ಈ ಸಮಾವೇಶವನ್ನು 2007ರಿಂದ ನಿರಂತರವಾಗಿ ಆಯೋಜಿಸಿಕೊಂಡು ಬರಲು ಮಾರ್ಗದರ್ಶನ ನೀಡುತ್ತಿರುವ ಭಾರತ ರತ್ನ ಪ್ರೊ.ಸಿ.ಎನ್.ಆರ್. ರಾವ್ ಅವರಿಗೆ ಧನ್ಯವಾದ ಸಲ್ಲಿಸಿದರು.

ಈ ಸುಂದರ ಉದ್ಯಾನನಗರಿಯಲ್ಲಿ ತಾವಿರುವ ಸಮಯವನ್ನು ಸಂತಸದಿಂದ ಕಳೆಯಿರಿ ಎಂದು ನಾನು ಆಶಿಸುತ್ತಾ, 13 ನೇ ಬೆಂಗಳೂರು ಇಂಡಿಯಾ ನ್ಯಾನೋ ಅತ್ಯಂತ ಯಶಸ್ವಿಯಾಗಿ ನೆರವೇರಲಿ ಎಂದು ನಾನು ಹಾರೈಸಿದರು.

## ಪ್ಲಾಸ್ಟಿಕ್ ಬಳಕೆ ನಿಯಂತ್ರಿಸಲು ಕ್ರಮ ಕೈಗೊಳ್ಳಿ: ಜಿಲ್ಲಾಧಿಕಾರಿ ಶಿವಶಂಕರ್

**ಬೆಂಗಳೂರು ಗ್ರಾಮಾಂತರ:** ಪ್ಲಾಸ್ಟಿಕ್ ಬಳಕೆಯಿಂದ ಪರಿಸರ ಮಾಲಿನ್ಯವಾಗುವದನ್ನು ತಡೆಯುವಲ್ಲಿ ಅಧಿಕಾರಿಗಳು ಕಾರ್ಯ ಪ್ರವೃತ್ತರಾಗಿ ನಿಷೇಧಿತ ಏಕ ಬಳಕೆ ಪ್ಲಾಸ್ಟಿಕ್ ಸಂಗ್ರಹ ಮಾಡುವ ಅಂಗಡಿ, ದಾಸ್ತಾನು ಮಳಿಗೆಗಳು ಹಾಗೂ ಗೋದಾಮುಗಳ ಮೇಲೆ ಅಧಿಕಾರಿಗಳ ತಂಡ ಆಗಾಗ್ಗೆ ದಾಳಿ ನಡೆಸಿ ಪ್ಲಾಸ್ಟಿಕ್ ಬಳಕೆಯನ್ನು ನಿಯಂತ್ರಿಸಲು ಕ್ರಮ ಕೈಗೊಳ್ಳಬೇಕು ಎಂದು ಜಿಲ್ಲಾಧಿಕಾರಿ ಡಾ.ಎನ್ ಶಿವಶಂಕರ್ ಹೇಳಿದರು.

ಬೆಂಗಳೂರು ಗ್ರಾಮಾಂತರ ಜಿಲ್ಲಾಡಳಿತ ಭವನದ ನ್ಯಾಯಾಲಯ ಸಭಾಂಗಣದಲ್ಲಿ ನಡೆದ ಪ್ಲಾಸ್ಟಿಕ್ ತ್ಯಾಜ್ಯ ನಿರ್ವಹಣಾ ನಿಯಮದಡಿಯಲ್ಲಿ ನಿಷೇಧಿತ ಏಕ ಬಳಕೆ ಪ್ಲಾಸ್ಟಿಕ್ ಕುರಿತು ತೆಗೆದುಕೊಂಡಿರುವ ಕ್ರಮದ ಬಗೆಗಿನ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಮಾಲಿನ್ಯ ನಿಯಂತ್ರಣ ಮಂಡಳಿ ಸದಸ್ಯರು, ಸ್ಥಳೀಯ ಸಂಸ್ಥೆಗಳ ಸದಸ್ಯರು, ಪೊಲೀಸ್ ಇಲಾಖೆ, ತಹಶೀಲ್ದಾರ್ ಗಳ ಜಂಟಿ ಸಮಿತಿ ರಚಿಸಿ ನಿಷೇಧಿತ ಏಕ ಬಳಕೆ ಪ್ಲಾಸ್ಟಿಕ್ ಉತ್ಪನ್ನಗಳ ಸಂಗ್ರಹ ಗೋದಾಮುಗಳು, ದಾಸ್ತಾನು ಮಳಿಗೆಗಳ ಮೇಲೆ ಕಾಲ ಕಾಲಕ್ಕೆ ದಾಳಿ ನಡೆಸಿ ದಂಡ ವಿಧಿಸುವ ಜೊತೆಗೆ ಪುನರಾವರ್ತನೆಯಾಗದಂತೆ ಎಚ್ಚರಿಕೆ ನೀಡಬೇಕು.

ಪ್ಲಾಸ್ಟಿಕ್ ಬಳಕೆಯಿಂದ ಪರಿಸರಕ್ಕೆ ಸಾಕಷ್ಟು ಹಾನಿಯುಂಟಾಗುತ್ತಿದೆ. ಪ್ರತಿನಿತ್ಯ ಜನರು ಪ್ಲಾಸ್ಟಿಕ್ ಬಳಕೆಯನ್ನು ಹೆಚ್ಚಾಗಿ ಉಪಯೋಗಿಸುತ್ತಿದ್ದಾರೆ. ಇದರಿಂದ ಜನರ ಆರೋಗ್ಯದ ಮೇಲೂ ಪ್ರಭಾವ ಬೀರುತ್ತಿದೆ. ನಿಷೇಧಿತ ಪ್ಲಾಸ್ಟಿಕ್ ಬಳಕೆ ಮಾಡದಂತೆ ಸಾರ್ವಜನಿಕರಲ್ಲಿ ಅರಿವು ಮೂಡಿಸಿ ಎಂದರು. ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಡಾ.ಅನುರಾಧ ಕೆ.ಎನ್, ದೊಡ್ಡಬಳ್ಳಾಪುರ ಉಪವಿಭಾಗಾಧಿಕಾರಿ ದುರ್ಗಾಶ್ರೀ ಎನ್, ಮಾಲಿನ್ಯ ನಿಯಂತ್ರಣ ಮಂಡಳಿಯ ಹಿರಿಯ ಪರಿಸರ ಅಧಿಕಾರಿ ಅನಿಲ್ ಕುಮಾರ್, ಹೊಸಕೋಟೆ ಹಾಗೂ ದೇವನಹಳ್ಳಿ ವಿಭಾಗದ ಪರಿಸರ ಅಧಿಕಾರಿ ಪದ್ಮನಾಭನ್, ನೆಲಮಂಗಲ ಪರಿಸರ ಅಧಿಕಾರಿ ಭೀಮ್ ಸಿಂಗ್ ಗೋಗಿ, ದೊಡ್ಡಬಳ್ಳಾಪುರ ಪರಿಸರ ಅಧಿಕಾರಿ ಭಾಸ್ಕರ್, ಇತರೆ ಸಿಬ್ಬಂದಿ ಉಪಸ್ಥಿತರಿದ್ದರು.



**ರಾಷ್ಟ್ರಪತಿ ಭವನದಲ್ಲಿ ಗೌರವಾನ್ವಿತ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರ ಅಧ್ಯಕ್ಷತೆಯಲ್ಲಿ ರಾಷ್ಟ್ರಪತಿಭವನದಲ್ಲಿ ನಡೆಯುತ್ತಿರುವ 2024 ರ ರಾಜ್ಯಪಾಲರ ಸಮ್ಮೇಳನದಲ್ಲಿ ಕರ್ನಾಟಕದ ಗೌರಾನ್ವಿತ ರಾಜ್ಯಪಾಲರಾದ ಥಾವರ್ ಚಂದ್ ಗೆಹ್ಲೋಟ್ ಅವರು ಭಾಗವಹಿಸಿದರು.**

## 13ರಂದು ಒಂದು ದಿನದ ಉದ್ಯಮಶೀಲತಾ ತಿಳಿವಳಿಕೆ ಶಿಬಿರ

**ಮಂಡ್ಯ:** ಮಂಡ್ಯ ಜಿಲ್ಲಾ ಕೈಗಾರಿಕಾ ಕೇಂದ್ರ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ ಕೌಶಲ್ಯಾಭಿವೃದ್ಧಿ, ಬೆಂಗಳೂರು ಹಾಗೂ ಕರ್ನಾಟಕ ಉದ್ಯಮಶೀಲತಾ ಅಭಿವೃದ್ಧಿ ಕೇಂದ್ರ (ಸಿಡಾಕ್) ಇವರ ಸಂಯುಕ್ತ ಆಶ್ರಯದಲ್ಲಿ ಮಂಡ್ಯ ಜಿಲ್ಲೆಯಲ್ಲಿ ಸ್ವಂತ ಉದ್ಯಮವನ್ನು ಸ್ಥಾಪಿಸಲು ಬಯಸುವವರಿಗೆ ಒಂದು ದಿನದ ಉದ್ಯಮಶೀಲತಾ ತಿಳುವಳಿಕ ಶಿಬಿರವನ್ನು ಆಗಸ್ಟ್ 13 ಮಂಗಳವಾರದಂದು ಮಂಡ್ಯ ಸುಭಾಷ ನಗರ ಹರ್ಡೀಕರ್ ಭವನದಲ್ಲಿ ಹಮ್ಮಿಕೊಳ್ಳಲಾಗಿದೆ.

ಕಾರ್ಯಕ್ರಮದಲ್ಲಿ ಸ್ವಂತ ಉದ್ಯಮವನ್ನು ಸ್ಥಾಪಿಸ ಬಯಸುವ ಆಸಕ್ತರಿಗೆ ಪ್ರೇರಣೆ, ಸ್ವಂತ ಉದ್ಯಮ ಸ್ಥಾಪನೆಗಾಗಿ ಸರ್ಕಾರ ಹಾಗೂ ಹಣಕಾಸು ಸಂಸ್ಥೆಗಳಿಂದ ದೊರೆಯುವ ನೆರವು/ಪ್ರೋತ್ಸಾಹ ಯೋಜನೆಗಳ ಆಯ್ಕೆ, ಮುಂದೆ ಕೈಗೊಳ್ಳಲಾಗುವ ಉದ್ಯಮಶೀಲತಾಭಿವೃದ್ಧಿ ತರಬೇತಿ ಬಗ್ಗೆ ಮಾಹಿತಿ ಹಾಗೂ ಇತರೆ ಕೈಗಾರಿಕಾ ವಿಷಯಗಳ ಕುರಿತು ಮಾಹಿತಿಯನ್ನು ನೀಡಲಾಗುವುದು. ಕಾರ್ಯಕ್ರಮದಲ್ಲಿ ಭಾಗವಹಿಸುವವರು ಕನಿಷ್ಠ 18 ವರ್ಷ ಮೇಲ್ಪಟ್ಟ ವಯಸ್ಸಿನವರಾಗಿರಬೇಕು ಹಾಗೂ ಓದಲು/ಬರೆಯಲು ಬರುತ್ತಿರಬೇಕು. ಅರ್ಜಿ ಸಲ್ಲಿಸಲು ಆಗಸ್ಟ್ 12 ಕೊನೆಯ ದಿನವಾಗಿರುತ್ತದೆ. ಹೆಚ್ಚಿನ ಮಾಹಿತಿಗಾಗಿ ದೂ.ಸಂ: 9008194396, 7760145784 ಅನ್ನು ಸಂಪರ್ಕಿಸಬಹುದು ಎಂದು ಮಂಡ್ಯ ಸಿಡಾಕ್ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬಾಳಿನ ಭಾಗ್ಯೋದಯಕ್ಕೆ ಧರ್ಮದ ಬೆಳಕು ಬೇಕು



**ದಾವಣಗೆರೆ:** ಬಿತ್ತಿದ ಬೀಜಕ್ಕೆ ನೀರು ಗೊಬ್ಬರ ಹೇಗೆ ಅವಶ್ಯಕವೋ ಹಾಗೆಯೇ ನೀತಿಗೆ ಧರ್ಮವೂ ಅಷ್ಟೇ ಅವಶ್ಯಕ. ಪರಿಶುದ್ಧವಾದ ಜೀವನ ರೂಪಿತಗೊಳ್ಳಲು ಧರ್ಮ ಪ್ರಜ್ಞೆ ಅವಶ್ಯಕ. ಬಾಳಿನ ಭಾಗ್ಯೋದಯಕ್ಕೆ ಧರ್ಮದ ಬೆಳಕು ಮುಖ್ಯವೆಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ.ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಗುರುವಾರ ನಗರದ ಶ್ರೀ ರಂಭಾಪುರಿ ಜಗದ್ಗುರು ವೀರಗಂಗಾಧರ ಮಂಗಲ ಭವನದಲ್ಲಿ ಶ್ರೀಮದ್ವೀರಶೈವ ಸದ್ಬೋಧನ ಸಂಸ್ಥೆಯವರು ಸಂಘಟಿಸಿದ್ದ ಜನಜಾಗೃತಿ ಧರ್ಮ ಸಮಾವೇಶದ 3ನೇ ದಿನದ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಭಗವಂತನಿತ್ತ ಸಂಪತ್ತು ನಿಜವಾದ ಬಾಳಿನ ಸಂಪತ್ತು. ಭಕ್ತ ಭಗವಂತನೆಡೆಗೆ ಹೋದಾಗ ಜೀವನ ಪಾವನ ಪುನೀತ. ದೇವರ ಮೇಲಿನ ನಂಬಿಕೆ ಮನುಷ್ಯನ ಬಾಳಿಗೆ ಶಾಶ್ವತ ನಂದಾದೀಪ. ದೇವರು ಎಲ್ಲರಲ್ಲೂ ಇರುವನು. ಆದರೆ ಎಲ್ಲರೂ ದೇವರಲ್ಲಿ ಇಲ್ಲ. ಶ್ರಮದ ಕಾಯಕದಿಂದಲೇ ಚೈತನ್ಯ ಪ್ರಾಪ್ತಿಯಾಗುತ್ತದೆ. ಕ್ರಿಯಾಶೀಲ ಬದುಕು ಶ್ರೇಯಸ್ಸಿಗೆ ಕಾರಣ. ಬದುಕಿನ ಹಿರಿಮೆ ರಹಸ್ಯ ಬೋಧಿಸುವುದೇ ನಿಜವಾದ ಧರ್ಮ. ಉದಾತ್ತ ಜೀವನ ಮೌಲ್ಯಗಳನ್ನು ಸಂಪಾದಿಸಿಕೊಂಡು ಬಾಳಬೇಕೆಂದು ವೀರಶೈವ ಧರ್ಮ ನಿರೂಪಿಸಿದೆ. ಧರ್ಮ ಮತ್ತು ದರ್ಶನಗಳ ಅರಿವು ಪ್ರಾಪ್ತಿಯಾಗಲು ಶ್ರೀ ಗುರುವಿನ ಬೋಧಾಮೃತ ಅವಶ್ಯಕ. ಸತ್ಯ ಶುದ್ಧವಾದ ತತ್ವ ಸಿದ್ಧಾಂತಗಳನ್ನು ಬೋಧಿಸಿದ ಶ್ರೀ ಜಗದ್ಗುರು ರೇಣುಕಾಚಾರ್ಯರ ಚಿಂತನೆಗಳನ್ನು ಅರಿತುಕೊಂಡು ಬಾಳಬೇಕೆಂದರು.

ಮುಖ್ಯ ಅತಿಥಿಗಳಾಗಿ ಆಗಮಿಸಿದ ಮಾಜಿ ಸಂಸದ ಜಿ.ಎಂ. ಸಿದ್ದೇಶ್ವರ ಮಾತನಾಡಿ ವೀರಶೈವ ಧರ್ಮ ಸಂವೇದನಾಶೀಲ ಜೀವನಕ್ಕೆ ಅಮೂಲ್ಯ ಕೊಡುಗೆ ಕೊಟ್ಟಿದೆ. ಗಂಡು ಹೆಣ್ಣು ಉಚ್ಚ ನೀಚ ಮತ್ತು ಬಡವ ಬಲ್ಲಿದ ಎನ್ನದೇ ಸಮಾನ ಅವಕಾಶವನ್ನು ಕಲ್ಪಿಸಿಕೊಟ್ಟಿದ್ದನ್ನು ಮರೆಯಲಾಗದೆಂದರು. ಕುಮಾರಿ ಸೌಭಾಗ್ಯ ಬೀಳಗಿಮಠ ಅವರಿಗೆ 'ಸಾಧನೆಯ ಶಿಖರ' ಪ್ರಶಸ್ತಿಯನ್ನಿತ್ತು ಶ್ರೀ ರಂಭಾಪುರಿ ಜಗದ್ಗುರುಗಳು ಪ್ರದಾನ ಮಾಡಿದರು.

ದಾವಣಗೆರೆ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ದಿನೇಶ ಕೆ.ಶೆಟ್ಟಿ, ಬಿಜೆಪಿ ಮುಖಂಡರಾದ ಗಾಯತ್ರಿ ಸಿದ್ಧೇಶ್ವರ, ಪೋಲೀಸ ವರಿಷ್ಠಾಧಿಕಾರಿ ಉಮಾ ಪ್ರಶಾಂತ್, ಉಪಮಹಾಪೌರರಾದ ಯಶೋಧ ಯಗ್ಗಪ್ಪ, ಬಿಜೆಪಿ ರಾಜ್ಯ ಮಹಿಳಾ ಘಟಕದ ಉಪಾಧ್ಯಕ್ಷೆ ಹೆಚ್.ಸಿ.ಜಯಮ್ಮ, ಮಹಾನಗರಪಾಲಿಕೆ ಆಯುಕ್ತರಾದ ರೇಣುಕಾ, ಎ. ನಾಗರಾಜ ಮುಖ್ಯ ಅತಿಥಿಗಳಾಗಿ ಪಾಲ್ಗೊಂಡು ಶ್ರೀ ರಂಭಾಪುರಿ ಜಗದ್ಗುರುಗಳಿಂದ ಆಶೀರ್ವಾದ ಪಡೆದರು.

# ಸೋರಲಮಾವು ಎನ್ಎಸ್ಎಸ್ ಶಿಬಿರ ಮುಕ್ತಾಯ




**ಹುಳಿಯಾರು:** ಹುಳಿಯಾರು-ಕೆಂಕೆರೆ ಬಿಎಂಎಸ್ ಸರಕಾರಿ ಪ್ರಥಮ ದರ್ಜೆ ಕಾಲೇಜಿನಿಂದ ಸೋರಲಮಾವು ಗ್ರಾಮದಲ್ಲಿ 7 ದಿನಗಳ ಕಾಲ ಏರ್ಪಡಿಸಿದ್ದ ಎನ್ಎಸ್ಎಸ್ ಶಿಬಿರ ಸಂಪನ್ನವಾಯಿತು. ಈ ಏಳು ದಿನಗಳ ಶಿಬಿರದಲ್ಲಿ ಶ್ರಮ ದಾನ, ಗ್ರಾಮಸ್ಥರಿಗೆ ಉಚಿತ ಆರೋಗ್ಯ ತಪಾಸಣೆ, ಕರುಗಳ ಪ್ರದರ್ಶನ ಹಾಗೂ ಬರಡು ರಾಸುಗಳ ತಪಾಸಣೆ, ವೇದಿಕೆ ಕಾರ್ಯಕ್ರಮ, ಸಾಂಸ್ಕೃತಿಕ ಕಾರ್ಯಕ್ರಮಗಳು, ಗುಂಪು ಚರ್ಚೆ, ಸಂಪನ್ಮೂಲ ವ್ಯಕ್ತಿಗಳೊಂದಿಗೆ ಸಂವಾದ ಹೀಗೆ ವಿದ್ಯಾರ್ಥಿಗಳ ವ್ಯಕ್ತಿತ್ವ ವಿಕಸನಕ್ಕೆ ಪೂರಕವಾಗುವ ಹಲವಾರು ಕಾರ್ಯಕ್ರಮಗಳು ಜರುಗಿದವು.

ಸಮಾರೋಪ ಸಮಾರಂಭದಲ್ಲಿ ಎನ್ಎಸ್ಎಸ್ ಸಂಯೋಜನಾಧಿಕಾರಿ ಪ್ರೊ.ಮಲ್ಲಿಕಾರ್ಜುನ್ ಬಿರಾದಾರ್ ಮಾತನಾಡಿ ರಾಷ್ಟ್ರೀಯ ಸೇವಾ ಯೋಜನೆಯ ಗೆಲುವು ಇರುವುದು ಜೀವನಕ್ಕೆ ಪೂರಕವಾದ ಕೌಶಲ್ಯಗಳನ್ನು ಬೆಳೆಸುವುದರಲ್ಲಿ. ಎಲೆಮರೆಯ ಕಾಯಿಯಂತೆ ಇರುವ ಅದೆಷ್ಟೋ ವಿದ್ಯಾರ್ಥಿಗಳು ಶಿಬಿರದಲ್ಲಿ ನಿರೂಪಣೆ, ಸ್ವಾಗತ, ಅತಿಥಿ ಸತ್ಕಾರ, ಅಡುಗೆಯೇ ಮೊದಲುಗೊಂಡು ಒತ್ತಡಗಳನ್ನು ನಿರ್ವಹಿಸುವ ಕಲೆ, ಸಹಜ ಕೃಷಿ, ಗ್ರಾಮೀಣ ಬದುಕಿನ ಬಗ್ಗೆ ಅರಿವು, ವಿಭಿನ್ನ ಸ್ವಭಾವದ ವ್ಯಕ್ತಿಗಳೊಂದಿಗೆ ಹೊಂದಾಣಿಕೆಯಿಂದ ವ್ಯವಹರಿಸುವುದನ್ನು ಕಲಿಯಲು ಸಹಕಾರಿಯಾಗಿದೆ ಎಂದರು.

ಪ್ರಾಚಾರ್ಯ ಪ್ರೊ. ವೀರಣ್ಣ ಎಸ್ ಸಿ ಮಾತನಾಡಿ ರಾಷ್ಟ್ರೀಯ ಸೇವಾ ಯೋಜನಾ ಶಿಬಿರ ಒಂದು ಸಂಘಟಿತ ಪ್ರಯತ್ನವಾಗಿದ್ದು ಶಿಬಿರದಲ್ಲಿ ಕಲಿತುಕೊಂಡ ಶಿಸ್ತು, ಸಮಯಪಾಲನೆ ಹಾಗೂ ಶ್ರಮ ಸಂಸ್ಕೃತಿಯನ್ನು ವಿದ್ಯಾರ್ಥಿಗಳು ಮುಂದುವರಿಸುತ್ತ ಹೋಗಬೇಕು ಎಂದು ಹೇಳಿದರು. ಶಿಬಿರದ ವಿವಿಧ ಹಂತಗಳಲ್ಲಿ ಸೋರಲು ಮಾವು ಗ್ರಾಮಸ್ಥರ ಸಹಕಾರವನ್ನು ಅವರು ಸ್ಮರಿಸಿದರು.

ಸೋರಲಮಾವು ಹಿರಿಯ ಪ್ರಾಥಮಿಕ ಶಾಲೆಯ ಶಾಲಾಭಿವೃದ್ಧಿ ಸಮಿತಿಯ ಅಧ್ಯಕ್ಷರಾದ ಶಿವಕುಮಾರ್ ಅವರು ಮಾತಾಡಿ, ಎನ್ಎಸ್ಎಸ್‌ನ ಸಂಕೇತವಾದ ನಿರಂತರವಾಗಿ ಉರುಳುವ ಚಕ್ರದಂತೆ ಶಿಬಿರಾರ್ಥಿಗಳು ಶ್ರಮ ಜೀವನದ ಮೌಲ್ಯವನ್ನು ಜೀವನದುದ್ದಕ್ಕೂ ಪಾಲಿಸಬೇಕು ಎಂದು ಹೇಳಿದರು.

ಸೋರಲಮಾವು ಗ್ರಾಮದ ನಿವೃತ್ತ ಶಿಕ್ಷಕರಾದ ಎಲ್. ಮುದ್ದಪ್ಪ ಮಾತಾಡಿ ರಾಷ್ಟ್ರೀಯ ಸೇವಾ ಯೋಜನೆಯಲ್ಲಿ ಪಾಲ್ಗೊಳ್ಳುವುದು ಎಂದರೆ ಗಾಂಧೀಜಿಯವರ ತತ್ವಗಳನ್ನು ಪಾಲಿಸಿದಂತೆ ಎಂದು ಅಭಿಪ್ರಾಯಪಟ್ಟರು.

ಮತ್ತೋರ್ವ ಸಂಯೋಜನಾಧಿಕಾರಿ ಡಾ.ಜಯಶ್ರೀ ಬಿ ಕದ್ರಿ, ಸಹ ಶಿಬಿರಾಧಿಕಾರಿಗಳಾದ ತಿಪ್ಪೇಸ್ವಾಮಿ, ಜಯಪ್ರಕಾಶ್ ಹಾಗೂ ಅಮ್ಜದ್‌ಪಾಷ, ಸೋರಲಮಾವು ಗ್ರಾಮದ ಶಾಲಾಭಿವೃದ್ಧಿ ಸಮಿತಿಯ ಸದಸ್ಯರಾದ ಮೋಹನ್‌ಕುಮಾರ್ ಪಿ, ಮಾಜಿ ಗ್ರಾ.ಪಂ ಅಧ್ಯಕ್ಷರಾದ ನಿರಂಜನಮೂರ್ತಿ, ಶಾಲಾ ಮುಖ್ಯೋಪಾಧ್ಯಾಯರಾದ ರಾಮಚಂದ್ರ, ಬೋವಿ, ಕಾಲೇಜಿನ ದೈಹಿಕ ನಿರ್ದೇಶಕರಾದ ಪ್ರೊ.ಯೋಗೀಶ್ ಪಿ, ಉಪನ್ಯಾಸಕರಾದ ಹರೀಶ್ ಎಂ.ಪಿ ಉಪಸ್ಥಿತರಿದ್ದರು.

ಸಂಜೆ ಟಿಪ್ಸ್



# ಭಾರತದಲ್ಲಿ ಕಂಪನಿಯ ಅತಿದೊಡ್ಡ ಉತ್ಪಾದನಾ ಘಟಕ ನಿರ್ಮಿಸುವ ಸಲುವಾಗಿ ಜಾಗ ಖರೀದಿ ಒಪ್ಪಂದಕ್ಕೆ ಸಹಿ ಹಾಕಿದ ಲುಬ್ರಿಝೋಲ್

ವಿಶೇಷ ರಾಸಾಯನಿಕ ತಯಾರಿಕೆ ಮತ್ತು ಪೂರೈಕೆಯಲ್ಲಿ ಜಾಗತಿಕವಾಗಿ ಮುಂಚೂಣಿಯಲ್ಲಿರುವ ಲುಬ್ರಿಝೋಲ್ ಕಾರ್ಪೊರೇಷನ್ ಈ ಭಾಗದಲ್ಲಿ ಅಭಿವೃದ್ಧಿ ಹೊಂದುತ್ತಿರುವ ಸಾರಿಗೆ ಹಾಗೂ ಕೈಗಾರಿಕಾ ದ್ರವ (ಟ್ರಾನ್ಸ್ಪೋರ್ಟ್ ಆಂಡ್ ಇಂಡಸ್ಟ್ರಿಯಲ್ ಫ್ಲುಯಿಡ್) ಮಾರುಕಟ್ಟೆಗೆ ಬೆಂಬಲ ಒದಗಿಸುವ ಸಲುವಾಗಿ ಕಂಪನಿಯ ಹೊಸ ಉತ್ಪಾದನಾ ಘಟಕ ನಿರ್ಮಿಸಲು ಔರಂಗಾಬಾದ್ ನಲ್ಲಿ 120 ಎಕರೆ ಜಮೀನು ಖರೀದಿಸಲು ಮಹಾರಾಷ್ಟ್ರ ಸರ್ಕಾರದ ಜೊತೆಗೆ ಲುಬ್ರಿಝೋಲ್ ಕಂಪನಿಯು ತಿಳುವಳಿಕೆ ಒಪ್ಪಂದಕ್ಕೆ ಸಹಿ ಹಾಕಿದೆ. ಈ ಯೋಜನೆಗೆ ಆರಂಭಿಕ ಹಂತದಲ್ಲಿ ಸರಿಸುಮಾರು 200 ಮಿಲಿಯನ್ ಹೂಡಿಕೆ ಮಾಡುತ್ತಿರುವುದಾಗಿ ಕಂಪನಿ ತಿಳಿಸಿದ್ದು, ಇದು ಭಾರತದಲ್ಲಿ ಕಂಪನಿ ಮಾಡುತ್ತಿರುವ ಅತಿದೊಡ್ಡ ಹೂಡಿಕೆಯಾಗಿದೆ.ಈ ಉತ್ಪಾದನಾ ಘಟಕವು ಜಾಗತಿಕವಾಗಿ ಕಂಪನಿಯ ಎರಡನೇ ಅತಿದೊಡ್ಡ ಉತ್ಪಾದನಾ ಘಟಕವಾಗಲಿದೆ ಮತ್ತು ಭಾರತದಲ್ಲಿನ ಕಂಪನಿಯ ಅತಿದೊಡ್ಡ ಉತ್ಪಾದನಾ ಘಟಕವಾಗಲಿದೆ. ಮುಂದಿನ ಹಲವು ವರ್ಷಗಳಲ್ಲಿ ಹಂತಹಂತವಾಗಿ ನಿರ್ಮಾಣ ನಡೆಯಲಿದ್ದು, ಭವಿಷ್ಯದ ವಿಸ್ತರಣೆಗೂ ಸ್ಥಳಾವಕಾಶ ಹೊಂದಲಾಗಿದೆ. ಈ ಕುರಿತು ಮಾತನಾಡಿರುವ ಲುಬ್ರಿಝೋಲ್ ಅಡಿಟಿವ್ಸ್ ನ ಪ್ರೆಸಿಡೆಂಟ್ ಫ್ಲೇವಿಯೊ ಕ್ಲಿಗರ್, ಲುಬ್ರಿಝುಲ್ ಐದು ವರ್ಷಗಳಿಗೂ ಹೆಚ್ಚು ಕಾಲ ಭಾರತದಲ್ಲಿ ಉತ್ತಮ ಹೂಡಿಕೆಗಳನ್ನು ಮಾಡುತ್ತಾ ಬಂದಿದೆ. ಅದಕ್ಕೆ ಪೂರಕವಾಗಿ ಈ ಹೊಸ ಅತ್ಯಾಧುನಿಕ ಉತ್ಪಾದನಾ ಘಟಕ ನಿರ್ಮಾಣವಾಗಲಿದ್ದು, ಭವಿಷ್ಯದಲ್ಲಿ ಈ ಪ್ರದೇಶದಲ್ಲಿ ಲುಬ್ರಿಝೋಲ್ ನ ಇತರ ವ್ಯವಹಾರಗಳಿಗೆ ನೆರವಾಗುವ ಸಾಮರ್ಥ್ಯ ಹೊಂದಲಿದೆ. ಜೊತೆಗೆ ಅಡಿಟಿವ್ಸ್ ಬಿಸಿನೆಸ್ ಸಾಮರ್ಥ್ಯವನ್ನು ಮತ್ತು ನಮ್ಮ ಪ್ರಾದೇಶಿಕ ಶಕ್ತಿಯನ್ನು ಹೆಚ್ಚು ಮಾಡಲಿದೆ ಎಂದು ಹೇಳಿದರು.

# ರೋಸ್ ಕೊಕೊನಟ್ ಲಡ್ಡು

## ಪಾಕ ಶಾಲೆ



## ಮಾಡುವ ವಿಧಾನ

ಒಂದು ಬೌಲ್ ಗೆ ಕೊಬ್ಬರಿ ತುರಿ, ಕಂಡೆನ್ಸಡ್ ಮಿಲ್ಕ್, ರೋಸ್ ವಾಟರ್, ಫುಡ್ ಕಲರ್, ಸಕ್ಕರೆ, ಏಲಕ್ಕಿ ಪುಡಿ ಸೇರಿಸಿ ಚೆನ್ನಾಗಿ ಮಿಕ್ಸ್ ಮಾಡಿ. ನಿಮ್ಮ ಕೈಗೆ ತುಪ್ಪ ಸವರಿಕೊಂಡು ಉಂಡೆ ಕಟ್ಟಿ. ಇದನ್ನು ಸ್ವಲ್ಪ ತೆಂಗಿನಕಾಯಿ ತುರಿಯಲ್ಲಿ ಹೊರಳಾಡಿಸಿದರೆ ರುಚಿಕರವಾದ ಕೊಕೊನಟ್ ಲಡ್ಡು ಸವಿಯಲು ಸಿದ್ಧ.

## ಬೇಕಿರುವ ಸಾಮಗ್ರಿ

1 ಕಪ್ – ಕೊಬ್ಬರಿ ತುರಿ, 1 ಕಪ್ – ಕಂಡೆನ್ಸಡ್ ಮಿಲ್ಕ್, ಸಕ್ಕರೆ– ಸ್ವಲ್ಪ, 1.5 ಟೇಬಲ್ ಸ್ಪೂನ್ ರೋಸ್ ವಾಟರ್, ½ ಟೀ ಸ್ಪೂನ್ – ಏಲಕ್ಕಿ ಪುಡಿ, ಚಿಟಿಕೆ – ಕೆಂಪು ಫುಡ್ ಕಲರ್, ತುಪ್ಪ – ಸ್ವಲ್ಪ.

# ಹುಳಿ ಮೊಸರು ಆರೋಗ್ಯಕ್ಕೆ ಒಳ್ಳೆಯದೇ?



ಹೆಲ್ತ್ ಟಿಪ್ಸ್

ಮೊಸರು ಭಾರತೀಯರಿಗೆ ಅತ್ಯಗತ್ಯ. ಎಷ್ಟೇ ತರಹದ ತಿನಿಸುಗಳನ್ನು ಬಡಿಸಿದರೂ ಕೊನೆಯಲ್ಲಿ ಮೊಸರು ತಿನ್ನದಿದ್ದರೆ ಊಟ ಪೂರ್ಣವಾಗುವುದಿಲ್ಲ. ನಾವು ಮೊಸರು ತಿನ್ನದಿದ್ದರೆ ಅದನ್ನು ಮಜ್ಜಿಗೆ ಮತ್ತು ಲಸ್ಸಿ ರೂಪದಲ್ಲಿ ತೆಗೆದುಕೊಳ್ಳುತ್ತೇವೆ.

ಮೊಸರು ನಮ್ಮ ಕರುಳಿನ ಆರೋಗ್ಯಕ್ಕೆ ತುಂಬಾ ಒಳ್ಳೆಯದು. ಇದು ನಮ್ಮ ಹೊಟ್ಟೆಯನ್ನು ತಂಪಾಗಿಡಲು ಸಹಾಯ ಮಾಡುತ್ತದೆ. ಮೊಸರು ನಮ್ಮ ಆರೋಗ್ಯಕ್ಕೆ ಬಹಳ ಮುಖ್ಯ.

ಮೊಸರು ಹುಳಿಯಾಗುವುದರಿಂದ ಅದರ ರುಚಿ ನಾಶವಾಗುತ್ತದೆ. ಹುಳಿ ಮೊಸರು ಪ್ರತಿಯೊಬ್ಬರ ಆರೋಗ್ಯಕ್ಕೆ ಹೊಂದುವುದಿಲ್ಲ. ಅದೂ ಅಲ್ಲದೆ.. ಹುಳಿ ಮೊಸರು ತಿನ್ನಲೇಬೇಕು. ಆದರೆ ಒಂದಷ್ಟು ಮುಂಜಾಗ್ರತೆ ವಹಿಸಬೇಕು ಎನ್ನುತ್ತಾರೆ ತಜ್ಞರು. ಇಲ್ಲದಿದ್ದರೆ ಆರೋಗ್ಯ ಸಮಸ್ಯೆ ಉಂಟಾಗುವ ಸಾಧ್ಯತೆ ಇದೆ.

ಹುಳಿ ಮೊಸರನ್ನು ತಣ್ಣಗಾಗಿಸಿ ಗಾಳಿಯಾಡದ ಸ್ವಚ್ಛವಾದ ಪಾತ್ರೆಯಲ್ಲಿ ಸಂಗ್ರಹಿಸಬೇಕು. ಮೊಸರನ್ನು ಸರಿಯಾಗಿ ಶೇಖರಿಸಿಡದಿದ್ದರೆ ಅಪಾಯಕಾರಿ ಸೂಕ್ಷ್ಮಾಣುಗಳು ಬೆಳೆಯಬಹುದು. ತಿನ್ನಲು ಅನಾರೋಗ್ಯಕರವಾಗುತ್ತದೆ.

ಲ್ಯಾಕ್ಟೋಸ್, ಲ್ಯಾಕ್ಟಿಕ್ ಆಮ್ಲವನ್ನು ಉತ್ಪಾದಿಸಲು ಬ್ಯಾಕ್ಟೀರಿಯಾದಿಂದ ಹುದುಗಿಸಲಾಗುತ್ತದೆ. ಇದು ಮೊಸರನ್ನು ಹುಳಿ ಮಾಡುತ್ತದೆ.

ಮೊಸರು ಯಾವಾಗಲೂ ರೆಫ್ರಿಜರೇಟರ್ನಲ್ಲಿ ಸ್ಥಿರ ತಾಪಮಾನದಲ್ಲಿ ಇಡಬೇಕು. ಮೊಸರು ಇಡುವ ಪಾತ್ರೆಗಳನ್ನು ಕೂಡ ತುಂಬಾ ಸ್ವಚ್ಛವಾಗಿಡಬೇಕು. ಮಾಲಿನ್ಯಕಾರಕಗಳನ್ನು ಪರಿಚಯಿಸುವುದನ್ನು ತಪ್ಪಿಸಲು ಮೊಸರನ್ನು ಹೊರಹಾಕಲು ಶುದ್ಧ ಪಾತ್ರೆಗಳನ್ನು ಬಳಸಿ.

ಮೊಸರು ಹುಳಿಯಾದರೆ ತಿನ್ನಲು ತುಂಬಾ ಕಷ್ಟವಾಗುತ್ತದೆ. ಆದ್ದರಿಂದ.. ಇದನ್ನು ಯಾವುದೇ ಹಣ್ಣುಗಳು ಮತ್ತು ಧಾನ್ಯಗಳೊಂದಿಗೆ ತಿನ್ನಬಹುದು. ಹುಳಿ ಮೊಸರು ರಾತ್ರಿ ತಿನ್ನಬಾರದು. ರಾತ್ರಿಯಲ್ಲಿ ತಿನ್ನುವುದು ಹೊಟ್ಟೆಯ ತೊಂದರೆಗೆ ಕಾರಣವಾಗಬಹುದು. ಹಾಗಾಗಿ ಹಗಲು ಹೊತ್ತಿನಲ್ಲಿ ಮಾತ್ರ ತಿನ್ನಿ. ಹುಳಿ ಮೊಸರು ತಿನ್ನುವಾಗ ಹೊಟ್ಟೆಯಲ್ಲಿ ಏನಾದರೂ ತೊಂದರೆ ಅನಿಸಿದರೆ ತಿನ್ನುವುದನ್ನು ನಿಲ್ಲಿಸುವುದು ಉತ್ತಮ.

# ಚರ್ಮ ಸಮಸ್ಯೆ ಆಲೀವ್ ಆಯಿಲ್ ಬೆಸ್ಟ್

## ಬ್ಯೂಟಿ ಟಿಪ್ಸ್

ಆಲೀವ್ ಎಣ್ಣೆಯು ಹೆಚ್ಚು ನೈಸರ್ಗಿಕ ಪದಾರ್ಥವಾಗಿದ್ದು, ಇದನ್ನು ಶತಮಾನಗಳಿಂದಲೂ ಚರ್ಮದ ಸಮಸ್ಯೆಗಳನ್ನು ಬಗೆಹರಿಸುವಲ್ಲಿ ಬಳಸಲಾಗುತ್ತಿದೆ. ಇದರಲ್ಲಿ ಹೆಚ್ಚಿನ ಪ್ರಮಾಣದ ಆಯಂಟಿ –ಆಕ್ಸಿಡೆಂಟ್ಸ್, ಪಾಲಿಫಿನಾಲ್ಸ್ ಮತ್ತು ವಿಟಮಿನ್ ಇ ಲಭ್ಯವಿದೆ. ಚಳಿಗಾಲದಲ್ಲಿ ನಿಮ್ಮ ಚರ್ಮದ ಆರೋಗ್ಯವನ್ನು ಕಾಪಾಡುವಲ್ಲಿ ಅತ್ಯಂತ ಸೂಕ್ತವಾದುದು.

**ಆಲೀವ್ ಆಯಿಲ್+ ಜೇನುತುಪ್ಪ:** ಒಂದು ಚಮಚ ಜೇನುತುಪ್ಪ ಮತ್ತು ಆಲೀವ್ ಆಯಿಲ್ ಅನ್ನು ಮಿಶ್ರಣ ಮಾಡಿ, ಮುಖದ ತ್ವಚೆಗೆ ಹಚ್ಚಿ, 10 ನಿಮಿಷಗಳ ಕಾಲ ಹಾಗೆಯೇ ಬಿಡಿ. ನಂತರ ತಣ್ಣೀರಿನಿಂದ ತೊಳೆದುಕೊಳ್ಳಿ. ವಾರದಲ್ಲಿ 2–3 ಬಾರಿ ಹೀಗೆ ಮಾಡಿ.

**ಬಾಳೆಹಣ್ಣು + ಆಲೀವ್ ಆಯಿಲ್ :** ಚೆನ್ನಾಗಿ ಪಕ್ವವಾದ ಬಾಳೆಹಣ್ಣನ್ನು ಒಂದು ಚಮಚ ಆಲೀವ್ ಆಯಿಲ್ ನೊಂದಿಗೆ ಬೆರೆಸಿ, ಈ ಪೇಸ್ಟನ್ನು ಮುಖಕ್ಕೆ ಮತ್ತು ಕತ್ತಿನ ಭಾಗಕ್ಕೆ ಲೇಪಿಸಿ, 20 ನಿಮಿಷಗಳ ಕಾಲ ಹಾಗೆಯೇ ಬಿಡಿ. ನಂತರ ಬೆಚ್ಚಗಿನ ನೀರಿನಿಂದ ತೊಳೆದುಕೊಳ್ಳಿ. ವಾರಕೊಮ್ಮೆ ಹೀಗೆ ಮಾಡಿದಲ್ಲಿ ಕಾಂತಿಯುತ ತ್ವಚೆ ನಿಮ್ಮದಾಗುತ್ತದೆ.

**ಆಲೀವ್ ಆಯಿಲ್+ ಬಾದಾಮ್ ಆಯಿಲ್+ ಕಡಲೆಹಿಟ್ಟು :** ಒಂದು ಚಮಚ ಆಲೀವ್ ಆಯಿಲ್, ಬಾದಾಮ್ ಆಯಿಲ್ ಮತ್ತು ½ ಚಮಚ ಕಡಲೆಹಿಟ್ಟು ಮೂರನ್ನು ಮಿಕ್ಸ್ ಮಾಡಿ. ಮುಖಕ್ಕೆ ಹಚ್ಚಿ ಮಸಾಜ್ ಮಾಡಿ, 10–15 ನಿಮಿಷ ಹಾಗೆಯೇ ಬಿಡಿ. ನಂತರ ತಣ್ಣೀರಿನಿಂದ ತೊಳೆದುಕೊಳ್ಳಿ. ವಾರಕೊಮ್ಮೆ ಈ ಪ್ಯಾಕ್ ಮಾಡಿಕೊಳ್ಳಿ.



# ಸ್ವೀಡಿಷ್-ಗ್ರೀಕ್ ನಟಿ ಎಲ್ಲೀ ಅವ್ರಾಮ್ ಬಗ್ಗೆ ಗೊತ್ತೇ?



ಎಲ್ಲೀ ಅವ್ರಾಮ್ ಸ್ವೀಡಿಷ್–ಗ್ರೀಕ್ ನಟಿ. ಸ್ವೀಡನ್ನ ಸ್ಟಾಕ್ಹೋಮ್ನಲ್ಲಿ ಜನಿಸಿದರು.. ಆಕೆಯ ತಂದೆ ಗ್ರೀಕ್ ಸಂಗೀತಗಾರ ಮತ್ತು ತಾಯಿ ಸ್ವೀಡಿಷ್ ನಟಿ.. ಆದರೆ ತಂದೆಯ ಸಂಗೀತದಲ್ಲಿ ಭಾರತೀಯ ಮಾಧುರ್ಯಗಳಿರುವ ಕಾರಣ, ಎಲ್ಲೀ ಚಿಕ್ಕ ವಯಸ್ಸಿನಿಂದಲೇ ಭಾರತೀಯ ಸಂಸ್ಕೃತಿಯಲ್ಲಿ ಆಸಕ್ತಿ ಹೊಂದಿದ್ದರು

ನಟಿ ತಾಯಿಯಾದ ಕಾರಣ ಕೆಲವು ಸಿನಿಮಾಗಳಲ್ಲಿ ನಟಿಸುವ ಅವಕಾಶ ಮಗಳಿಗೂ ಸಿಕ್ಕಿತು. ಆದರೆ ಬಾಲಿವುಡ್ ನಟಿಯಾಗುವ ಗುರಿ ಹೊಂದಿದ್ದ ಎಲ್ಲಿ ಭಾರತಕ್ಕೆ ಕಾಲಿಡುತ್ತಾರೆ..

ಎಲ್ಲೀ ಒಂಟಿಯಾಗಿ ಬಂದಿದ್ದರಿಂದ ಮುಂಬೈನಲ್ಲಿ ಆಕೆಗೆ ಬಾಡಿಗೆ ಮನೆ ಕೊಡಲು ಹಲವರು ಹೆದರುತ್ತಿದ್ದರು. ಕೊನೆಗೆ ಜಿರಳೆಗಳು ಮತ್ತು ಹಲ್ಲಿಗಳು ಹೆಚ್ಚು ಓಡಾಡುವ ಅಪಾರ್ಟ್ಮೆಂಟ್ನಲ್ಲಿ ತಾನು ಉಳಿಯಬೇಕಾಯಿತು ಎಂದು ಅವರು ಸಂದರ್ಶನವೊಂದರಲ್ಲಿ ಬಹಿರಂಗಪಡಿಸಿದ್ದರು... ಎಲ್ಲೀ ಸಿನಿಮಾ ಅವಕಾಶಗಳಿಗಾಗಿ ಪ್ರಯತ್ನಿಸುತ್ತಿದ್ದ ದಿನಗಳಲ್ಲಿ ಆಭರಣ ಅಂಗಡಿಯಲ್ಲಿ ಕೆಲಸ ಮಾಡುತ್ತಿದ್ದರಂತೆ.

ಸ್ವೀಡನ್ನಲ್ಲಿ ನೃತ್ಯ, ನಟನೆ ಮತ್ತು ಸೌಂದರ್ಯ ಸ್ಪರ್ಧೆಗಳಲ್ಲಿ ಮನ್ನಣೆ ಗಳಿಸಿದ ಎಲ್ಲೀ, ಮುಂಬೈನಲ್ಲಿ ಮಾಡೆಲ್ ಆಗಿ ವೃತ್ತಿಜೀವನವನ್ನು ಪ್ರಾರಂಭಿಸಿದರು. ಮಾಡೆಲಿಂಗ್ ಏಜೆನ್ಸಿಗೆ ಸೈನ್ ಅಪ್ ಮಾಡಿ ಕೆಲಸದ ವೀಸಾ ಪಡೆದರು. ಆಕೆಗೆ ಚಲನಚಿತ್ರ ಆಡಿಷನ್ ಪಡೆಯಲು ಸಂಸ್ಥೆ ಸಹಾಯ ಮಾಡಿತು. ನಂತರ, ಬಾಲಿವುಡ್ ಹೀರೋ ಅಕ್ಷಯ್ ಕುಮಾರ್ ಜೊತೆ ಎವ್ರೆಡಿ ಇಂಡಸ್ಟ್ರೀಸ್ ಇಂಡಿಯಾ ಕಂಪನಿಯ ಟಿವಿ ಜಾಹೀರಾತಿನಲ್ಲಿ ಎಲ್ಲೀ ನಟಿಸಿದರು. ಇದು ಭಾರತದಲ್ಲಿ ಆಕೆಯ ಮೊದಲ ಪ್ರಮುಖ ಪ್ರಾಜೆಕ್ಟ್ ಆಗಿತ್ತು..

2013ರಲ್ಲಿ 'ಮಿಕ್ಕಿ ವೈರಸ್' ಚಿತ್ರದ ಮೂಲಕ ನಾಯಕಿಯಾಗಿ ಎಲ್ಲೀ ಬಾಲಿವುಡ್ ಗೆ ಎಂಟ್ರಿ ಕೊಟ್ಟಿದ್ದರು. ಈ ಚಿತ್ರದಲ್ಲಿ ಮನೀಶ್ ಪಾಲ್ ಜೊತೆ ನಟಿಸಿದ್ದಾರೆ. ಅದೇ ವರ್ಷ ಹಿಂದಿ ಬಿಗ್ ಬಾಸ್–7 ಶೋನಲ್ಲಿ ಅವಕಾಶ ಬಂದಿತ್ತು. ಈ ಶೋನಿಂದ ಆಕೆಗೆ ಒಳ್ಳೆಯ ಮನ್ನಣೆ ಸಿಕ್ಕಿತು. ಆ ನಂತರ ಆಕೆಗೆ ಸಿನಿಮಾ ಆಫರ್ಗಳು ಬರಲಾರಂಭಿಸಿದವು.

2014 ರಲ್ಲಿ, ಬಾಲಿವುಡ್ನ 'ಕ್ವೀನ್' ತಮಿಳು ಮತ್ತು ಕನ್ನಡ ರಿಮೇಕ್ನಲ್ಲಿ ಎಲ್ಲೀ ಪ್ರಮುಖ ಪಾತ್ರವನ್ನು ನಿರ್ವಹಿಸಿದರು. ಆದರೆ ಈ ಸಿನಿಮಾ ಬಿಡುಗಡೆಯಾಗಲಿಲ್ಲ.

2015 ರಲ್ಲಿ, ಕಪಿಲ್ ಶರ್ಮಾ ಪ್ರಮುಖ ಪಾತ್ರದಲ್ಲಿ ನಟಿಸಿದ 'ಕಿಸ್ ಕಿಸ್ಕೋ ಪ್ಯಾರ್ ಕರುಣ್' ಚಿತ್ರದಲ್ಲಿ ಎಲ್ಲೀ ನಟಿಸಿದ್ದರು. ಇದು ಬಾಕ್ಸ್ ಆಫೀಸ್ ನಲ್ಲಿ ಹಿಟ್ ಆಗಿತ್ತು. ಆ ನಂತರ ಮಲಂಗ್, ಗುಡ್ ಬೈ, ಗಣಪತ್ ಸಿನಿಮಾಗಳಲ್ಲಿ ನಟಿಸಿದ್ದಾರೆ. ಆದರೆ ಅವೆಲ್ಲವೂ ಬಾಕ್ಸ್ ಆಫೀಸ್ನಲ್ಲಿ ಸೋತು ಸುಣ್ಣವಾದವು.. 2021 ರಲ್ಲಿ ಕೋಯಿ ಜಾನೆ ನಾ ಚಿತ್ರದಲ್ಲಿ, ಅಮೀರ್ ಖಾನ್ ಮತ್ತು ಎಲ್ಲಿ 'ಹರ್ ಫನ್ ಮೌಲಾ' ಹಾಡಿನಲ್ಲಿ ಒಟ್ಟಿಗೆ ಸ್ಟೆಪ್ ಹಾಕಿದ್ದರು... ಈ ಹಾಡು ಹಿಟ್ ಆಯಿತು.

ನಟಿ ಎಲ್ಲಿ ಬ್ಯುಸಿಯಾಗಿರುವಾಗ ಸ್ಟಾರ್ ಭಾರತೀಯ ಕ್ರಿಕೆಟಿಗ ಹಾರ್ದಿಕ್ ಪಾಂಡ್ಯ ಅವರೊಂದಿಗೆ ಡೇಟ್ ಮಾಡಿದರು... ಇಬ್ಬರೂ ಒಟ್ಟಿಗೆ ಇರುವ ಫೋಟೋಗಳು ಸೋಷಿಯಲ್ ಮಿಡಿಯಾದಲ್ಲಿ ವೈರಲ್ ಆಗಿದ್ದವು.. ಹಾರ್ದಿಕ್ ಸಹೋದರ ಕೃನಾಲ್ ಪಾಂಡ್ಯ ಅವರ ಮದುವೆಗೂ ನಟಿ ಹೋಗಿದ್ದರು. ಈ ಮದುವೆ ಸಮಾರಂಭದಲ್ಲಿ ಹಾರ್ದಿಕ್ ಮತ್ತು ಎಲ್ಲಿ ಜೋಡಿಯು ಎಲ್ಲರನ್ನು ಆಕರ್ಷಿಸಿತ್ತು... ಆದಾಗ್ಯೂ, ಕೆಲವು ವರ್ಷಗಳ ನಂತರ ಇಬ್ಬರೂ ಬೇರ್ಪಟ್ಟರು. ಅದರ ನಂತರ ಹಾರ್ದಿಕ್ ನತಾಸಾ ಸ್ಟಾಂಕೋವಿಕ್ ಅವರನ್ನು ವಿವಾಹವಾದರು.

# ವಿಶ್ವ ಸ್ತನ್ಯಪಾನ ಸಪ್ತಾಹ ಗುರುತಿಸಲು ಸಾರ್ವಜನಿಕ ಜಾಗೃತಿ ಅಭಿಯಾನ

ಎಂಕ್ಯೂರ್ ಫಾರ್ಮಾಸ್ಯುಟಿಕಲ್ಸ್, ಭಾರತೀಯ ಪ್ರಮುಖ ಫಾರ್ಮಾ ಕಂಪನಿಯು ಮಹಿಳಾ ಆರೋಗ್ಯ ವಿಭಾಗದ ಮೇಲೆ ತೀವ್ರ ಗಮನವನ್ನು ಕೇಂದ್ರೀಕರಿಸಿದೆ, ವಿಶ್ವ ಸ್ತನ್ಯಪಾನ ಸಪ್ತಾಹದ ಸಂದರ್ಭದಲ್ಲಿ ಸಾರ್ವಜನಿಕ ಜಾಗೃತಿ ಅಭಿಯಾನವನ್ನು ಪ್ರಾರಂಭಿಸಿತು. ಈ ಚಟುವಟಿಕೆಯ ಮೂಲಕ, ಸಾರ್ವಜನಿಕ ಸ್ಥಳಗಳಲ್ಲಿ ಸ್ತನ್ಯಪಾನವನ್ನು ಸಹಜಗೊಳಿಸುವುದು, ಸಂಬಂಧಿತ ನಿಷೇಧಗಳನ್ನು ಹೋಗಲಾಡಿಸುವುದು ಮತ್ತು ಸಾರ್ವಜನಿಕವಾಗಿ ತಮ್ಮ ಮಕ್ಕಳಿಗೆ ಶುಶ್ರೂಷೆ ಮಾಡುವಾಗ ತಾಯಂದಿರು ಸುರಕ್ಷಿತವಾಗಿ ಮತ್ತು ನಿರಾಳವಾಗಿರಲು ಸಹಾಯ ಮಾಡುವ ಸಂಭಾಷಣೆಗಳನ್ನು ಉತ್ತೇಜಿಸುವ ಗುರಿಯನ್ನು ಎಂಕ್ಯೂರ್ ಹೊಂದಿದೆ.

ವಿಶ್ವ ಆರೋಗ್ಯ ಸಂಸ್ಥೆ ಮತ್ತು ಯುನಿಸೆಫ್ ಶಿಶುಗಳಿಗೆ ಹುಟ್ಟಿದ ಮೊದಲ ಗಂಟೆಯೊಳಗೆ ಮತ್ತು ವಿಶೇಷವಾಗಿ ಅವರ ಜೀವನದ ಮೊದಲ 6 ತಿಂಗಳವರೆಗೆ ಸ್ತನ್ಯಪಾನವನ್ನು ಶಿಫಾರಸು ಮಾಡುತ್ತದೆ. ಎದೆಹಾಲು ಶಿಶುಗಳಿಗೆ ಸೂಕ್ತವಾದ ಆಹಾರವಾಗಿದೆ. ಇದು ಸುರಕ್ಷಿತ, ಶುದ್ಧ ಮತ್ತು ಪ್ರತಿಕಾಯಗಳನ್ನು ಹೊಂದಿರುತ್ತದೆ, ಇದು ಅನೇಕ ಸಾಮಾನ್ಯ ಬಾಲ್ಯದ ಕಾಯಿಲೆಗಳಿಂದ ರಕ್ಷಿಸಲು ಸಹಾಯ ಮಾಡುತ್ತದೆ. ಸ್ತನ್ಯಪಾನವು ಮಹಿಳೆಯ ಜೀವನದ ಅತ್ಯಂತ ನೈಸರ್ಗಿಕ ಅಂಶಗಳಲ್ಲಿ ಒಂದಾಗಿದೆ, ಆದರೆ ಅನೇಕ ತಾಯಂದಿರು ತಮ್ಮ ಮಕ್ಕಳನ್ನು ಸಾರ್ವಜನಿಕವಾಗಿ ಶುಶ್ರೂಷೆ ಮಾಡುವಾಗ ಗಮನಾರ್ಹ ಸವಾಲುಗಳನ್ನು ಎದುರಿಸುತ್ತಾರೆ. ಸಾಮಾಜಿಕ ಕಳಂಕ ಮತ್ತು ಪೋಷಕ ಪರಿಸರದ ಕೊರತೆಯು ತಾಯಂದಿರನ್ನು




ತಮ್ಮ ಮನೆಗಳ ಹೊರಗೆ ಹಾಲುಣಿಸುವುದನ್ನು ತಡೆಯುತ್ತದೆ.

ವಿಶ್ವ ಸ್ತನ್ಯಪಾನ ಸಪ್ತಾಹದ ಚಟುವಟಿಕೆಗಳ ಭಾಗವಾಗಿ, ಸಾರ್ವಜನಿಕ ಸ್ತನ್ಯಪಾನ ಮತ್ತು ಅದನ್ನು ಸಾಮಾನ್ಯಗೊಳಿಸುವ ಪ್ರಾಮುಖ್ಯತೆಯ ಕುರಿತು ತಮ್ಮ ದೃಷ್ಟಿಕೋನಗಳನ್ನು ಹಂಚಿಕೊಳ್ಳುವ ಅಮ್ಮಂದಿರೊಂದಿಗೆ ಎಂಕ್ಯೂರ್ ಸಹಕರಿಸುತ್ತದೆ. ಪ್ರಚಾರವು ಮಾಲ್ಗಳು, ಕೆಫೆಗಳು, ಉದ್ಯಾನವನಗಳು ಮತ್ತು ಬೀದಿಗಳಂತಹ ಸಾರ್ವಜನಿಕ ಸ್ಥಳಗಳಲ್ಲಿ ಸ್ತನ್ಯಪಾನ ಮಾಡುವಾಗ ತಾಯಂದಿರು ಮತ್ತು ಅವರ ಶಿಶುಗಳ ನಡುವಿನ ನಿಕಟ ಮತ್ತು ಪ್ರೀತಿಯ ಕ್ಷಣಗಳನ್ನು ಸೆರೆಹಿಡಿಯುವ ವೀಡಿಯೊಗಳನ್ನು ಒಳಗೊಂಡಿರುತ್ತದೆ. ಹೆಚ್ಚುವರಿಯಾಗಿ, ಇದು ವಿವಿಧ ಸಾರ್ವಜನಿಕ ಸ್ಥಳಗಳಲ್ಲಿ ಸ್ತನ್ಯಪಾನ ವಲಯ ಚಿಹ್ನೆಗಳನ್ನು ಹಿಡಿದಿರುವ ತಾಯಂದಿರನ್ನು ಒಳಗೊಂಡಿರುತ್ತದೆ, ಪ್ರತಿ ಸ್ಥಳವು ಸುರಕ್ಷಿತ ಸ್ತನ್ಯಪಾನ ವಲಯವಾಗಿರಬೇಕು ಎಂದು ಹೇಳಿಕೆ ನೀಡುತ್ತದೆ. ಭಾರತದಾದ್ಯಂತ 9 ವಿವಿಧ ಸ್ಥಳಗಳಲ್ಲಿ ಈ ಚಟುವಟಿಕೆಯನ್ನು ಕೈಗೊಳ್ಳಲಾಗುವುದು.ಈ ಸಂದರ್ಭದಲ್ಲಿ ಮಾತನಾಡಿದ ಎಂಕ್ಯೂರ್ ಫಾರ್ಮಾಸ್ಯುಟಿಕಲ್ಸ್ ಲಿಮಿಟೆಡ್ನ ಸಂಪೂರ್ಣ ಸಮಯದ ನಿರ್ದೇಶಕಿ ಶ್ರೀಮತಿ ನಮಿತಾ ಥಾಪರ್, ಅವರು ''ಸಾರ್ವಜನಿಕ ಸ್ಥಳಗಳಲ್ಲಿ ಸ್ತನ್ಯಪಾನ ಮಾಡುವುದು ನಗರ ಪ್ರದೇಶಗಳಲ್ಲಿಯೂ ಸಹ ಸಾಮಾನ್ಯವಾಗಿ ಅಸಮಾಧಾನಕ್ಕೆ ಕಾರಣವಾಗುತ್ತದೆ. ಅನಪೇಕ್ಷಿತ ಮತ್ತು ನಿರಂತರ ನೋಟವು ಮಹಿಳೆಯರಿಗೆ ಅಸುರಕ್ಷಿತ ಮತ್ತು ಅನಾನುಕೂಲತೆಯನ್ನು ಉಂಟುಮಾಡುತ್ತದೆ. ತಾಯಂದಿರು ತಮ್ಮ ಮಕ್ಕಳನ್ನು ಹಿಂಜರಿಕೆಯಿಲ್ಲದೆ ಪೋಷಿಸಲು ಆರಾಮದಾಯಕ ಮತ್ತು ಸ್ವಾಗತಾರ್ಹ ವಾತಾವರಣವನ್ನು ಸೃಷ್ಟಿಸಲು ಜನರನ್ನು ಸಂವೇದನಾಶೀಲಗೊಳಿಸುವುದು ಅವಶ್ಯಕ ಎಂದು ನಾವು ಭಾವಿಸುತ್ತೇವೆ. ಶುಶ್ರೂಷಾ ತಾಯಂದಿರಿಗೆ ಸ್ವೀಕಾರ ಮತ್ತು ಬೆಂಬಲದ ಸಂಸ್ಕೃತಿಯನ್ನು ಉತ್ತೇಜಿಸುವುದು ನಮ್ಮ ಗುರಿಯಾಗಿದೆ. ಪ್ರತಿಯೊಬ್ಬ ತಾಯಿಯು ತನ್ನ ಮಗುವಿಗೆ ಯಾವಾಗ ಮತ್ತು ಎಲ್ಲಿ ಬೇಕಾದರೂ ಸ್ತನ್ಯಪಾನ ಮಾಡುವ ಹಕ್ಕಿಗೆ ಅರ್ಹಳು ಎಂದು ನಾವು ನಂಬುತ್ತೇವೆ ಮತ್ತು ಇದನ್ನು ನಿಜವಾಗಿಸಲು ನಾವು ಬದ್ಧರಾಗಿದ್ದೇವೆ ಎಂದು ಹೇಳಿದರು. ಈ ಚಟುವಟಿಕೆಯು ಮಹಿಳೆಯರ ಆರೋಗ್ಯ ರಕ್ಷಣೆ ಮತ್ತು ಸಮುದಾಯದ ಯೋಗಕ್ಷೇಮಕ್ಕೆ ಎಂಕ್ಯೂರ್ನ ದೀರ್ಘಕಾಲದ ಬದ್ಧತೆಯನ್ನು ಎತ್ತಿ ತೋರಿಸುತ್ತದೆ.



## ಜಯಶ್ರೀ.ಬಿ.ಆರ್

ಖ್ಯಾತ ಜ್ಯೋತಿಷಿ

ದೂರವಾಣಿ–9964739507

www.jyotishyavaastu.com

# ರಾಶಿ ಭವಿಷ್ಯ

**ಮೇಷ:** ಮಾನಸಿಕ ಕಿರಿಕಿರಿ ಮತ್ತು ಮನಸ್ತಾಪ, ಕೆಲಸಕಾರ್ಯಗಳಲ್ಲಿ ಹಿನ್ನಡೆ, ಅಸಮಾಧಾನ, ನೀರು ಮತ್ತು ವಾಹನಗಳಿಂದ ಎಚ್ಚರಿಕೆ

**ವೃಷಭ:** ಬಂಧುಗಳಿಂದ ತೊಂದರೆ, ಪೆಟ್ಟು ಮಾಡಿಕೊಳ್ಳುವ ಸಂಭವ, ಪ್ರಯಾಣದಲ್ಲಿ ಎಚ್ಚರಿಕೆ, ಉದ್ಯೋಗ ಬದಲಾವಣೆಯಿಂದ ಸಮಸ್ಯೆ, ತಂದೆ ಆರೋಗ್ಯದಲ್ಲಿ ವ್ಯತ್ಯಾಸ

**ಮಿಥುನ:** ಆರ್ಥಿಕ ಸಂಕಷ್ಟ, ಮಾನಸಿಕ ನೋವು, ಕುಟುಂಬದಲ್ಲಿ ಕಲಹ, ಸ್ತ್ರೀಯರಿಂದ ಅನುಕೂಲ

**ಕಟಕ:** ಪಾಲುದಾರಿಕೆಯಲ್ಲಿ ಅನುಕೂಲ, ಅವಕಾಶ ಕೈತಪ್ಪುವ ಸಂಭವ, ದೃಷ್ಟಿದೋಷ, ಮಕ್ಕಳ ಆರೋಗ್ಯದಲ್ಲಿ ವ್ಯತ್ಯಾಸ

**ಸಿಂಹ:** ಅಧಿಕ ಖರ್ಚು ಮತ್ತು ನಷ್ಟ, ಅನಾರೋಗ್ಯ ಸಮಸ್ಯೆ, ಆತಂಕ, ನಿದ್ರಾಭಂಗ, ಬಂಧು ಬಾಂಧವರೊಂದಿಗೆ ಶತ್ರುತ್ವ

**ಕನ್ಯಾ:** ಮಕ್ಕಳಿಂದ ಲಾಭ, ಪ್ರೀತಿ–ಪ್ರೇಮದಲ್ಲಿ ಯಶಸ್ಸು, ಮಿತ್ರರಿಂದ ಹಿನ್ನಡೆ, ಅಧಿಕಾರಿಗಳಿಂದ ನಷ್ಟ,

**ತುಲಾ:** ಉದ್ಯೋಗದಲ್ಲಿ ನಿರಾಸಕ್ತಿ, ತಂತ್ರದ ಭೀತಿ ಮತ್ತು ಸಮಸ್ಯೆ, ನೀರಿನಿಂದ ಸಮಸ್ಯೆ ಎಚ್ಚರಿಕೆ

**ವೃಶ್ಚಿಕ:** ತಂದೆ ಆರೋಗ್ಯದಲ್ಲಿ ವ್ಯತ್ಯಾಸ, ದೂರ ಪ್ರಯಾಣ, ಸಂಗಾತಿ ಆರೋಗ್ಯದಲ್ಲಿ ವ್ಯತ್ಯಾಸ, ಕೈಕಾಲುಗಳಿಗೆ ಪೆಟ್ಟು

**ಧನಸ್ಸು:** ಧನಾಗಮನ, ಉತ್ತಮ ಅವಕಾಶಗಳ ಸೂಚನೆ, ಸೋಲು ನಷ್ಟ ನಿರಾಸೆ, ಕುಟುಂಬದಲ್ಲಿ ಆತಂಕ

**ಮಕರ:** ದಾಂಪತ್ಯದಲ್ಲಿ ಸಮಸ್ಯೆ, ಮಕ್ಕಳಿಂದ ಬೇಸರ, ಪ್ರೀತಿ ವಿಷಯಗಳು ಬಯಲು, ವ್ಯಾಪಾರದಲ್ಲಿ ನಷ್ಟ

**ಕುಂಭ:** ಆರೋಗ್ಯದಲ್ಲಿ ವ್ಯತ್ಯಾಸ, ಕೆಲಸಗಾರರಿಂದ ಮೋಸ, ಅಪವಾದಗಳು, ಆರೋಗ್ಯದಲ್ಲಿ ವ್ಯತ್ಯಾಸ

**ಮೀನ:** ಮಕ್ಕಳ ಜೀವನದಲ್ಲಿ ಏರುಪೇರು, ಸಂತಾನ ಸಮಸ್ಯೆ , ದುಶ್ಚಟಗಳಿಂದ ತೊಂದರೆ, ಅಪವಾದಗಳಿಂದ ಗೌರವಕ್ಕೆ ದಕ್ಕೆ

# ಕಲ್ಲಂಗಡಿ ಹಣ್ಣಿನ ದಿನ



ಕಲ್ಲಂಗಡಿ 92% ನೀರು ಎಂದು ನಿಮಗೆ ತಿಳಿದಿದೆಯೇ? ಇದು ತುಂಬಾ ಉಲ್ಲಾಸಕರವಾಗಿರುವುದರಲ್ಲಿ ಆಶ್ಚರ್ಯವಿಲ್ಲ! ಇದು ಪ್ರಾಚೀನ ಈಜಿಪ್ಟ್ನಲ್ಲಿ ಪ್ರಾರಂಭವಾಯಿತು. ನೈಲ್ ಕಣಿವೆಯಲ್ಲಿ ಕಲ್ಲಂಗಡಿ ಕೃಷಿಯು ಎರಡನೇ ಸಹಸ್ರಮಾನದ BC ಯಲ್ಲಿ ಪ್ರಾರಂಭವಾಯಿತು ಎಂದು ಹೇಳಲಾಗುತ್ತದೆ. ಕಲ್ಲಂಗಡಿ ಬೀಜಗಳು ರಾಜ ಟುಟ್ನ ಸಮಾಧಿಯಲ್ಲಿಯೂ ಕಂಡುಬಂದಿವೆ! ಆಗಸ್ಟ್ 3 ರಂದು, ನಾವು ರಾಷ್ಟ್ರೀಯ ಕಲ್ಲಂಗಡಿ ಹಣ್ಣಿನ ದಿನ ಎಂದು ಕರೆಯಲಾಗುತ್ತದೆ.

ರಸಭರಿತವಾದ, ಉಲ್ಲಾಸಕರವಾದ ಕಲ್ಲಂಗಡಿ ತನ್ನದೇ ಆದ ದಿನಕ್ಕೆ ಅರ್ಹವಾಗಿದೆ, ಅದಕ್ಕಾಗಿಯೇ ನಾವು ರಾಷ್ಟ್ರೀಯ ಕಲ್ಲಂಗಡಿ ದಿನವನ್ನು ಆಚರಿಸುತ್ತೇವೆ. ಈ ಹಣ್ಣಿನ ಕೃಷಿಯು 2000 ಃಅಯಷ್ಟು ಹಿಂದಿನದು, ಈಜಿಪ್ಟ್ನಲ್ಲಿ ಸುಮಾರು 5,000 ವರ್ಷಗಳ ಹಿಂದೆ ಸಂಭವಿಸಿದ ದಾಖಲೆಯಲ್ಲಿ ಮೊದಲ ಕಲ್ಲಂಗಡಿ ಕೊಯ್ಲು. ಕಲ್ಲಂಗಡಿ ಮತ್ತು ಅದರ ಬೀಜಗಳ ಕುರುಹುಗಳನ್ನು 12 ನೇ ಈಜಿಪ್ಟಿನ ರಾಜವಂಶದ ಸ್ಥಳಗಳಲ್ಲಿ ಕಂಡುಹಿಡಿಯಲಾಗಿದೆ, ಇದರಲ್ಲಿ ರಾಜ ಟುಟಾಂಖಾಮೆನ್ ಸಮಾಧಿ ಸೇರಿದೆ. ಪ್ರಾಚೀನ ಈಜಿಪ್ಟಿನ ಶಾಸನಗಳಲ್ಲಿ ವಿವಿಧ ರೀತಿಯ ಕಲ್ಲಂಗಡಿಗಳ ವರ್ಣಚಿತ್ರಗಳು ಕಂಡುಬಂದಿವೆ.

ಇಂದು ನಾವು ಆನಂದಿಸುವ ಸಿಹಿ ಹಣ್ಣು ಸಾವಿರ ವರ್ಷಗಳ ಕೃಷಿಯ ಅವಧಿಯಲ್ಲಿ ರೂಪಾಂತರಗಳ ಪರಿಣಾಮವಾಗಿದೆ. ಕಲ್ಲಂಗಡಿ ಬೀಜಗಳನ್ನು ಆಫ್ರಿಕಾದ ಕಲಹರಿ ಮರುಭೂಮಿಯಲ್ಲಿ ವ್ಯಾಪಾರ ಮಾರ್ಗಗಳ ಮೂಲಕ ಹಾದುಹೋಗುವ ವ್ಯಾಪಾರಿಗಳಿಗೆ ಮಾರಾಟ ಮಾಡಲಾಯಿತು. ಅಲ್ಲಿಂದ, ಕಲ್ಲಂಗಡಿ ಕೃಷಿ ಆಫ್ರಿಕಾದಾದ್ಯಂತ ಹರಡಿತು. ಕಲ್ಲಂಗಡಿಗಳ ಮೂಲವು ಆಫ್ರಿಕಾದಲ್ಲಿದೆ, ನಂತರ ಅದು ಮೆಡಿಟರೇನಿಯನ್ ದೇಶಗಳು ಮತ್ತು ಯುರೋಪಿನ ಇತರ ಭಾಗಗಳಿಗೆ ಹರಡಿತು. ಒಂಬತ್ತನೇ ಶತಮಾನದ ಅಂತ್ಯದ ವೇಳೆಗೆ, ಕಲ್ಲಂಗಡಿ ಕೃಷಿಯು ಚೀನಾ ಮತ್ತು ಏಷ್ಯಾದ ಉಳಿದ ಭಾಗಗಳಲ್ಲಿ ಸಾಮಾನ್ಯವಾಯಿತು.

ಜಾನ್ ಮರಿಯಾನಿಯವರ ದಿ ಡಿಕ್ಷನರಿ ಆಫ್ ಅಮೇರಿಕನ್ ಫುಡ್ ಅಂಡ್ ಡ್ರಿಂಕ್ ಪ್ರಕಾರ, 1615 ರಲ್ಲಿ ಇಂಗ್ಲಿಷ್ ನಿಘಂಟಿನಲ್ಲಿ 'ಕಲ್ಲಂಗಡಿ' ಎಂಬ ಪದವು ಮೊದಲ ಬಾರಿಗೆ ಕಾಣಿಸಿಕೊಂಡಿತು. ಕಲ್ಲಂಗಡಿಯನ್ನು ಸಾಮಾನ್ಯವಾಗಿ ಒಂದು ರೀತಿಯ ಕಲ್ಲಂಗಡಿ ಎಂದು ಕರೆಯಲಾಗುತ್ತದೆ, ಆದರೆ ಇದು ಕುಕ್ಯುಮಿಸ್ ಕುಲದಲ್ಲಿಲ್ಲ. ಕಲ್ಲಂಗಡಿಯ ಹೊರ ಸಿಪ್ಪೆಯು ಹಳದಿ ಪಟ್ಟೆಗಳು ಅಥವಾ ಕಲೆಗಳೊಂದಿಗೆ ಗಾಢ ಹಸಿರು ಬಣ್ಣದ್ದಾಗಿದೆ. 300 ಕ್ಕೂ ಹೆಚ್ಚು ವಿಧದ ಕಲ್ಲಂಗಡಿಗಳು U.S. ನಲ್ಲಿ ಕೆಂಪು ಬಣ್ಣದಿಂದ ಬಿಳಿಯವರೆಗೆ ಲಭ್ಯವಿವೆ ಮತ್ತು ವಿವಿಧ ಆಕಾರಗಳು ಮತ್ತು ಗಾತ್ರಗಳಲ್ಲಿ ಬರುತ್ತವೆ.

# ಫಿಲಿಪ್ಪೈನ್ಸ್‌ನಲ್ಲಿ 6.8 ತೀವ್ರತೆಯ ಭೂಕಂಪ




**ಫಿಲಿಫೈನ್ಸ್:** ದಕ್ಷಿಣ ಫಿಲಿಪೈನ್‌ನ ಸುರಿಗಾವೊ ಡೆಲ್ ಸುರ್ ಪ್ರಾಂತ್ಯದಲ್ಲಿ ಶನಿವಾರ ಬೆಳಿಗ್ಗೆ 6.8 ತೀವ್ರತೆಯ ಭೂಕಂಪ ಸಂಭವಿಸಿದೆ ಎಂದು ಫಿಲಿಪೈನ್ಸ್ ಇನ್ಸ್ಟಿಟ್ಯೂಟ್ ಆಫ್ ಜ್ವಾಲಾಮುಖಿ ಮತ್ತು ಭೂಕಂಪಶಾಸ್ತ್ರ ವರದಿ ಮಾಡಿದೆ.

ಸ್ಥಳೀಯ ಕಾಲಮಾನ ಬೆಳಿಗ್ಗೆ 6:22 ಕ್ಕೆ ಸಂಭವಿಸಿದ ಭೂಕಂಪವು ಕರಾವಳಿ ಪಟ್ಟಣವಾದ ಲಿಂಗಿಗ್ನ ಈಶಾನ್ಯಕ್ಕೆ 66 ಕಿ.ಮೀ ದೂರದಲ್ಲಿ 9 ಕಿ.ಮೀ ಆಳದಲ್ಲಿ ಸಂಭವಿಸಿದೆ ಎಂದು ಸಂಸ್ಥೆ ತಿಳಿಸಿದೆ ಎಂದು ಕ್ಸಿನ್ಹುವಾ ಸುದ್ದಿ ಸಂಸ್ಥೆ ವರದಿ ಮಾಡಿದೆ.

ಅಗುಸಾನ್ ಡೆಲ್ ಸುರ್, ದಾವಾವೊ ಡಿ ಒರೊ, ದಾವಾವೊ ಸಿಟಿ, ದಾವಾವೊ ಆಕ್ಸಿಡೆಂಟಲ್ ಮತ್ತು ಮಧ್ಯ ಫಿಲಿಪೈನ್ಸ್‌ನ ಕೆಲವು ಪ್ರದೇಶಗಳು ಸೇರಿದಂತೆ ಮಿಂಡನಾವೊ ಪ್ರದೇಶದ ಅನೇಕ ಪ್ರಾಂತ್ಯಗಳಲ್ಲಿ ಭೂಕಂಪನದ ಅನುಭವವಾಗಿದೆ. ಟೆಕ್ಟೋನಿಕ್ ಭೂಕಂಪವು ಭೂಕಂಪನಗಳನ್ನು ಪ್ರಚೋದಿಸುತ್ತದೆ ಆದರೆ ಹಾನಿಯನ್ನುಂಟು ಮಾಡುವುದಿಲ್ಲ ಎಂದು ಸಂಸ್ಥೆ ಹೇಳಿದೆ. ಪೆಸಿಫಿಕ್ ರಿಂಗ್ ಆಫ್ ಫೈರ್ ಉದ್ದಕ್ಕೂ ಇರುವ ಕಾರಣ ಆರ್ಕಿಪೆಲಾಜಿಕ್ ಫಿಲಿಪೈನ್ಸ್ ಆಗಾಗ್ಗೆ ಭೂಕಂಪನ ಚಟುವಟಿಕೆಗಳನ್ನು ಹೊಂದಿದೆ.

# ನಿವೃತ್ತ ಜಡ್ಜ್ ನೇತೃತ್ವದಲ್ಲಿ ಎಸ್‌ಐಟಿ ತನಿಖೆ ಕೋರಿ ಸಲ್ಲಿಕೆಯಾಗಿದ್ದ ಅರ್ಜಿ ವಜಾ



**ನವದೆಹಲಿ:** ಚುನಾವಣಾ ಬಾಂಡ್‌ಗಳ ವಿಷಯದಲ್ಲಿ ಇರುವ ಅನೈತಿಕ ಕೊಡುಕೊಳ್ಳುವಿಕೆಯ ಸಂಬಂಧವಾಗಿ ನಿವೃತ್ತ ನ್ಯಾಯಾಧೀಶರ ನೇತೃತ್ವದಲ್ಲಿ ವಿಶೇಷ ತನಿಖಾ ತಂಡವನ್ನು ರಚಿಸಬೇಕೆಂದು ಕೋರಿ ಸಲ್ಲಿಕೆಯಾಗಿದ್ದ ಅರ್ಜಿಗಳನ್ನು ಸುಪ್ರೀಂ ಕೋರ್ಟ್ ವಜಾಗೊಳಿಸಿದೆ.

ಊಹೆಯ ಆಧಾರದ ಮೇಲೆ ನಾವು ಮಧ್ಯಪ್ರವೇಶ ಮಾಡುವುದಿಲ್ಲ. ಕಾನೂನಿನಡಿಯಲ್ಲಿ ಲಭ್ಯವಿರುವ ಆಧಾರದ ಮೇಲೆ ಕ್ರಮಗಳನ್ನು ಕೈಗೊಳ್ಳಬೇಕು. ನಿರ್ದಿಷ್ಟ ಹಕ್ಕುಗಳನ್ನು ತನಿಖೆ ಮಾಡಲು ಅಧಿಕಾರಿಗಳು ನಿರಾಕರಿಸಿದಾಗ ಮಾತ್ರ ನಾವು ಮಧ್ಯಪ್ರವೇಶ ಮಾಡಬಹುದು ಎಂದು ಕೋರ್ಟ್ ಅಭಿಪ್ರಾಯಪಟ್ಟಿದೆ.

ಮುಖ್ಯ ನ್ಯಾಯಮೂರ್ತಿ ಡಿವೈ ಚಂದ್ರಚೂಡ್, ನ್ಯಾಯಮೂರ್ತಿಗಳಾದ ಜೆಬಿ ಪರ್ದಿವಾಲಾ ಮತ್ತು ಮನೋಜ್ ಮಿಶ್ರಾ ಅವರಿದ್ದ ಪೀಠ ನಿವೃತ್ತ ನ್ಯಾಯಾಧೀಶರ ನೇತೃತ್ವದಲ್ಲಿ ಈ ಹಂತದಲ್ಲಿ ತನಿಖೆಗೆ ಆದೇಶ ನೀಡುವುದು ಅನುಚಿತವಲ್ಲ ಎಂದು ಹೇಳಿದೆ.

ಶೆಲ್ ಕಂಪನಿಗಳು ಹಾಗೂ ನಷ್ಟ ಅನುಭವಿಸುತ್ತಿರುವ ಕಂಪನಿಗಳೂ ಚುನಾವಣಾ ಬಾಂಡ್‌ಗಳನ್ನು ಖರೀದಿ ಮಾಡಿದೆ. ಈ ಕಂಪನಿಗಳ ಆದಾಯದ ಮೂಲ ಏನು ಎನ್ನುವುದನ್ನು ಪತ್ತೆ ಮಾಡಬೇಕು ಜೊತೆಗೆ ಆ ಹಣವನ್ನು ರಾಜಕೀಯ ಪಕ್ಷಗಳಿಂದ ಮರಳಿ ವಸೂಲು ಮಾಡಲು ಕೋರ್ಟ್ ತನಿಖಾ ತಂಡಕ್ಕೆ ನಿರ್ದೇಶನ ನೀಡಬೇಕೆಂದು ಕೋರಿ ಸಾರ್ವಜನಿಕಾ ಹಿತಾಸಕ್ತಿ ಅರ್ಜಿಯನ್ನು ಸಲ್ಲಿಸಲಾಗಿತ್ತು.

## ವಿವಾದ ಎಬ್ಬಿಸಿದ ಡಿಎಂಕೆ ಸಚಿವ

**ತಮಿಳುನಾಡು:** ರಾಮನು ಇದ್ದ ಎಂಬುವುದಕ್ಕೆ ಇತಿಹಾಸದಲ್ಲಿ ಯಾವುದೇ ಪುರಾವೆಗಳಿಲ್ಲ ಎಂದು ಸಾರಿಗೆ ಸಚಿವ ಎಸ್. ಎಸ್.ಶಿವಶಂಕರ್ ವಿವಾದಾತ್ಮಕ ಹೇಳಿಕೆ ನೀಡಿದ್ದಾರೆ. ಅರಿಯಲೂರಿನ ಕಾರ್ಯಕ್ರಮದಲ್ಲಿ ಮಾತನಾಡಿ, ರಾಮನ ಅಸ್ತಿತ್ವಕ್ಕೆ ಇತಿಹಾಸವಿಲ್ಲ. ರಾಮನ ಅವತಾರವನ್ನು ನಂಬುತ್ತಾರೆ. ಆದರೆ ಅವತಾರ ಜನ್ಮತಾಳಲು ಸಾಧ್ಯವಿಲ್ಲ ಎಂದು ವಿವಾದದ ಕಿಡಿ ಹೊತ್ತಿಸಿದ್ದಾರೆ. ನಾವು ರಾಜೇಂದ್ರ ಚೋಳನ ಪರಂಪರೆ ಆಚರಿಸುವವರು. ರಾಜೇಂದ್ರ ಚೋಳನ ಅಸ್ಥಿತ್ವಕ್ಕೆ ಕೊಳಗಳು, ದೇವಾಲಯಗಳು ಅನೇಕ ಪುರಾವೆಗಳಿವೆ. ರಾಮನಿದ್ದ ಎಂಬುವುದಕ್ಕೆ ಏನು ಪುರಾವೆಗಳಿವೆ ಎಂದು ಪ್ರಶ್ನಿಸಿದ್ದಾರೆ. ನಮ್ಮನ್ನು ದುರ್ಬಲಕೆ ಮಾಡಿ, ನಮ್ಮ ಇತಿಹಾಸವನ್ನು ಮರೆಮಾಚಲು ಅವರು ಪ್ರಯತ್ನಿಸುತ್ತಿದ್ದಾರೆ ಎಂದು ಬಿಜೆಪಿ ವಿರುದ್ಧ ಪರೋಕ್ಷವಾಗಿ ಟೀಕಿಸಿದ್ದಾರೆ. ಪ್ರಭು ಶ್ರೀರಾಮನ ಸದ್ಯ ಸಚಿವನ ಈ ಹೇಳಿಕೆ ಭಾರೀ ವಿವಾದಕ್ಕೆ ಕಾರಣವಾಗಿದೆ.



# 8 ಹೈ ಸ್ಪೀಡ್ ರಸ್ತೆ ಕಾರಿಡಾರ್ ಯೋಜನೆಗಳಿಗೆ ಅನುಮೋದನೆ



**ನವದೆಹಲಿ:** ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರ್ಕಾರ ಇಂದು (ಶುಕ್ರವಾರ) 936 ಕಿಮೀ ಉದ್ದದ 8 ಪ್ರಮುಖ ರಾಷ್ಟ್ರೀಯ ಹೈಸ್ಪೀಡ್ ರಸ್ತೆ ಕಾರಿಡಾರ್ ಅನುಮೋದನೆ ನೀಡಿದೆ. ಇದಕ್ಕಾಗಿ ಒಟ್ಟು 50,655 ಕೋಟಿ ರೂ. ಮೀಸಲಿಡಲಾಗಿದೆ ಎಂದು ಕೇಂದ್ರ ಸಚಿವ ಅಶ್ವಿನಿ ವೈಷ್ಣವ್ ಮಾಹಿತಿ ನೀಡಿದ್ದಾರೆ. ಪ್ರಸ್ತುತ ಮತ್ತು ಭವಿಷ್ಯದ ಬೇಡಿಕೆಗಳನ್ನು ಗಮನದಲ್ಲಿಟ್ಟುಕೊಂಡು ಹೊಸ ಯೋಜನೆಗಳನ್ನು ಅನುಮೋದಿಸಲಾಗಿದೆ ಎಂದು ಅವರು ತಿಳಿಸಿದ್ದಾರೆ.

''ಲಾಜಿಸ್ಟಿಕ್ಸ್ ದಕ್ಷತೆಯನ್ನು ಸುಧಾರಿಸಲು, ದಟ್ಟಣೆಯನ್ನು ಕಡಿಮೆ ಮಾಡಲು ಮತ್ತು ದೇಶಾದ್ಯಂತ ಸಂಪರ್ಕವನ್ನು ಹೆಚ್ಚಿಸಲು ಒಟ್ಟು 50,000 ಕೋಟಿಗೂ ಹೆಚ್ಚು ವೆಚ್ಚದಲ್ಲಿ 936 ಕಿಮೀ ಉದ್ದದ 8 ಪ್ರಮುಖ ರಾಷ್ಟ್ರೀಯ ಹೈಸ್ಪೀಡ್ ರೋಡ್ ಕಾರಿಡಾರ್ ಯೋಜನೆಗಳಿಗೆ ಕ್ಯಾಬಿನೆಟ್ ಇಂದು ಅನುಮೋದನೆ ನೀಡಿದೆ'' ಎಂದು ಕೇಂದ್ರ ಸಚಿವ ಅಶ್ವಿನಿ ವೈಷ್ಣವ್ ಹೇಳಿದ್ದಾರೆ.

ಈ 8 ಯೋಜನೆಗಳ ಅನುಷ್ಠಾನದಿಂದ ಲಕ್ಷಾಂತರ ಜನರಿಗೆ ನೇರ ಮತ್ತು ಪರೋಕ್ಷ ಉದ್ಯೋಗವನ್ನು ಸೃಷ್ಟಿಸುತ್ತದೆ ಎಂದು ಸಚಿವರು ಹೇಳಿದ್ದಾರೆ. ಪ್ರಮುಖ ಯೋಜನೆಗಳ ಪೈಕಿ, 68 ಕಿಮೀ ನಾಲ್ಕು ಪಥದ ಅಯೋಧ್ಯೆ ರಿಂಗ್ ರಸ್ತೆಯನ್ನು 3,935 ಕೋಟಿ ರೂ. ವೆಚ್ಚದಲ್ಲಿ ನಿರ್ಮಿಸಲಾಗುವುದು ಎಂದು ಸರ್ಕಾರ ಹೊರಡಿಸಿದ ಹೇಳಿಕೆಯಲ್ಲಿ ತಿಳಿಸಿದೆ. ಈ ಯೋಜನೆಯು ನಗರ ಮತ್ತು ಹತ್ತಿರದ ಪ್ರದೇಶಗಳ ಮೂಲಕ ಹಾದುಹೋಗುವ ರಾಷ್ಟ್ರೀಯ ಹೆದ್ದಾರಿಗಳಲ್ಲಿ ದಟ್ಟಣೆಯನ್ನು ಕಡಿಮೆ ಮಾಡಲು ಸಹಾಯ ಮಾಡುತ್ತದೆ, ರಾಮ ಮಂದಿರಕ್ಕೆ ಭೇಟಿ ನೀಡುವ ಯಾತ್ರಾರ್ಥಿಗಳ ತ್ವರಿತ ಸಂಚಾರವನ್ನು ಸಕ್ರಿಯಗೊಳಿಸುತ್ತದೆ.

ಪಶ್ಚಿಮ ಬಂಗಾಳದಲ್ಲಿ ಖರಗ್‌ಪುರ-ಮೋರೆಗ್ರಾಮ್ ನಡುವೆ 231 ಕಿಮೀ ಉದ್ದದ 4-ಲೇನ್ ಹೈಸ್ಪೀಡ್ ಕಾರಿಡಾರ್ ಅನ್ನು ಒಟ್ಟು 10,247 ಕೋಟಿ ರೂ. ವೆಚ್ಚದಲ್ಲಿ ನಿರ್ಮಿಸಲಾಗುವುದು. ಅಸ್ತಿತ್ವದಲ್ಲಿರುವ 2-ಲೇನ್ ರಾಷ್ಟ್ರೀಯ ಹೆದ್ದಾರಿಯಲ್ಲಿ ಟ್ರಾಫಿಕ್ ಹೊರೆಯನ್ನು ಕಡಿಮೆ ಮಾಡಲು ಮತ್ತು ಖರಗ್‌ಪುರ ಮತ್ತು ಮೋರೆಗ್ರಾಮ್ ನಡುವೆ ಸಾಮರ್ಥ್ಯವನ್ನು ಸುಮಾರು 5 ಪಟ್ಟು ಹೆಚ್ಚಿಸಲು ಈ ಹೆದ್ದಾರಿ ಸಹಾಯ ಮಾಡುತ್ತದೆ.

''ಮೂಲಸೌಕರ್ಯ ಅಭಿವೃದ್ಧಿಯು ದೇಶದ ಆರ್ಥಿಕ ಸಮೃದ್ಧಿಗೆ ಅಡಿಪಾಯವಾಗಿದೆ ಮತ್ತು ಅದರ ನಾಗರಿಕರ ಜೀವನದ ಗುಣಮಟ್ಟವನ್ನು ಸುಧಾರಿಸಲು ನಿರ್ಣಾಯಕವಾಗಿದೆ. ಖಾಸಗಿ ಹೂಡಿಕೆ ಸೇರಿದಂತೆ ರಾಷ್ಟ್ರೀಯ ಹೆದ್ದಾರಿಗಳಲ್ಲಿ ಒಟ್ಟು ಬಂಡವಾಳ ಹೂಡಿಕೆಯು 6 ಪಟ್ಟು ಹೆಚ್ಚಾಗಿದೆ ಎಂದು ಸರ್ಕಾರ ತನ್ನ ಹೇಳಿಕೆಯಲ್ಲಿ ತಿಳಿಸಿದೆ. 2013-14ರಲ್ಲಿ 50,000 ಕೋಟಿ ರೂ. ಇದ್ದುದು 2023-24ರಲ್ಲಿ 3.1 ಲಕ್ಷ ಕೋಟಿ ರೂ. ಆಗಿದೆ.

# ಕೈ ನಾಯಕರ ರಾಹುಲ್ ಗಾಂಧಿ 'ವಯನಾಡ್' ಭೇಟಿ ಟ್ರೋಲ್



**ಕೇರಳ:** ಕೇರಳದ ವಯನಾಡ್ ಜಿಲ್ಲೆಯಲ್ಲಿ ಸಂಭವಿಸಿದ ಭೂಕುಸಿತದಲ್ಲಿ 280ಕ್ಕೂ ಅಧಿಕ ಮಂದಿ ಮೃತಪಟ್ಟ ಮೂರು ದಿನಗಳ ಬಳಿಕ ಕಾಂಗ್ರೆಸ್ ಸಂಸದ ರಾಹುಲ್ ಗಾಂಧಿ ಮತ್ತು ಪಕ್ಷದ ಪ್ರಧಾನ ಕಾರ್ಯದರ್ಶಿ ಪ್ರಿಯಾಂಕಾ ಗಾಂಧಿ ವಾದ್ರಾ, ಗುರುವಾರ ವಯನಾಡ್‌ಗೆ ಭೇಟಿ ನೀಡಿದರು.

ಈಗ, ರಾಹುಲ್ ಗಾಂಧಿ ಅವರ ಭೇಟಿಯ ಸಮಯ ಮತ್ತು ಉದ್ದೇಶದ ಬಗ್ಗೆ ಪ್ರಶ್ನೆಗಳು ಎದ್ದಿವೆ, ಸಾಮಾಜಿಕ ಮಾಧ್ಯಮ ಬಳಕೆದಾರರು ಅವರನ್ನು ಮತ್ತು ಅವರ ಸಹೋದರಿಯನ್ನು ಟೀಕಿಸಿದ್ದಾರೆ.

ವಯನಾಡ್ ದುರಂತದಲ್ಲಿ ರಾಹುಲ್ ಗಾಂಧಿ ಅವರ ಫ್ಯಾಷನ್ ಶೋ, 3 ದಿನ ತಡವಾಗಿ, 232 ಕ್ಯಾಮೆರಾಗಳು, 'ಕಿಂಗ್' ರಾಹುಲ್ ಅವರನ್ನು ಮುಟ್ಟದಂತೆ 20 ಗಾರ್ಡ್ಗಳು ಮತ್ತು ಅವರ ಚಪ್ಪಲಿಗಳನ್ನು ತೆಗೆದುಕೊಳ್ಳಲು ಒಬ್ಬ ವ್ಯಕ್ತಿಯನ್ನು ನಿಯೋಜಿಸಲಾಗಿದೆ'' ಎಂದು ಬಿಜೆಪಿ ಮುಖಂಡ ಶಿವಂ ತ್ಯಾಗಿ ಬರೆದಿದ್ದಾರೆ.ಶೂನ್ಯ ಕೆಲಸ, ಶೂನ್ಯ ಜವಾಬ್ದಾರಿ ಮತ್ತು ಜೇಮ್ಸ್ ಬಾಂಡ್ ತರಹದ ಪ್ರದರ್ಶನ. ಅವರು ತಮ್ಮ ವರ್ಚಸ್ಸನ್ನು ಮೆರುಗುಗೊಳಿಸಲು ಬಂದಿದ್ದಾರೆಯೇ ಹೊರತು ವಯನಾಡ್ ಜನರನ್ನು ಉಳಿಸಲು ಅಲ್ಲ'' ಎಂದು ಅವರು ಹೇಳಿದರು. ಹಿಂದಿಯಲ್ಲಿ ಮಾಡಿದ ಪೋಸ್ಟ್ ರಾಹುಲ್ ಗಾಂಧಿ ಅವರ ಭೇಟಿಯ ಸಮಯ ಮತ್ತು ಉದ್ದೇಶದ ಬಗ್ಗೆ ಪ್ರಶ್ನೆಗಳನ್ನು ಹುಟ್ಟುಹಾಕಿತು.

ತ್ಯಾಗಿ ಅವರ ಪೋಸ್ಟ್‌ಗೆ ಪ್ರತಿಕ್ರಿಯಿಸಿದ ವಿವೇಕ್ ಸಿಂಗ್ ಪಾಲಿವಾಲ್ ಎಂಬ ಬಳಕೆದಾರರು, ''ವಯನಾಡ್ ಭೂಕುಸಿತದಲ್ಲಿ ಇದುವರೆಗೆ 256 ಜನರು ಸಾವನ್ನಪ್ಪಿದ್ದಾರೆ ಮತ್ತು ನೂರಾರು ಜನರು ಗಾಯಗೊಂಡಿದ್ದಾರೆ. ಅದರ ನಂತರ, ರಾಜಕುಮಾರನು ಫೋಟೋ ಸೆಷನ್‌ಗೆ ಇದು ಉತ್ತಮ ಅವಕಾಶ ಎಂದು ಭಾವಿಸಿದನು. ಅದಕ್ಕಾಗಿಯೇ ಅವರು ತಮ್ಮ ಪರಿವಾರ ಮತ್ತು ಕ್ಯಾಮೆರಾಗಳೊಂದಿಗೆ ಹೊರಟರು.'' ಏತನ್ಮಧ್ಯೆ, ಇನ್ನೊಬ್ಬ ಬಳಕೆದಾರರು ಶಿವಮ್ ಅವರ ಪೋಸ್ಟ್ಗೆ ಪ್ರತಿಕ್ರಿಯಿಸಿ, ''ಇದು ರಾಜಕುಮಾರನ ಭವ್ಯತೆ. ಇದಲ್ಲದೆ, ಇನ್ನೊಬ್ಬ ರಾಜಕುಮಾರ (ಅಖಿಲೇಶ್ ಯಾದವ್ ಅವರ ಉಲ್ಲೇಖ) ಅವರ ಶಿಷ್ಯರಾಗಿದ್ದಾರೆ.

## ಏಡ್ಸ್ ರೋಗಿಗಳಿಗಾಗಿ ಲಸಿಕೆ !

**ಲಂಡನ್ (ಬ್ರಿಟನ್):** ಎಚ್.ಐ.ವಿ. ( ಏಡ್ಸ್) ರೋಗಿಗಳಿಗಾಗಿ ಲಸಿಕೆಯನ್ನು ಕಂಡುಹಿಡಿಯಲಾಗಿದೆ. ಈ ಕುರಿತ ಸಂಶೋಧನೆಯ ಲೇಖನವು 'ನ್ಯೂ ಇಂಗ್ಲೆಂಡ್ ಜರ್ನಲ್ ಆಫ್ ಮೆಡಿಸಿನ್'ನಲ್ಲಿ ಪ್ರಕಟವಾಗಿದೆ. ಒಂದು ವರ್ಷದೊಳಗೆ ಎರಡು ಚುಚ್ಚುಮದ್ದನ್ನು ಪಡೆದ ನಂತರ, ಸ್ತ್ರೀ ರೋಗಿಗಳಲ್ಲಿ 100%ರಷ್ಟು ಉತ್ತಮ ಫಲಿತಾಂಶ ಕಂಡುಬಂದಿದೆ. ಅಲ್ಲದೆ, ಅವರ ಆರೋಗ್ಯದ ಮೇಲೆ ಯಾವುದೇ ವ್ಯತಿರಿಕ್ತ ಪರಿಣಾಮ ಕಂಡುಬಂದಿಲ್ಲ. ಈ ಲಸಿಕೆಗೆ 'ಲೆನ್ಕಾಪಾವಿರ್' ಎಂದು ಹೆಸರಿಡಲಾಗಿದೆ. ಈ ಲಸಿಕೆಯನ್ನು ಅಮೇರಿಕಾದ ಬಯೋಫಾರ್ಮಾಸ್ಯುಟಿಕಲ್ ಕಂಪನಿ 'ಜೀಲೆಡ್ ಸೈನ್ಸಸ್' ಅಭಿವೃದ್ಧಿಪಡಿಸಿದೆ.ಈ ಲಸಿಕೆಯನ್ನು ಪರೀಕ್ಷಿಸುವ ಸಲುವಾಗಿ ದಕ್ಷಿಣ ಆಫ್ರಿಕಾ ಮತ್ತು ಉಗಾಂಡಾದಲ್ಲಿನ ಹದಿಹರೆಯದ ಹುಡುಗಿಯರು ಹಾಗೂ ಯುವತಿಯರು ಭಾಗಿಯಾಗಿದ್ದರು. 'ತಮ್ಮ ಸಂಗಾತಿಯಿಂದ ಈ ಕಾಯಿಲೆ ಬರುವ ಅಪಾಯವಿದ್ದವರಿಗೂ ಕೂಡ ಈ ಲಸಿಕೆಯಿಂದ ಉತ್ತಮ ಪರಿಣಾಮ ಬೀರುವುದು' ಎಂದು ಹೇಳಲಾಗುತ್ತಿದೆ.



# ಸಂಸತ್ತಿನಲ್ಲಿ ಗಂಡನ ಹೆಸರು ಹೇಳಿದ ಜಯಾ



**ನವದೆಹಲಿ:** ಕೆಲ ದಿನಗಳ ಹಿಂದೆ ರಾಜ್ಯಸಭಾ ಅಧ್ಯಕ್ಷರು ಜಯಾ ಬಚ್ಚನ್ ಅವರ ಹೆಸರಿನಲ್ಲಿ ತಮ್ಮ ಪತಿಯ ಹೆಸರನ್ನು ಉಲ್ಲೇಖಿಸಿದ್ದಕ್ಕೆ ಸಮಾಜವಾದಿ ಪಕ್ಷದ ಸಂಸದೆ ವಿರೋಧ ವ್ಯಕ್ತಪಡಿಸಿದ್ದರು. ಇದಾದ ಕೆಲವೇ ದಿನಗಳ ಬಳಿಕ ಇಂದು ಜಯಾ ಬಚ್ಚನ್ ತಮ್ಮ ಹೆಸರಿನಲ್ಲಿ ಪತಿ ಅಮಿತಾಭ್ ಅವರ ಹೆಸರನ್ನು ಉಲ್ಲೇಖಿಸಿದ್ದು, ಈ ವೇಳೆ ಸ್ಪೀಕರ್ ಜಗದೀಪ್ ಧನಕರ್ ಸೇರಿದಂತೆ ಇಡೀ ಸದನ ನಗೆಗಡಲಿನಲ್ಲಿ ತೇಲಾಡಿದ ಪ್ರಸಂಗ ನಡೆದಿದೆ.

ಸದನದಲ್ಲಿ ಜಯಾ ಅವರು, ನಾನು ಜಯಾ ಅಮಿತಾಭ್ ಬಚ್ಚನ್ ನಿಮ್ಮಲ್ಲಿ ಕೇಳಲು ಬಯಸುತ್ತೇನೆ ಎಂದು ಮಾತನಾಡಲು ಪ್ರಾರಂಭಿಸಿದಾಗ ಸ್ಪೀಕರ್ ಧನಕರ್ ತಮ್ಮ ಆಸನದಲ್ಲೇ ಎದ್ದು ಬಿದ್ದು ನಕ್ಕಿದ್ದಾರೆ. ಕಾಂಗ್ರೆಸ್ನ ಜೈರಾಮ್ ರಮೇಶ್, ಎಎಪಿಯ ರಾಘವ್ ಚಡ್ಡಾ ಸೇರಿದಂತೆ ಹಲವಾರು ವಿರೋಧ ಪಕ್ಷದ ಸಂಸದರು ಸಹ ಉಪಸ್ಥಿತರಿದ್ದು, ಧನಕರ್ ಜೊತೆಗೆ ನಕ್ಕಿದ್ದಾರೆ. ಬಳಿಕ ಧನಕರ್ ಅವರನ್ನು ಉದ್ದೇಶಿಸಿ ಮಾತನಾಡಿದ ಜಯಾ, ಇಂದು ನಿಮಗೆ ಊಟದ ವಿರಾಮ ಸಿಕ್ಕಿದೆಯೇ? ಇಲ್ಲವೇ? ಇದಕ್ಕಾಗಿಯೇ ನೀವು ಜೈರಾಮ್ ಜಿ ಅವರ ಹೆಸರನ್ನು ಪದೇ ಪದೇ ತೆಗೆದುಕೊಳ್ಳುತ್ತಿದ್ದೀರಿ. ನಿಮಗೆ ಅವರ ಹೆಸರನ್ನು ತೆಗೆದುಕೊಳ್ಳದೆ ಇದ್ದರೆ ನಿಮ್ಮ ಆಹಾರವನ್ನು ಜೀರ್ಣಿಸಿಕೊಳ್ಳಲು ಸಾಧ್ಯವೇ ಇಲ್ಲ ಎಂದು ವ್ಯಂಗ್ಯವಾಡಿದ್ದಾರೆ.

## ಯಾವುದೇ ಪ್ರತೀಕಾರ ದಾಳಿ ಎದುರಿಸಲು ಇಸ್ರೇಲ್ ಸನ್ನದ್ಧ : ಬೆಂಜಮಿನ್ ನೆತನ್ಯಾಹು

**ಜೆರುಸಲೇಂ:** ಹಮಾಸ್ ಹಾಗೂ ಹಿಜ್ಬುಲ್ಲಾ ಸಂಘಟನೆಗಳ ಉನ್ನತ ನಾಯಕರ ಹತ್ಯೆಗಳಿಗೆ ಪ್ರತೀಕಾರವಾಗಿ ತನ್ನ ವಿರುದ್ಧ ನಡೆಯುವ ಯಾವುದೇ ಅತಿಕ್ರಮಣವನ್ನು ಎದುರಿಸಲು ಇಸ್ರೇಲ್ ಸನ್ನದ್ಧವಾಗಿದೆ ಎಂದು ಪ್ರಧಾನಿ ಬೆಂಜಮಿನ್ ನೆತನ್ಯಾಹು ಅವರು ತಿಳಿಸಿದ್ದಾರೆ. ಆಕ್ರಮಣಾತ್ಮಕವಾಗಿರಲಿ ಅಥವಾ ರಕ್ಷಣಾತ್ಮಕವಾಗಿರಲಿ ಯಾವುದೇ ರೀತಿಯ ಸನ್ನಿವೇಶವನ್ನು ಎದುರಿಸಲು ಇಸ್ರೇಲ್ ಅತ್ಯುನ್ನತ ಮಟ್ಟದಲ್ಲಿ ಸಜ್ಜಾಗಿದ. ನಮ್ಮ ಮೇಲೆ ನಡೆಯುವ ಯಾವುದೇ ಆಕ್ರಮಣಕ್ಕೂ ಅತಿ ದೊಡ್ಡ ಬೆಲೆಯನ್ನು ತೆರಬೇಕಾಗಿ ಬರುತ್ತದೆ'' ಎಂದು ನೆತನ್ಯಾಹು ಅವರು ಹೇಳಿಕೆಯೊಂದರಲ್ಲಿ ತಿಳಿಸಿದ್ದಾರೆ. ನಮ್ಮ ಮೇಲೆ ಯಾರು ದಾಳಿ ನಡೆಸುತ್ತಾರೋ , ಅದಕ್ಕೆ ಪ್ರತಿಯಾಗಿ ನಾವು ಮರುದಾಳಿ ನಡೆಸುತ್ತೇವೆ ಎಂದು ನೆತನ್ಯಾಹು ಹೇಳಿದ್ದಾರೆ. ಹಿಜ್ಬುಲ್ಲಾ ವರಿಷ್ಠ ಹಸನ್ ನಸ್ರುಲ್ಲಾ ಅವರು ತನ್ನ ಸಂಘಟನೆಯ ಹಿರಿಯ ಕಮಾಂಡರ್ ಫಾವದ್ ಶುಕೂರ್‌ರನ್ನು ಇಸ್ರೇಲ್ ಸೇನೆ ಹತ್ಯೆಗೈದಿರುವುದನ್ನು ಪ್ರತಿಕ್ರಿಯಿಸುತ್ತಾ ಇಸ್ರೇಲ್ ನಡೆಸುವ ಹತ್ಯೆಗೆ ತನ್ನ ಸಂಘಟನೆ ಕಠೋರವಾಗಿ ಪ್ರತಿಕ್ರಿಯಿಸಲಿದೆ ಎಂದು ಹೇಳಿದ್ದಾರೆ.



# ಇಸ್ರೇಲ್‌ನಲ್ಲಿ ಯುದ್ಧ ಭೀತಿ: ಏರ್ ಇಂಡಿಯಾದಿಂದ ವಿಮಾನ ಸೇವೆ ಸ್ಥಗಿತ!




**ಇಸ್ರೇಲ್:** ಇಸ್ರೇಲ್‌ನಲ್ಲಿ ಯುದ್ಧ ಭೀತಿ ಹೆಚ್ಚಾಗಿದೆ. ಈ ಹಿನ್ನೆಲೆ ಏರ್ ಇಂಡಿಯಾ ಸಂಸ್ಥೆ ಆಗಸ್ಟ್ 8 ರವರೆಗೆ ಟೆಲ್ ಅವೀವ್‌ಗೆ ವಿಮಾನ ಸೇವೆಯನ್ನು ಸ್ಥಗಿತಗೊಳಿಸಿದೆ.

ದೆಹಲಿಯಿಂದ ಇಸ್ರೇಲ್‌ಗೆ ವಾರಕ್ಕೆ ನಾಲ್ಕು ದಿನಗಳ ಕಾಲ ಟಾಟಾ ಸಂಸ್ಥೆ ಒಡೆತನದ ಏರ್ ಇಂಡಿಯಾ ಕಾರ್ಯಾಚರಣೆ ನಡೆಸುತ್ತಿತ್ತು.

ಮಧ್ಯಪ್ರಾಚ್ಯ ದೇಶದಲ್ಲಿ ಪರಿಸ್ಥಿತಿ ಹದಗೆಟ್ಟಿರುವ ಹಿನ್ನೆಲೆ ತಕ್ಷಣಕ್ಕೆ ಜಾರಿಗೆ ಬರುವಂತೆ ವಿಮಾನ ಸೇವೆಯನ್ನು ಸ್ಥಗಿತಗೊಳಿಸಲಾಗಿದೆ. ಆಗಸ್ಟ್ 8ರವರೆಗೆ ಇಸ್ರೇಲ್ಗೆ ವಿಮಾನ ಸೇವೆ ಇರುವುದಿಲ್ಲ. ಅಲ್ಲಿಯ ಪರಿಸ್ಥಿತಿಯನ್ನು ಸೂಕ್ಷ್ಮವಾಗಿ ಗಮನಿಸುತ್ತಿದ್ದೇವೆ' ಎಂದು ಏರ್ ಇಂಡಿಯಾ ಎಕ್ಸ್‌ನಲ್ಲಿ ಮಾಹಿತಿ ಹಂಚಿಕೊಂಡಿದೆ.

'ಈ ಸಂದರ್ಭ ಟೆಲ್ ಅವೀವ್‌ಗೆ ತೆರಳುವ ಮತ್ತು ಅಲ್ಲಿಂದ ಹೊರಡುವ ವಿಮಾನಗಳಿಗೆ ಟಿಕೆಟ್ ಬುಕಿಂಗ್ ಮಾಡಿದ ಪ್ರಯಾಣಿಕರಿಗೆ ನೆರವಾಗುತ್ತೇವೆ. ಪ್ರಯಾಣವನ್ನು ಮರು ನಿಗದಿ ಮಾಡಿದಾಗ ಒಂದು ಬಾರಿಗೆ ಅನ್ವಯಿಸುವಂತೆ ಹಣವನ್ನು ಹಿಂದಿರುಗಿಸಲಾಗುವುದು' ಎಂದು ಹೇಳಿದೆ. ಇಸ್ರೇಲ್ -ಹಮಾಸ್ ಯುದ್ಧ ಸೇರಿದಂತೆ ಹಲವು ಗುಂಪುಗಳ ನಡುವೆ ನಡೆಯುತ್ತಿರುವ ಗಲಾಟೆಗಳು ಯುದ್ಧದ ಆತಂಕವನ್ನು ಹೆಚ್ಚಿಸಿದೆ.

# ಟರ್ಕಿಯಲ್ಲಿ ಇನ್‌ಸ್ಟಾಗ್ರಾಂಗೆ ನಿರ್ಬಂಧ




**ಅಂಕಾರ:** ಮೆಟಾ ಒಡೆತನದ ಸಾಮಾಜಿಕ ಜಾಲತಾಣ ಇನ್‌ಸ್ಟಾಗ್ರಾಂನ ಬಳಕೆಗೆ ಟರ್ಕಿಯಲ್ಲಿ ನಿರ್ಬಂಧ ಹೇರಲಾಗಿದೆ ಎಂದು ಟರ್ಕಿಯ ಮಾಹಿತಿ ತಂತ್ರಜ್ಞಾನ ನಿಯಂತ್ರಕ ಪ್ರಾಧಿಕಾರ ಆದೇಶಿಸಿದೆ ಎಂದು ರಾಯಿಟರ್ಸ್ ಸುದ್ದಿ ಸಂಸ್ಥೆ ವರದಿ ಮಾಡಿದೆ.

ಟರ್ಕಿಯ ಮಾಹಿತಿ ತಂತ್ರಜ್ಞಾನ ಮತ್ತು ಸಂವಹನ ಪ್ರಾಧಿಕಾರ ಆಗಸ್ಟ್ 2 ರಂದು ತನ್ನ ವೆಬ್‌ಸೈಟ್‌ನಲ್ಲಿ ಇನ್‌ಸ್ಟಾಗ್ರಾಂ ನಿರ್ಬಂಧಿಸುವ ಬಗ್ಗೆ ಪ್ರಕಟಿಸಿದೆ.

ಟರ್ಕಿ ಅಧ್ಯಕ್ಷರ ಸಂವಹನ ನಿರ್ದೇಶಕ ಅಲ್ಟುನ್, ಈ ಕುರಿತು ಎಕ್ಸ್‌ನಲ್ಲಿ ಪೋಸ್ಟ್ ಹಂಚಿಕೊಂಡಿದ್ದು, 'ಇದು ಸೆನ್ಸಾರ್, ಸ್ಪಷ್ಟ ಮತ್ತು ಸರಳವಾಗಿದೆ' ಎಂದು ತಿಳಿಸಿದ್ದಾರೆ.

ಎಷ್ಟು ದಿನಗಳವರೆಗೆ ಈ ನಿರ್ಬಂಧ ಇರಲಿದೆ ಹಾಗೂ ಯಾವ ಕಾರಣಕ್ಕೆ ನಿರ್ಬಂಧ ಹೇರಲಾಗಿದೆ ಎನ್ನುವ ಬಗ್ಗೆ ಮಾಹಿತಿ ನೀಡಿಲ್ಲ.

ಟರ್ಕಿಯ ಈ ನಿರ್ಧಾರದ ಕುರಿತು ಮೆಟಾ ಸಂಸ್ಥೆ ಯಾವುದೇ ಪ್ರತಿಕ್ರಿಯೆ ನೀಡಿಲ್ಲ. ಟರ್ಕಿಯ ಈ ನಡೆಯಿಂದ ಕಂಪ್ಯೂಟರ್ ಮತ್ತು ಮೊಬೈಲ್ ಫೋನ್‌ಗಳಲ್ಲಿ ಇನ್‌ಸ್ಟಾಗ್ರಾಂ ಬಳಸಲು ಸಾಧ್ಯವಾಗುತ್ತಿಲ್ಲ ಎಂದು ಬಳಕೆದಾರರು ಎಕ್ಸ್‌ನಲ್ಲಿ ದೂರಿದ್ದಾರೆ.

ಹಮಾಸ್‌ನ ಪ್ರಮುಖ ಅಧಿಕಾರಿ ಇಸ್ಮಾಯಿಲ್ ಹನಿಯೆಹ್ ಅವರ ಹತ್ಯೆಯ ಕುರಿತಾದ ಪೋಸ್ಟ್‌ಗಳನ್ನು ನಿರ್ಬಂಧಿಸುವ ಉದ್ದೇಶದಿಂದ ಇನ್‌ಸ್ಟಾಗ್ರಾಂ ಬಳಕಗೆ ನಿರ್ಬಂಧ ಹೇರಿದ್ದಾರೆ ಎಂದು ಬಳಕೆದಾರರು ಆರೋಪಿಸಿದ್ದಾರೆ.

# ಭಾರೀ ಮಳೆಗೆ ತತ್ತರಿಸಿದ ಲಾಹೋರ್

**ಲಾಹೋರ್:** ಪಾಕಿಸ್ತಾನದ ಸಾಂಸ್ಕೃತಿಕ ರಾಜಧಾನಿ ಲಾಹೋರ್‌ನಲ್ಲಿ ಗುರುವಾರ ಬೆಳಗ್ಗೆ ದಾಖಲೆಯ ಮಳೆಯಾಗಿದ್ದು, ನಗರದ ರಸ್ತೆಗಳು ಜಲಾವೃತಗೊಂಡಿದೆ.ನಗರದ ವಿವಿಧೆಡೆ ಮಳೆ ಸಂಬಂಧಿ ದುರಂತಗಳಲ್ಲಿ ಕನಿಷ್ಠ ಮೂವರು ಸಾವನ್ನಪ್ಪಿದ್ದಾರೆ. ವಾಹನ ಸಂಚಾರ ಅಸ್ತವ್ಯಸ್ತಗೊಂಡಿದ್ದು, ದೈನಂದಿನ ಜನಜೀವನ ಬಾಧಿತವಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಕಳೆದ ಒಂದು ತಿಂಗಳಿನಿಂದ ಪಾಕ್ನಾದ್ಯಂತ ಮಳೆ ಹಾನಿಯಿಂದಾಗಿ ಮೃತಪಟ್ಟವರ ಸಂಖ್ಯೆ ನೂರನ್ನು ದಾಟಿದೆಯೆಂದು ಮಾಧ್ಯಮಗಳು ವರದಿ ಮಾಡಿವೆ. ಗುರುವಾರ ಒಂದೇ ಸಮನೆ ಮಳೆಯು ಧಾರಾಕಾರವಾಗಿ ಸುರಿದ ಪರಿಣಾಮವಾಗಿ ನಗರದ ರಸ್ತೆಗಳು ದಿಢೀರನೇ ಜಲಾವೃತಗೊಂಡವು.

ನಗರದಲ್ಲಿನ ಆಸ್ಪತ್ರೆಗಳಿಗೂ ನೆರೆ ನೀರು ನುಗ್ಗಿದ್ದರಿಂದ, ಅಲ್ಲಿ ಚಿಕಿತ್ಸೆ ಪಡೆಯುತ್ತಿದ್ದ ರೋಗಿಗಳು ಸಂಕಷ್ಟಕ್ಕೀಡಾಗಿದ್ದಾರೆಂದು ವರದಿಗಳು ತಿಳಿಸಿವೆ. ಲಾಹೋರ್‌ನ ಕೆಲವು ಪ್ರದೇಶಗಳಲ್ಲಿ ಕೆಲವೇ ತಾಸುಗಳ ಅವಧಿಯಲ್ಲಿ ದಾಖಲೆಯ 353 ಮಿ.ಮೀ. ಮಳೆಯಾಗಿದ್ದು, ನಗರದ 44 ವರ್ಷಗಳ ವರ್ಷಗಳ ದಾಖಲೆಯನ್ನು ಮುರಿದಿದೆ.ಪ್ರಮುಖ ರಸ್ತೆಗಳನ್ನು ಆವರಿಸಿರುವ ನೀರನ್ನು ಪಂಪ್‌ಗಳ ಮೂಲಕ ಹೊರಬಿಡುವ ಕಾರ್ಯಾಚರಣೆ ನಡೆಯುತ್ತಿದೆಯೆಂದು ಜಲ ಹಾಗೂ ನೈರ್ಮಲ್ಯ ಏಜೆನ್ಸಿ ತಿಳಿಸಿದೆ.



# ಮಡುರೋ ಗೆಲುವನ್ನು ಒಪ್ಪಲು ಅಮೆರಿಕ ನಕಾರ



**ಕಾರಾಕಾಸ್:** ವೆನೆಝುವೆಲಾದ ಅಧ್ಯಕ್ಷೀಯ ಚುನಾವಣೆಯಲ್ಲಿ ಪ್ರತಿಪಕ್ಷ ಅಭ್ಯರ್ಥಿ ಎಡ್ಮುಂಡೊ ಗೊನ್ಸಾಲೆಜ್ ಅವರನ್ನು ವಿಜೇತ ಅಭ್ಯರ್ಥಿಯೆಂದು ಅಮೆರಿಕ ಗುರುವಾರ ಮಾನ್ಯತೆ ನೀಡಿದೆ. ವಾಶಿಂಗ್ಟನ್‌ನ ಈ ನಡೆಯಿಂದಾಗಿ ವೆನೆಝುವೆಲಾದ ಅಧ್ಯಕ್ಷೀಯ ಚುನಾವಣೆಯಲ್ಲಿ ಹಾಲಿ ಅಧ್ಯಕ್ಷ ನಿಕೊಲಾಸ್ ಮಡುರೋ ಅವರು ವಿಜಯಗಳಿಸಿದ್ದಾರೆಂದು ಘೋಷಿಸಿದ್ದ ವೆನಝುವಾ ಚುನಾವಣಾ ಪ್ರಾಧಿಕಾರವನ್ನು ಇರಿಸುಮುರಿಸುಗೊಳಿಸಿದೆ. ಅಧ್ಯಕ್ಷ ಮಡುರೋ ಅವರಿಗೆ ಆಪ್ತವಾಗಿರುವ ನಾಯಕರು ಸೇರಿದಂತೆ ವಿವಿಧ ಸರಕಾರಗಳು, ಅಧ್ಯಕ್ಷೀಯ ಚುನಾವಣೆಯ ಮತ ಏಣಿಕೆಯ ವಿಸ್ತೃತ ವಿವರಗಳನ್ನು ಪ್ರಕಟಿಸುವಂತೆ ವೆನೆಝುವೆಲಾ ರಾಷ್ಟ್ರೀಯ ಚುನಾವಣಾ ಮಂಡಳಿಗೆ ಕರೆ ನೀಡಿದ ಬೆನ್ನಲ್ಲೇ ಅಮೆರಿಕ ಈ ಘೋಷಣೆಯನ್ನು ಮಾಡಿದೆ.

ಅಧ್ಯಕ್ಷೀಯ ಚುನಾವಣೆಯಲ್ಲಿ ಮಡುರೋ ಅವರು ಜಯಗಳಿಸಿದ್ದಾರೆಂದು ವೆನೆಝುವೆಲಾದ ರಾಷ್ಟ್ರೀಯ ಚುನಾವಣಾ ಮಂಡಳಿಯು ಸೋಮವಾರ ಘೋಷಿಸಿತ್ತು. ಆದರೆ ಈ ಫಲಿತಾಂಶವನ್ನು ಮಾನ್ಯಮಾಡಲು ಪ್ರತಿಪಕ್ಷಗಳ ಮೈತ್ರಿಕೂಟವು ನಿರಾಕರಿಸಿತ್ತು. ಇಲೆಕ್ಟ್ರಾನಿಕ್ ಮತಯಂತ್ರಗಳಲ್ಲಿ ಮುದ್ರಿತವಾದ ಮತಪತ್ರಗಳು ವ್ಯತಿರಿಕ್ತ ಫಲಿತಾಂಶವನ್ನು ತೋರಿಸುತ್ತಿದ್ದು, ಈ ಕುರಿತ ಪುರಾವೆಯನ್ನು ತಾನು ಹೊಂದಿರುವುದಾಗಿ ಅದು ಹೇಳಿತ್ತು. ಜುಲೈ 28ರಂದು ನಡೆದ ವೆನೆಝುವೆಲಾದ ಅಧ್ಯಕ್ಷೀಯ ಚುನಾವಣೆಯಲ್ಲಿ ಎಡ್ಮುಂಡೊ ಗೊನ್ಸಾಲೆಝ್ ಉರುಟಿಯಾ ಅವರು ವಿಜಯಗಳಿಸಿರುವುದು ತನಗೆ ದೊರೆತ ಪುರಾವೆಗಳಿಂದ ಅಮೆರಿಕಕ್ಕೆ ಸ್ಪಷ್ಟವಾಗಿದೆಯೆಂದು, ಅಮೆರಿಕದ ವಿದೇಶಾಂಗ ಕಾರ್ಯದರ್ಶಿ ಆಯಂಟನಿ ಬ್ಲಿಂಕೆನ್ ತಿಳಿಸಿದ್ದಾರೆ. ಅಮೆರಿಕದ ನಡೆಯನ್ನು ವೆನೆಝುವೆಲಾ ಅಧ್ಯಕ್ಷ ಮಡುರೋ ಅವರು ತೀವ್ರವಾಗಿ ಖಂಡಿಸಿದ್ದಾರೆ. ಅಮೆರಿಕವು ವೆನೆಝುವೆಲಾದ ವಿಷಯಗಳಲ್ಲಿ ಮೂಗು ತೂರಿಸಬಾರದು ಎಂದವರು ಆಕ್ರೋಶ ವ್ಯಕ್ತಡಡಿಸಿದ್ದಾರೆ.

ಸಂಜೆ ಮುಗಿಲು

Postal Registration No.KA/BGW-1823/2019-2021, Posted at Patrika Channel, RMS Bhavan, Bengaluru PSO, Mysore Road, Bengaluru- 560020, RNI No.KARKAN/2002/08054

# ಆರ್ಥಿಕ ನೆರವು ನೀಡಿದ ರಶ್ಮಿಕಾ, ಸೂರ್ಯ, ಮಮ್ಮುಟ್ಟಿ

## ವಯನಾಡು ಭೂಕುಸಿತ ದುರಂತ



ಕೇರಳದ ವಯನಾಡಿನಲ್ಲಿ ಸಂಭವಿಸಿದ ಭೀಕರ ಭೂಕುಸಿತದಲ್ಲಿ ಸತ್ತವರ ಸಂಖ್ಯೆ ಈಗ 300 ದಾಟಿದೆ. ಈ ಭೀಕರ ದುರಂತದಲ್ಲಿ ಮನೆಯನ್ನು, ಕುಟುಂಬಸ್ಥರನ್ನು ಕಳೆದುಕೊಂಡು ಹಲವರು ಸಂಕಷ್ಟದಲ್ಲಿದ್ದಾರೆ. ಅವರ ಸಹಾಯಕ್ಕೆ ಸಿನಿಮಾ ನಟ, ನಟಿಯರು ಮುಂದಾಗಿದ್ದಾರೆ.

ವಯನಾಡು ಭೂಕುಸಿತ ದುರಂತದಲ್ಲಿ ಸಂಕಷ್ಟದಲ್ಲಿರುವರಿಗೆ ನೆರವಾಗಲು ಲಕ್ಷ ಲಕ್ಷ ಹಣವನ್ನು ಕೇರಳದ ಸಿಎಂ ಫಂಡ್‌ಗೆ ಸೌತ್ ನಟ, ನಟಿಯರು ದೇಣಿಗೆ ನೀಡಿದ್ದಾರೆ. ಕೊಡಗಿನ ಬೆಡಗಿ ರಶ್ಮಿಕಾ ಮಂದಣ್ಣ, ತಮಿಳು ನಟ ಸೂರ್ಯ, ಚಿಯಾನ್ ವಿಕ್ರಮ್, ಮಮ್ಮುಟ್ಟಿ, ದುಲ್ಕರ್ ಸಲ್ಮಾನ್, ಫಹಾದ್ ಫಾಸಿಲ್ ಸೇರಿದಂತೆ ಅನೇಕರು ನೆರವಿಗೆ ಬಂದಿದ್ದಾರೆ.

ಇತ್ತೀಚೆಗೆ ನಟಿ ರಶ್ಮಿಕಾ ಮಂದಣ್ಣ ಕಾರ್ಯವೊಂದಕ್ಕಾಗಿ ಅತಿಥಿಯಾಗಿ ಕೇರಳಕ್ಕೆ ಆಗಮಿಸಿದ್ದರು. ಆಗ ಅವರನ್ನು ನೋಡಲು ಸಾವಿರಾರು ಸಂಖ್ಯೆಯಲ್ಲಿ ಅಭಿಮಾನಿಗಳು ಜಮಾಯಿಸಿದ್ದರು. ಅವರ ಪ್ರೀತಿ ನೋಡಿ ನಟಿ ಧನ್ಯವಾದ ತಿಳಿಸಿದ್ದರು. ಇದೀಗ ಕೇರಳದಲ್ಲಿ ಆಗಿರುವ ಭೂಕುಸಿತ ದುರಂತ ಕಂಡು ಅಲ್ಲಿನ ಸಿಎಂ ಫಂಡ್‌ಗೆ ನಟಿ 10 ಲಕ್ಷ ರೂ. ದೇಣಿಗೆ ನೀಡಿದ್ದಾರೆ. ನಟಿಯ ನಡೆಗೆ ಅಭಿಮಾನಿಗಳು ಭೇಷ್ ಎಂದಿದ್ದಾರೆ.

ತಮಿಳಿನ ಸ್ಟಾರ್ ನಟ ಚಿಯಾನ್ ವಿಕ್ರಮ್, ಕೇರಳದ ಸಿಎಂ ಫಂಡ್‌ಗೆ 20 ಲಕ್ಷ ರೂ. ದೇಣಿಗೆ ನೀಡುವ ಮೂಲಕ ನೆರವಾಗಿದ್ದಾರೆ. ಸೂರ್ಯ ಮತ್ತು ಜ್ಯೋತಿಕಾ ದಂಪತಿ, ನಟ ಕಾರ್ತಿ ಜಂಟಿಯಾಗಿ 50 ಲಕ್ಷ ರೂ. ದೇಣಿಗೆ ನೀಡಿದ್ದಾರೆ.

# ಮೂರು ಮಕ್ಕಳ ಜೊತೆ ಸ್ಪೇನ್‌ನಲ್ಲಿ ನಟಿ ಮಾಧವಿ ವೆಕೇಷನ್



80ರ ದಶಕದಲ್ಲಿ ಕನ್ನಡ ಚಿತ್ರರಂಗ ಆಳಿದ ನಟಿ ಮಾಧವಿ ಈಗ ವೆಕೇಷನ್ ಮೂಡ್ ನಲ್ಲಿದ್ದಾರೆ. ಮೂರು ಹೆಣ್ಣು ಮಕ್ಕಳೊಂದಿಗೆ ಸ್ಪೇನ್ ಗೆ ಮಾಧವಿ ತೆರಳಿದ್ದಾರೆ. ವೆಕೇಷನ್‌ನ ಸುಂದರ ಫೋಟೋಗಳನ್ನು ನಟಿ ಹಂಚಿಕೊಂಡಿದ್ದಾರೆ.

ಮೂರು ಹೆಣ್ಣು ಮಕ್ಕಳೊಂದಿಗೆ ಸ್ಪೇನ್‌ನ ವಿವಿಧ ಸ್ಥಳಗಳಿಗೆ ನಟಿ ಭೇಟಿ ನೀಡಿದ್ದಾರೆ. ಕುಟುಂಬದ ಜೊತೆ ಮೋಜು ಮಸ್ತಿ ಮಾಡುತ್ತಿದ್ದಾರೆ. ಮಕ್ಕಳೊಂದಿಗಿನ ಸುಂದರ ಫೋಟೋಗಳನ್ನು ನಟಿ ಹಂಚಿಕೊಂಡಿದ್ದಾರೆ. ಕನ್ನಡ ಸಿನಿಮಾ ಜೊತೆ ತಮಿಳು, ಹಿಂದಿಯಲ್ಲಿಯೂ ನಾಯಕಿಯಾಗಿ ಗೆದ್ದಿದ್ದ ಮಾಧವಿ ಈಗಾಗಲೇ ಸಿನಿಮಾಗೆ ಗುಡ್ ಬೈ ಹೇಳಿ ಹಲವು ವರ್ಷಗಳೇ ಕಳೆದಿದೆ. ಈಗ ವಿದೇಶದಲ್ಲಿನ ವೆಕೇಷನ್ ಫೋಟೋಶೂಟ್ ವಿಷ್ಯವಾಗಿ ನಟಿ ಸದ್ದು ಮಾಡುತ್ತಿದ್ದಾರೆ. ಅಂದಹಾಗೆ, ಡಾ.ರಾಜ್ ಕುಮಾರ್ ಜೊತೆ ಹಾಲು ಜೇನು, ಭಾಗ್ಯದ ಲಕ್ಷ್ಮಿ ಬಾರಮ್ಮ, ಅನುರಾಗ ಅರಳಿತು, ಶ್ರುತಿ ಸೇರಿದಾಗ, ಜೀವನ ಚೈತ್ರ, ಆಕಸ್ಮಿಕ ಸಿನಿಮಾ ಸೇರಿದಂತೆ ಹಲವು ಚಿತ್ರಗಳಲ್ಲಿ ನಾಯಕಿಯಾಗಿ ನಟಿಸಿದ್ದಾರೆ. ವಿಷ್ಣುವರ್ಧನ್, ಅನಂತ್ ನಾಗ್, ರೆಬೆಲ್ ಸ್ಟಾರ್ ಅಂಬರೀಶ್ ಜೊತೆ ಕೂಡ ಮಾಧವಿ ನಟಿಸಿದ್ದಾರೆ.



# 'ಕಪಟಿ' ಟೀಸರ್ ಔಟ್- ಡಾರ್ಕ್ ವೆಬ್ ಜಗತ್ತಿನ ಅಸಲಿತನ ತೆರೆದಿಡಲಿದೆ ಸಿನಿಮಾ




ಡಿ.ಪಿಕ್ಚರ್ಸ್ ಲಾಂಛನದಲ್ಲಿ ದಯಾಳ್ ಪದ್ಮನಾಭನ್ ನಿರ್ಮಿಸಿರುವ, ರವಿಕಿರಣ್ ಹಾಗೂ ಚೇತನ್ ಎಸ್.ಪಿ ಅವರ ಜಂಟಿ ನಿರ್ದೇಶನದಲ್ಲಿ ಸುಕೃತ ವಾಗ್ಲೆ, ದೇವ್ ದೇವಯ್ಯ, ಸಾತ್ವಿಕ್ ಕೃಷ್ಣನ್ ಪ್ರಮುಖ ಪಾತ್ರದಲ್ಲಿ ನಟಿಸಿರುವ 'ಕಪಟಿ' ಚಿತ್ರದ ಟೀಸರ್ ಬಿಡುಗಡೆಯಾಗಿದೆ. 'ಕಪಟಿ' ಸಿನಿಮಾದ ಟೀಸರ್ ಬಿಡುಗಡೆ ಮಾಡುವ ಮೂಲಕ ಚಿತ್ರತಂಡಕ್ಕೆ ಡಾರ್ಲಿಂಗ್ ಕೃಷ್ಣ ಸಾಥ್ ನೀಡಿದ್ದಾರೆ.

ಇದು ನಮ್ಮ ಡಿ.ಪಿಕ್ಚರ್ಸ್ ಲಾಂಛನದಲ್ಲಿ ನಿರ್ಮಾಣವಾಗಿರುವ ಹನ್ನೆರಡನೇ ಚಿತ್ರ. ಹನ್ನೆರಡು ಚಿತ್ರಗಳಲ್ಲಿ ಹತ್ತು ಕನ್ನಡ ಹಾಗೂ ಎರಡು ತಮಿಳು ಚಿತ್ರಗಳು. 11 ಚಿತ್ರಗಳನ್ನು ನಾನೇ ನಿರ್ಮಿಸಿ, ನಿರ್ದೇಶನವನ್ನೂ ಮಾಡಿದ್ದೇನೆ. ಆದರೆ ಈ ಚಿತ್ರವನ್ನು ನಾನು ನಿರ್ಮಾಣ ಮಾತ್ರ ಮಾಡಿದ್ದೇನೆ. ರವಿಕಿರಣ್ ಹಾಗೂ ಚೇತನ್ ಎಸ್.ಪಿ ನಿರ್ದೇಶನ ಮಾಡಿದ್ದಾರೆ. ಇವರು ಹಿಂದೆ 'ಕೋಮ' ಎಂಬ ಚಿತ್ರವನ್ನು ನಿರ್ದೇಶಿಸಿದ್ದರು. ಇವರು ಬಂದು ಚಿತ್ರದ ಕಥೆ ಹೇಳಿದಾಗ ಇಷ್ಟವಾಯಿತು. ನಿರ್ಮಾಣಕ್ಕೆ ಮುಂದಾದೆ. ಡಾರ್ಕ್ ನೆಟ್ ಕಥಾಹಂದರವನ್ನು ಈ ಚಿತ್ರ ಹೊಂದಿದೆ. ಕನ್ನಡದಲ್ಲಿ 'ಗುಳ್ಟು' ಚಿತ್ರದ ನಂತರ ಈ ಜಾನರ್‌ನ ಚಿತ್ರ ಬಂದಿರಲಿಲ್ಲ. ಇನ್ನೂ ಕಂಟೆಂಟ್ ಓರಿಯಂಟೆಡ್ ಚಿತ್ರಗಳಿಂದ ಯಾವತ್ತು ಯಾರಿಗೂ ನಷ್ಟವಾಗಲ್ಲ ಎಂದು ನಂಬಿರುವವನು ನಾನು. ಆದರೆ ಸ್ವಲ್ಪ ತಾಳ್ಮೆ ಇರಬೇಕು ಅಷ್ಟೇ. ಅದಕ್ಕೆ ಉದಾಹರಣೆ ನನ್ನ ಚಿತ್ರಗಳು. 'ಕಪಟಿ' ಚಿತ್ರವನ್ನು ಇತ್ತೀಚೆಗೆ ಸ್ನೇಹಿತರ ಜೊತೆ ನೋಡಿದೆ. ಚೆನ್ನಾಗಿ ಮೂಡಿ ಬಂದಿದೆ. ಟೀಸರ್ ಬಿಡುಗಡೆ ಮಾಡಿ ಕೊಟ್ಟ ಡಾರ್ಲಿಂಗ್ ಕೃಷ್ಣಗೆ ಧನ್ಯವಾದ ಎಂದುನಿರ್ಮಾಪಕ ದಯಾಳ್ ಪದ್ಮನಾಭನ್ ಮಾತನಾಡಿದರು.

ಸುಮಾರು ಏಳು ವರ್ಷಗಳ (ಕೋಮ ಚಿತ್ರದ) ನಂತರ ನಾವಿಬ್ಬರು ಮತ್ತೆ ನಿರ್ದೇಶಿಸಿರುವ ಚಿತ್ರವಿದು. ಕನ್ನಡದಲ್ಲಿ ತೀರ ವಿರಳ ಎನ್ನಬಹುದಾದ ಕಥಾಹಂದರ ಹೊಂದಿರುವ ಚಿತ್ರವಿದು. ಈ ಕಥೆಯನ್ನು ದಯಾಳ್ ಅವರ ಬಳಿ ಹೇಳಿದ ತಕ್ಷಣ ಒಪ್ಪಿ ನಿರ್ಮಾಣಕ್ಕೆ ಮುಂದಾದರು. ಇಡೀ ಚಿತ್ರತಂಡದ ಸಹಕಾರದಿಂದ ಚಿತ್ರ ಚೆನ್ನಾಗಿ ಬಂದಿದೆ. ನಮ್ಮ ಚಿತ್ರಕ್ಕೆ ನಿಮ್ಮ ಬೆಂಬಲವಿರಲಿ ಎಂದು ನಿರ್ದೇಶಕ ರವಿಕಿರಣ್ ಹಾಗೂ ಚೇತನ್ ತಿಳಿಸಿದರು.

ನಾನು ಚಿತ್ರರಂಗವನ್ನು ಬಿಟ್ಟು ಉಡುಪಿಯಲ್ಲಿ ನೆಲೆಸಿದ್ದೆ. ನಿರ್ದೇಶಕರು ಹೇಳಿದ ಈ ಚಿತ್ರದ ಕಥೆ ಕೇಳಿ ಮೆಚ್ಚಿಕೊಂಡು ಬಹು ದಿನಗಳ ನಂತರ ಮತ್ತೆ ನಟಿಸಿದ್ದೇನೆ. ಈ ಚಿತ್ರದಲ್ಲಿ ನನ್ನ ಪಾತ್ರ ವಿಭಿನ್ನವಾಗಿದೆ ಎಂದು 'ಜಟ್ಟ' ಚಿತ್ರದ ಖ್ಯಾತಿಯ ಸುಕೃತ ವಾಗ್ಲೆ ಮಾತನಾಡಿದ್ದಾರೆ.

ಪ್ರಮುಖ ಪಾತ್ರದಲ್ಲಿ ನಟಿಸಿರುವ ದೇವ್ ದೇವಯ್ಯ ಹಾಗೂ ಸಾತ್ವಿಕ್ ಕೃಷ್ಣನ್ ತಮ್ಮ ಪಾತ್ರದ ಬಗ್ಗೆ ಮಾಹಿತಿ ನೀಡಿ, ಅವಕಾಶ ನೀಡಿದ ನಿರ್ಮಾಪಕ ದಯಾಳ್ ಅವರಿಗೆ ಧನ್ಯವಾದ ಹೇಳಿದರು. ಹಾಡುಗಳ ಬಗ್ಗೆ ಸಂಗೀತ ನಿರ್ದೇಶಕ ಜೋಹನ್ ಮಾತನಾಡಿದರು.

# ಟೀಂ ಇಂಡಿಯಾ ಆಲೌಟ್

## ಲಂಕಾ ವಿರುದ್ಧದ ಚೊಚ್ಚಲ ಪಂದ್ಯ ಟೈ



ಕೊನೆವರೆಗೂ ರೋಚಕತೆಯಿಂದ ಕೂಡಿದ್ದ ಭಾರತ-ಶ್ರೀಲಂಕಾ ನಡುವಿನ ಏಕದಿನ ಕ್ರಿಕೆಟ್ ಸರಣಿಯ ಚೊಚ್ಚಲ ಪಂದ್ಯ ಟೈ ಆಗಿದೆ. ಗೆಲುವಿಗೆ ಬೇಕಿದ್ದ 1 ರನ್ ಗಳಿಸುವಲ್ಲಿ ಟೀಂ ಇಂಡಿಯಾ ವಿಫಲವಾಗಿ ಪಂದ್ಯವು ಟೈನಲ್ಲಿ ಅಂತ್ಯಕಂಡಿತು.

ಇಲ್ಲಿ ನಡೆಯುತ್ತಿರುವ ಏಕದಿನ ಕ್ರಿಕೆಟ್ ಸರಣಿಯ ಮೊದಲ ಪಂದ್ಯದಲ್ಲಿ ಟಾಸ್ ಗೆದ್ದ ಲಂಕಾ ಬ್ಯಾಟಿಂಗ್ ಆಯ್ದುಕೊಂಡಿತ್ತು. ಶ್ರೀಲಂಕಾ ತಂಡವು 50 ಓವರ್ ಗಳಲ್ಲಿ 8 ವಿಕೆಟ್ ನಷ್ಟಕ್ಕೆ 230 ರನ್ ಗಳಿಸಿತ್ತು. 231 ರನ್ ಗುರಿ ಬೆನ್ನತ್ತಿದ ಟೀಂ ಇಂಡಿಯಾ 47.5 ಓವರ್ ಗೆ 230 ರನ್ ಗಳಿಸಿ ಗೆಲುವು ದಾಖಲಿಸಲಾಗದೇ ಆಲೌಟ್ ಆಯಿತು.

14 ಬಾಲ್‌ಗೆ ಗೆಲುವಿಗಾಗಿ ಭಾರತಕ್ಕೆ ಕೇವಲ 1 ರನ್ ಅಗತ್ಯವಿತ್ತು. ಶಿವಂ ದುಬೆ ಭರವಸೆ ಮೂಡಿಸಿದ್ದರು. ಆದರೆ ಎಲ್‌ಬಿಡಬ್ಲ್ಯೂ ಆಗಿ ನಿರಾಸೆ ಮೂಡಿಸಿದರು. ಕೊನೆ ಬ್ಯಾಟರ್ ಆಗಿದ್ದ ಅಕ್ಷರ್ ಪಟೇಲ್ ಕೂಡ ಎಲ್‌ಬಿಡಬ್ಲ್ಯೂ ಆದರು. ಭಾರತ ತಂಡ ಆಲೌಟ್ ಆಗಿ ಪಂದ್ಯ ಟೈ ಆಯಿತು.

ಟೀಂ ಇಂಡಿಯಾ ಪರ ರೋಹಿತ್ ಶರ್ಮಾ 58, ಶುಭಮನ್ ಗಿಲ್ 16, ವಿರಾಟ್ ಕೊಹ್ಲಿ 23, ಕೆ.ಎಲ್. ರಾಹುಲ್ 31, ಅಕ್ಷರ್ ಪಟೇಲ್ 33, ಶಿವಂ ದುಬೆ 25 ರನ್ ಗಳಿಸಿದರು. ಶ್ರೀಲಂಕಾ ಪರ ವನಿಂದು ಹಸರಂಗ ಹಾಗೂ ಚರಿತ್ ಅಸಲಂಕಾ ತಲಾ 3 ವಿಕೆಟ್ ಕಬಳಿಸಿದರು. ದುನಿತ್ ವೆಲ್ಲಲಾಗೆ 2 ಹಾಗೂ ಅಸಿತ ಫೆರ್ನಾಂಡೋ, ಅಕಿಲ ದನಂಜಯ ತಲಾ 1 ವಿಕೆಟ್ ಕಿತ್ತರು. ದುನೀತ್ ವೆಲ್ಲಲಾಗೆ 67, ಪಾತುಂ ನಿಸ್ಸಾಂಕ 56 ರನ್ ಗಳಿಸಿ ತಂಡಕ್ಕೆ ಹೆಚ್ಚಿನ ರನ್ ಬರಲು ಕಾರಣರಾದರು. ಇವರಿಬ್ಬರನ್ನು ಹೊರತುಪಡಿಸಿ ಉಳಿದ ಯಾವ ಬ್ಯಾಟರ್ ಕೂಡ ಕ್ರೀಸ್‌ನಲ್ಲಿ ಹೆಚ್ಚು ಹೊತ್ತು ನಿಲ್ಲಲಿಲ್ಲ.

ಟೀಂ ಇಂಡಿಯಾ ಪರ ಅರ್ಷದೀಪ್ ಸಿಂಗ್, ಅಕ್ಷರ್ ಪಟೇಲ್ ತಲಾ 2 ವಿಕೆಟ್ ಕಿತ್ತರು. ಮೊಹಮ್ಮದ್ ಸಿರಾಜ್, ಶಿವಂ ದುಬೆ, ಕುಲದೀಪ್ ಯಾದವ್, ವಾಷಿಂಗ್ಟನ್ ಸುಂದರ್ ತಲಾ 1 ವಿಕೆಟ್ ಕಬಳಿಸಿದ್ದಾರೆ.

### ಡಿಕೆ ಶಿವಕುಮಾರ್ ಸ್ಫೋಟಕ ಹೇಳಿಕೆ

# ನಮ್ಮನ್ನು ಜೈಲಿಗೆ ಹಾಕಿಸುವ ಸಂಚು ನಡೆಯುತ್ತಿದೆ



**ರಾಮನಗರ:** ಮೈಸೂರು ಪಾದಯಾತ್ರೆ ಕೈಗೊಂಡಿರುವ ಬಿಜೆಪಿ ಮತ್ತು ಜೆಡಿಎಸ್‌ಗೆ ಟಕ್ಕರ್ ಕೊಡಲು ಕಾಂಗ್ರೆಸ್ ಜನಾಂದೋಲ ಕಾರ್ಯಕ್ರಮ ನಡೆಸುತ್ತಿದ್ದು, ರಾಮನಗರ ಜಿಲ್ಲೆಯ ಬಿಡದಿಯಲ್ಲಿ ನಡೆದ ಜನಾಂದೋಲ ಸಭೆಯಲ್ಲಿ ಡಿಸಿಎಂ ಡಿಕೆ ಶಿವಕುಮಾರ್, ಬಿಜೆಪಿ ವಿರುದ್ಧ ವಾಗ್ದಾಳಿ ನಡೆಸಿದ್ದಾರೆ. ಬಿಜೆಪಿ ಸರ್ಕಾರದಲ್ಲಿ ಮಾಡಿದ ಹಗರಣಕ್ಕೆ ಜವಾಬ್ದಾರಿ ಯಾರು? ಯಾವ ಬ್ಯಾಂಕ್‌ಗೆ ಹಣ ಹೋಗಿದೆ ಎಂಬ ಬಗ್ಗೆ ಮಾಹಿತಿ ಕೊಡಬೇಕು. ಪಾದಯಾತ್ರೆಯಲ್ಲಿ ನಾವು ಪ್ರಶ್ನೆ ಕೇಳಿದ್ದಕ್ಕೆ ಉತ್ತರ ಕೊಡಬೇಕು. ನಮ್ಮನ್ನು ಜೈಲಿಗೆ ಹಾಕಿಸಬೇಕು ಎಂದು ಸಂಚು ನಡೆಯುತ್ತಿದೆ. ನಾನು ಜೈಲಿಗೆ ಹೋಗೋಕೂ ರೆಡಿ ಇದ್ದೇನೆ. ನನ್ನಂತಹ ಬೇಕಾದಷ್ಟು ಜನ ಕಾಂಗ್ರೆಸ್‌ನಲ್ಲಿ ಹುಟ್ಟಿಕೊಳ್ಳುತ್ತಾರೆ. ವಿಜಯೇಂದ್ರ ವಿರುದ್ಧ ಎಲ್ಲಾ ಆರೋಪಗಳನ್ನು ಬಿಚ್ಚಿ ಹೇಳುತ್ತೇನೆ ಎಂದು ಎಚ್ಚರಿಕೆ ನೀಡಿದರು.

ಭ್ರಷ್ಟಾಚಾರದ ಪಿತಾಮಹ ಅಂತಾ ಅಂದ್ರೆ ಏನು ಎಂದು ಹೇಳಲಿ. ವಿಜಯೇಂದ್ರ ಗಂಡಸಾಗಿದ್ರೆ ಹೇಳಲಿ, ಅವನಿಗೆ ಗೌರವ ಕೊಡುತ್ತೇನೆ. ಆದ್ರೆ, ಯಾವ ಭ್ರಷ್ಟಾಚಾರ, ಏನು ತನಿಖೆಯಾಗಿದೆ ಎಂದು ಹೇಳಬೇಕು. ಆಗ ಬಿ.ವೈ.ವಿಜಯೇಂದ್ರನನ್ನು ಪಾರ್ಟಿ ಅಧ್ಯಕ್ಷ ಎಂದು ಒಪ್ಪಿಕೊಳ್ಳುತ್ತೇನೆ. ನಾನು ಇಡಿ ಪ್ರಕರಣದಲ್ಲಿ ಜೈಲಿಗೆ ಹೋಗಿದ್ದೆ. ಸುಪ್ರೀಂಕೋರ್ಟ್‌ನಲ್ಲಿ ಇಡಿ ಕೇಸ್ ವಜಾ ಆಗಿದ್ದು ಗೊತ್ತಾ? ಇದಕ್ಕೆಲ್ಲ ಉತ್ತರ ಕೊಡುತ್ತೇನೆ ಸಮಯ ಬರಲಿ ಎಂದು ತೀವ್ರ ವಾಗ್ದಾಳಿ ನಡೆಸಿದರು.

**ವಿಜಯೇಂದ್ರಗೆ ಡಿಕೆಶಿ ಪಂಥಾಹ್ವಾನ:** 2028ಕ್ಕೆ ಮತ್ತೆ ಕಾಂಗ್ರೆಸ್ ಸದ್ದು ಮಾಡಲಿದೆ. ಮುಡಾ ಹಗರಣದಲ್ಲಿ ಕಾಂಗ್ರೆಸ್ ಭಾಗಿಯಾಗಿಲ್ಲ. ಹೇ.. ವಿಜಯೇಂದ್ರ ನಿನಗೆ ತಾಕತ್, ಧಮ್, ಧೈರ್ಯವಿದ್ದರೆ ಹೇಳು. ಅನೇಕ ಗಣಿ ವಿಚಾರವಾಗಿ ಚರ್ಚೆ ಮಾಡುವುದಕ್ಕೆ ನಾನು ಸಿದ್ಧ. ಮುಂದಿನ ಅಸೆಂಬ್ಲಿಗಾದರೂ ಉತ್ತರ ಕೊಡಿ. ರಾಜ್ಯಕ್ಕೆ ಅನ್ಯಾಯ ಆಗಿದೆ. ನ್ಯಾಯ ಕೊಡಲಿಕ್ಕೆ ಡಿಕೆ ಸುರೇಶ್ ಹೋರಾಟ ಮಾಡಿದ್ರು. ಷಡ್ಯಂತ್ರ ಮಾಡಿ ಸೋಲಿಸಿದ್ರಿ. 2028ಕ್ಕೆ ಮತ್ತೆ ಕಾಂಗ್ರೆಸ್ ಸದ್ದು ಮಾಡಲಿದೆ. ಅಸೆಂಬ್ಲಿಗೆ ತಯಾರಾಗಿದ್ದೇನೆ. ಮುಂದಿನ ಅಸೆಂಬ್ಲಿಗಾದ್ರೂ ಉತ್ತರ ಕೊಡಿ. ಎಷ್ಟು ಸಾವಿರ ಕೋಟಿ ಇದ್ದಾರೆಂದು ಬಯಲಿಗೆ ಎಳೆಯುತ್ತೇನೆ. ನಿಮ್ಮ ಸೋದರನ ಬಳಿ ಮಾಹಿತಿ ತರೆಸಿಕೊಳ್ಳಿ. ಅನೇಕ ಮೈನಿಂಗ್ ಬಗ್ಗೆಚರ್ಚೆ ಮಾಡಲು ನಾನು ಸಿದ್ದ ಎಂದು ವಿಜಯೇಂದ್ರಗೆ ಪಂಥಾಹ್ವಾನ ನೀಡಿದರು.

ಮುಡಾ ಹಗರಣ ಹೊರಬರಲು ಕಾಂಗ್ರೆಸ್ ಕಾರಣ ಎಂದಿದ್ದೀಯಾ? ಕುಮ್ಮಕ್ಕು ಕೊಟ್ಟ ಕಾಂಗ್ರೆಸ್ ನಾಯಕನನ್ನು ಬಹಿರಂಗವಾಗಿ ಹೇಳು. ನಿನಗೆ ತಾಕತ್, ಧೈರ್ಯವಿದ್ದರೆ ಯಾರು ಎಂದು ಬಹಿರಂಗವಾಗಿ ಹೇಳು ಎಂದು ವಿಜಯೇಂದ್ರ ವಿರುದ್ಧ ಗುಡುಗಿದ ಡಿಕೆ ಶಿವಕುಮಾರ್, ನಿಮ್ಮ ತಂದೆಗೆ ಕಾಂಗ್ರೆಸ್ ಸರ್ಕಾರ ಭಿಕ್ಷೆ ಕೊಟ್ಟಿದೆ ಎಂದು ಪರೋಕ್ಷವಾಗಿ ಯಡಿಯೂರಪ್ಪ ವಿರುದ್ಧದ ಪೋಕ್ಸೋ ಕೇಸ್ ಪ್ರಸ್ತಾಪಿಸಿದರು.

**ಸಿಎಂ ಆಸ್ತಿಯನ್ನು ಹುಡುಕಿ ಮಂತ್ರಿಗಳಿಗೆ ಕೊಟ್ಟಿದ್ದೀರಿ:** ದೇವೇಗೌಡರು ನನ್ನ ಪುಣ್ಯ ಭೂಮಿ, ಕರ್ಮಭೂಮಿ ಎಂದಿದ್ದರು. ಕುಮಾರಸ್ವಾಮಿ ತಂದೆ ಈ ಜಿಲ್ಲೆಯಿಂದ ಪ್ರಧಾನಿ, ಮುಖ್ಯಮಂತ್ರಿ ಆಗಿದ್ದರು. ಕುಮಾರಸ್ವಾಮಿ ಪತ್ನಿ ಈ ಜಿಲ್ಲೆಯಿಂದ ಶಾಸಕಿಯಾಗಿದ್ದರು. ಆದ್ರೆ, ಪಾದಯಾತ್ರೆಯಲ್ಲಿ ಜೆಡಿಎಸ್ ಪಕ್ಷದ ಒಂದು ಬಾವುಟವೂ ಇಲ್ಲ. ಕುದುರೆ ಎಷ್ಟೇ ಚೆನ್ನಾಗಿದ್ದರೂ ಚಾಟಿ ಏಟು ಬೀಳದೇ ಇರುವುದಿಲ್ಲ ಎಂದು ವ್ಯಂಗ್ಯವಾಡಿದ ಡಿಕೆ ಶಿವಕುಮಾರ್, ನಿನ್ನೆ ತಮ್ಮ ಭಾಷಣದಲ್ಲಿ ಏನು ಹೇಳಿದ್ರಿ? ನಾನು ಈ ಪಾದಯಾತ್ರೆಯನ್ನ ಮಾಡಲ್ಲ, ನನ್ನ ಕರ್ಮ ಭೂಮಿ ಎಂದು ಹೇಳೋ ಧೈರ್ಯ ಇಲ್ಲ. ತಾವು ಕೇಂದ್ರದ ಸಚಿವರನ್ನ ಭೇಟಿ ಮಾಡಿ ಏನೇನು ಪಟ್ಟಿ ಕೊಟ್ಟಿದ್ದೀರಿ ಗೊತ್ತು. ಸಿಎಂ ಹಾಗೂ ನನ್ನ ಆಸ್ತಿಯನ್ನೆಲ್ಲ ಹುಡುಕಿ ಹುಡುಕಿ ಕೊಟ್ಟಿದ್ದೀರಿ ಎಂದು ಹೊಸ ಬಾಂಬ್ ಸಿಡಿಸಿದರು.

# ಹಾಕಿಯಲ್ಲಿ ಆಸ್ಟ್ರೇಲಿಯಾ ಮಣಿಸಿದ ಭಾರತ




ಶುಕ್ರವಾರ ನಡೆದ ಪ್ಯಾರಿಸ್ ಒಲಿಂಪಿಕ್ಸ್ 2024ರ ಪುರುಷರ ಹಾಕಿ ಪೂಲ್ ಬಿ ಪಂದ್ಯದಲ್ಲಿ ಆಸ್ಟ್ರೇಲಿಯಾಗೆ ಭಾರತ ತಂಡವು ಆಘಾತ ನೀಡಿದೆ. 52 ವರ್ಷಗಳ ಬಳಿಕ ಆಸ್ಟ್ರೇಲಿಯಾವನ್ನು 3-2 ಗೋಲುಗಳಿಂದ ಸೋಲಿಸುವ ಮೂಲಕ ಭಾರತದ ಹಾಕಿ ತಂಡವು ಐತಿಹಾಸಿಕ ಸಾಧನೆ ಮಾಡಿದೆ.

1972ರ ಒಲಿಂಪಿಕ್ಸ್ ನಂತರ ಭಾರತವು ಹಾಕಿಯಲ್ಲಿ ಆಸ್ಟ್ರೇಲಿಯಾ ತಂಡವನ್ನು ಸೋಲಿಸಿದ್ದು ಇದೇ ಮೊದಲು. ಕಳೆದ ಬಾರಿ ಟೋಕಿಯೊದಲ್ಲಿ ನಡೆದಿದ್ದ ಒಲಿಂಪಿಕ್ಸ್‌ನಲ್ಲಿ ಆಸ್ಟ್ರೇಲಿಯಾ ತಂಡವು ರಜತ ಪದಕ ಜಯಿಸಿತ್ತು.

ಭಾರತ ಪರ ಅಭಿಷೇಕ್ ಮತ್ತು ಹರ್ಮನ್ ಪ್ರೀತ್ ಸಿಂಗ್ (2) ಗೋಲು ಗಳಿಸಿದರು. ಥಾಮಸ್ ಕ್ರೇಗ್ ಮತ್ತು ಬ್ಲೇಕ್ ಗೋವರ್ಸ್ ಆಸ್ಟ್ರೇಲಿಯಾ ಪರ ಗೋಲು ಗಳಿಸಿದರು. ಈ ಗೆಲುವಿನೊಂದಿಗೆ ಭಾರತ (10 ಅಂಕಗಳು, 5 ಪಂದ್ಯಗಳು) ಪೂಲ್ ಬಿಯಲ್ಲಿ ಎರಡನೇ ಸ್ಥಾನಕ್ಕೆ ಏರಿದೆ.

ಪೂಲ್‌ನಲ್ಲಿ ಬೆಲ್ಜಿಯಂ ಮುನ್ನಡೆ ಸಾಧಿಸಿದರೆ ಆಸ್ಟ್ರೇಲಿಯಾ ಮೂರನೇ ಸ್ಥಾನದಲ್ಲಿದೆ. ಭಾರತವು ನ್ಯೂಜಿಲೆಂಡ್ ವಿರುದ್ಧ ಜಯದೊಂದಿಗೆ ಓಟ ಆರಂಭಿಸಿತು. ಅರ್ಜೆಂಟೀನಾ ವಿರುದ್ಧದ ಪಂದ್ಯ ಡ್ರಾ ಆಯಿತು. ಐರ್ಲೆಂಡ್ ತಂಡದ ವಿರುದ್ಧ ಭಾರತ ಗೆಲುವು ದಾಖಲಿಸಿದೆ.

# ನಾಗೇಂದ್ರ ಸಣ್ಣ ಮೀನು: ಸಿದ್ದರಾಮಯ್ಯ, ಡಿಕೆ ಶಿವಕುಮಾರ್ ತಿಮಿಂಗಿಲ



**ಮೈಸೂರು:** ವಾಲ್ಮೀಕಿ ಅಭಿವೃದ್ಧಿ ನಿಗಮದ ಹಣ ಅಕ್ರಮ ವರ್ಗಾವಣೆ ಪ್ರಕರಣದಲ್ಲಿ ಬಿ.ನಾಗೇಂದ್ರ ಸಣ್ಣ ಮೀನು, ಸಿದ್ದರಾಮಯ್ಯ, ಡಿಕೆ ಶಿವಕುಮಾರ್ ತಿಮಿಂಗಿಲಗಳು ಎಂದು ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ವಾಗ್ದಾಳಿ ಮಾಡಿದ್ದಾರೆ. ನಗರದಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಮುಡಾ, ವಾಲ್ಮೀಕಿ ನಿಗಮ ಪ್ರಕರಣ ಎರಡರಲ್ಲೂ ಸಿಎಂ ಅಪರಾಧಿ. ಸಿದ್ದರಾಮಯ್ಯ, ಡಿ.ಕೆ. ಶಿವಕುಮಾರ್ ಅವರದ್ದು ನೇರ ಹೊಣೆಗಾರಿಕೆ ಇದೆ ಎಂದು ಕಿಡಿಕಾರಿದ್ದಾರೆ.

**ಸಿದ್ದರಾಮಯ್ಯ ಮತ್ತೆ ಸಿಎಂ ಆಗುವುದಿಲ್ಲ:** ಈ ಕಾರಣಕ್ಕೆ ಸಿದ್ದರಾಮಯ್ಯ ರಾಜೀನಾಮೆ ನೀಡಬೇಕು. ರಾಜೀನಾಮೆ ಕೊಟ್ಟು ತನಿಖೆ ಎದುರಿಸಿ ನಂತರ ಮತ್ತೆ ಸಿಎಂ ಆಗಿ. ಆದರೆ ಸಿದ್ದರಾಮಯ್ಯ ಮತ್ತೆ ಸಿಎಂ ಆಗುವುದಿಲ್ಲ ಎಂದು ಹೇಳಿದ್ದಾರೆ. ರಾಜ್ಯಪಾಲರ ನೋಟಿಸ್‌ಗೆ ಸಿದ್ದರಾಮಯ್ಯ ಹೆದರಿದ್ದಾರೆ. ಅದಕ್ಕಾಗಿ ಸಂಪುಟ ಸಭೆ ಕರೆದು ರಾಜ್ಯಪಾಲರ ವಿರುದ್ಧ ನಿರ್ಣಯ ಕೈಗೊಂಡಿದ್ದಾರೆ. ರಾಜ್ಯ ಸರ್ಕಾರ ರಾಜ್ಯಪಾಲರನ್ನು ಹೆದರಿಸುವ ಕೆಲಸಕ್ಕೆ ಕೈಹಾಕಿದೆ ಎಂದಿದ್ದಾರೆ.

ಬಿಜೆಪಿ, ಜೆಡಿಎಸ್‌ನಿಂದ ರಾಜಭವನ ದುರ್ಬಳಕೆ ಆರೋಪ ವಿಚಾರವಾಗಿ ಪ್ರತಿಕ್ರಿಯಿಸಿದ್ದು, ದೂರ ನೀಡಿರುವುದು ನಾವಲ್ಲ ಸಾರ್ವಜನಿಕ ವ್ಯಕ್ತಿ. ದೂರಿನ ಅನ್ವಯ ಸಿದ್ದರಾಮಯ್ಯಗೆ ನೋಟಿಸ್ ನೀಡಿದ್ದಾರೆ ಅಷ್ಟೇ. ಅದಕ್ಕೆ ಉತ್ತರ ಕೊಡುವ ಬದಲು ಸಿದ್ದರಾಮಯ್ಯ ಹೆದರಿದ್ದಾರೆ. 50:50 ಹೊಸ ಬಡಾವಣೆಗಳಿಗೆ ಮಾತ್ರ ಅಂತಾ ನಿಯಮ ಇದೆ. ಆದರೆ ಈ ನಿಯಮ ಹಳೆಯ ಪ್ರಕರಣಗಳಿಗೆ ಅನ್ವಯ ಆಗಲ್ಲ. ಸಿಎಂ ನಿಯಮ ಮೀರಿ ತಮ್ಮ ಮನೆಯವರಿಗೆ ನಿವೇಶನ ಪಡೆದಿದ್ದಾರೆ ಎಂದು ವಾಗ್ದಾಳಿ ಮಾಡಿದ್ದಾರೆ.

**ನಾಗೇಂದ್ರ, ಹಿಂದಿರುವ ಶಕ್ತಿ ಸಿದ್ದರಾಮಯ್ಯ:** ವಾಲ್ಮೀಕಿ ನಿಗಮದ ಹಗರಣದಲ್ಲಿ ಭ್ರಷ್ಟಾಚಾರ ಆಗಿರುವುದನ್ನು ಸಿದ್ದರಾಮಯ್ಯ ಅಧಿವೇಶನದಲ್ಲಿ ಒಪ್ಪಿಕೊಂಡಿದ್ದಾರೆ. ಈ ಹಣ ತೆಲಂಗಾಣದ ಚುನಾವಣೆಗೆ ಹೋಗಿದೆ. ತೆಲಂಗಾಣ ಚುನಾವಣೆಗೆ ಹಣ ಕೊಡಲು ಕಾಂಗ್ರೆಸ್ ಹೈಕಮಾಂಡ್ ಸಿದ್ದರಾಮಯ್ಯಗೆ ಸೂಚನೆ ನೀಡಿತ್ತು. ಇದು ರಾಜ್ಯದ ಬಡವರ ತೆರಿಗೆ ಹಣ. ಇದರ ನೇರ ಹೊಣೆ ಸಿಎಂ ಸಿದ್ದರಾಮಯ್ಯ ಹೊರಬೇಕು. ಅವರೇ ಹಣಕಾಸು ಸಚಿವರು, ಇಲ್ಲಿ ನಾಗೇಂದ್ರ ನೆಪ ಮಾತ್ರ. ನಾಗೇಂದ್ರ, ಹಿಂದಿರುವ ಶಕ್ತಿ ಅದು ಸಿದ್ದರಾಮಯ್ಯ ಎಂದು ಹರಿಹಾಯ್ದಿದ್ದಾರೆ.

ಕೇಂದ್ರ ಸರ್ಕಾರದ ವಿರುದ್ಧ ಕಾಂಗ್ರೆಸ್ ಜನಾಂದೋಲನ ವಿಚಾರವಾಗಿ ಮಾತನಾಡಿದ್ದು, ಬಜೆಟ್‌ನಲ್ಲಿ ಬಿಜೆಪಿ ಸರ್ಕಾರ ಇಲ್ಲದ ರಾಜ್ಯಗಳಿಗೂ ಅನುದಾನ ನೀಡಿದೆ. ಕರ್ನಾಟಕದಲ್ಲಿ ರೈಲ್ವೆ, ಹೈವೇಗಳ ಅಭಿವೃದ್ಧಿಗೆ ಕೇಂದ್ರ ಸರ್ಕಾರ ಸಾಕಷ್ಟು ಅನುದಾನ ನೀಡಿದೆ. ಅವರು ಅಂಕಿ ಅಂಶ ಇಟ್ಟುಕೊಂಡು ಮಾತನಾಡಲಿ. ನಾನು ಕೂಡ ಅಂಕಿ ಅಂಶಗಳ ಜೊತೆಗೆ ಉತ್ತರ ನೀಡುತ್ತೇನೆ ಎಂದಿದ್ದಾರೆ.

ಮೇಕೆದಾಟು ಯೋಜನೆ ವಿಚಾರ ಮೊದಲು ನ್ಯಾಯಾಲಯದಲ್ಲಿನ ಸಮಸ್ಯೆ ಇತ್ಯರ್ಥ ಮಾಡಿಕೊಂಡು ನಂತರ ನಮ್ಮ ಬಳಿ ಬನ್ನಿ. ನಾವು ಬಿಜೆಪಿ ಅಧಿಕಾರದಲ್ಲಿ ಇರುವ ರಾಜ್ಯ, ಇಲ್ಲದ ರಾಜ್ಯಕ್ಕೂ ಅನುದಾನ ನೀಡಿದ್ದೇವೆ. ನಾವು ಒಂದು ಸ್ಥಾನ ಗೆಲ್ಲದ ರಾಜ್ಯಗಳಿಗೂ ನೀಡಿದ್ದೇವೆ. ಇಲ್ಲಿ ಕೇಂದ್ರದಿಂದ ಅನ್ಯಾಯದ ಪ್ರಶ್ನೆಯೇ ಇಲ್ಲ ಎಂದು ಸ್ಪಷ್ಟನೆ ನೀಡಿದ್ದಾರೆ.

Printed, Published & Owned by N.Venugopal Krishna, Printed at DASHAPRAMATHI MUDRANALAYA, No.433/1, Chikkavitalenahalli Village, Thagachagere Post, Kasaba Hobli, Channapatna Taluk, Ramanagar District, Pin-562160. Published at No.15, Ground Floor, 12th Block, 5th Main, Kumara Park (West), Behind BDA Head Office, Bengaluru-560020. Editor: N.Venugopal Krishna, Mobile No.+91 94835 89085, email: sanjemugilu@gmail.com